ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

45

ಜುಲೈ 4 ಗುರುವಾರ 2024

ಸಂಪುಟ: 45 | ಸಂಚಿಕೆ: 79 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಸಿದ್ದರಾಮಯ್ಯ–ಡಿ.ಕೆ.ಶಿವಕುಮಾರ್ ನಾಯಕತ್ವ ಬಿಕ್ಕಟ್ಟು ಶಮನಕ್ಕೆ ಕಾಂಗ್ರೆಸ್ ವರಿಷ್ಠರ ಮಾಸ್ಟರ್ ಪ್ಲಾನ್

ಮಲ್ಲಿಕಾರ್ಜುನ ಖರ್ಗೆ ಮುಖ್ಯಮಂತ್ರಿ?

- ಇತ್ತೀಚಿನ ಸಿಎಂ, ಡಿಸಿಎಂ ದೆಹಲಿ ಭೇಟಿ ವೇಳೆ ಮನವರಿಕೆ
- ಮೊದಲ 'ದಲಿತ ಸಿಎಂ' ಭಾಗ್ಯ ಕಲ್ಪಿಸಲು ಸೋನಿಯಾ ಗಾಂಧಿ, ರಾಹುಲ್ ಗಾಂಧಿ ನಿರ್ಧಾರ
- ವರಿಷ್ಠರ ನಿರ್ಧಾರಕ್ಕೆ ರಾಜ್ಯದ ಉಭಯ ನಾಯಕರ ಜೊತೆಗೆ ಎಲ್ಲಾ ಮುಖಂಡರ ಸಹಮತ ವಿಶ್ವಾಸ



ಮಲ್ಲಿಕಾರ್ಜುನ ಖರ್ಗೆ



ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ

ಬೆಂಗಳೂರು, ಜು.3(ಕೆಎಂಶಿ)– ನಾಯಕತ್ವಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಡುವಿನ ಕಚ್ಚಾಟ ಶಮನ ಮಾಡಲು ಕಾಂಗ್ರೆಸ್ ವರಿಷ್ಠರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನೇ ಕರ್ನಾಟಕ ರಾಜಕಾರಣಕ್ಕೆ ಇಳಿಸಲು ಸಿದ್ಧತೆ ನಡೆಸಿದ್ದಾರೆ.

ಕರ್ನಾಟಕ ಕಾಂಗ್ರೆಸ್ ಅನ್ನು ಆಪರೇಷನ್ ಕಮಲದಿಂದ ಪಾರು ಮಾಡುವುದು ಹಾಗೂ ಕೆಪಿಸಿಸಿಯಲ್ಲಿನ ಆಂತರಿಕ ಕಚ್ಚಾಟಕ್ಕೆ ತೆರೆ ಎಳೆಯಲು ಖರ್ಗೆ ಅವರನ್ನು ಸಿದ್ದರಾಮಯ್ಯ ನಂತರದ ಅವಧಿಗೆ ಮುಖ್ಯಮಂತ್ರಿಯನ್ನಾಗಿ ಮಾಡಲು ವರಿಷ್ಠರು ಮುಂದಾಗಿದ್ದಾರೆ. ಇಂತಹ ಸಂದರ್ಭದಲ್ಲಿ ಶಿವಕುಮಾರ್ ಉಪಮುಖ್ಯಮಂತ್ರಿಯಾಗೇ ಮುಂದುವರೆಯುತ್ತಾರೆ, ಅವರ ಜೊತೆಗೆ ಎಂ.ಬಿ.ಪಾಟೀಲ್ ಅವರಿಗೂ ಸಚಿವ ಸ್ಥಾನದಿಂದ ಬಡ್ತಿ ದೊರೆಯಲಿದೆ.

ಅಧಿಕಾರದಿಂದ ಕೆಳಗಿಳಿಯುವ ಸಿದ್ದರಾಮಯ್ಯ ಅವರಿಗೆ ಕೆಪಿಸಿಸಿ ಅಧ್ಯಕ್ಷ ಹುದ್ದೆ ಇಲ್ಲವೇ ರಾಷ್ಟ್ರೀಯ ರಾಜಕಾರಣಕ್ಕೆ ನಿಯೋಜಿಸಲಿದ್ದಾರೆ ಎಂಬ ಮಾತು ಕಾಂಗ್ರೆಸ್ ವಲಯದಲ್ಲಿ ದಟ್ಟವಾಗಿ ಹಬ್ಬಿದೆ. ಕಾಂಗ್ರೆಸ್ ಮೂಲ ಮಂತ್ರದಂತೆ ಒಬ್ಬ ವ್ಯಕ್ತಿಗೆ ಒಂದು ಹುದ್ದೆ... ಇದರನ್ವಯ ಖರ್ಗೆ ಅವರು ಎಐಸಿಸಿ ಅಧ್ಯಕ್ಷ ಸ್ಥಾನ ಇಲ್ಲವೆ ರಾಜ್ಯ ಸಭೆಯ ಪ್ರತಿಪಕ್ಷ ಸ್ಥಾನದಿಂದ ಕೆಳಗಿಳಿಯಬೇಕಾಗುತ್ತದೆ. ಇಂದಿರಾಗಾಂಧಿ ಕುಟುಂಬಕ್ಕೆ ಅತ್ಯಂತ ನಿಷ್ಠರಾಗಿರುವ ಖರ್ಗೆ ಅವರನ್ನು ಒಂದು ಬಾರಿಯಾದರೂ ಮುಖ್ಯಮಂತ್ರಿ ಮಾಡಬೇಕೆಂದು ಪಕ್ಷದ ಅಧಿನಾಯಕರಾಗಿರುವ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಆಸಕ್ತಿ ಹೊಂದಿದ್ದಾರೆ.

ತಾವು ತೆಗೆದುಕೊಂಡ ನಿರ್ಧಾರವನ್ನು ಸಿದ್ದರಾಮಯ್ಯ ಮತ್ತು ಶಿವಕುಮಾರ್ ಅವರ ಗಮನಕ್ಕೆ ಇತ್ತೀಚೆಗೆ ದೆಹಲಿಗೆ ಭೇಟಿ ನೀಡಿದ ಸಂದರ್ಭದಲ್ಲಿ ● 9ನೇ ಪುಟಕ್ಕೆ

ಮೈಸೂರು ನಗರ ಮೊದಲ ಮಹಿಳಾ ಪೊಲೀಸ್ ಆಯುಕ್ತರಾಗಿ ಸೀಮಾ ಲಾಟ್ಕರ್

ಎನ್.ವಿಷ್ಣುವರ್ಧನ ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

25 ಐಪಿಎಸ್ ಅಧಿಕಾರಿಗಳ ವರ್ಗಾವಣೆ



ನೂತನ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್



ಎಸ್ಪಿ ಎನ್.ವಿಷ್ಣುವರ್ಧನ

ಮೈಸೂರು, ಜು. 3 (ಆರ್‌ಕೆ)– ಮೈಸೂರು ನಗರದ ನೂತನ ಆಯುಕ್ತರಾಗಿ ಸೀಮಾ ಲಾಟ್ಕರ್ ಅವರನ್ನು ನಿಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಎಸ್ಪಿಯಾಗಿದ್ದ ಸೀಮಾ ಲಾಟ್ಕರ್ ಇದೀಗ ಮೈಸೂರಿನ ಪ್ರಥಮ ಮಹಿಳಾ ಪೊಲೀಸ್ ಆಯುಕ್ತರಾಗಿದ್ದಾರೆ. ಅವರ ವರ್ಗಾವಣೆಯಿಂದ ತೆರವಾದ ಮೈಸೂರು ಜಿಲ್ಲಾ ಎಸ್ಪಿ ಸ್ಥಾನಕ್ಕೆ ಉತ್ತರ ಕನ್ನಡ ಜಿಲ್ಲಾ ಎಸ್ಪಿ ಎನ್.ವಿಷ್ಣುವರ್ಧನ ಅವರನ್ನು ನಿಯೋಜಿಸಿ ಸರ್ಕಾರ ಮಂಗಳವಾರ ಆದೇಶ ಹೊರಡಿಸಿದೆ.

ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯ ಪ್ರಕರಣದ ತನಿಖಾ ಸಂಬಂಧ ರಚಿಸಲಾಗಿದ್ದ ವಿಶೇಷ ತನಿಖಾ ತಂಡ (ಎಸ್‌ಐಟಿ)ದಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಸೀಮಾ ಲಾಟ್ಕರ್ ಅವರು ಈಗ ಮೈಸೂರು ನಗರ ಪೊಲೀಸ್ ಆಯುಕ್ತರಾಗಿ ನಾಳೆ (ಜು. 4) ಅಧಿಕಾರ ವಹಿಸಿಕೊಳ್ಳುವರು. ಮೈಸೂರು ನಗರ ಪೊಲೀಸ್ ಆಯುಕ್ತರಾಗಿದ್ದ ಬಿ.ರಮೇಶ್ ಅವರನ್ನು ಪೂರ್ವ ವಲಯದ ಡಿಐಜಿಯಾಗಿ ದಾವಣಗೆರೆಗೆ ವರ್ಗಾವಣೆ ಮಾಡಲಾಗಿದೆ. ಅದೇ ರೀತಿ ಮೈಸೂರಿನ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ (ಡಿಸಿಆರ್‌ಇ)ದ ಎಸ್ಪಿಯಾಗಿದ್ದ ಬಿ.ಟಿ. ಕವಿತಾ ಅವರನ್ನು ಚಾಮರಾಜನಗರ ಜಿಲ್ಲಾ ಎಸ್ಪಿಯಾಗಿ ವರ್ಗಾಯಿಸಲಾಗಿದ್ದು, ಅವರು ಇಂದು ಅಧಿಕಾರ ವಹಿಸಿಕೊಂಡರು. ಮೈಸೂರು ಜಿಲ್ಲಾ ಎಸ್ಪಿಯಾಗಿ ಎನ್. ವಿಷ್ಣುವರ್ಧನ ಅವರು ನಾಳೆ (ಜು. 4) ಅಧಿಕಾರ ವಹಿಸಿಕೊಳ್ಳುವುದಾಗಿ ತಿಳಿಸಿದ್ದಾರೆ. 'ಮೈಸೂರು ಮಿತ್ರ'ನೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕಾನೂನು–ಸುವ್ಯವಸ್ಥೆ ಕಾಪಾಡುವುದು, ಅಪರಾಧ ತಡೆ ಮತ್ತು ಪತ್ತೆಗೆ ಆದ್ಯತೆ ನೀಡುತ್ತೇನೆ ಎಂದರು. ಹಿರಿಯ ಅಧಿಕಾರಿಗಳ ಸಲಹೆ, ಸೂಚನೆಯಂತೆ ಅಧೀನಾಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಜನ ಸ್ನೇಹಿಯಾಗಿ ಕರ್ತವ್ಯ ನಿರ್ವಹಿಸಿ ಸಾರ್ವಜನಿಕರ ಕುಂದು–ಕೊರತೆ ನಿವಾರಿಸುವ ಮೂಲಕ ಸರ್ಕಾರಕ್ಕೆ, ಪೊಲೀಸ್ ಇಲಾಖೆಗೆ ಒಳ್ಳೆಯ ಹೆಸರು ತರಲು ಪ್ರಯತ್ನಿಸುತ್ತೇನೆ ಎಂದು ವಿಷ್ಣುವರ್ಧನ ತಿಳಿಸಿದ್ದಾರೆ. ಈ ಹಿಂದೆ ವಿಷ್ಣುವರ್ಧನ ಮೈಸೂರು ನಗರದ ಸಂಚಾರ ವಿಭಾಗದ ಎಸಿಪಿಯಾಗಿ, ಕಾನೂನು ಸುವ್ಯವಸ್ಥೆ ವಿಭಾಗದ ಡಿಸಿಪಿಯಾಗಿ ಕರ್ತವ್ಯ ನಿರ್ವಹಿಸಿದ್ದರು.

ಮುಡಾದಲ್ಲಿ ನಿವೇಶನ ದುರುಪಯೋಗ ಪತ್ತೆಗೆ ಕ್ರಮ

- ಸಿಎಂ ಸಿದ್ದರಾಮಯ್ಯ ಹೇಳಿಕೆ
- ಸದ್ಯಕ್ಕೆ ನಿವೇಶನಗಳ ಹಂಚಿಕೆ ಅಮಾನತು
- ಜಮೀನು ಕೊಟ್ಟವರಿಗೆ ಪ್ರಮುಖವಾಗಿ ನಿವೇಶನ ನೀಡುವ ಕಾನೂನು ಮಾಡಿದ್ದೇ ಬಿಜೆಪಿಯವರು



ಬೆಂಗಳೂರು, ಜು.3(ಕೆಎಂಶಿ)– ಮೈಸೂರಿನ ಮುಡಾದಲ್ಲಿ ಶೇ.50:50ರ ಅನುಪಾತದಡಿ ನಿವೇಶನ ಹಂಚಿಕೆಯಲ್ಲಿ ಆಗಿರುವ ದುರುಪಯೋಗ ಪತ್ತೆಗೆ ಕ್ರಮ ಕೈಗೊಳ್ಳಲಾಗಿದ್ದು, ಈಗಾಗಲೇ ಎಲ್ಲಾ ನಿವೇಶನಗಳ ಹಂಚಿಕೆ ಅಮಾನತ್ತಿನಲ್ಲಿಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿವೇಶನಗಳ ಹಂಚಿಕೆ ಮಾಡಿದವರನ್ನು ವರ್ಗಾವಣೆ ಮಾಡಿ ಹಿರಿಯ ಐಎಎಸ್ ಅಧಿಕಾರಿಗಳಿಂದ ● 9ನೇ ಪುಟಕ್ಕೆ

ಮುಡಾ ನಿವೇಶನ ಹಂಚಿಕೆ ಹಗರಣ

ನಾಲ್ವರು ಅಧಿಕಾರಿಗಳ ತಂಡದಿಂದ ತನಿಖೆ ಆರಂಭ

ಪ್ರಾಧಿಕಾರದ ಆಯುಕ್ತರ ಕಚೇರಿಯಲ್ಲಿ ಕಡತಗಳ ಪರಿಶೀಲನೆ; ಸಂಬಂಧಪಟ್ಟ ಅಧಿಕಾರಿಗಳ ವಿಚಾರಣೆ



ಅಧಿಕಾರಿಗಳ ತನಿಖಾ ತಂಡ


ಮೈಸೂರು, ಜು. 3(ಆರ್‌ಕೆ)– ಮುಡಾ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಭಾರಿ ಹಗರಣ ಕುರಿತಂತೆ ನಾಲ್ವರು ಅಧಿಕಾರಿಗಳ ತಂಡವು ಇಂದಿನಿಂದ ತನಿಖೆ ಆರಂಭಿಸಿದೆ.

ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯದ ಆಯುಕ್ತ ಆರ್. ವೆಂಕಟಾಚಲಪತಿ ಅಧ್ಯಕ್ಷರಾಗಿರುವ ತನಿಖಾ ತಂಡದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಹೆಚ್ಚುವರಿ ನಿರ್ದೇಶಕ ಎಂ.ಸಿ. ಶಶಿಕುಮಾರ್, ಆಯುಕ್ತಾಲಯದ ಜಂಟಿ ನಿರ್ದೇಶಕಿ ಶಾಂತಲ ಹಾಗೂ ಉಪನಿರ್ದೇಶಕ ಪ್ರಕಾಶ್ ಸದಸ್ಯರಾಗಿದ್ದಾರೆ. ಇಂದು ಬೆಳಗ್ಗೆ 11.45 ಗಂಟೆಗೆ ಆಗಮಿಸಿದ ಅಧಿಕಾರಿಗಳನ್ನು ಮುಡಾ ಕಚೇರಿಯಲ್ಲಿ ವಿಶೇಷ ಭೂಸ್ವಾಧೀನಾಧಿಕಾರಿ ಮಂಜುನಾಥ ಪುಷ್ಪಗುಚ್ಛ ನೀಡಿ ಬರಮಾಡಿಕೊಂಡರು. ಆ ವೇಳೆ ಆಯುಕ್ತರು ಇರಲಿಲ್ಲವಾದರೂ, ತನಿಖಾ ತಂಡದ ಅಧಿಕಾರಿಗಳು ಆಯುಕ್ತರ ಕಚೇರಿಗೆ ತೆರಳಿ ವಿಚಾರಣೆ ಆರಂಭಿಸಿದರು.

ನಗರ ಯೋಜನಾ ಶಾಖೆ, ನಿವೇಶನ ಶಾಖೆ, ಲೆಕ್ಕ ಶಾಖೆ, ಇಂಜಿನಿಯರ್ ಶಾಖೆ, ಕಾರ್ಯದರ್ಶಿ ಕಚೇರಿ, ಎಲ್ಲಾ ವಲಯ ಕಚೇರಿಗಳು, ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿ, ಅಧ್ಯಕ್ಷರ ಕಚೇರಿ, ಸೂಪರಿಂಟೆಂಡಿಂಗ್ ಇಂಜಿನಿಯರ್ ಕಚೇರಿಗಳಲ್ಲಿ ಬಾಕಿ ಇದ್ದ ಕಡತಗಳನ್ನು ಮೊದಲು ಕೇಸ್ ವರ್ಕರ್‌ಗಳ ಮೂಲಕ ತರಿಸಿಕೊಂಡ ತನಿಖಾಧಿಕಾರಿಗಳು ಅವುಗಳ ಪಟ್ಟಿ ಮಾಡಿ, ● 9ನೇ ಪುಟಕ್ಕೆ

ಜೂನ್ 25ರಂದೇ ಮಾಹಿತಿ ಕೋರಿ ಮುಡಾ ಆಯುಕ್ತರಿಗೆ ಪತ್ರ ಬರೆದಿದ್ದೆ

ಶಾಸಕರೂ ಆದ ಮುಡಾ ಸದಸ್ಯ ಜಿ.ಟಿ.ದೇವೇಗೌಡರ ಪ್ರತಿಕ್ರಿಯೆ



ಜಿ.ಟಿ.ದೇವೇಗೌಡ

ಮೈಸೂರು, ಜು. 3(ಆರ್‌ಕೆ)– ನಿಯಮ ಮೀರಿ ಅಕ್ರಮವಾಗಿ 50:50 ಅನುಪಾತದಡಿ ಹಾಗೂ ಪ್ರೋತ್ಸಾಹದಾಯಕ ನಿವೇಶನಗಳನ್ನು ಹಂಚಿಕೆ ಮಾಡಿರುವುದರ ಸಂಬಂಧ 7 ದಿನದೊಳಗಾಗಿ ಮಾಹಿತಿ ನೀಡುವಂತೆ ತಾವು ಜೂನ್ 25ರಂದೇ ಮುಡಾ ಆಯುಕ್ತರಿಗೆ ಪತ್ರ ಬರೆದಿದ್ದಾಗಿ ಶಾಸಕರೂ ಆದ ಮುಡಾ ಸದಸ್ಯ ಜಿ.ಟಿ. ದೇವೇಗೌಡ ತಿಳಿಸಿದ್ದಾರೆ. ಮುಡಾ ಅಧ್ಯಕ್ಷರು ಎರಡು ಬಾರಿ ಟಿಪ್ಪಣಿ ಮೂಲಕ ಆಯುಕ್ತ ಜಿ.ಟಿ.ದಿನೇಶ್‌ಕುಮಾರ್ ಅವರಿಗೆ ಸೂಚನೆ ನೀಡಿದ್ದರು. ಅದರಲ್ಲಿ ಮುಡಾದಿಂದ ಪರಸ್ಪರ ಒಪ್ಪಂದದಡಿ ಭೂಸ್ವಾಧೀನಪಡಿಸಿಕೊಂಡ ಜಮೀನುಗಳಿಗೆ ಹಿಂದೆಯೇ ಪ್ರೋತ್ಸಾಹದಾಯಕ ನಿವೇಶನ ಮಂಜೂರು ಮಾಡಿದ್ದರೂ, ಅಂತಹ ಭೂ ಮಾಲೀಕರಿಗೆ ಕಾನೂನು ಉಲ್ಲಂಘಿಸಿ ಮತ್ತೆ ನಿವೇಶನ ನೀಡಲಾಗುತ್ತಿದೆ ಎಂದು ಅಧ್ಯಕ್ಷರೇ ತಮ್ಮ ಪತ್ರದಲ್ಲಿ ತಿಳಿಸಿದ್ದಾರೆ ಎಂದು ಜಿ.ಟಿ. ದೇವೇಗೌಡರು ಹೇಳಿದ್ದಾರೆ.

ಆ ಸಂಬಂಧ ವಿಶೇಷ ಭೂಸ್ವಾಧೀನಾಧಿಕಾರಿ, ತಾಂತ್ರಿಕ ಶಾಖೆ ಇಂಜಿನಿಯರ್‌ಗಳು, ಸರ್ವೆಯರ್‌ಗಳು ಪರಿಶೀಲಿಸಿ ಸಭೆಗೆ ಮಂಡಿಸಬೇಕು, ಕೈಗೊಂಡ ನಿರ್ಣಯವನ್ನು ಸರ್ಕಾರಕ್ಕೆ ಸಲ್ಲಿಸಿ ಅನುಮೋದನೆ ಪಡೆದು ಕ್ರಮ ವಹಿಸಬೇಕಾಗಿರುವುದರಿಂದ ಅಲ್ಲಿಯವರೆಗೂ ಯಾರಿಗೂ ಪ್ರೋತ್ಸಾಹದಾಯಕ ನಿವೇಶನಗಳನ್ನು ಹಂಚಿಕೆ ಮಾಡಬಾರದೆಂದು ● 9ನೇ ಪುಟಕ್ಕೆ

ಎಂಜಿ ರಸ್ತೆಯ ತರಕಾರಿ ಮಾರುಕಟ್ಟೆ ಬಳಿ ಎರಡೂ ಕಡೆ ವಾಹನ ನಿಲುಗಡೆ ನಿಷಿದ್ಧ



ಮೈಸೂರು, ಜು. 3(ಆರ್‌ಕೆ)– ಮೈಸೂರಿನ ಮಹಾತ್ಮ ಗಾಂಧಿ ರಸ್ತೆಯ ತರಕಾರಿ ಮಾರುಕಟ್ಟೆ ಬಳಿ ಎರಡೂ ಬದಿಯಲ್ಲಿ ಎಲ್ಲಾ ಮಾದರಿಯ ವಾಹನಗಳ ನಿಲುಗಡೆಯನ್ನು ನಿಷೇಧಿಸಲಾಗಿದೆ.

ಈ ಕುರಿತು ಅಧಿಸೂಚನೆ ಹೊರಡಿಸಿರುವ ಮೈಸೂರು ನಗರ ಪೊಲೀಸ್ ಆಯುಕ್ತ ಬಿ. ರಮೇಶ್, ಎಂಜಿ ರಸ್ತೆಯ ಮಾನಸ ರಸ್ತೆ ಜಂಕ್ಷನ್‌ನಿಂದ ಅಂಡರ್ ಬ್ರಿಡ್ಜ್‌ವರೆಗೆ ಎರಡೂ ಬದಿ (ಉತ್ತರ–ದಕ್ಷಿಣ)ಗಳಲ್ಲಿ ಯಾವುದೇ ಮಾದರಿಯ ವಾಹನಗಳನ್ನು ನಿಲುಗಡೆ ಮಾಡಬಾರದೆಂದು ಸೂಚನೆ ನೀಡಿದ್ದಾರೆ.

ಸಿದ್ಧಾರ್ಥ ಸಂಚಾರ ಠಾಣಾ ವ್ಯಾಪ್ತಿಯ ಪ್ರಮುಖ ರಸ್ತೆಗಳಲ್ಲೊಂದಾದ ಎಂಜಿ ರಸ್ತೆಯು ಮೃಗಾಲಯ, ಕಾರಂಜಿ ಕೆರೆ, ಲಲಿತ ಮಹಲ್ ಅರಮನೆ ಮುಂತಾದ ಸ್ಥಳಗಳಿಗೆ ಸಂಪರ್ಕ ಕಲ್ಪಿಸುವುದಲ್ಲದೆ, ಸರ್ಕಾರಿ ಕಚೇರಿಗಳು, ಆಸ್ಪತ್ರೆಗಳು, ಗಣ್ಯರು ತಂಗುವ ಹೋಟೆಲುಗಳು, ವಾಣಿಜ್ಯ ಕಟ್ಟಡಗಳು ಹಾಗೂ ಪ್ರತಿಷ್ಠಿತ ಬಡಾವಣೆಗಳಿಗೆ ಸಂಪರ್ಕ ಸಾಧಿಸುತ್ತದೆ.

ಅಲ್ಲದೆ ಈ ರಸ್ತೆಯಲ್ಲಿ ಆಂಬುಲೆನ್ಸ್, ತರಕಾರಿ, ಸರಕು ಸಾಗಣೆ ವಾಹನಗಳು ಹೆಚ್ಚಿನ ಸಂಖ್ಯೆಯಲ್ಲಿ ಸಂಚರಿಸುವುದರಿಂದ ಸಾರ್ವಜನಿಕರ ವಾಹನ ಸುಗಮ ಸಂಚಾರಕ್ಕಾಗಿ ರಸ್ತೆಯ ಎರಡೂ ಬದಿಗಳಲ್ಲಿ ಎಲ್ಲಾ ಮಾದರಿಯ ವಾಹನಗಳ ನಿಲುಗಡೆಯನ್ನು ನಿರ್ಬಂಧಿಸಲಾಗಿದೆ ಎಂದು ಪೊಲೀಸ್ ಆಯುಕ್ತರು ತಿಳಿಸಿದ್ದಾರೆ.

ಟ್ರಯಲ್ ಬ್ಲಾಸ್ಟ್‌ಗಾಗಿ ಭರದ ಸಿದ್ಧತೆ

- ಬೇಬಿ ಬೆಟ್ಟದಲ್ಲಿ ಐದು ಕಡೆ ಕುಳಿ ತೆಗೆಯುವ ಕಾರ್ಯ
- ಸುತ್ತ–ಮುತ್ತ ಬಿಗಿ ಪೊಲೀಸ್ ಬಂದೋಬಸ್ತ್



ಪಾಂಡವಪುರ ತಾಲೂಕಿನ ಬೇಬಿ ಬೆಟ್ಟ ಕಲ್ಲು ಗಣಿಗಾರಿಕೆ ಪ್ರದೇಶದಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸಲು ಡ್ರಿಲ್ಲಿಂಗ್ ಯಂತ್ರದ ಮೂಲಕ ಕುಳಿ ತೆಗೆಸುತ್ತಿರುವುದು.

ಪಾಂಡವಪುರ, ಜು.3–ತಾಲೂಕಿನ ಬೇಬಿಬೆಟ್ಟದ ಕಲ್ಲು ಗಣಿಗಾರಿಕೆ ಪ್ರದೇಶದಲ್ಲಿ ಹೈಕೋರ್ಟ್ ಸೂಚನೆಯಂತೆ ಜಿಲ್ಲಾಡಳಿತ ಟ್ರಯಲ್ ಬ್ಲಾಸ್ಟ್ ನಡೆಸಲು ಗಣಿ ಅಧಿಕಾರಿಗಳು ಬುಧವಾರ ಬೇಬಿಬೆಟ್ಟದ ಆಯ್ದ ಪ್ರದೇಶದಲ್ಲಿ ಡ್ರಿಲ್ಲಿಂಗ್ ಯಂತ್ರದ ಮೂಲಕ ಕುಳಿ ತೆಗೆಸುವ ಕಾರ್ಯ ನಡೆಸಿದರು.

ಬೇಬಿ ಬೆಟ್ಟದಲ್ಲಿ ಗಣಿಗಾರಿಕೆ ನಡೆಸುವುದರಿಂದ ಕೆಆರ್‌ಎಸ್ ಅಣೆಕಟ್ಟೆಗೆ ಅಪಾಯವಿದೆಯೋ, ಇಲ್ಲವೋ ಎಂಬುದನ್ನು ದೃಢಪಡಿಸಿಕೊಳ್ಳುವುದಕ್ಕಾಗಿ ಟ್ರಯಲ್ ಬ್ಲಾಸ್ಟ್ ನಡೆಸುವಂತೆ ಹೈಕೋರ್ಟ್ ಸೂಚನೆ ನೀಡಿರುವ ● 9ನೇ ಪುಟಕ್ಕೆ

ಕೆಆರ್‌ಎಸ್‌ನಲ್ಲಿ ರೈತರ ಪರ–ವಿರೋಧ ಪ್ರತಿಭಟನೆ



ಇಂಗಲಕುಪ್ಪೆ ಕೃಷ್ಣೇಗೌಡ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಕಾರ್ಯಕರ್ತರು ಕೆಆರ್‌ಎಸ್‌ನ ನೀರಾವರಿ ಅಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿದರು.



ಪಾಂಡವಪುರ ತಾಲೂಕಿನ ಕೆಆರ್‌ಎಸ್ ಬೃಂದಾವನ ಗಾರ್ಡನ್ ರಸ್ತೆಯಲ್ಲಿ ಟ್ರಯಲ್ ಬ್ಲಾಸ್ಟ್ ವಿರೋಧಿಸಿ ರೈತ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಪಾಂಡವಪುರ, ಜು.3– ಕೋರ್ಟ್ ಆದೇಶದಂತೆ ಬೇಬಿಬೆಟ್ಟದ ಕಲ್ಲು ಗಣಿಗಾರಿಕೆ ಪ್ರದೇಶದಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸಲು ಮುಂದಾಗಿರುವ ಅಧಿಕಾರಿಗಳ ನಡೆಯ ವಿರುದ್ಧ ಬುಧವಾರ ಕೆಆರ್‌ಎಸ್‌ನಲ್ಲಿ ರೈತಸಂಘಟನೆಗಳು ಪರ–ವಿರೋಧವಾಗಿ ಪ್ರತಿಭಟನೆಗಳನ್ನು ನಡೆಸಿದವು.

ಬೇಬಿಬೆಟ್ಟದಲ್ಲಿ ಟ್ರಯಲ್ ಬ್ಲಾಸ್ಟ್ ಮಾಡಲು ಮುಂದಾಗಿರುವುದನ್ನು ಖಂಡಿಸಿ ಬಡಗಲಪುರ ನಾಗೇಂದ್ರ ನೇತೃತ್ವದ ರಾಜ್ಯ ರೈತ ಸಂಘ ಕೆಆರ್‌ಎಸ್‌ನ ಬೃಂದಾವನ ಮುಂಭಾಗದ ಗೇಟ್ ಬಳಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರೆ, ಬೇಬಿಬೆಟ್ಟದಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸಿ ಕೋರ್ಟ್‌ಗೆ ವರದಿ ಸಲ್ಲಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ(ರೈತಬಣ) ಇಂಗಲಕುಪ್ಪೆ ಕೃಷ್ಣೇಗೌಡ ನೇತೃತ್ವದಲ್ಲಿ ಕೆಆರ್‌ಎಸ್‌ನ ಮುಖ್ಯದ್ವಾರದ ಬಳಿ ಇರುವ ನೀರಾವರಿ ಅಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಪರ ಪ್ರತಿಭಟನೆ: ರೈತ ಬಣದ ರಾಜ್ಯಾಧ್ಯಕ್ಷ ಕೃಷ್ಣೇಗೌಡ ಮಾತನಾಡಿ, ಕಲ್ಲು ಗಣಿಗಾರಿಕೆಯಿಂದ ಕೆಆರ್‌ಎಸ್ ಅಣೆಕಟ್ಟೆಗೆ ಅಪಾಯ ಇದೆಯೋ, ಇಲ್ಲವೋ ಎಂಬ ವಿಚಾರವಾಗಿ ಹೈಕೋರ್ಟ್ ಬೇಬಿಬೆಟ್ಟ ಕಲ್ಲು ಗಣಿಗಾರಿಕೆ ಪ್ರದೇಶದಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸಿ ವರದಿ ನೀಡುವಂತೆ ಜಿಲ್ಲಾಡಳಿತಕ್ಕೆ ಸೂಚಿಸಿದೆ. ಅದರಂತೆ ಜಿಲ್ಲಾಡಳಿತ ಟ್ರಯಲ್ ಬ್ಲಾಸ್ಟ್ ನಡೆಸಲು ಮುಂದಾಗಿದೆ. ಕೋರ್ಟ್ ಆದೇಶದಂತೆ ಅಧಿಕಾರಿಗಳು ಟ್ರಯಲ್ ಬ್ಲಾಸ್ಟ್ ನಡೆಸಿ ಕೋರ್ಟ್‌ಗೆ ವರದಿ ಸಲ್ಲಿಸಲು ಅವಕಾಶ ನೀಡಬೇಕು. ಟ್ರಯಲ್ ಬ್ಲಾಸ್ಟ್ ನಡೆಸುವುದರಿಂದ ಸಾರ್ವಜನಿಕರು ಹಾಗೂ ರೈತರಿಗೆ ಈ ಬಗ್ಗೆ ಸ್ಪಷ್ಟವಾದ ಮಾಹಿತಿ ದೊರೆಯುತ್ತದೆ. ಅಣೆಕಟ್ಟೆ ಹಿತದೃಷ್ಟಿಯಿಂದ ಯಾವ ರೀತಿ ಮುಂಜಾಗ್ರತಾ ಕ್ರಮ ವಹಿಸಬೇಕು ಎಂಬುದು ತಿಳಿಯುತ್ತದೆ. ಅದನ್ನು ಬಿಟ್ಟು ವಿರೋಧಿಸುವುದು ಸರಿಯಲ್ಲ ಎಂದು ಕಿಡಿಕಾರಿದರು. ಈಗಾಗಲೇ ಟ್ರಯಲ್ ಬ್ಲಾಸ್ಟ್ ನಡೆಸಲು ಮೂರು ಬಾರಿ ಗಣಿ ವಿಜ್ಞಾನಿಗಳು ಆಗಮಿಸಿ ವಾಪಸ್ಸಾಗಿದ್ದಾರೆ. ಈ ಬಾರಿ ಟ್ರಯಲ್ ಬ್ಲಾಸ್ಟ್ ನಡೆಸಿ ವರದಿಯನ್ನು ಸರಕಾರ ಹಾಗೂ ನ್ಯಾಯಾಲಯಕ್ಕೆ ನೀಡಬೇಕು. ನ್ಯಾಯಾಲಯದ ಆದೇಶವನ್ನು ವಿರೋಧಿಸುವುದು ಸರಿಯಲ್ಲ. ಟ್ರಯಲ್ ಬ್ಲಾಸ್ಟ್‌ನಿಂದ ವಿಜ್ಞಾನಿಗಳು ಹಿಂದೆ ಸರಿಯಬಾರದು ಎಂದು ಆಗ್ರಹಿಸಿದರು. ಹೆಮ್ಮಿಗೆ ಚಂದ್ರಶೇಖರ್, ಪಿ.ಎಂ.ರವಿಗೌಡ, ಮೈಸೂರು ಜಿಲ್ಲಾಧ್ಯಕ್ಷ ಕೆಂಪರಾಜು, ಎಸ್. ನಾಗರತ್ನ, ರಘುನಾಥ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವಿರೋಧ: ಟ್ರಯಲ್ ಬ್ಲಾಸ್ಟ್ ವಿರೋಧಿಸಿ ರಾಜ್ಯ ● 9ನೇ ಪುಟಕ್ಕೆ

ದೇಶಾದ್ಯಂತ ವ್ಯಾಪಕ ರಕ್ತದಾನ ಶಿಬಿರ ಆಯೋಜಿಸಿದ್ದ ಜೆಕೆ ಗ್ರೂಪ್



ಜೆಕೆ ಸಂಸ್ಥೆ ಮಾಜಿ ಅಧ್ಯಕ್ಷ ದಿವಂಗತ ಹರಿಶಂಕರ್ ಸಿಂಘಾನಿಯಾ ಅವರ 91ನೇ ಜನ್ಮದಿನದಂದು ದೇಶಾದ್ಯಂತ ಜೆಕೆ ಕಂಪನಿಗಳಲ್ಲಿ ರಕ್ತದಾನ ಶಿಬಿರ ಆಯೋಜಿಸಿತ್ತು. ರಕ್ತದಾನ ಮಾಡಿದವರಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಮೈಸೂರು, ಜು. 3– ಮೈಸೂರಿನ ಜೆಕೆ ಸಂಸ್ಥೆಯು ತನ್ನ ಮಾಜಿ ಅಧ್ಯಕ್ಷ ಮತ್ತು ದಿವಂಗತ ಹರಿಶಂಕರ್ ಸಿಂಘಾನಿಯಾ ಅವರ 91ನೇ ಜನ್ಮದಿನದ ನೆನಪಿಗಾಗಿ ತನ್ನ ಸಮೂಹದ ಕಂಪನಿಗಳಾದ್ಯಂತ ರಕ್ತದಾನ ಶಿಬಿರ ಆಯೋಜಿಸಿತ್ತು.

ಸಮೂಹದ ಕಂಪನಿಗಳ ವಿವಿಧ ಪ್ಲಾಂಟ್‌ಗಳು ಮತ್ತು ಮಾರಾಟ ಕಚೇರಿಗಳಲ್ಲಿ ರಕ್ತದಾನ ಶಿಬಿರಗಳನ್ನು ಆಯೋಜಿಸಲಾಗಿದ್ದು, 7,500ಕ್ಕೂ ಹೆಚ್ಚು ಉದ್ಯೋಗಿಗಳು ಇದರಲ್ಲಿ ಭಾಗವಹಿಸಿದ್ದರು. ಸಾಮಾಜಿಕ ಸೇವೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಜೆಕೆ ಸಂಸ್ಥೆಯು, ದಿವಂಗತ ಹರಿಶಂಕರ್ ಸಿಂಘಾನಿಯಾ ಅವರಿಗೆ ವಿಶೇಷ ಗೌರವ ಸಲ್ಲಿಸಲು ವಾರ್ಷಿಕವಾಗಿ ಸಮೂಹದ ಕಂಪನಿಗಳಲ್ಲಿ ರಕ್ತದಾನ ಶಿಬಿರಗಳನ್ನು ಆಯೋಜಿಸುತ್ತಾ ಬಂದಿದೆ.

'ಪದ್ಮಭೂಷಣ' ಪುರಸ್ಕೃತ ಹರಿಶಂಕರ್ ಸಿಂಘಾನಿಯಾ ಅವರು ಜೆಕೆ ಸಂಘಟನೆಯ ಬೆಳವಣಿಗೆ ಮತ್ತು ಬಲವರ್ಧನೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಹಲವಾರು ಹೊಸ ಉದ್ಯಮಗಳನ್ನು ಸ್ಥಾಪಿಸಿರುವ ಅವರು ಬಹು ಕಂಪನಿಗಳನ್ನು ಸಮೂಹವಾಗಿ ಸಂಯೋಜಿಸುವಲ್ಲಿ ದೊಡ್ಡ ಪಾತ್ರ ನಿರ್ವಹಿಸಿದ್ದಾರೆ.

ಈ ಸಂಬಂಧ ಜೆಕೆ ಸಂಸ್ಥೆಯ ಅಧ್ಯಕ್ಷ ಭರತ್ ಹರಿ ಸಿಂಘಾನಿಯಾ ಮಾತನಾಡಿ, ಜೆಕೆ ಸಂಸ್ಥೆಯ ಮೌಲ್ಯಗಳಲ್ಲಿ ಸಮಾಜ ಸೇವೆ ಎಂಬುದು ಆಳವಾಗಿ ಹುದುಗಿದೆ. ಈ ವಾರ್ಷಿಕ ಉಪಕ್ರಮದ ಮೂಲಕ ನಾವು ಹರಿಶಂಕರ್ ಸಿಂಘಾನಿಯಾ ಅವರ ಪರಂಪರೆಯನ್ನು ಗೌರವಿಸುವ ಉದ್ದೇಶ ಹೊಂದಿದ್ದೇವೆ. ಅದರ ಜೊತೆಗೆ ಹಿಂದುಳಿದ ವರ್ಗದ ವ್ಯಕ್ತಿಗಳ ಜೀವನವನ್ನು ಸುಧಾರಿಸುವ ಮಹತ್ತರ ಗುರಿ ಹೊಂದಿದ್ದೇವೆ. ಈ ರಕ್ತದಾನ ಅಭಿಯಾನದಲ್ಲಿ ನಮ್ಮ ಉದ್ಯೋಗಿಗಳ ಅಗಾಧ ಭಾಗವಹಿಸುವಿಕೆಯ ಬಗ್ಗೆ ಸಂತಸವಾಗುತ್ತಿದೆ ಎಂದು ಹೇಳಿದರು.

ರಾಷ್ಟ್ರಾದ್ಯಂತ ನಡೆದ ಈ ರಕ್ತದಾನ ಅಭಿಯಾನದಲ್ಲಿ ಜೆಕೆ ಟೈರ್, ಜೆಕೆ ಪೇಪರ್, ಜೆಕೆ ಲಕ್ಷ್ಮಿ ಸಿಮೆಂಟ್, ಜೆಕೆ ಅಗ್ರಿ ಜೆನೆಟಿಕ್ಸ್, ಜೆಕೆ ಫೆನ್ನರ್, ಜೆಕೆ ಫುಡ್ಸ್, ಜೆಕೆ ಇನ್ಶೂರೆನ್ಸ್, ಪಿಎಸ್‌ಆರ್‌ಐ ಹಾಸ್ಪಿಟಲ್ ಮತ್ತು ಕೆಜೆ ಲಕ್ಷ್ಮೀಪತ್ ವಿಶ್ವವಿದ್ಯಾಲಯ ಸೇರಿದಂತೆ ಹಲವಾರು ಜೆಕೆ ಸಮೂಹದ ಕಂಪನಿಗಳ ಉದ್ಯೋಗಿಗಳು ಭಾಗವಹಿಸಿದ್ದರು.

ನೀಟ್‌ನಿಂದ ರಾಜ್ಯ ಹೊರಬರಲು ನಿಲುವಳಿ ಮಂಡನೆ: ಎಂಎಲ್‌ಸಿ ಐವನ್ ಡಿಸೋಜಾ

ಬೀದರ್, ಜು.3– ನೀಟ್ ಪರೀಕ್ಷೆಯಿಂದ ಕರ್ನಾಟಕ ರಾಜ್ಯ ಹೊರಕ್ಕೆ ಬರಬೇಕೆಂದು ಆಗ್ರಹಿಸಿ ವಿಧಾನಪರಿಷತ್‌ನಲ್ಲಿ ನಿಲುವಳಿ ಮಂಡಿಸಲು ನಿರ್ಧರಿಸಲಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಐವನ್ ಡಿಸೋಜಾ ತಿಳಿಸಿದರು.

ಜುಲೈ 16ರಿಂದ ವಿಧಾನ ಮಂಡಲದ ಅಧಿವೇಶನ ಪ್ರಾರಂಭವಾಗಲಿದೆ. ನೀಟ್ ಕುರಿತು ಚರ್ಚೆ, ಅದರಿಂದ ಹೊರಬರುವ ಕುರಿತು ಸ್ವತಃ ನಾನೇ ನಿಲುವಳಿ ಮಂಡಿಸುತ್ತೇನೆ. ನೀಟ್‌ನಿಂದ ಹೊರಗುಳಿಯಲು ಈಗಾಗಲೇ ತಮಿಳುನಾಡು, ಕೇರಳ ಸೇರಿದಂತೆ ದೇಶದ ಇತರೆ ರಾಜ್ಯಗಳಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ ಎಂದು ನಗರದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.

ಕೇಂದ್ರ ಸರ್ಕಾರವು ನೀಟ್ ದುರುಪಯೋಗ ಪಡಿಸಿಕೊಂಡು ಅದರಲ್ಲಿ ದೊಡ್ಡ ಪ್ರಮಾಣದಲ್ಲಿ ಹಗರಣ ನಡೆಸಿದೆ. ಇದರಿಂದ ಅನೇಕ ವಿದ್ಯಾರ್ಥಿಗಳ ಭವಿಷ್ಯ ಹಾಳಾಗಿದೆ. ಅನೇಕ ವಿದ್ಯಾರ್ಥಿಗಳು ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕೇಂದ್ರ ನಡೆಸುವ ನೀಟ್ ಮೇಲೆ ಭರವಸೆ ಉಳಿದಿಲ್ಲ. ವೀರಪ್ಪ ಮೊಯಿಲಿ ಅವರು ದೇಶದಲ್ಲಿ ಮೊಟ್ಟ ಮೊದಲ ಬಾರಿಗೆ ಸಿಇಟಿ ಪರೀಕ್ಷೆ ಪರಿಚಯಿಸಿದ್ದರು. ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಮೆರಿಟ್ ಆಧರಿಸಿ ವೃತ್ತಿಪರ ಕೋರ್ಸ್‌ಗಳಲ್ಲಿ ಪ್ರವೇಶ ದೊರಕಿಸಿಕೊಡುವುದು ಅದರ ಉದ್ದೇಶವಾಗಿತ್ತು ಪುನಃ ಆ ರೀತಿಯ ವ್ಯವಸ್ಥೆ ತರಲು ಚಿಂತನೆ ನಡೆದಿದೆ ಎಂದು ತಿಳಿಸಿದರು.

ಎಂ.ಡಿ.ಗೋಪಿನಾಥ್‌ರಿಗೆ ಚಾಣಕ್ಯ ಸೇವಾ ರತ್ನ ಪ್ರಶಸ್ತಿ



ಮೈಸೂರಿನ ಕೆಎಂಪಿಕೆ ಚಾರಿಟಬಲ್ ಟ್ರಸ್ಟ್ 18ನೇ ವಾರ್ಷಿಕೋತ್ಸವದ ಅಂಗವಾಗಿ ಅಗಸ್ತ್ಯ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಆವರಣದಲ್ಲಿ ಸದ್ವಿದ್ಯಾ ಶಿಕ್ಷಣ ಸಂಸ್ಥೆಯ ನಿರ್ದೇಶಕರೂ ಆದ ಅಗಸ್ತ್ಯ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಅಧ್ಯಕ್ಷ ಎಂ.ಡಿ. ಗೋಪಿನಾಥ್ ಅವರಿಗೆ ಚಾಣಕ್ಯ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಈ ವೇಳೆ ಸೊಸೈಟಿ ಉಪಾಧ್ಯಕ್ಷೆ ಎಂ.ಎನ್.ಸೌಮ್ಯ, ಖಜಾಂಚಿ ಕೆ.ನಾಗರಾಜ, ನಿರ್ದೇಶಕ ಮಂಡಲಿ ಸದಸ್ಯರಾದ ಸಿ.ವಿ.ಪಾರ್ಥಸಾರಥಿ, ಪ್ರಶಾಂತ್ ತಾತಾಚಾರ್, ಬಾಲಕೃಷ್ಣ, ಎಂ.ಆರ್.ಚೇತನ್, ಫಣಿರಾಜ್, ಮಹಿಮ, ನಾಗಶ್ರೀ, ಅರುಣ್, ಶಿವರುದ್ರಪ್ಪ, ರಾಜಮ್ಮ, ಶಾಶ್ವತಿ ನಾಯಕ, ಪ್ರಭಾರ ಕಾರ್ಯದರ್ಶಿ ಎನ್.ವೀಣಾ ಇನ್ನಿತರರು ಹಾಜರಿದ್ದರು.

ನಿಧನ

ವಿಂಗ್ ಕಮಾಂಡರ್ (ನಿವೃತ್ತ) ಎಸ್.ಎಸ್.ಬಾಲಸುಬ್ರಮಣ್ಯಂ

ಮೈಸೂರು, ಜು.3– ಭಾರತೀಯ ವಿದ್ಯಾಭವನ (ಬಿವಿಬಿ), ಮೈಸೂರು ಕೇಂದ್ರದ



ಕಮಿಟಿ ಮೆಂಬರ್ ಹಾಗೂ ಕುವೆಂಪುನಗರ ನಿವಾಸಿ ವಿಂಗ್ ಕಮಾಂಡರ್ (ನಿವೃತ್ತ) ಎಸ್.ಎಸ್.ಬಾಲಸುಬ್ರಮಣ್ಯಂ(82) ಅವರು ಬುಧವಾರ ಬೆಳಗಿನ ಜಾವ ನಿಧನರಾದರು.

ಶ್ರೀಯುತರು ಬಿವಿಬಿ ಆಡಳಿತಾಧಿಕಾರಿಯಾಗಿಯೂ ಸೇವೆ ಸಲ್ಲಿಸಿದ್ದರು. ಮೃತರು ಪತ್ನಿ ಡಾ.ಮೀರಾ, ಪುತ್ರಿಯರಾದ ಪ್ರಿಯಾ ಮತ್ತು ರಶ್ಮಿ, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗ ಹಾಗೂ ಮಿತ್ರರನ್ನು ಅಗಲಿದ್ದಾರೆ.


ಇವರ ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನಾಳೆ (ಜು.4) ಬೆಳಗ್ಗೆ 9.30ಕ್ಕೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಂತಾಪ: ಶ್ರೀಯುತರ ನಿಧನಕ್ಕೆ ಬಿವಿಬಿ ಮೈಸೂರು ಕೇಂದ್ರದ ಅಧ್ಯಕ್ಷರಾದ ಡಾ. ಕೆ.ಬಿ.ಗಣಪತಿ, ಗೌರವ ಕಾರ್ಯದರ್ಶಿ ಪಿ.ಎಸ್.ಗಣಪತಿ ಮತ್ತು ಇತರ ಪದಾಧಿಕಾರಿಗಳು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಟಿ. ವೆಂಕಟಾಚಲ



ಮೈಸೂರು ಮಹಾನಗರಪಾಲಿಕೆ ಮಾಜಿ ಸದಸ್ಯರು ಮತ್ತು ಸಿಟಿ ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕರಾದ ಟಿ. ವೆಂಕಟಾಚಲ(75) ಬುಧವಾರ ಬೆಳಗ್ಗೆ ನಿಧನರಾದರು. ಮೈಸೂರಿನ ಒಂಟಿಕೊಪ್ಪಲು ಶ್ರೀ ಲಕ್ಷ್ಮೀವೆಂಕಟರಮಣ ಸ್ವಾಮಿ ದೇವಸ್ಥಾನ, ಗಣಪತಿ ದೇವಾಲಯ, ಶ್ರೀ ಸಾಯಿಬಾಬಾ ದೇವಾಲಯ ಮತ್ತು ಗೋಕುಲಂನ ಶ್ರೀ ಆಂಜನೇಯಸ್ವಾಮಿ ದೇವಾಲಯದ ಟ್ರಸ್ಟಿಯಾಗಿದ್ದರು. ಮೃತರು ಪತ್ನಿ, ಇಬ್ಬರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಗೋಕುಲಂನ ಚಿರಶಾಂತಿ ಧಾಮದಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ವರದನಾಯಕ

ಸಾರ್ವಜನಿಕ ಶಿಕ್ಷಣ ಇಲಾಖೆ ನಿವೃತ್ತ ನಿರ್ದೇಶಕರು ಮತ್ತು ಮೈಸೂರಿನ ವಿವೇಕಾನಂದನಗರ 4ನೇ ಹಂತದ ನಿವಾಸಿ ವರದನಾಯಕ ಖಾಸಗಿ ಆಸ್ಪತ್ರೆಯಲ್ಲಿ ಬುಧವಾರ ನಿಧನರಾದರು.

ಮೃತರು ಪತ್ನಿ ರೇಣುಕಾ, ಪುತ್ರ ರವಿ, ಪುತ್ರಿಯರಾದ ಅರ್ಚನಾ ಮತ್ತು ಅಶ್ವಿನಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಹುಟ್ಟೂರು ಸರಗೂರು ತಾಲೂಕಿನ ಮುಳ್ಳೂರಿನಲ್ಲಿ ನಾಳೆ (ಜು.4) ಬೆಳಗ್ಗೆ 9.30ಕ್ಕೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮುಡಾ ಹಗರಣ ನ್ಯಾಯಾಂಗ ತನಿಖೆಗೆ ಆಗ್ರಹಿಸಿ ಸಿಪಿಐ(ಎಂ) ಪ್ರತಿಭಟನೆ



ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ದಲ್ಲಿ ನಡೆದಿರುವ ನಿವೇಶನ ಹಂಚಿಕೆ ಹಗರಣ ಕುರಿತು ನ್ಯಾಯಾಂಗ ತನಿಖೆಗೆ ಒತ್ತಾಯಿಸಿ ಸಿಪಿಐ (ಎಂ) ವತಿಯಿಂದ ಹಳೆ ಡಿಸಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಜು.3(ಜಿಎ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದಲ್ಲಿ ನಡೆದಿರುವ ನಿವೇಶನ ಹಂಚಿಕೆ ಹಗರಣ ಕುರಿತು ನ್ಯಾಯಾಂಗ ತನಿಖೆಗೆ ಒತ್ತಾಯಿಸಿ ಸಿಪಿಐ(ಎಂ) ವತಿಯಿಂದ ಹಳೆ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಆರ್ಥಿಕವಾಗಿ ದುರ್ಬಲರಾದ ಬಡವರಿಗೆ ರಿಯಾಯಿತಿ ದರದಲ್ಲಿ ನಿವೇಶನ ನೀಡಬೇಕಾದ ನಗರಾಭಿವೃದ್ಧಿ ಪ್ರಾಧಿಕಾರ ರಿಯಲ್ ಎಸ್ಟೇಟ್ ಉದ್ಯಮಿಗಳಿಗೆ, ದಲ್ಲಾಳಿಗಳಿಗೆ ಪೂರಕವಾಗಿ ಕೆಲಸ ಮಾಡುತ್ತಿದೆ. ಇದು ಅಕ್ರಮಗಳನ್ನು ಸಕ್ರಮ ಮಾಡುವ ಪ್ರಾಧಿಕಾರವಾಗಿದೆ. 50:50 ಅನುಪಾತದಲ್ಲಿ ನಿವೇಶನ ಹಂಚಿಕೆಯಲ್ಲಿ ನಡೆದಿರುವ ಹಗರಣವೂ ಸೇರಿದಂತೆ ಈ ಹಿಂದೆ ನಡೆದಿರುವ ಎಲ್ಲಾ ಅಕ್ರಮಗಳನ್ನು ನ್ಯಾಯಾಂಗ ತನಿಖೆಗೆ ಒಳಪಡಿಸಬೇಕು. ಅಕ್ರಮವಾಗಿ ಹಂಚಿರುವ ನಿವೇಶನಗಳನ್ನು ವಾಪಸ್ ಪಡೆದು ಬಡವರಿಗೆ ಹಂಚಬೇಕು. ಹಲವಾರು ವರ್ಷಗಳಿಂದ ಮುಡಾದಲ್ಲಿ ಇರುವ ಅಧಿಕಾರಿ ಮತ್ತು ಸಿಬ್ಬಂದಿಯನ್ನು ವರ್ಗಾವಣೆ ಮಾಡಿ ಅವರ ಮೇಲಿರುವ ಅಕ್ರಮಗಳನ್ನು ತನಿಖೆಗೆ ಒಳಪಡಿಸಬೇಕು ಎಂದು ಆಗ್ರಹಿಸಿದರು.

ಹಿಂದಿನ ಬಿಜೆಪಿ ಸರ್ಕಾರ ಭೂ ಸ್ವಾಧೀನ ಮಸೂದೆಗೆ ತಿದ್ದುಪಡಿ ತಂದು ರೈತರಲ್ಲದವರು ರೈತರಿಂದ ಭೂಮಿ ಕೊಳ್ಳಲು ಅವಕಾಶ ನೀಡಿರುವುದು ಸಹ ಈ ರೀತಿಯ ಹಗರಣಗಳಿಗೆ ಕಾರಣವಾಗಿ ರೈತರಿಗೆ ಅನ್ಯಾಯವಾಗಿದೆ. ಹೀಗಾಗಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ಭೂ ಸ್ವಾಧೀನ ಮಸೂದೆ ತಿದ್ದುಪಡಿಯನ್ನು ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿದರು.

ಮೈಸೂರಿನಲ್ಲಿ ಲಕ್ಷಾಂತರ ಜನರಿಗೆ ಸ್ವಂತ ಮನೆ ಇಲ್ಲದೆ ಬಾಡಿಗೆ ಮನೆಗಳಲ್ಲಿ ವಾಸ ಮಾಡುತ್ತಿದ್ದಾರೆ. ಅಲ್ಲದೇ ಇನ್ನೂ ಕೆಲವು ಜನ ಉಸಿರುಗಟ್ಟುವ ಸಣ್ಣ ಸಣ್ಣ ಜಾಗದಲ್ಲಿ ಜೀವನ ಕಳೆಯುತ್ತಿದ್ದಾರೆ. ಹೀಗಿರುವಾಗ ಕಳೆದ 15–20 ವರ್ಷಗಳಿಂದ ಕನಿಷ್ಠ 20–30 ಅಳತೆಯ ನಿವೇಶನವಾದರೂ ಸಿಗಲಿ ಎಂದು ಸುಮಾರು 40 ಸಾವಿರಕ್ಕೂ ಹೆಚ್ಚಿನ ಜನ ಅರ್ಜಿ ಹಾಕಿ ಕಾದು ಕುಳಿತಿದ್ದಾರೆ. ಆದರೆ, ಮುಡಾ ಬಲಾಢ್ಯರಿಗೆ, ರಿಯಲ್ ಎಸ್ಟೇಟ್ ಉದ್ಯಮಿಗಳಿಗೆ ಅನುಕೂಲ ಮಾಡುತ್ತ ಬಡವರ ವಿರೋಧಿಯಾಗಿದೆ. ಹೀಗಾಗಿ ಬಡವರಿಗೆ, ಆರ್ಥಿಕವಾಗಿ ಹಿಂದುಳಿದವರಿಗೆ ನಿವೇಶನ ನೀಡಬೇಕೆಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಜಿಲ್ಲಾ ಕಾರ್ಯದರ್ಶಿ ಜಗದೀಶ್ ಸೂರ್ಯ, ಜಿಲ್ಲಾ ಸಮಿತಿ ಸದಸ್ಯರಾದ ಜಿ.ಜಯರಾಂ, ಲ.ಜಗನ್ನಾಥ್, ಎನ್.ವಿಜಯ್‌ಕುಮಾರ್, ಸ್ಥಳೀಯ ಸಮಿತಿ ಕಾರ್ಯದರ್ಶಿ ರಾಜೇಂದ್ರ, ಸದಸ್ಯರಾದ ಆರ್.ಸುಬ್ರಹ್ಮಣ್ಯ, ಕೃಷ್ಣಮೂರ್ತಿ, ಶಾಕುಂತಲಾ ಬಾಲಾಜಿರಾವ್, ಬಲರಾಂ, ಶ್ರೀಧರ್, ಎನ್.ಸುಬ್ರಹ್ಮಣ್ಯ, ಕಲಿಂ ಪಾಷಾ, ಈಶ್ವರ್, ವಿಜಯ್‌ಕುಮಾರ್‌ಗೌಡ, ಶಿವಕುಮಾರ್, ಪುಟ್ಟಮಲ್ಲಯ್ಯ, ಸಿದ್ದಯ್ಯ, ರಾಘವೇಂದ್ರ, ನಾಗರಾಜ್, ಕುಮಾರ್, ಮೋನಿಷ್, ಯರಗಲ್, ಶ್ರೀಕಂಠಮೂರ್ತಿ ಭಾಗವಹಿಸಿದ್ದರು.

ಸುತ್ತೂರಿನ ಎಸ್‌ಬಿಐನಲ್ಲಿ ಜೀವ ವಿಮೆ ಫಲಾನುಭವಿ ಕುಟುಂಬದವರಿಗೆ ಚೆಕ್ ವಿತರಣೆ



ಸುತ್ತೂರಿನ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ವತಿಯಿಂದ ಜೀವ ವಿಮೆ ಅಭಿಯಾನ ನಡೆಯಿತು. ಕಾರ್ಯಕ್ರಮದಲ್ಲಿ ಫಲಾನುಭವಿ ಆಲತ್ತೂರು ಗ್ರಾಮದ ಗಿರೀಶ್ ಕುಟುಂಬದವರಿಗೆ ಎಸ್‌ಬಿಐ ಮುಖ್ಯ ವ್ಯವಸ್ಥಾಪಕ ಸುಧಾ ಕೋಟೇಶ್ವರ್ ವಿಮೆಯ 28 ಲಕ್ಷ ಮೊತ್ತದ ಚೆಕ್ ಫಲಾನುಭವಿಗೆ ವಿತರಿಸಿದರು.

ಸುತ್ತೂರು, ಜು. 3–ನಂಜನಗೂಡು ತಾಲೂಕು ಸುತ್ತೂರಿನಲ್ಲಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಬ್ಯಾಂಕಿನ ವತಿಯಿಂದ ಜೀವ ವಿಮೆ ಅಭಿಯಾನ ನಡೆಯಿತು. ಕಾರ್ಯಕ್ರಮದಲ್ಲಿ ಫಲಾನುಭವಿ ಆಲತ್ತೂರು ಗ್ರಾಮದ ಗಿರೀಶ್ ಕುಟುಂಬದವರಿಗೆ ಎಸ್‌ಬಿಐ ಮುಖ್ಯ ವ್ಯವಸ್ಥಾಪಕರಾದ ಸುಧಾ ಕೋಟೇಶ್ವರ್ ವಿಮೆಯ 28 ಲಕ್ಷ ಮೊತ್ತದ ಚೆಕ್ ವಿತರಿಸಿದರು.

ಬಳಿಕ ಮಾತನಾಡಿದ ಅವರು, ಜೀವ ವಿಮೆ ಎಂಬುದು ನಮಗೆ ಏನಾದರೂ ತೊಂದರೆಯಾದಾಗ ನಮ್ಮ ಕುಟುಂಬವನ್ನು ರಕ್ಷಿಸುವ ಸುಲಭ ಮಾರ್ಗವಾಗಿದೆ. ಈ ನಿಟ್ಟಿನಲ್ಲಿ ನಮ್ಮ ಗ್ರಾಹಕರು ಬ್ಯಾಂಕಿನಿಂದ ನೀಡುತ್ತಿರುವ ಜೀವ ವಿಮೆಯನ್ನು ತಮ್ಮ ಅನುಕೂಲಕ್ಕೆ ತಕ್ಕಂತೆ 240ರಿಂದ ಪ್ರಾರಂಭವಾಗುವ ಅತ್ಯಂತ ಕಡಿಮೆ ದರದ ಸುಲಭ ಕಂತುಗಳಲ್ಲಿ ಹಣ ಪಾವತಿಸಿಕೊಳ್ಳುವ ಮೂಲಕ ನಮಗೇನಾದರೂ ಅಪಘಾತವಾದಾಗ ಅಥವಾ ಮರಣ ಹೊಂದಿದಾಗ ನಮ್ಮನ್ನು ನಂಬಿಕೊಂಡಿರುವ ಕುಟುಂಬದ ಸದಸ್ಯರಿಗೆ ಅನುಕೂಲವಾಗುವಂತೆ ಮಾಡಲು ನಮ್ಮ ಬ್ಯಾಂಕಿನಿಂದ ನೀಡುತ್ತಿರುವ ಹೊಸ ವಿಮಾ ಪಾಲಿಸಿ ಪಡೆದು ವರ್ಷಕ್ಕೊಮ್ಮೆ ಅಥವಾ ವರ್ಷಕ್ಕೆ 2 ಬಾರಿ ವಿಮಾ ಕಂತುಗಳನ್ನು ಪಾವತಿಸುವ ಮೂಲಕ ಅನುಕೂಲವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಜೋನಲ್ ಮ್ಯಾನೇಜರ್ ರೂಪ್‌ಸಿಂಗ್ ಯಾದವ್, ಲೈಫ್ ಇನ್ಶೂರೆನ್ಸ್ ಏರಿಯಾ ಮ್ಯಾನೇಜರ್ ವಿ.ಈಶ್ವರ್‌ರೆಡ್ಡಿ, ಬ್ರಾಂಚ್ ಮ್ಯಾನೇಜರ್ ಚಂದನ್ ಕುಮಾರ್ ಮಿಶ್ರಾ, ಟ್ರೈನಿಂಗ್ ಮ್ಯಾನೇಜರ್ ಮಹೇಶ್ ಎನ್, ಏರಿಯಾ ಮ್ಯಾನೇಜರ್, ಅನಿಲ್‌ಕುಮಾರ್, ಸೇರಿದಂತೆ ಬ್ಯಾಂಕಿನ ಸಿಬ್ಬಂದಿ ವರ್ಗದವರು ಹಾಗೂ ಗ್ರಾಹಕರು ಹಾಜರಿದ್ದರು.

ಅಂತರ ಕಾಲೇಜು ಉತ್ಸವದಲ್ಲಿ ಎಂಎಂಕೆ–ಎಸ್‌ಡಿಎಂ ಕಾಲೇಜಿಗೆ ಸಮಗ್ರ ಪಾರಿತೋಷಕ



ಮೈಸೂರಿನ ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯದ ಎಂ.ಕಾಂ ಸ್ನಾತಕೋತ್ತರ ವಿಭಾಗದ ವಿದ್ಯಾರ್ಥಿನಿಯರು ಮಾನಸವೃದ್ಧಿ ಅಂತರ ಕಾಲೇಜು ಉತ್ಸವದಲ್ಲಿ ಭಾಗವಹಿಸಿ ಸಮಗ್ರ ಪಾರಿತೋಷಕ ಪಡೆದಿದ್ದಾರೆ.

ಮೈಸೂರು, ಜು. 3–ಮೈಸೂರಿನ ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯದ ಎಂ.ಕಾಂ ಸ್ನಾತಕೋತ್ತರ ವಿಭಾಗದ ವಿದ್ಯಾರ್ಥಿನಿಯರು ಮೈಸೂರು ವಿಶ್ವವಿದ್ಯಾನಿಲಯ ಎಂ ಕಾಂ ವಿಭಾಗವು ಆಯೋಜಿಸಿದ್ದ ಮಾನಸವೃದ್ಧಿ ಅಂತರ ಕಾಲೇಜು ಉತ್ಸವದಲ್ಲಿ ಭಾಗವಹಿಸಿ ಬೆಸ್ಟ್ ಮ್ಯಾನೇಜರ್ ವಿಭಾಗದಲ್ಲಿ ಪ್ರಥಮ ಬಹುಮಾನ, ಇನ್‌ಕಮ್ ಟ್ಯಾಕ್ಸ್ ಈವೆಂಟ್ ವಿಭಾಗದಲ್ಲಿ ಪ್ರಥಮ ಬಹುಮಾನ, ಎಚ್‌ಆರ್‌ಎಂ ಈವೆಂಟ್ ವಿಭಾಗದಲ್ಲಿ ದ್ವಿತೀಯ ಬಹುಮಾನ, ಜನಪದ ನೃತ್ಯ ಸ್ಪರ್ಧೆಯ ವಿಭಾಗದಲ್ಲಿ ದ್ವಿತೀಯ ಬಹುಮಾನ ಪಡೆಯುವುದರೊಂದಿಗೆ ಸಮಗ್ರ ಪಾರಿತೋಷಕ ಪಡೆದಿದ್ದಾರೆ.

ಕಾಲೇಜಿನ ಪ್ರಾಂಶುಪಾಲರಾದ ಪ್ರೊ ಎನ್.ಭಾರತಿ, ನಿಕಟಪೂರ್ವ ಪ್ರಾಂಶುಪಾಲ ಪ್ರೊ.ಸಾಯಿನಾಥ್ ಮಲ್ಲಿಗೆ ಮಾಡು, ವಿಭಾಗದ ಮುಖ್ಯಸ್ಥರಾದ ಡಾ.ದೇವಕಿ, ಸಹಾಯಕ ಪ್ರಾಧ್ಯಾಪಕರಾದ ಡಾ.ದಿಲೀಪ್, ಶ್ರೀಮತಿ ಸೌಮ್ಯ, ಪ್ರತಿಭಾನ್ವಿತ ವಿದ್ಯಾರ್ಥಿನಿಯರನ್ನು ಅಭಿನಂದಿಸಿದ್ದಾರೆ.

ಒಟಿಎಸ್ ಸಾಲ ತೀರುವಳಿ ಮೇಳ ನಡೆಸದ ಕರ್ನಾಟಕ ಗ್ರಾಮೀಣ ಬ್ಯಾಂಕಿಗೆ ರೈತರ ಮುತ್ತಿಗೆ



ಒಟಿಎಸ್ ಸಾಲ ತೀರುವಳಿ ಮೇಳ ಮಾಡುತ್ತಿಲ್ಲ ಎಂದು ಆರೋಪಿಸಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ಮೈಸೂರು ಜಿಲ್ಲಾ ಘಟಕದ ರೈತರು ಕರ್ನಾಟಕ ಗ್ರಾಮೀಣ ಬ್ಯಾಂಕ್ ಮೈಸೂರಿನ ಪ್ರಾದೇಶಿಕ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಮೈಸೂರು, ಜು.3(ಜಿಎ)–ಎಲ್ಲಾ ಬ್ಯಾಂಕುಗಳು ಒಟಿಎಸ್ ಮೂಲಕ ರೈತರ ಸಾಲದ ತೀರುವಳಿ ಮಾಡುತ್ತಿದ್ದರೂ ಕರ್ನಾಟಕ ಗ್ರಾಮೀಣ ಬ್ಯಾಂಕ್ ಸರ್ಕಾರದ ಆದೇಶ ಉಲ್ಲಂಘಿಸಿ ಒಟಿಎಸ್ ಸಾಲ ತೀರುವಳಿ ಮೇಳ ಮಾಡುತ್ತಿಲ್ಲ ಎಂದು ಆರೋಪಿಸಿ ರಾಜ್ಯ ಕಬ್ಬು ಬೆಳೆಗಾರ ಸಂಘದ ಮೈಸೂರು ಜಿಲ್ಲಾ ಘಟಕದ ರೈತರು ಕರ್ನಾಟಕ ಗ್ರಾಮೀಣ ಬ್ಯಾಂಕ್ ಮೈಸೂರಿನ ಪ್ರಾದೇಶಿಕ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಬರಗಾಲದಿಂದ ಆರ್ಥಿಕ ಸಂಕಷ್ಟದಲ್ಲಿರುವ ರೈತರಿಗೆ ಕೃಷಿ ಸಾಲ ತೀರಿಸಲು ಸಾಧ್ಯವಾಗಿಲ್ಲ. ಹೀಗಾಗಿ ಮತ್ತೆ ಕೃಷಿ ಚಟುವಟಿಕೆ ನಡೆಸಲು ಅನುಕೂಲವಾಗುವಂತೆ ರಾಜ್ಯ ಮಾರ್ಗದರ್ಶಿ ಬ್ಯಾಂಕ್ (ಎಸ್‌ಎಲ್‌ಬಿಸಿ) ಆದೇಶ ಹೊರಡಿಸಿ ಬ್ಯಾಂಕ್ ಶಾಖೆಗಳಲ್ಲಿ ಒಟಿಎಸ್ ಸಾಲ ತೀರುವಳಿ ಮೇಳ ನಡೆಸಿ ರೈತರಿಗೆ ಅನುಕೂಲ ಮಾಡಿಕೊಡುವಂತೆ ತಿಳಿಸಿದೆ. ಆದರೆ ಬ್ಯಾಂಕ್ ಶಾಖೆಗಳಲ್ಲಿ ಈ ಕುರಿತು ಪ್ರಚಾರ ಮಾಡದೆ ಇರುವುದರಿಂದ ರೈತರು ಈ ಅವಕಾಶದಿಂದ ವಂಚಿತರಾಗಿದ್ದಾರೆ. ಕಳೆದ ಎರಡು ತಿಂಗಳ ಹಿಂದೆ ಬ್ಯಾಂಕ್‌ನ ಕೇಂದ್ರ ಕಚೇರಿ ಬಳ್ಳಾರಿಯಲ್ಲಿ ಹೋರಾಟ ನಡೆಸಿದ ಪರಿಣಾಮ ಈ ಆದೇಶ ಹೊರಡಿಸಲಾಗಿದೆ. ಆದರೆ ಕೆಲ ಶಾಖೆಗಳು ಇದನ್ನು ಮರೆಮಾಚಿ ರೈತರಿಗೆ ವಂಚನೆ ಮಾಡುತ್ತಿವೆ ಎಂದು ಕಿಡಿಕಾರಿದರು.

ಒಟಿಎಸ್ ಮೇಳದ ಅನುಕೂಲ ಎಲ್ಲಾ ರೈತರಿಗೂ ಸಿಗಬೇಕು. ನಿಮ್ಮ ಶಾಖೆಗಳಲ್ಲಿ ಹೆಚ್ಚು ಪ್ರಚಾರ ಮಾಡಿ ರೈತರಿಗೆ ವಂಚನೆ ಮಾಡದೆ ಅನುಕೂಲ ಮಾಡಿಕೊಡಬೇಕು. ಒಟಿಎಸ್ ಮಾಡಿದ ರೈತರಿಗೆ ಮತ್ತೆ ಸಾಲ ನೀಡಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಬ್ಯಾಂಕ್‌ನ ಮುಖ್ಯ ವ್ಯವಸ್ಥಾಪಕ ಯಾದವಮೂರ್ತಿ ಹಾಗೂ ಹಿರಿಯ ವ್ಯವಸ್ಥಾಪಕ ಭಾನುಪ್ರಕಾಶ್, ಪ್ರತಿಭಟನಾನಿರತ ರೈತರ ಮನವೊಲಿಸಿ ಬ್ಯಾಂಕ್‌ಗಳಲ್ಲಿ ನಾಮಫಲಕ ಅನಾವರಣ ಮಾಡಿಸುವುದರ ಜತೆಗೆ ಹೆಚ್ಚು ಪ್ರಚಾರ ಮಾಡಿ ರೈತರಿಗೆ ಜಾಗೃತಿ ಮೂಡಿಸಲಾಗುವುದು. ಒಟಿಎಸ್ ಮೇಳದ ಅನುಕೂಲ ಎಲ್ಲಾ ರೈತರಿಗೂ ಸಿಗುವಂತೆ ಮಾಡುವ ಭರವಸೆ ನೀಡಿದ ನಂತರ ಪ್ರತಿಭಟನೆ ಕೈ ಬಿಡಲಾಯಿತು.


ಪ್ರತಿಭಟನೆಯಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್, ಜಿಲ್ಲಾ ಉಪಾಧ್ಯಕ್ಷ ಮಾರ್ಬಳ್ಳಿ ನೀಲಕಂಠಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬರಡನಪುರ ನಾಗರಾಜ್, ತಾಲೂಕು ಅಧ್ಯಕ್ಷ ಕುರುಬೂರು ಸಿದ್ದೇಶ್, ಸಂಘಟನಾ ಕಾರ್ಯದರ್ಶಿ ಕುರುಬೂರು ಪ್ರದೀಪ್, ಮಹಿಳಾ ಅಧ್ಯಕ್ಷೆ ಕಮಲಮ್ಮ, ರೈತ ಮಹಿಳೆ ಸಾಕಮ್ಮ, ಅಂಬಳೆ ಮಂಜುನಾಥ್, ಬನ್ನೂರು ಸೂರಿ, ಶಂಭುದೇವನಪುರ ಪ್ರಭುಸ್ವಾಮಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಅರ್ಜಿ ಆಹ್ವಾನ

ಮೈಸೂರು,ಜು.3–ರುಡ್‌ಸೆಟ್ ಸಂಸ್ಥೆ, ಮೈಸೂರಿನಲ್ಲಿ ಎನ್‌ಆರ್‌ಎಲ್‌ಎಂ ಯೋಜನೆಯಡಿಯಲ್ಲಿ ಗ್ರಾಮೀಣ ಪ್ರದೇಶದ ನಿರುದ್ಯೋಗಿ ಯುವಕ–ಯುವತಿಯರಿಗಾಗಿ ಸ್ವಉದ್ಯೋಗದಡಿ ವಿವಿಧ ರೀತಿಯ ಕೌಶಲ ತರಬೇತಿಗಳನ್ನು ಹಮ್ಮಿಕೊಂಡಿದೆ.

ಫೋಟೋಗ್ರಫಿ ಮತ್ತು ವೀಡಿಯೋಗ್ರಫಿ ಸಂಬಂಧ ಜು.8ರಿಂದ ಆ.6ರವರೆಗೆ (30 ದಿನ) ದ್ವಿಚಕ್ರ ವಾಹನಗಳ ರಿಪೇರಿ ಸಂಬಂಧ ಜು.18ರಿಂದ ಆ.16ರವರೆಗೆ (30 ದಿನ) ಕಂಪ್ಯೂಟರ್ ಹಾರ್ಡ್‌ವೇರ್ & ನೆಟ್‌ವರ್ಕಿಂಗ್ ಸಂಬಂಧ ಜು.22ರಿಂದ ಸೆ.4ರರೆಗೆ (45 ದಿನಗಳು). **ತರಬೇತಿ:** ಅಭ್ಯರ್ಥಿಗಳು 18ರಿಂದ 45 ವರ್ಷಗಳ ವಯೋಮಿತಿ ಹೊಂದಿರಬೇಕು. ಕನ್ನಡ ಓದು ಬರಹ ಬಲ್ಲವರಾಗಿರಬೇಕು. ಸ್ವಉದ್ಯೋಗವನ್ನು ಮಾಡಬೇಕೆಂಬ ಆಸಕ್ತಿ ಹೊಂದಿರಬೇಕು. ತರಬೇತಿ ವೇಳೆ ಊಟ ಮತ್ತು ವಸತಿಸಹಿತವಾಗಿ ಸಂಪೂರ್ಣ ಉಚಿತ. ತರಬೇತಿಗೆ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ನೇರ ಸಂದರ್ಶನ ಮೂಲಕ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ 0821–2519663, 9740430061, 9844013948, 9449860466, 6361019245, 9880196581, 8746803006

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

4.07.2024 ಗುರುವಾರ, ಮಳೆ ನಕ್ಷತ್ರ: ಆರ್ದ್ರಾ 22.06.2024 ರಿಂದ 05.07.2024 ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಕೃಷ್ಣ ಪಕ್ಷ, ತಿಥಿ: ಚತುರ್ದಶಿ, ನಕ್ಷತ್ರ: ಮೃಗಶಿರ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಬೆಳಗ್ಗೆ 9 ರಿಂದ ಬೆನ್ನು ನೋವಿಗೆ ಕಾರಣಗಳು, ಲಕ್ಷಣಗಳು ಮತ್ತು ಚಿಕಿತ್ಸೆಗಳ ಬಗ್ಗೆ ತಜ್ಞ ವೈದ್ಯರಿಂದ ಸಲಹೆ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ.

■ **ಪ್ರೀತಿ ಕ್ಯಾನ್ಸರ್ ಸೆಂಟರ್ :** ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ, ಸ್ಥಳ: ಪ್ರೀತಿ ಕ್ಯಾನ್ಸರ್ ಸೆಂಟರ್, ಲಕ್ಷ್ಮೀಪುರಂ, ಬೆಳಗ್ಗೆ 10 ರಿಂದ.

■ **ಶ್ರೀ ಜಯಚಾಮರಾಜ ಅರಸು ಎಜುಕೇಷನ್ ಟ್ರಸ್ಟ್, ಶ್ರೀವಾಣಿ ವಿಲಾಸ ಅರಸು ಶಿಕ್ಷಣ ಸಂಸ್ಥೆಗಳು :** ಸಂಸ್ಥಾಪಕರ ದಿನಾಚರಣೆ, ಮುಖ್ಯ ಅತಿಥಿಗಳು : ಮೈಸೂರು ವಿವಿ ಸಂಶೋಧನಾ ಅಧಿಕಾರಿ ಡಾ. ಎಂ. ಶ್ರೀನಿವಾಸಮೂರ್ತಿ, ಅಧ್ಯಕ್ಷತೆ : ಶ್ರೀ ಜಯಚಾಮರಾಜ ಅರಸು ಎಜುಕೇಷನ್ ಟ್ರಸ್ಟ್ ಉಪಾಧ್ಯಕ್ಷೆ ಶ್ರೀಮತಿ ಭಾರತೀ ಶ್ರೀಧರ್‌ರಾಜೇ ಅರಸ್, ಸ್ಥಳ: ದೃಶ್ಯ ಮತ್ತು ಶ್ರವಣ ಕೊಠಡಿ, ಬೆಳಗ್ಗೆ 11ಕ್ಕೆ.

■ **ಮಾತೃ ಮಂಡಲಿ ಬಾಲಕಿಯರ ಪದವಿಪೂರ್ವ ಕಾಲೇಜು :** ಪ್ರಥಮ ಪಿಯು ವಿದ್ಯಾರ್ಥಿಗಳಿಗೆ ಸ್ವಾಗತ ಕಾರ್ಯಕ್ರಮ, ಉದ್ಘಾಟನೆ : ಸಹಾಯಕ ಕಾರ್ಯಕ್ರಮ ನಿರ್ವಾಹಕ ನಿರ್ದೇಶಕ ಅಬ್ದುಲ್ ರಷೀದ್, ಅಧ್ಯಕ್ಷತೆ : ಮಾತೃಮಂಡಲಿ ವಿದ್ಯಾಸಂಸ್ಥೆ ಗೌರವಾಧ್ಯಕ್ಷರಾದ ಶ್ರೀಮತಿ ವಿಜಯಲಕ್ಷ್ಮಿ ಅರಸ್, ಅತಿಥಿಗಳು: ಮಾತೃ ಮಂಡಲಿ ವಿದ್ಯಾಸಂಸ್ಥೆ ಉಪಾಧ್ಯಕ್ಷರಾದ ಶ್ರೀಮತಿ ರಾಮೇಶ್ವರಿ ವರ್ಮ, ಉಪಸ್ಥಿತರು : ಗೌರವ ಕಾರ್ಯದರ್ಶಿ ಶ್ರೀಮತಿ ವಾಣಿ ಪ್ರಸಾದ್, ಸಹಕಾರ್ಯದರ್ಶಿ ಶ್ರೀಮತಿ ಹೇಮ ಬಾಲಚಂದ್ರನ್, ಖಜಾಂಚಿ ಶ್ರೀಮತಿ ವಿಜಯಲಕ್ಷ್ಮೀ ಮುರಳೀಧರ್, ಸ್ಥಳ: ಕಾಲೇಜು ಆವರಣ, ವಿ.ವಿ. ಮೊಹಲ್ಲಾ, ಬೆಳಗ್ಗೆ 11ಕ್ಕೆ.

■ **ಶ್ರೀ ಕಲಾನಿಕೇತನ ಸ್ಕೂಲ್ ಆಫ್ ಆರ್ಟ್:** ಮಂಡಲ ಚಿತ್ರಕಲಾ ಪ್ರದರ್ಶನ, ಉದ್ಘಾಟನೆ: ಕನ್ನಡ ಪುಸ್ತಕ ಪ್ರಾಧಿಕಾರ ಅಧ್ಯಕ್ಷ ಮಾನಸ, ಲಲಿತಕಲಾ ಅಕಾಡೆಮಿ ಅಧ್ಯಕ್ಷ ಪ.ಸ.ಕುಮಾರ್, ರಾಘವೇಂದ್ರಮೂರ್ತಿ, ಕಾರ್ಯದರ್ಶಿ ಬಾಬುರಾವ್, ಪ್ರಾಚಾರ್ಯ ಮಹದೇವಶೆಟ್ಟಿ, ಸ್ಥಳ: ಶ್ರೀ ಕಲಾನಿಕೇತನ ಆರ್ಟ್ ಗ್ಯಾಲರಿ, ಬೆಳಗ್ಗೆ 11.30ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಸಂವಹನ–ಸಮಾಚಾರ, ಬಾನುಲಿ ಸರಣಿ, ಪ್ರಸ್ತುತಿ : ಅಲಕಾ ಕಟ್ಟೆಮನೆ, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಗಾಯನ ಹಾಗೂ ವ್ಯಾಖ್ಯಾನ ಸರಣಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ: ತ್ಯಾಗರಾಜು. ಎಂ–ಸಂತೂರು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ–ಕಾಡಿನಲ್ಲಿನ ಕಥೆಗಳು. ಭಾಗವಹಿಸುತ್ತಾರೆ: ಜಯಚಾಮರಾಜೇಂದ್ರ ಮೃಗಾಲಯದ ನಿರ್ದೇಶಕರು ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ ಮಹೇಶ್‌ಕುಮಾರ್, ಪ್ರಸ್ತುತಿ: ಜಿ.ಶಾಂತಕುಮಾರ್ **ಮಧ್ಯಾಹ್ನ:** 12.30 ದೇವರನಾಮ–ಸಿ.ವಿ.ಮಂಜುಳಾ, 12.45 ಚಟ್‌ಪಟ್ ಚುರುಮುರಿ, ಪ್ರಸ್ತುತಿ: ಪ್ರಭುಸ್ವಾಮಿ ಮಳಿಮಠ್ ಹಾಗೂ ಕೆ.ಬಿ.ಮೀನಾ, 1.20 ಭಾವಗೀತೆಗಳು–ಸಿಂಚನ. ಸಿ, 4.00 ಜನಪದ ಸಂಗೀತ, 4.30 ಸಂಧ್ಯಾರಾಗ : ನಿವೃತ್ತ ಪ್ರಾಂಶುಪಾಲರು ಹಾಗೂ ಆರ್.ಐ.ಟಿ ಮೈಸೂರು, ಎನ್.ಸಿ.ಇ.ಆರ್.ಟಿ ಭೌತಶಾಸ್ತ್ರದ ಪ್ರೊಫೆಸರ್ ಎಸ್.ಎನ್. ಪ್ರಸಾದ್ ಅವರೊಂದಿಗೆ ಮಾತುಕತೆ, 6.10 ಸಂವಹನ ಸಮಾಚಾರ–ಬಾನುಲಿ ಸರಣಿ. ಪ್ರಸ್ತುತಿ: ಅಲಕಾ ಕಟ್ಟೆಮನೆ, 6.50 ಕೃಷಿರಂಗ–ಕಿಸಾನ್‌ವಾಣಿ, ಪ್ರಾಯೋಜಕರು: ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ತೋಟಗಾರಿಕಾ ಶಿಕ್ಷಣದ ಪ್ರಾಮುಖ್ಯತೆ ಕುರಿತು ಸಂವಾದ. ಭಾಗವಹಿಸುತ್ತಾರೆ: ಮೈಸೂರು ತಾಲೂಕು ಎಲಚನಹಳ್ಳಿಯ ತೋಟಗಾರಿಕಾ ಮಹಾವಿದ್ಯಾಲಯದ ಸಹ ಪ್ರಾಧ್ಯಾಪಕರಾದ ಡಾ.ಜಿ.ಮಂಜುನಾಥ್ ಮತ್ತು ವಿದ್ಯಾರ್ಥಿಗಳಾದ ವಿಜಯ್ ಬಾಲಾಜಿ ಮತ್ತು ಎನ್. ಇಂಚರ. ಪ್ರಸ್ತುತಿ: ಎನ್.ಕೇಶವಮೂರ್ತಿ, 8.00 ಯುವವಾಣಿ: ವನಮಹೋತ್ಸವ ಸಪ್ತಾಹದ ಸಂದರ್ಭದಲ್ಲಿ 'ಪತ್ರಿಕೋದ್ಯಮ ಮತ್ತು ಪರಿಸರ ಸಂರಕ್ಷಣೆ' ಕುರಿತು ಚರ್ಚೆ. ಭಾಗವಹಿಸುತ್ತಾರೆ: ಮೈಸೂರು ವಿಶ್ವವಿದ್ಯಾಲಯದ ಮಾನಸ ಗಂಗೋತ್ರಿಯ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಅಧ್ಯಯನ ವಿಭಾಗದ ವಿದ್ಯಾರ್ಥಿಗಳಾದ ದಿಯಾ. ಎಸ್.ಅರಸ್, ಸಾತ್ವಿಕ್. ಎಸ್.ಪಿ, ಲಿಖಿತ. ಕೆ.ಬಿ ಮತ್ತು ಸುಮನ್. ಕೆ, ನಡೆಸಿಕೊಟ್ಟವರು: ಅನನ್ಯ. ಜಿ, 8.30 ಹಿಂದಿ ಚಿತ್ರಗೀತೆಗಳು, 10.00 ನಾಟಕ : ಸ್ವಾಮಿ ನಿಷ್ಠೆ, ರಚನೆ: ಸಿ.ವಿ.ಶಿವಶಂಕರ್, ನಿರ್ದೇಶನ: ರಘುಪತಿ ಹೆಗ್ಡೆ, 10.30 ಸವಿನೆನಪು

■ **ರವಿವರ್ಮ ಆರ್ಟ್ ಇನ್‌ಸ್ಟಿಟ್ಯೂಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ :** ಪೇಯಿಂಟಿಂಗ್ ಮತ್ತು ಡ್ರಾಯಿಂಗ್ ಎಕ್ಸಿಬಿಷನ್, ಉಪಸ್ಥಿತರು : ಕರ್ನಾಟಕ ಲಲಿತಕಲಾ ಅಕಾಡೆಮಿ ಅಧ್ಯಕ್ಷ ಪಿ. ಸಂಪತ್‌ಕುಮಾರ್, ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ಪ್ರಭು ಹರಸೂರು, ರವಿವರ್ಮ ಆರ್ಟ್ ಇನ್‌ಸ್ಟಿಟ್ಯೂಟ್ ಪ್ರಿನ್ಸಿಪಾಲ್ ಶಿವಕುಮಾರ್ ಕೇಸರಮಾಡು, ಸ್ಥಳ: ರವಿವರ್ಮ ಆರ್ಟ್ ಇನ್‌ಸ್ಟಿಟ್ಯೂಟ್, ಚಾಮರಾಜಪುರಂ, ಮಧ್ಯಾಹ್ನ 12.30ಕ್ಕೆ

■ **ಶ್ರೀ ಕೃಷ್ಣ ಟ್ರಸ್ಟ್, ಶ್ರೀ ಕೃಷ್ಣಧಾಮ :** ಶ್ರೀ ಅದಮಾರು ಪೀಠಾಧೀಶರಾದ ಶ್ರೀ ಶ್ರೀ ವಿಶ್ವಪ್ರಿಯತೀರ್ಥ ಶ್ರೀಪಾದಗಳವರಿಂದ ಶ್ರೀಮದ್ ವಾದಿರಾಜ ವಿರಚಿತ ರುಕ್ಮಿಣೀಶ ವಿಜಯ ಕುರಿತು ಪ್ರವಚನ, ಸ್ಥಳ: ಶ್ರೀಕೃಷ್ಣಧಾಮ, ಸರಸ್ವತಿಪುರಂ, ಸಂಜೆ 6ರಿಂದ.

ಮೈಸೂರು ಮಿತ್ರ

ಇದೇ ಮೊದಲ ಬಾರಿಗೆ ಪರಪ್ಪನ ಅಗ್ರಹಾರ ಜೈಲಲ್ಲಿ ಪುತ್ರ ಪ್ರಜ್ವಲ್ ಭೇಟಿಯಾದ ರೇವಣ್ಣ



ಬೆಂಗಳೂರು, ಜು.3–ತಮ್ಮ ಪುತ್ರ ಪ್ರಜ್ವಲ್ ರೇವಣ್ಣ ಅವರನ್ನು ಭೇಟಿ ಮಾಡಲು ಮಾಜಿ ಸಚಿವ ಹೆಚ್‌ಡಿ ರೇವಣ್ಣ ಇದೇ ಮೊದಲ ಬಾರಿಗೆ ಪರಪ್ಪನ ಅಗ್ರಹಾರಕ್ಕೆ ಜೈಲಿಗೆ ಹೋಗಿದ್ದರು.

ಪೆನ್‌ಡ್ರೈವ್ ಪ್ರಕರಣದಲ್ಲಿ ಜೈಲು ಸೇರಿರುವ ಪ್ರಜ್ವಲ್ ರೇವಣ್ಣ ಈಗ ಜೈಲಿನ ಕ್ವಾರಂಟೈನ್ ನಲ್ಲಿದ್ದಾರೆ. ಸೋಮವಾರ ಭವಾನಿ ರೇವಣ್ಣ ಮಗನನ್ನು ಭೇಟಿ ಮಾಡಿದ್ದರು. ಇಂದು ಮಗನನ್ನು ನೋಡಲು ಹೆಚ್.ಡಿ.ರೇವಣ್ಣ ಆಗಮಿಸಿದ್ದರು. ಭೇಟಿ ಮಾಹಿತಿ ಲಭ್ಯವಾಗಿಲ್ಲ.

ಮಂಗಳವಾರ ಮೈಸೂರಿನಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ್ದ ರೇವಣ್ಣ, ನಾನು ಸದ್ಯಕ್ಕೆ ಪ್ರಜ್ವಲ್ ಭೇಟಿಗೆ ಹೋಗಲ್ಲ. ನಾನು ಭೇಟಿಗೆ ಹೋದರೆ ರೇವಣ್ಣ ಏನೋ ಹೇಳಿಕೊಟ್ಟ ಎಂದು ಹೇಳುತ್ತಾರೆ. ಹೀಗಾಗಿ ನಾನು ಹೋಗಲ್ಲ ಎಂದಿದ್ದರು. ನಮಗೆ ಸದ್ಯಕ್ಕೆ ದೇವರು ಬಿಟ್ಟರೆ ಇನ್ಯಾರು ಎಂದು ಮಾತು ಆರಂಭಿಸಿದ್ದ ಅವರು, ಸೋಮವಾರ ನನ್ನ ಪತ್ನಿ ಹೋಗಿದ್ದಾರೆ. ಮಗ ಅಲ್ವ ಹೀಗಾಗಿ ಹೋಗಿದ್ದಾರೆ ಅಷ್ಟೇ. ತಾಯಿ–ಮಗ ಏನು ಮಾತಾಡಿದ್ದಾರೆ ನನಗೆ ಗೊತ್ತಿಲ್ಲ, ಕೇಳಲೂ ಹೋಗಿಲ್ಲ ಎಂದು ಪ್ರತಿಕ್ರಿಯಿಸಿದ್ದರು.

ಝಿಕಾ ವೈರಸ್: ನಿಗಾ ವಹಿಸಲು ರಾಜ್ಯಗಳಿಗೆ ಕೇಂದ್ರ ಸೂಚನೆ

ನವದೆಹಲಿ, ಜು.3– ಮಹಾರಾಷ್ಟ್ರದ ಕೆಲ ಭಾಗಗಳಲ್ಲಿ ಝಿಕಾ ವೈರಸ್‌ನ ಕೆಲವು ಪ್ರಕರಣಗಳು ಪತ್ತೆಯಾದ ಬೆನ್ನಲ್ಲೇ ಕೇಂದ್ರ ಆರೋಗ್ಯ ಸಚಿವಾಲಯವು ದೇಶದಾದ್ಯಂತ ಈ ಪರಿಸ್ಥಿತಿಯ ಮೇಲೆ ನಿರಂತರ ನಿಗಾ ವಹಿಸುವ ಅಗತ್ಯವಿದೆ ಎಂದು ಎಲ್ಲ ರಾಜ್ಯಗಳಿಗೆ ಬುಧವಾರ ಸೂಚಿಸಿದೆ.

ಪುಣೆಯಲ್ಲಿ 6, ಕೊಲ್ಹಾಪುರ ಮತ್ತು ಸಂಗಮ್ನರ್‌ನಲ್ಲಿ ತಲಾ ಒಬ್ಬರಲ್ಲಿ ಝಿಕಾ ವೈರಸ್ ಇರುವುದು ಮಂಗಳವಾರ ದೃಢಪಟ್ಟಿತ್ತು. ಇದನ್ನು ಗಮನದಲ್ಲಿಟ್ಟುಕೊಂಡು, ಕೆಲ ಸಲಹೆ ಮತ್ತು ಮಾರ್ಗಸೂಚಿಯನ್ನು ಕೇಂದ್ರ ಸರ್ಕಾರ ಹೊರಡಿಸಿದೆ. ಗರ್ಭಿಣಿಯರ ಮೇಲೆ ಹೆಚ್ಚಿನ ನಿಗಾ ಇಡಬೇಕಾದ ಅಗತ್ಯವಿದೆ.



ಈ ಸೋಂಕು ದೃಢಪಟ್ಟ ತಾಯಂದಿರ ಭ್ರೂಣದ ಬೆಳವಣಿಗೆ ಬಗ್ಗೆ ಮೇಲ್ವಿಚಾರಣೆ ವಹಿಸುವಂತೆ ಅದು ರಾಜ್ಯ ಸರ್ಕಾರಗಳಿಗೆ ತಿಳಿಸಿದೆ. ಈಡಿಸ್ ಸೊಳ್ಳೆಗಳ ಹಾವಳಿಯನ್ನು ತಡೆಗಟ್ಟಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕು. ಅಲ್ಲದೆ ಇದರ ಮೇಲ್ವಿಚಾರಣೆಗೆ ನೋಡಲ್ ಅಧಿಕಾರಿಯೊಬ್ಬರನ್ನು ನಿಯೋಜಿಸುವಂತೆ ಅದು ಹೇಳಿದೆ.

ಈಡಿಸ್ ಸೊಳ್ಳೆಯಿಂದ ಡೆಂಗ್ಯೂ ಚಿಕೂನ್‌ಗುನ್ಯ ಹಾಗೂ ಝಿಕಾ (ಮಿದುಳು ಬೆಳವಣಿಗೆಗೆ ಸಮಸ್ಯೆ) ಸೋಂಕುಗಳು ಹರಡುತ್ತವೆ. ಇದು ಮಾರಣಾಂತಿಕವಲ್ಲದಿದ್ದರೂ, ಗರ್ಭಿಣಿಯರಿಗೆ ಜನಿಸುವ ಶಿಶುಗಳಲ್ಲಿ 'ಮೈಕ್ರೊಸೆಫಾಲಿ' (ತಲೆಯು ನಿರೀಕ್ಷೆಗಿಂತ ಚಿಕ್ಕದಾಗಿರುವ ಸ್ಥಿತಿ) ಬಂದೆರಗಬಹುದು. ಹೀಗಾಗಿ ಹೆಚ್ಚು ಕಾಳಜಿ ವಹಿಸಬೇಕಿದೆ ಎಂದು ತಿಳಿಸಿದೆ. ವಸತಿ ಪ್ರದೇಶಗಳು, ಕೆಲಸದ ಸ್ಥಳಗಳು, ಶಾಲೆಗಳು, ನಿರ್ಮಾಣ ಸ್ಥಳಗಳು, ಸಂಸ್ಥೆಗಳ ಆವರಣಗಳಲ್ಲಿ ಸೊಳ್ಳೆಗಳ ನಿಯಂತ್ರಣಕ್ಕೆ ಕ್ರಮ ವಹಿಸುವಂತೆ ಅದು ಹೇಳಿದೆ. ಝಿಕಾ ವೈರಸ್ ಪ್ರಕರಣಗಳು ಪತ್ತೆಯಾದ ಕೂಡಲೇ ಸಮಗ್ರ ರೋಗ ಕಣ್ಗಾವಲು ಕಾರ್ಯಕ್ರಮ (ಐಡಿಎಸ್‌ಪಿ) ಮತ್ತು ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕೇಂದ್ರಕ್ಕೆ (ಎನ್‌ವಿಬಿಡಿಸಿಪಿ) ತಕ್ಷಣವೇ ವರದಿ ಮಾಡುವಂತೆ ರಾಜ್ಯಗಳಿಗೆ ಕೇಂದ್ರ ಸೂಚಿಸಿದೆ.

ಪ್ರಜ್ವಲ್ ಸೆಕ್ಸ್ ಹಗರಣ: ಎಸ್‌ಐಟಿ ತನಿಖೆ ಪೂರ್ಣಗೊಂಡ ಬಳಿಕ ವಿಶೇಷ ಸುದ್ದಿ ಕೊಡುತ್ತೇನೆ



ದೇವರಾಜೇಗೌಡ

ಹಾಸನ, ಜು.3– ಪ್ರಜ್ವಲ್ ರೇವಣ್ಣ ಸೆಕ್ಸ್ ಹಗರಣದ ಎಸ್‌ಐಟಿ ತನಿಖೆ ಪೂರ್ಣಗೊಂಡ ನಂತರ ವಿಶೇಷ ಸುದ್ದಿ ನೀಡುವುದಾಗಿ 52 ದಿನಗಳ ನ್ಯಾಯಾಂಗ ಬಂಧನದ ನಂತರ ಬಿಡುಗಡೆಗೊಂಡಿರುವ ಬಿಜೆಪಿ ಮುಖಂಡ ದೇವರಾಜೇಗೌಡ ಹೇಳಿದ್ದಾರೆ.

ಎಸ್‌ಐಟಿ ತನಗೆ ನೋಟಿಸ್ ನೀಡುವ ಮುನ್ನವೇ ತನ್ನ ಬಂಧನದ ಬಗ್ಗೆ ನನಗೆ ತಿಳಿದಿತ್ತು ಎಂದು ಅವರು ಹೇಳಿದರು. ದೇವರಾಜೇಗೌಡ ಅವರನ್ನು ಮೇ 10 ರಂದು ಹಿರಿಯೂರು ಚೆಕ್‌ಪೋಸ್ಟ್ ಬಳಿ ಲೈಂಗಿಕ ಕಿರುಕುಳ ಪ್ರಕರಣದಲ್ಲಿ ಎಸ್‌ಐಟಿ ಬಂಧಿಸಿದ್ದನ್ನು ಸ್ಮರಿಸಬಹುದಾಗಿದೆ.

ಹಾಸನದಲ್ಲಿ ಮೈತ್ರಿ ಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ಮತ್ತು ಮುಖಂಡರ ಬೃಹತ್ ಸಮಾವೇಶಗಳನ್ನು ನಡೆಸಲು ನಿರ್ಧರಿಸಿರುವುದಾಗಿ ಹೇಳಿದ್ದಾರೆ.

ಸಮಾವೇಶದಲ್ಲಿ ಹೊಸದಾಗಿ ಸಂಸತ್‌ಗೆ ಆಯ್ಕೆಗೊಂಡಿರುವ ಬಿಜೆಪಿ–ಜೆಡಿಎಸ್ ಸಂಸದರು, ಕೇಂದ್ರ ಸಚಿವರನ್ನು ಸನ್ಮಾನ ಮಾಡಲಾಗುವುದು. ಈ ಕುರಿತು ಈಗಾಗಲೇ ಎರಡೂ ಮೈತ್ರಿ ಪಕ್ಷಗಳ ಹಿರಿಯ ನಾಯಕರ ಜತೆ ಚರ್ಚಿಸಿದ್ದು, ಸಂಸತ್ತಿನ ಚಳಿಗಾಲದ ಅಧಿವೇಶನದ ನಂತರ ಕಾರ್ಯಕ್ರಮ ಆಯೋಜಿಸಿದ್ದೇವೆ. ಈ ಸಂದರ್ಭದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಹಾಗೂ ಕರ್ನಾಟಕದ ಕೇಂದ್ರ ಸಚಿವರನ್ನು ಸನ್ಮಾನಿಸಲಾಗುತ್ತದೆ ಎಂದು ದೇವರಾಜೇಗೌಡ ಹೇಳಿದ್ದಾರೆ. ಜಿಲ್ಲೆಯಲ್ಲಿ ಮುಂಬರುವ ಜಿಪಂ ಚುನಾವಣೆ ಹಿನ್ನೆಲೆಯಲ್ಲಿ ಕಾರ್ಯತಂತ್ರ ರೂಪಿಸಲು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಸನಕ್ಕೆ ಭೇಟಿ ನೀಡಲಿದ್ದಾರೆ. ಜಿಪಂ, ತಾಪಂ ಚುನಾವಣೆಯಲ್ಲಿ ಕಾಂಗ್ರೆಸ್ ಸೋಲಿಸುವ ನಿಟ್ಟಿನಲ್ಲಿ ಜೆಡಿಎಸ್ ಹಾಗೂ ಬಿಜೆಪಿ ಕಾರ್ಯಕರ್ತರು, ಮುಖಂಡರು ಒಗ್ಗಟ್ಟಾಗಬೇಕು ಎಂದು ದೇವರಾಜೇಗೌಡ ಹೇಳಿದ್ದಾರೆ.

ಅಕ್ರಮ ಆಸ್ತಿ ಗಳಿಕೆ: ಬೆಸ್ಕಾಂ ಮಾಜಿ ಇಂಜಿನಿಯರ್‌ಗೆ 3 ವರ್ಷ ಜೈಲು, 1 ಕೋಟಿ ರೂ. ದಂಡ

ಬೆಂಗಳೂರು, ಜು.3– 'ಸಾರ್ವಜನಿಕ ಸೇವಕ' ಎಂಬ ಪದವೇ ಇತ್ತೀಚಿನ ದಿನಗಳಲ್ಲಿ ಬಹಿರಂಗವಾಗಿ ಲಂಚ ಕೇಳಲು ಅಥವಾ ನಿರ್ಭಯವಾಗಿ ಅಕ್ರಮ ಆಸ್ತಿ ಸಂಪಾದಿಸಲು ಪರವಾನಗಿ ನೀಡಿದಂತಾಗಿದೆ ಎಂದು ಲೋಕಾಯುಕ್ತ ವಿಶೇಷ ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ಭ್ರಷ್ಟಾಚಾರ ತಡೆ ಕಾಯ್ದೆಯಡಿ ದಾಖಲಾಗಿದ್ದ ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶ ಕೆ.ಎಂ.ರಾಧಾಕೃಷ್ಣ ಅವರು, ಬೆಸ್ಕಾಂ ಮಾಜಿ ಸಹಾಯಕ ಕಾರ್ಯಪಾಲಕ ಎಂಜಿನಿಯರ್(ಎಇಇ)ಗೆ ಮೂರು ವರ್ಷಗಳ ಕಠಿಣ ಜೈಲು ಶಿಕ್ಷೆ ಮತ್ತು 1 ಕೋಟಿ ರೂ. ದಂಡ ವಿಧಿಸಿದ್ದಾರೆ.

2011ರಲ್ಲಿ ಪ್ರಕರಣ ದಾಖಲಿಸಿದಾಗ ಬೆಸ್ಕಾಂನಿಂದ ಲೋಕೋಪಯೋಗಿ ಇಲಾಖೆಗೆ ನಿಯೋಜಿಸಲಾಗಿದ್ದ ಸಿ ರಾಮಲಿಂಗಯ್ಯ ಅವರ ವಿರುದ್ಧದ ಅಕ್ರಮ ಆಸ್ತಿ ಗಳಿಕೆ (ಡಿಎ) ಆರೋಪ ಸಾಬೀತಾಗಿದ್ದು, ಅವರಿಗೆ ಮೂರು ವರ್ಷ ಕಠಿಣ ಜೈಲು ಶಿಕ್ಷೆ ಹಾಗೂ 1 ಕೋಟಿ ರೂಪಾಯಿ ದಂಡ ವಿಧಿಸಿ ನ್ಯಾಯಾಧೀಶ ಕೆ.ಎಂ.ರಾಧಾಕೃಷ್ಣ ಅವರು ಜೂ.29ರಂದು ತೀರ್ಪು ನೀಡಿದ್ದಾರೆ.

ಆದಾಯ ಮೀರಿ ಆಸ್ತಿ ಗಳಿಕೆ ಹಿನ್ನೆಲೆಯಲ್ಲಿ 2011ರ ಸೆಪ್ಟೆಂಬರ್ 30ರಂದು ಲೋಕಾಯುಕ್ತ ಪೊಲೀಸರು, ರಾಮಲಿಂಗಯ್ಯ ಅವರ ಮನೆ, ಕಚೇರಿ ಸಂಬಂಧಿಕರ ನಿವಾಸಗಳ ಮೇಲೆ ದಾಳಿ ನಡೆಸಿದ್ದರು. ದಾಳಿ ವೇಳೆ ಒಂದು ಕೆಜಿಗೂ ಅಧಿಕ ಚಿನ್ನಾಭರಣ, ಬೆಳ್ಳಿ, ಕೋಟ್ಯಾಂತರ ರೂ. ಮೌಲ್ಯದ ಸ್ಥಿರಾಸ್ತಿ ಹಾಗೂ ಚರಾಸ್ತಿ ಪತ್ತೆಯಾಗಿದ್ದು, ದಾಖಲೆ ಜಪ್ತಿ ಮಾಡಿದ್ದರು.

1984 ರಿಂದ 2011 ರವರೆಗಿನ ತಪಾಸಣೆ ಅವಧಿಯಲ್ಲಿ ರಾಮಲಿಂಗಯ್ಯನವರ ಒಟ್ಟು ಆಸ್ತಿ ಮತ್ತು ಖರ್ಚು 3.28 ಕೋಟಿ ರೂ.ಗಳಾಗಿದ್ದು, ಅವರ ಆದಾಯ 2.32 ಕೋಟಿ ರೂ. ಆಗಿದ್ದು, ಉಳಿದ ರೂ 96.09 ಲಕ್ಷ(41.41%) ಅಕ್ರಮ ಆಸ್ತಿ ಎಂದು ಪರಿಗಣಿಸಲಾಗಿದೆ.

ಇಂದು, ನಾಳೆ ಬಿಜೆಪಿ ಕಾರ್ಯಕಾರಿಣಿ ಸಭೆ

ಬೆಂಗಳೂರು, ಜು.3– ಬಿಜೆಪಿ ಕರ್ನಾಟಕ ಕಾರ್ಯಕಾರಿಣಿ ಸಭೆ ಜುಲೈ 4 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿದೆ. ಸಭೆಯಲ್ಲಿ ರಾಜ್ಯ ಸರ್ಕಾರದ ವೈಫಲ್ಯಗಳ ವಿರುದ್ಧ ಪಕ್ಷವು ನಿರ್ಣಯವನ್ನು ಅಂಗೀಕರಿಸಲಿದೆ. ಲೋಕಸಭೆ ಚುನಾವಣೆಯ ನಂತರ ರಾಜ್ಯ ಬಿಜೆಪಿಯ ಮೊದಲ ಕಾರ್ಯಕಾರಿ ಸಮಿತಿ ಸಭೆ ಇದಾಗಿದೆ.

ಜುಲೈ 5 ರಿಂದ ಇತ್ತೀಚೆಗೆ ನಡೆದ ಲೋಕಸಭೆ ಚುನಾವಣೆಯಲ್ಲಿ ಪರಾಭವಗೊಂಡ ಅಭ್ಯರ್ಥಿಗಳೊಂದಿಗೆ ಬಿಜೆಪಿ ಎರಡು ದಿನಗಳ ಪರಿಶೀಲನಾ ಸಭೆ ನಡೆಸಲಿದೆ. ಈ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ನಂದೀಶ್ ರೆಡ್ಡಿ, ರಾಜ್ಯಾದ್ಯಂತ 1,745 ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರನ್ನು ವಿಶೇಷ ಆಹ್ವಾನಿತರಾಗಿ ಆಹ್ವಾನಿಸಲಾಗಿದೆ ಎಂದು ತಿಳಿಸಿದರು. ಲೋಕಸಭೆ ಚುನಾವಣೆಗೆ ಪಕ್ಷದ ಕರ್ನಾಟಕ ಉಸ್ತುವಾರಿಯಾಗಿದ್ದ ಬಿಜೆಪಿಯ ಹಿರಿಯ ನಾಯಕ ರಾಧಾಮೋಹನ್ ಅಗರ್ವಾಲ್ ಕೂಡ ಭಾಗವಹಿಸುವ ನಿರೀಕ್ಷೆಯಿದೆ. ಪ್ರತಿಯೊಂದು ಬೂತ್‌ಗೆ ತಲುಪುವುದು ಸಭೆಯ ಉದ್ದೇಶವಾಗಿದೆ ಎಂದು ಹೇಳಿದರು.

ಮಹಿಳಾ ಸ್ವ–ಸಹಾಯ ಸಂಘಗಳ ಆರ್ಥಿಕ ಸ್ವಾವಲಂಬನೆಗೆ 'ಅಮೃತ್ ಮಿತ್ರ' ಸಹಕಾರಿ

ಮೈಸೂರು ನಗರಪಾಲಿಕೆ ವ್ಯಾಪ್ತಿ ಇಂತಹ ಸಂಘಗಳು ಡೇ–ನಲ್ಮ್‌ನಡಿ ನೋಂದಾಯಿಸಿರಬೇಕು

ಮೈಸೂರು, ಜು.3(ಎಂಕೆ)– ಮೈಸೂರು ನಗರಪಾಲಿಕೆ ವ್ಯಾಪ್ತಿಯ ಮಹಿಳಾ ಸ್ವ–ಸಹಾಯ ಸಂಘಗಳ ಆರ್ಥಿಕ ಸ್ವಾವಲಂಬನೆಗೆ 'ಅಮೃತ್ ಮಿತ್ರ' ಸಹಕಾರಿ...!





ಕೇಂದ್ರ ಸರ್ಕಾರದ ಅಮೃತ್ 2.0 ಅಭಿಯಾನದಡಿ ರೂಪಿಸಿರುವ 'ಅಮೃತ್ ಮಿತ್ರ' ಕಾರ್ಯಕ್ರಮದ ಮೂಲಕ ಪಾಲಿಕೆಯ ಡೇ–ನಲ್ಮ್(ದೀನದಯಾಳ್ ಅಂತ್ಯೋದಯ ಯೋಜನೆ–ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ) ಯೋಜನೆಯಡಿ ರಚಿಸಲಾಗಿರುವ ಮಹಿಳಾ ಸ್ವ–ಸಹಾಯ ಸಂಘಗಳು ತಾಂತ್ರಿಕ ಮತ್ತು ತಾಂತ್ರಿಕೇತರ ಕಾರ್ಯಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಆರ್ಥಿಕವಾಗಿ ಸ್ವಾವಲಂಬನೆ ಸಾಧಿಸಲು ವಿನೂತನ ಅವಕಾಶ ನೀಡಲಾಗಿದೆ.

ಮಹಿಳಾ ಸ್ವ–ಸಹಾಯ ಸಂಘಗಳ ಮೂಲಕ ನಗರ ಪ್ರದೇಶಗಳಲ್ಲಿ ಸುಸ್ಥಿರತೆ, ಶುದ್ಧ ಕುಡಿಯುವ ನೀರು ಪೂರೈಕೆ ಮತ್ತು ನಿರ್ವಹಣೆ ಹಾಗೂ ಶೇ.100 ರಷ್ಟು ಒಳಚರಂಡಿ ನಿರ್ವಹಣೆಯನ್ನು ಖಚಿತಪಡಿಸುವ ನಿಟ್ಟಿನಲ್ಲಿ 'ಅಮೃತ್ ಮಿತ್ರ' ಕಾರ್ಯಯೋಜನೆ ರೂಪಿಸಿದ್ದು, ಮಹಿಳಾ ಸ್ವ–ಸಹಾಯ ಸಂಘಗಳು ತೊಡಗಿಸಿಕೊಳ್ಳುವ ಬಗ್ಗೆ ಹಾಗೂ ಅನುಸರಿಸಬೇಕಾದ ನಿಯಮ ಮತ್ತು ಮಾನದಂಡಗಳ ಕುರಿತು ಮಾರ್ಗಸೂಚಿಯನ್ನು ನೀಡಲಾಗಿದೆ. ತಾಂತ್ರಿಕ ಕಾರ್ಯಗಳಲ್ಲಿ ಬಿಲ್ಲಿಂಗ್ ಮತ್ತು ಸಂಗ್ರಹಣೆ, ಮೀಟರ್ ಓದುವಿಕೆ, ಬಿಲ್ ಜನರೇಷನ್ ಮತ್ತು ವಿತರಣೆ, ಶುಲ್ಕಗಳ ಸಂಗ್ರಹ, ನೀರಿನ ಬಳಕೆದಾರರ ಶುಲ್ಕ ಮತ್ತು ಆಸ್ತಿ ತೆರಿಗೆ ಸಂಗ್ರಹಿಸುವುದು, ಸೋರಿಕೆ ಮತ್ತು ಕೊಳಾಯಿ ಕೆಲಸದಲ್ಲಿ ಪೈಪ್‌ಲೈನ್ ಸೋರಿಕೆಯ ಸ್ಥಳದ ದುರಸ್ತಿ ಕಾರ್ಯ, ಕೊಳಾಯಿಗೆ ಸಂಬಂಧಿಸಿದಂತೆ ಮೂಲಭೂತ ಕಾರ್ಯ, ನೀರು ಸಂಸ್ಕರಣಾ ಘಟಕಗಳ ನಿರ್ವಹಣೆಯಲ್ಲಿ ನೀರಿನ ಗುಣಮಟ್ಟ ಮಾದರಿ ಪರಿಶೀಲನೆ, ಜನ್ ಅದಾಲತ್, ನೀರಿನ ಸಮಸ್ಯೆಗಳು ಮತ್ತು ಸವಾಲುಗಳ ಬಗ್ಗೆ ಮಾಹಿತಿ ನೀಡುವುದು, ಪ್ಲಾಂಟ್ ಆವರಣದ ಸುಂದರೀಕರಣ, ಶುಚಿಗೊಳಿಸುವಿಕೆ, ತೋಟಗಾರಿಕೆ, ಪಂಪ್‌ಹೌಸ್‌ಗೆ ಸಂಬಂಧಿಸಿದ ಕಾರ್ಯನಿರ್ವಹಣೆಯಲ್ಲಿ ಮೀಟರ್ ಕಾರ್ಯನಿರ್ವಹಣೆ ಮತ್ತು ಸೋರಿಕೆಯ ದೃಶ್ಯಗಳನ್ನು ಪತ್ತೆ ಮಾಡುವುದಾಗಿದೆ. ಹಾಗೆಯೇ ತಾಂತ್ರಿಕೇತರ ಕಾರ್ಯಗಳಲ್ಲಿ ನೀರಿನ ಗುಣಮಟ್ಟ ಪರೀಕ್ಷೆ, ಸಮುದಾಯ ಆಧಾರಿತ ನೀರಿನ ಪರೀಕ್ಷೆಯಲ್ಲಿ ಫೀಲ್ಡ್ ಟೆಸ್ಟಿಂಗ್ ಕಿಟ್‌ಗಳನ್ನು ಬಳಸಿಕೊಂಡು ನೀರಿನ ಗುಣಮಟ್ಟದ ಪರೀಕ್ಷೆ ನಡೆಸುವುದು, ಲ್ಯಾಬ್‌ಗಳ ಮೂಲಕ ನೀರಿನ ಗುಣಮಟ್ಟ ತಿಳಿಸುವ ಸಾಂಸ್ಥಿಕ ನೀರಿನ ಪರೀಕ್ಷೆ ನಡೆಸುವುದು, ಸಾರ್ವಜನಿಕ ಉದ್ಯಾನವನಗಳು ಮತ್ತು ಆಟದ ಮೈದಾನಗಳ ನಿರ್ವಹಣೆ ಮಾಡುವ ಕಾರ್ಯದಲ್ಲಿ ಮಹಿಳಾ ಸ್ವ–ಸಹಾಯ ಸಂಘಗಳನ್ನು ತೊಡಗಿಸಿಕೊಳ್ಳುವುದು 'ಅಮೃತ ಮಿತ್ರ' ಕಾರ್ಯಕ್ರಮವಾಗಿದೆ.

ಗರಿಷ್ಠ 10 ಲಕ್ಷ ರೂ. ಯೋಜನೆ: ಸ್ವ–ಸಹಾಯ ಸಂಘಗಳು ಮತ್ತು ಅದರ ಒಕ್ಕೂಟಗಳು ನೀರಿನ ಮೂಲಸೌಕರ್ಯ, ನೀರು ಸಂಬಂಧಿತ ಯೋಜನೆಗಳು ಮತ್ತು ಹಸಿರು ಬಾಹ್ಯಾಕಾಶ ಯೋಜನೆಗಳಿಗೆ ಸಂಬಂಧಿಸಿದಂತೆ ಪ್ರತಿ ಯೋಜನೆಗೆ ಕನಿಷ್ಠ 2 ಲಕ್ಷ ರೂ.ನಿಂದ ಗರಿಷ್ಟ 10 ಲಕ್ಷ ರೂ.ವರೆಗೆ ಪಡೆಯಬಹುದು. ಹಾಗೆಯೇ ಒಂದೇ ಸ್ವ–ಸಹಾಯ ಸಂಘಕ್ಕೆ ಮಾಡಲಾದ ಯೋಜನೆಗಳ ಸಂಯೋಜಿತ ಮೌಲ್ಯವೂ ವಾರ್ಷಿಕವಾಗಿ 30 ಲಕ್ಷ ರೂ.ಗಿಂತ ಹೆಚ್ಚಿರಬಾರದು ಹಾಗೂ ಗುರುತಿಸಲಾದ ಸ್ವ–ಸಹಾಯ ಸಂಘಕ್ಕೆ ನಿಯೋಜಿಸಲಾದ ಕೆಲಸವನ್ನು ಕಡ್ಡಾಯವಾಗಿ ನಿರ್ವಹಿಸಬೇಕು. ಯಾವುದೇ ಉಪಗುತ್ತಿಗೆ ಅಥವಾ ಹೊರಗುತ್ತಿಗೆ ನೀಡುವಂತಿಲ್ಲ.

ಮಾನದಂಡ: ಮಹಿಳಾ ಸ್ವ–ಸಹಾಯ ಸಂಘಗಳು ಡೇ–ನಲ್ಮ್ ಅಭಿಯಾನದಡಿ ನೋಂದಾಯಿಸಿರಬೇಕು, ನಿರಂತರ ಸಭೆ, ಉಳಿತಾಯ, ಆಂತರಿಕ ಸಾಲ ವಿತರಣೆ, ನಿಯಮಿತ ಸಾಲ ಮರುಪಾವತಿ ಮತ್ತು ದಾಖಲಾತಿ ನಿರ್ವಹಣೆ ಎಂಬ ಪಂಚಸೂತ್ರಗಳನ್ನು ಅನುಸರಿಸುತ್ತಿರಬೇಕು. ಸಂಘದ ಸದಸ್ಯರ ಪೈಕಿ ಒಬ್ಬರು ಕನಿಷ್ಠ 8ನೇ ತರಗತಿ ಓದಿ, ಡಿಜಿಟಲ್ ಸಾಕ್ಷರತೆ ಹೊಂದಿರಬೇಕು. ಸಂಘದ ಹೆಸರಿನಲ್ಲಿ ಬ್ಯಾಂಕ್ ಖಾತೆ ಇದ್ದು, ಸಮಾಜ ವಿರೋಧಿ ಚಟುವಟಿಕೆಗಳಲ್ಲಿ ಭಾಗಿಯಾಗಿರಬಾರದು. ನೀರು ಆಧಾರಿತ ಚಟುವಟಿಕೆಗಳು, ನಿರ್ಮಾಣ ಕಾರ್ಯದಲ್ಲಿ ಅನುಭವ ಹೊಂದಿರುವ ಹಾಗೂ ವಾರ್ಡ್‌ನಲ್ಲಿ ಕೆಲಸ ಮಾಡುವ ಸಂಘಗಳಿಗೆ ಜಂಟಿ ಒಡಂಬಡಿಕೆಯೊಂದಿಗೆ ಆದ್ಯತೆಯನ್ನು ನೀಡಲಾಗುವುದು.

ಆಸಕ್ತಿ ವ್ಯಕ್ತಪಡಿಸುವಿಕೆಗೆ ಆಹ್ವಾನ: 'ಅಮೃತ್ ಮಿತ್ರ' ಕಾರ್ಯಕ್ರಮದ ತಾಂತ್ರಿಕ ಮತ್ತು ತಾಂತ್ರಿಕೇತರ ಚಟುವಟಿಕೆಗಳ ಅನುಷ್ಠಾನಕ್ಕಾಗಿ ಈಗಾಗಲೇ ಮೈಸೂರು ನಗರಪಾಲಿಕೆ ಡೇ–ನಲ್ಮ್ ವಿಭಾಗದಿಂದ ಅರ್ಹ ಮಹಿಳಾ ಸ್ವ–ಸಹಾಯ ಸಂಘಗಳು ತಮ್ಮ ಆಸಕ್ತಿ ವ್ಯಕ್ತಪಡಿಸುವಿಕೆಗೆ ಆಹ್ವಾನ ನೀಡಲಾಗಿದೆ ಎಂದು ನಗರಪಾಲಿಕೆ ಡೇ–ನಲ್ಮ್ ವಿಭಾಗದ ಅಧಿಕಾರಿಗಳು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಸ್ವಾವಲಂಬನೆ: 'ಅಮೃತ್ ಮಿತ್ರ' ಕಾರ್ಯಕ್ರಮದ ಮೂಲಕ ಮಹಿಳಾ ಸ್ವ–ಸಹಾಯ ಸಂಘದ ಸದಸ್ಯರು ವಿಶೇಷ ತರಬೇತಿಗಳನ್ನು ಪಡೆದು ಕಲಿಕೆಯ ಜೊತೆಗೆ ಸ್ವಾವಲಂಬಿಗಳು ಆಗುತ್ತಾರೆ. ಚಟುವಟಿಕೆಗಳು ಹೆಚ್ಚಾಗುವುದರಿಂದ ಸಂಘದ ಅಭಿವೃದ್ಧಿಯೂ ಆಗಲಿದ್ದು, ಮೈಸೂರು ನಗರದ ಸ್ವಚ್ಛತೆ, ಗುಣಮಟ್ಟದ ಕುಡಿಯುವ ನೀರು ಪೂರೈಕೆ, ಪಾರ್ಕ್‌ಗಳ ಅಭಿವೃದ್ಧಿ ಪರಿಣಾಮಕಾರಿಯಾಗಲಿದೆ ಎಂದು ತಿಳಿಸಿದರು.

ಪಾರ್ಕ್‌ನಲ್ಲಿ ಸಂಗ್ರಹವಾಗಿದ್ದ ಕೊಳಚೆ ನೀರು ತೆರವು ಕಾರ್ಯ



ಸಾತಗಳ್ಳಿ ಬಡಾವಣೆಯ 1ನೇ ಹಂತದ ಪಾರ್ಕ್‌ನಲ್ಲಿ ಸಂಗ್ರಹವಾಗಿದ್ದ ಕೊಳಚೆ ನೀರನ್ನು ಮೋಟಾರ್ ಮೂಲಕ ಹೊರಹಾಕಿಸುತ್ತಿರುವ ನಗರಪಾಲಿಕೆ ಮಾಜಿ ಸದಸ್ಯ ಕೆ.ಸಿ.ಶೌಕತ್ ಪಾಷಾ, ಪಾಲಿಕೆ ಇಂಜಿನಿಯರ್ ಸಂಜಯ್ ಅವರನ್ನು ಕಾಣಬಹುದು.

'ಮೈಸೂರು ಮಿತ್ರ' ವರದಿ ಫಲಶ್ರುತಿ

ಮೈಸೂರು, ಜು.3(ಎಂಕೆ)– ಮೈಸೂರಿನ ಸಾತಗಳ್ಳಿ ಬಡಾವಣೆಯ 1ನೇ ಹಂತದ ಪಾರ್ಕ್‌ನಲ್ಲಿ ಕಳೆದ ಒಂದೂವರೆ ವರ್ಷದಿಂದ ಶೇಖರಣೆಯಾಗಿದ್ದ ಕೊಳಚೆ ನೀರನ್ನು ಹೊರಹಾಕುವ ಕಾರ್ಯ ಆರಂಭವಾಗಿದೆ.

ಜು.2ರ 'ಮೈಸೂರು ಮಿತ್ರ'ನಲ್ಲಿ 'ಸಾತಗಳ್ಳಿ ಒಂದನೇ ಹಂತದಲ್ಲಿ ಕೊಳಚೆ ನೀರಿನ ದುರ್ವಾಸನೆ; ಆತಂಕದಲ್ಲಿ ನಿವಾಸಿಗಳು' ಶೀರ್ಷಿಕೆಯಡಿ ಸಾತಗಳ್ಳಿ ಬಡಾವಣೆಯ 1ನೇ ಹಂತದ ಪಾರ್ಕ್‌ನಲ್ಲಿ ಶೇಖರಣೆಯಾಗಿದ್ದ ಭಾರಿ ಪ್ರಮಾಣದ ಕೊಳಚೆ ನೀರಿನಿಂದಾಗುತ್ತಿರುವ ಸಮಸ್ಯೆಗಳು, ದುರ್ವಾಸನೆ ಕುರಿತು ಸುದ್ದಿ ಪ್ರಕಟಿಸಿದ ಹಿನ್ನೆಲೆಯಲ್ಲಿ ಎಚ್ಚೆತ್ತ ಪಾಲಿಕೆ ಅಧಿಕಾರಿಗಳು ಕೊಳಚೆ ನೀರನ್ನು ಮೋಟಾರ್‌ಗಳ ಮೂಲಕ ಹೊರಹಾಕುವ ಕಾರ್ಯ ಆರಂಭಿಸಿದ್ದಾರೆ. ಪಾರ್ಕ್‌ನ ಪಕ್ಕದಲ್ಲಿರುವ ಖಾಸಗಿ ಬಡಾವಣೆ ಸಮೀಪದಲ್ಲಿ ಹಾದುಹೋಗುವ ಹಾಗೂ ಸಂಪೂರ್ಣವಾಗಿ ಮುಚ್ಚಿ ಹೋಗಿದ್ದ ಮೋರಿಯನ್ನು ತೆರವು ಮಾಡಿ ಅದೇ ಮೋರಿಯ ಮೂಲಕ ಪಾರ್ಕ್‌ನಲ್ಲಿ ನಿಂತಿದ್ದ ಕೊಳಚೆ ನೀರನ್ನು ಮೋಟಾರ್‌ಗಳ ಮೂಲಕ ಹೊರಗೆ ಹರಿಸಲಾಗುತ್ತಿದೆ. ಬಾರೀ ಪ್ರಮಾಣದ ನೀರು ಶೇಖರಣೆಯಾಗಿದ್ದರಿಂದ ಸಂಪೂರ್ಣ ನೀರನ್ನು ಹೊರ ಹಾಕಲು ಕನಿಷ್ಠ ಒಂದು ವಾರವಾದರೂ ಬೇಕಾಗುತ್ತದೆ ಎಂದು ಪಾಲಿಕೆ ಇಂಜಿನಿಯರ್ ಸಂಜಯ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಪಾರ್ಕ್ ಅಭಿವೃದ್ಧಿ: ಸಾತಗಳ್ಳಿ 1ನೇ ಹಂತದ ಪಾರ್ಕ್ ಅನ್ನು ಅಭಿವೃದ್ಧಿ ಮಾಡಲು ಖರ್ಚುವೆಚ್ಚದ ಪ್ರಸ್ತಾವನೆ ಸಿದ್ಧಪಡಿಸಿ, ಸ್ಥಳೀಯ ಶಾಸಕರಿಗೆ ನೀಡಿದ್ದು, ಶಾಸಕರು ತಮ್ಮ ಅನುದಾನದಲ್ಲಿ ಹಣ ಬಿಡುಗಡೆ ಮಾಡುವುದಾಗಿ ತಿಳಿಸಿದ್ದಾರೆ. ಮೊದಲು ಪಾರ್ಕ್‌ನಲ್ಲಿ ತುಂಬಿರುವ ನೀರನ್ನು ಹೊರಹಾಕಿ ಹಳ್ಳದ ಜಾಗಕ್ಕೆ ಮಣ್ಣು ತುಂಬಿ ಸಮತಟ್ಟು ಮಾಡಲಾಗುವುದು. ನಂತರ ಪಾರ್ಕ್ ನಡುವೆ ಮೋರಿ ನಿರ್ಮಿಸಿ, ಇನ್ನಿತರೆ ಅಭಿವೃದ್ಧಿ ಕಾಮಗಾರಿಗಳನ್ನು ನಡೆಸಲಾಗುವುದು ಎಂದು ಮಾಹಿತಿ ನೀಡಿದರು. ಈ ವೇಳೆ ನಗರಪಾಲಿಕೆ ಮಾಜಿ ಸದಸ್ಯ ಕೆ.ಸಿ.ಶೌಕತ್ ಪಾಷಾ ಉಪಸ್ಥಿತರಿದ್ದರು.

ಪೊಲೀಸರ ಹತ್ಯಾಕಾಂಡ ಪ್ರಕರಣ: 9 ವರ್ಷಗಳ ಬಳಿಕ ನಕ್ಸಲ್ ಕೋಮುಲು ಬಂಧನ

ತುಮಕೂರು, ಜು.3– ಪಾವಗಡದ ವೆಂಕಟಮ್ಮನಹಳ್ಳಿ ಪೊಲೀಸ್ ಹತ್ಯಾಕಾಂಡದಲ್ಲಿ ಭಾಗಿಯಾಗಿದ್ದ ನಕ್ಸಲ್ ಕೋಮುಲು ಮುತ್ಯಾಲ ಚಂದ್ರುನನ್ನು ಬೆಂಗಳೂರು ಪೊಲೀಸರು ಬಂಧಿಸಿದ್ದಾರೆ. ಆರೋಪಿ ಆಂಧ್ರಪ್ರದೇಶದ ಗಾರಲದಿನ್ನೆ ಕೇಶವಪುರದ ನಿವಾಸಿಯಾಗಿದ್ದಾನೆ. ಹತ್ಯಾಕಾಂಡದ ಬಳಿಕ 9 ವರ್ಷಗಳಿಂದ ಆರೋಪಿ ತಲೆಮರೆಸಿಕೊಂಡಿದ್ದ. ಈತ ಪೊಲೀಸ್ ಹತ್ಯಾಕಾಂಡದಲ್ಲಿ ಭಾಗಿದ್ದ 75ನೇ ಆರೋಪಿಯಾಗಿದ್ದಾನೆ. ಆತನನ್ನು ಪಾವಗಡದ ಜೆಎಂಎಫ್‌ಸಿ ಕೋರ್ಟ್‌ಗೆ ಹಾಜರುಪಡಿಸಿ, ಪರಪ್ಪನ ಅಗ್ರಹಾರ ಜೈಲಿಗೆ ಕಳಿಸಲಾಗಿದೆ.

ಒಳಗೆ ಬಿಡಲಿಲ್ಲ ಎಂಬ ಕಾರಣಕ್ಕೇ ಸೆಕ್ಯೂರಿಟಿ ಗಾರ್ಡ್ ಇರಿದು ಕೊಂದ ಪಾನಮತ್ತ ಕಾಲೇಜು ವಿದ್ಯಾರ್ಥಿ



ಜೈಕಿಶೋರ್ ರಾಯ್

ಬೆಂಗಳೂರು, ಜು.3– ಪಾನಮತ್ತ ವಿದ್ಯಾರ್ಥಿಯೋರ್ವ ತನ್ನನ್ನು ಕಾಲೇಜಿನ ಒಳಗೆ ಬಿಡಲಿಲ್ಲ ಎಂಬ ಕಾರಣಕ್ಕೆ ಸೆಕ್ಯುರಿಟಿ ಗಾರ್ಡ್‌ನನ್ನು ಇರಿದು ಕೊಂದು ಹಾಕಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ಬೆಂಗಳೂರಿನ ಅಮೃತಹಳ್ಳಿಯ ಸಿಂಧಿ ಕಾಲೇಜಿನಲ್ಲಿ ಬುಧವಾರ ಮಧ್ಯಾಹ್ನ 3.30ರ ಸುಮಾರಿಗೆ ಈ ಹತ್ಯೆ ನಡೆದಿದ್ದು, ಕಾಲೇಜು ಸೆಕ್ಯೂರಿಟಿ ಗಾರ್ಡ್ ಆಗಿದ್ದ ಜೈಕಿಶೋರ್ ರಾಯ್ ಎಂಬಾತನನ್ನು ಭಾರ್ಗವ್ ಎಂಬ ವಿದ್ಯಾರ್ಥಿ ಇರಿದು ಕೊಂದು ಹಾಕಿದ್ದಾನೆ. ಮೂಲಗಳ ಪ್ರಕಾರ ಪಾನಮತ್ತನಾಗಿ ಬಂದಿದ್ದ ವಿದ್ಯಾರ್ಥಿ ಭಾರ್ಗವ್ ಕಾಲೇಜಿನ ಒಳಗೆ ಪ್ರವೇಶ ಮಾಡಲು ಯತ್ನಿಸಿದ್ದು ಈ ವೇಳೆ ಸೆಕ್ಯುರಿಟಿ ಗಾರ್ಡ್ ಜೈಕಿಶೋರ್ ರಾಯ್ ಆತನನ್ನು ತಡೆದಿದ್ದಾರೆ. ಈ ವೇಳೆ ಇಬ್ಬರ ನಡುವೆ ವಾಗ್ವಾದ ನಡೆದಿದ್ದು, ಆಕ್ರೋಶಗೊಂಡ ವಿದ್ಯಾರ್ಥಿ ಭಾರ್ಗವ್ ಅಂಗಡಿಗೆ ಹೋಗಿ ಚಾಕು ಖರೀದಿಸಿ ತಂದು ಏಕಾಏಕಿ ಸೆಕ್ಯುರಿಟಿ ಗಾರ್ಡ್ ಮೇಲೆ ಹಲ್ಲೆ ಮಾಡಿದ್ದೇನೆ.

ನೋಡನೋಡುತ್ತಲೇ ಸೆಕ್ಯುರಿಟಿ ಗಾರ್ಡ್ ಜೈಕಿಶೋರ್ ರಾಯ್‌ನ ಎದೆ ಮತ್ತು ಹೊಟ್ಟೆಗೆ 5 ರಿಂದ 6 ಬಾರಿ ಇರಿದಿದ್ದಾನೆ. ಪರಿಣಾಮ ಸೆಕ್ಯೂರಿಟಿ ಗಾರ್ಡ್ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಕೊಲೆಗೈದ ಭಾರ್ಗವ್ ಇದೇ ಸಿಂಧಿ ಕಾಲೇಜಿನಲ್ಲಿ ಅಂತಿಮ ವರ್ಷದ ಬಿಎ ವ್ಯಾಸಂಗ ಮಾಡುತ್ತಿದ್ದ ಮತ್ತು ಈತ ಪಿಜಿಯಲ್ಲಿ ವಾಸವಿದ್ದ ಎಂದು ತಿಳಿದುಬಂದಿದೆ. ಕೊಲೆಯಾದ ವೇಳೆ ಅಂದರೆ ಬುಧವಾರ ಸಿಂಧಿ ಕಾಲೇಜಿನಲ್ಲಿ ಕಾರ್ಯಕ್ರಮ ಇತ್ತು.

ಭಾರ್ಗವ್ ಕೂಡ ಆ ಕಾರ್ಯಕ್ರಮಕ್ಕೆ ಹಾಜರಾಗಬೇಕು ಎಂದು ಆಗಮಿಸಿದ್ದ. ಆದರೆ ಪಾನಮತ್ತ ಭಾರ್ಗವ್ ತನ್ನನ್ನು ಒಳಗೆ ಬಿಡಲಿಲ್ಲ ಎಂಬ ಕಾರಣಕ್ಕೇ ಆಕ್ರೋಶದಿಂದ ಇರಿದು ಕೊಂದು ಹಾಕಿದ್ದಾನೆ. ಪ್ರಸ್ತುತ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿ ಭಾರ್ಗವ್‌ನನ್ನು ವಶಕ್ಕೆ ಪಡೆದಿದ್ದು, ತನಿಖೆ ನಡೆಸಿದ್ದಾರೆ.

ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣ

ಸೂರಜ್‌ಗೆ ಜು.18ರವರೆಗೆ ನ್ಯಾಯಾಂಗ ಬಂಧನ



ಬೆಂಗಳೂರು, ಜು.3–ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ಜೆಡಿಎಸ್ ವಿಧಾನ ಪರಿಷತ್ ಸದಸ್ಯ ಡಾ. ಸೂರಜ್ ರೇವಣ್ಣ ಅವರ ಸಿಐಡಿ ಕಸ್ಟಡಿ ಅವಧಿ ಅಂತ್ಯಗೊಂಡಿದ್ದು, ಬುಧವಾರ ಕೋರ್ಟ್ ಮತ್ತೆ ನ್ಯಾಯಾಂಗ ಬಂಧನ ವಿಧಿಸಿದೆ.

ಸೂರಜ್ ರೇವಣ್ಣ ಅವರ ಪೊಲೀಸ್ ಕಸ್ಟಡಿ ಅವಧಿ ಇಂದು ಕೊನೆಗೊಂಡಿತ್ತು. ಹೀಗಾಗಿ ಪೊಲೀಸರು 42ನೇ ಎಸಿಎಂಎಂ ನ್ಯಾಯಾಲಯಕ್ಕೆ ಹಾಜರುಪಡಿಸಿದರು. ವಿಚಾರಣೆ ನಡೆಸಿದ ಕೋರ್ಟ್ ಸೂರಜ್ ರೇವಣ್ಣಗೆ ಜುಲೈ 18ರವರೆಗೆ ನ್ಯಾಯಾಂಗ ಬಂಧನ ವಿಧಿಸಿ ಆದೇಶ ಹೊರಡಿಸಿದೆ. ಅಸಹಜ ಲೈಂಗಿಕ ದೌರ್ಜನ್ಯಕ್ಕೆ ಸಂಬಂಧಿಸಿದಂತೆ ಸೂರಜ್ ರೇವಣ್ಣ ವಿರುದ್ಧ ಮತ್ತೊಂದು ಪ್ರಕರಣ ದಾಖಲಾದ ಹಿನ್ನೆಲೆಯಲ್ಲಿ ನ್ಯಾಯಾಂಗ ಬಂಧನದಲ್ಲಿದ್ದ ಆರೋಪಿಯನ್ನು ಸಿಐಡಿ ಪೊಲೀಸರು ವಿಚಾರಣೆಗಾಗಿ ತಮ್ಮ ವಶಕ್ಕೆ ಪಡೆದಿದ್ದರು. ಕಳೆದ ವಾರ ಸಿಐಡಿ ಸೂರಜ್ ರೇವಣ್ಣ ಅವರನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿತ್ತು ಮತ್ತು ಅವರ ಡಿಎನ್‌ಎ ಮಾದರಿಗಳನ್ನೂ ಸಂಗ್ರಹಿಸಿದೆ. ಜೂ.23ರಂದು ಬಂಧಿತರಾಗಿದ್ದ ಸೂರಜ್ ಅವರನ್ನು ಪುರುಷತ್ವ ಸಾಮರ್ಥ್ಯ ಪರೀಕ್ಷೆಗೆ ಒಳಪಡಿಸಲಾಗಿತ್ತು. ಅಲ್ಲದೆ ಸೂರಜ್ ತಮ್ಮ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಿರುವ ಇಬ್ಬರು ಸಂತ್ರಸ್ತರ ಡಿಎನ್‌ಎ ಮಾದರಿಗಳನ್ನೂ ಸಿಐಡಿ ಸಂಗ್ರಹಿಸಿದೆ. ಮೊದಲ ಪ್ರಕರಣದಲ್ಲಿ, ಜೂ.16 ರಂದು ತಮ್ಮ ತೋಟದ ಮನೆಯಲ್ಲಿ ಸೂರಜ್ ರೇವಣ್ಣ ನನ್ನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಮತ್ತು ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ಹಾಸನ ಜಿಲ್ಲೆಯ ಯುವಕ ಆರೋಪಿಸಿದ್ದರು. ಎರಡನೇ ಪ್ರಕರಣದಲ್ಲಿ, ಮೂರು ವರ್ಷಗಳ ಹಿಂದೆ, ಕೋವಿಡ್–19 ಸಾಂಕ್ರಾಮಿಕ ಸಮಯದಲ್ಲಿ ಜೆಡಿಎಸ್ ನಾಯಕ ತನ್ನನ್ನು ಲೈಂಗಿಕವಾಗಿ ನಿಂದಿಸಿದ್ದಾರೆ ಎಂದು ದೂರುದಾರರು ಆರೋಪಿಸಿದ್ದರು.

ಇಂದು ಭಾರತಕ್ಕೆ ಮರಳಲಿರುವ ಟೀಮ್ ಇಂಡಿಯಾ ಆಟಗಾರರು: ವಿಜಯೋತ್ಸವಕ್ಕೆ ಸಿದ್ಧತೆ



ನವದೆಹಲಿ, ಜು.3– ಟಿ20 ವಿಶ್ವಕಪ್ ವಿಜೇತ ರೋಹಿತ್ ಶರ್ಮಾ ನಾಯಕತ್ವದ ಟೀಮ್ ಇಂಡಿಯಾವು ನಾಳೆ (ಗುರುವಾರ) ಭಾರತಕ್ಕೆ ಮರಳಲಿದೆ ಎಂದು ವರದಿಯಾಗಿದೆ.

ಟೀಮ್ ಇಂಡಿಯಾ ಆಟಗಾರರನ್ನು ಹೊತ್ತ ವಿಶೇಷ ವಿಮಾನವು ನಾಳೆ ಬೆಳಗ್ಗೆ ದೆಹಲಿಗೆ ಬಂದಿಳಿಯಲಿದೆ. ಬಳಿಕ ಆಟಗಾರರು ವಿಜಯೋತ್ಸವ ಆಚರಿಸಲಿದ್ದಾರೆ.

ಬಿಸಿಸಿಐ ಉನ್ನತ ಪದಾಧಿಕಾರಿಗಳು ಮತ್ತು ಕ್ರಿಕೆಟಿಗರು ಸೇರಿದಂತೆ ಭಾರತದಿಂದ ತೆರಳಿರುವ ಮಾಧ್ಯಮ ಪ್ರತಿನಿಧಿಗಳನ್ನೂ ಸುರಕ್ಷಿತವಾಗಿ ಸ್ವದೇಶಕ್ಕೆ ಕರೆತರಲಾಗುತ್ತಿದೆ ಎಂದು ಬಿಸಿಸಿಐ ಅಧಿಕಾರಿಗಳು ತಿಳಿಸಿದ್ದಾರೆ. ಕೆರಿಬಿಯನ್ ದ್ವೀಪಗಳಲ್ಲಿ ಸೋಮವಾರ ಬೆಳಗಿನ ಜಾವದಲ್ಲಿ ಕೆಟಗರಿ 4 ಚಂಡಮಾರುತವು ಬೀಸುತ್ತಿರುವುದರಿಂದ ವಿಮಾನಯಾನವೂ ಸೇರಿದಂತೆ ಎಲ್ಲ ನಾಗರಿಕ ಸೇವೆಗಳನ್ನು ಸ್ಥಗಿತಗೊಳಿಸಲಾಗಿತ್ತು. ಮುಖ್ಯ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಕೂಡ ಮುಚ್ಚಲಾಗಿತ್ತು. ಬಾರ್ಬಡೋಸ್ ಮತ್ತು ಸುತ್ತಮುತ್ತಲಿನ ದ್ವೀಪಗಳಲ್ಲಿ ಬಿರುಗಾಳಿಯ ತೀವ್ರತೆಯು ಅಪಾಯಕಾರಿ ಮಟ್ಟದಲ್ಲಿತ್ತು. 3 ಲಕ್ಷ ಜನಸಂಖ್ಯೆ ಇರುವ ಈ ದ್ವೀಪ ದೇಶದಲ್ಲಿ ಭಾನುವಾರದಿಂದಲೇ ಲಾಕ್‌ಡೌನ್ ವಿಧಿಸಲಾಗಿತ್ತು.

ಶನಿವಾರ ನಡೆದಿದ್ದ ಟಿ20 ವಿಶ್ವಕಪ್ ಟೂರ್ನಿಯ ಫೈನಲ್‌ನಲ್ಲಿ ಭಾರತ ತಂಡವು ದಕ್ಷಿಣ ಆಫ್ರಿಕಾ ವಿರುದ್ಧ ಜಯಿಸಿ ಟ್ರೋಫಿ ಗೆದ್ದಿತ್ತು.

ಚಾಂಪಿಯನ್ ಟ್ರೋಫಿ 2025: ತಾತ್ಕಾಲಿಕ ವೇಳಾಪಟ್ಟಿ ಪ್ರಕಟ

ಮಾರ್ಚ್ 1ಕ್ಕೆ ಭಾರತ vs ಪಾಕಿಸ್ತಾನ ಪಂದ್ಯ



ಇಸ್ಲಾಮಬಾದ್, ಜು.3– ಮುಂದಿನ ವರ್ಷ ಪಾಕಿಸ್ತಾನ ಕ್ರಿಕೆಟ್ ಮಂಡಳಿ ಐಸಿಸಿ ಚಾಂಪಿಯನ್ ಟ್ರೋಫಿ ಆಯೋಜಿಸುತ್ತಿದ್ದು, ತಾತ್ಕಾಲಿಕ ವೇಳಾಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ. ಮಾರ್ಚ್ 1 ರಂದು ಲಾಹೋರ್‌ನಲ್ಲಿ ಭಾರತ– ಪಾಕಿಸ್ತಾನ ನಡುವಣ ಪಂದ್ಯವನ್ನು ನಿಗದಿಪಡಿಸಲಾಗಿದೆ. ಆದರೆ, ಬಿಸಿಸಿಐ ಇನ್ನೂ ತಾತ್ಕಾಲಿಕ ವೇಳಾಪಟ್ಟಿಗೆ ಒಪ್ಪಿಗೆ ನೀಡಿಲ್ಲ ಎಂದು ಐಸಿಸಿಯ ಹಿರಿಯ ಸದಸ್ಯರೊಬ್ಬರು ಬುಧವಾರ ಹೇಳಿದ್ದಾರೆ. ಮುಂದಿನ ವರ್ಷ ಫೆಬ್ರವರಿ 19 ರಿಂದ ಮಾರ್ಚ್ 10 ರವರೆಗೆ ವೇಳಾಪಟ್ಟಿ ನಿಗದಿಯಾಗಿದೆ. ಬಾರ್ಬಡೋಸ್‌ನಲ್ಲಿ ನಡೆದ ಟಿ20 ವಿಶ್ವಕಪ್ ಫೈನಲ್ ವೀಕ್ಷಣೆಗೆ ಆಗಮಿಸಿದ್ದ ಪಿಸಿಬಿ ಅಧ್ಯಕ್ಷ ಮೊಹ್ಸಿನ್ ನಖ್ವಿ, ಭದ್ರತೆ ಮತ್ತು ವ್ಯವಸ್ಥಾಪನಾ ಕಾರಣಗಳಿಗಾಗಿ ಲಾಹೋರ್‌ನಲ್ಲಿ ನಿಗದಿಪಡಿಸಿರುವ ಭಾರತದ ಎಲ್ಲಾ ಪಂದ್ಯಗಳೊಂದಿಗೆ 15–ಪಂದ್ಯಗಳ ವೇಳಾಪಟ್ಟಿಯನ್ನು ಸಲ್ಲಿಸಿದ್ದಾರೆ ಎಂದು ತಿಳಿದುಬಂದಿದೆ.

15 ಪಂದ್ಯಗಳ ಐಸಿಸಿ ಚಾಂಪಿಯನ್ಸ್ ಟ್ರೋಫಿಯ ಕರಡನ್ನು ಪಿಸಿಬಿ ಸಲ್ಲಿಸಿದೆ. ಲಾಹೋರ್‌ನಲ್ಲಿ ಏಳು ಪಂದ್ಯಗಳು, ಕರಾಚಿಯಲ್ಲಿ ಮೂರು ಮತ್ತು ರಾವಲ್ಪಿಂಡಿಯಲ್ಲಿ ಐದು ಪಂದ್ಯಗಳು ನಿಗದಿಯಾಗಿವೆ ಎಂದು ಐಸಿಸಿ ಮಂಡಳಿಯ ಸದಸ್ಯರೊಬ್ಬರು ಹೇಳಿದ್ದಾರೆ. ಆರಂಭಿಕ ಪಂದ್ಯ ಕರಾಚಿಯಲ್ಲಿ ನಡೆಯಲಿದ್ದು, ಎರಡು ಸೆಮಿಫೈನಲ್ ಪಂದ್ಯಗಳು ಕರಾಚಿ ಮತ್ತು ರಾವಲ್ಪಿಂಡಿಯಲ್ಲಿ, ಫೈನಲ್ ಪಂದ್ಯ ಲಾಹೋರ್‌ನಲ್ಲಿ ನಡೆಯಲಿದೆ. ಭಾರತದ ಎಲ್ಲಾ ಪಂದ್ಯಗಳು ಲಾಹೋರ್‌ನಲ್ಲಿಯೇ ನಡೆಯಲಿವೆ ಎಂದು ಮೂಲಗಳು ಹೇಳಿವೆ. ಭಾರತವು ಎ ಗುಂಪಿನಲ್ಲಿ ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ನ್ಯೂಜಿಲೆಂಡ್‌ನೊಂದಿಗೆ ಸೇರಿಕೊಂಡಿದ್ದರೆ, ಬಿ ಗುಂಪಿನಲ್ಲಿ ಆಸ್ಟ್ರೇಲಿಯಾ, ದಕ್ಷಿಣ ಆಫ್ರಿಕಾ, ಇಂಗ್ಲೆಂಡ್ ಮತ್ತು ಅಫ್ಘಾನಿಸ್ತಾನ ಸೇರಿವೆ.

ಐಸಿಸಿ ಟಿ–20 ರ್‍ಯಾಂಕಿಂಗ್ ಹಾರ್ದಿಕ್ ಪಾಂಡ್ಯ ನಂಬರ್–1 ಆಲ್‌ರೌಂಡರ್



ನವದೆಹಲಿ, ಜು.3– ಟಿ–20 ವಿಶ್ವಕಪ್ ಟೂರ್ನಿಯಲ್ಲಿ ಭಾರತ ಗೆಲುವಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ಹಾರ್ದಿಕ್ ಪಾಂಡ್ಯ, ಐಸಿಸಿ ಪುರುಷರ ಟಿ–20 ಆಲ್‌ರೌಂಡರ್ ಶ್ರೇಯಾಂಕದಲ್ಲಿ ಅಗ್ರಸ್ಥಾನ ಪಡೆದುಕೊಂಡಿದ್ದಾರೆ. ಶ್ರೀಲಂಕಾದ ವನಿಂದು ಹಸರಂಗ ಅವರೊಂದಿಗೆ ಪಾಂಡ್ಯ 222 ಅಂಕಗಳೊಂದಿಗೆ ಜಂಟಿ ಅಗ್ರಸ್ಥಾನ ಪಡೆದಿದ್ದಾರೆ. ಈ ಸಾಧನೆ ಮಾಡಿದ ಮೊದಲ ಭಾರತದ ಆಟಗಾರ ಎಂಬ ಖ್ಯಾತಿಗೂ ಅವರು ಪಾತ್ರರಾಗಿದ್ದಾರೆ.

ಆಡಿದ 8 ಪಂದ್ಯಗಳಲ್ಲಿ ಬಾಂಗ್ಲಾದೇಶ ವಿರುದ್ಧದ ಪಂದ್ಯದಲ್ಲಿ 27 ಎಸೆತಗಳಲ್ಲಿ ಅರ್ಧಶತಕ ಸೇರಿದಂತೆ 150 ಸ್ಟ್ರೈಕ್ ರೇಟ್‌ನಲ್ಲಿ 144 ರನ್ ಗಳಿಸಿದ ಪಾಂಡ್ಯ, 11 ವಿಕೆಟ್ ಪಡೆದುಕೊಂಡಿದ್ದರು. ವಿಶೇಷವಾಗಿ ಸೋಲುವ ಹಂತದಲ್ಲಿ ಫೈನಲ್ ಪಂದ್ಯದಲ್ಲಿ ಅಪಾಯಕಾರಿ ಕ್ಲಾಸೆನ್ ಹಾಗೂ ಮಿಲ್ಲರ್ ಅವರ ವಿಕೆಟ್ ಪಡೆದು ಭಾರತ ತಂಡ ಎರಡನೇ ಬಾರಿಗೆ ಟ್ರೋಫಿ ಗೆಲ್ಲುವಲ್ಲಿ ಪ್ರಮುಖ ಕೊಡುಗೆ ನೀಡಿದ್ದಾರೆ.

ಇನ್ನೊಂದೆಡೆ ಜಸ್ಪ್ರೀತ್ ಬೂಮ್ರಾ 12ನೇ ಸ್ಥಾನದಲ್ಲಿದ್ದರೆ, ಅಕ್ಷರ್ ಪಟೇಲ್ 7ನೇ ಸ್ಥಾನ, ಕುಲದೀಪ್ ಯಾದವ್ 8 ಹಾಗೂ ಅರ್ಷದೀಪ್ ಸಿಂಗ್ 13 ಶ್ರೇಯಾಂಕದಲ್ಲಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಪತ್ನಿ : ಕಾರಣ ಇಲ್ಲದೆ ಕುಡಿಯಲ್ಲ ಅಂದಿದ್ರಿ, ಇವತ್ತು ಯಾಕ್ ಕುಡ್ಕೊಂಡು ಬಂದ್ರಿ?
ಪತಿ : ದೀಪಾವಳಿ ಬಂತಲ್ಲ...
ಪತ್ನಿ : ಅದಕ್ಕೆ?
ಪತಿ : ಮಕ್ಕಳಿಗೆ ರಾಕೆಟ್ ಬಿಡ್ಲಿಕ್ಕೆ ಬಾಟಲ್ ಯಾರು ಕೊಡ್ತಾರೆ, ನಿಮ್ಮಪ್ಪ ತಂದುಕೊಡ್ತಾರ...?

ಮೈಸೂರು ಮಿತ್ರ

ಗುರುವಾರ, 4 ಜುಲೈ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಪ್ರಪಂಚ ನೀ ಹೇಗೆ ಇದ್ದರೂ ದೂಷಿಸುತ್ತದೆ. ಶ್ರೀರಾಮನಂತಿದ್ದರೂ, ಸತ್ಯ ಹರಿಶ್ಚಂದ್ರನಂತಾದರೂ... ಆದ್ದರಿಂದ ಲೋಕ ಮೆಚ್ಚಿಸುವ ಹುಚ್ಚು ಬೇಡ. ಸದಾಕಾಲ ನೀನು ನೀನಾಗಿರು.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹಾಗಲಕಾಯಿಗೆ ಬೇವಿನಕಾಯಿ ಸಾಕ್ಷಿ ಹೇಳಿದ ಹಾಗೆ.

ನಿಮ್ಮ ಪತ್ರಗಳು

ಪ್ರತಿಮೆ ಅನಾವರಣಕ್ಕೆ ಅವಕಾಶ ಮಾಡಿಕೊಡಿ

ಮಾನ್ಯರೆ,

ಜೂ.22ರಂದು 'ಮೈಸೂರು ಮಿತ್ರ'ದ ನಿಮ್ಮ ಪತ್ರಗಳು ವಿಭಾಗದಲ್ಲಿ ಅಮೋಘ ವರ್ಷ ನಾಗರಾಜ ಅವರು ಬರೆದ ಡಾ.ಶಿವರಾತ್ರಿ ರಾಜೇಂದ್ರ ಸ್ವಾಮಿಗಳ ಪ್ರತಿಮೆಯನ್ನು ಸಂಸದ ಯದುವೀರ್ ಅವರು ಅನಾವರಣ ಮಾಡಲಿ ಎಂಬ ಲೇಖನ ತುಂಬಾ ಪ್ರಸಕ್ತವೂ, ಸಕಾಲಿಕವೂ ಆಗಿದೆ. ಪ್ರತಿಮೆ ನನೆಗುದಿಗೆ ಬಿದ್ದಿರುವ ಬಗ್ಗೆ ನಾನು ಬರೆಯಬೇಕು ಎಂದುಕೊಂಡಿದ್ದೆ. ಈ ಲೇಖನ ನನ್ನ ಭಾವನೆಗಳನ್ನು ಮೊದಲೇ ಹೊರ ಹಾಕಿದ್ದು ನನಗೆ ಖುಷಿಯಾಯಿತು. ಈ ಲೇಖನಕ್ಕೆ ಸಂಬಂಧಿಸಿದಂತೆ ನಾನೊಂದು ಪರಿಹಾರವನ್ನು ಸೂಚಿಸುತ್ತೇನೆ. ಇದರಿಂದ ಎರಡು ಪರಿಹಾರ ದೊರೆತಂತಾಗುತ್ತದೆ.

ಒಂದನೆಯ ಪರಿಹಾರ ಜೆಎಸ್‌ಎಸ್ ವೃತ್ತದಲ್ಲಿ ಡಾ. ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಪ್ರತಿಮೆಗೆ ಅವಕಾಶ ಮಾಡಿಕೊಡುವುದು.

ಎರಡನೆಯದು ಪ್ರಸ್ತುತವಿರುವ ಜೆಎಸ್‌ಎಸ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಎದುರಿಗೆ ಎಂ.ಜಿ. ರಸ್ತೆ ಹಾದು ಹೋಗುತ್ತದೆ. ಆಸ್ಪತ್ರೆಯ ಮುಂಭಾಗ ರಸ್ತೆ ಕಿರಿದಾಗಿದ್ದು ಜನರ, ವಾಹನಗಳ ಸಂಚಾರಕ್ಕೆ ತುಂಬಾ ಅಡಚಣೆಯಾಗುತ್ತಿದೆ. ಇದರ ನಿವಾರಣೆಗೆ ಆಸ್ಪತ್ರೆ ವ್ಯಾಪ್ತಿಗೆ ಸೇರುವ ಜಾಗದಲ್ಲಿ 10 ಅಡಿಯಷ್ಟು ಜಾಗ ರಸ್ತೆಗೆ ಬಿಟ್ಟುಕೊಟ್ಟರೆ ಸಮಾಜಕ್ಕೆ ಒಂದು ದೊಡ್ಡ ಕೊಡುಗೆ ನೀಡಿದಂತಾಗುತ್ತದೆ. ಇದರಿಂದ ಆಸ್ಪತ್ರೆಗೆ ಬರುವವರು, ಹೋಗುವವರಿಗೆ ಸುಲಭ, ಸರಾಗ ಮಾರ್ಗವೊಂದು ದೊರೆತಂತಾಗುತ್ತದೆ. ಇಲ್ಲಿ ಸಂಸ್ಥೆಗೆ ಸಂಬಂಧಪಟ್ಟವರು ಮತ್ತು ಸಮಾಜದ ಪ್ರತಿನಿಧಿಗಳು ಕುಳಿತು ಒಂದು ತೀರ್ಮಾನ ತೆಗೆದುಕೊಂಡು ಈ ಸಮಸ್ಯೆಗೆ ಇತಿಶ್ರೀ ಹಾಡಬೇಕೆಂದು ಕೋರುತ್ತೇನೆ. ಎರಡೂ ಸಾರ್ವಜನಿಕರಿಗೆ ಮುಕ್ತವಾಗಬೇಕು. ರಸ್ತೆಗೆ ಸಂಸ್ಥೆ ಜಾಗ ನೀಡುವುದರ ಮೂಲಕ ಡಾ. ಶಿವರಾತ್ರಿ ರಾಜೇಂದ್ರ ಸ್ವಾಮಿಗಳ ಪ್ರತಿಮೆಯನ್ನು ಯಾವ ಅಡ್ಡಿ ಆತಂಕವೂ ಇಲ್ಲದೆ ಪ್ರತಿಷ್ಠಾಪಿಸಬಹುದಾಗಿದೆ. ಇದೊಂದು ಕೊಟ್ಟು-ತೆಗೆದುಕೊಳ್ಳುವ ನೀತಿಯಾಗಿದ್ದು, ಸಂಸ್ಥೆ ಮತ್ತು ಜಿಲ್ಲಾಡಳಿತ ಒಪ್ಪಬೇಕಾಗಿದ್ದು, ಈಗಿರುವ ಸಮಸ್ಯೆಗೆ ಒಂದು ಪರಿಹಾರ ದೊರೆತಂತಾಗುತ್ತದೆ. ಸಂಬಂಧಪಟ್ಟವರು ಇದರತ್ತ ಗಮನಹರಿಸಬೇಕಾಗಿ ಕೋರುತ್ತೇನೆ. ಅನುಮತಿ ದೊರೆತ ನಂತರ ಇದೊಂದು ಸುಂದರ ವೃತ್ತವನ್ನಾಗಿ ರೂಪಿಸಬೇಕಾಗಿದೆ. ಹತ್ತಿರದಲ್ಲೇ ಇರುವ ಬಸವೇಶ್ವರರ ಪ್ರತಿಮೆ ಸ್ಥಾಪಿತವಾಗಿರುವ ಮಾದರಿಯಲ್ಲಿಯೇ ಈ ವೃತ್ತವು ಅಭಿವೃದ್ಧಿಯಾಗಬೇಕಿದೆ. ಅರಮನೆ ಹತ್ತಿರವೇ ಗುರುಮನೆ ಇದ್ದು, ರಾಜರು ಗುರುಗಳಿಗೆ ನೀಡುತ್ತಿದ್ದ ಪ್ರೋತ್ಸಾಹವೇ ಇದಕ್ಕೆ ಸಾಕ್ಷಿಯಾಗಿದೆ.

ಕ್ರಿ.ಶ. 960 ರಿಂದ 1042ರವರೆಗೆ ಜೀವಿಸಿದ್ದ ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿ ಸ್ವಾಮಿಗಳು ಸ್ಥಾಪಿಸಿದ ಧರ್ಮಪೀಠ ಜೆಎಸ್‌ಎಸ್ ಮೈಸೂರು ರಾಜಮನೆತನಕ್ಕಿಂತಲೂ ಮೊದಲೇ ಇದ್ದು ಶಿಕ್ಷಣ, ಧಾರ್ಮಿಕ, ಸಾಮಾಜಿಕ, ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಅಪಾರ ಸೇವೆ ಮಾಡುತ್ತಾ ಬಂದಿದೆ.

ಡಾ. ಶಿವರಾತ್ರಿ ರಾಜೇಂದ್ರ ಸ್ವಾಮಿಗಳ ಆಡಳಿತಾವಧಿಯಲ್ಲಿ ಹೆಚ್ಚಿನ ರೀತಿಯಲ್ಲಿ ಸಮಾಜಕ್ಕೆ ಸೇವೆ ಸಲ್ಲಿಸಿರುವುದು ಗಮನಾರ್ಹವಾದ ಸಂಗತಿ. ಈ ಸಂಸ್ಥೆಯ ಸೇವೆಯನ್ನು ಮೈಸೂರು ಜನತೆ ಪರಿಗಣಿಸಿ ಇವರ ಪ್ರತಿಮೆಯನ್ನು ಸ್ಥಾಪಿಸಲು ಅನುವು ಮಾಡಿಕೊಡಬೇಕು. ಯದುರಾಯ ಮತ್ತು ಕೃಷ್ಣರಾಯ ಎಂಬ ಇಬ್ಬರು ಸಹೋದರರು ಯದುವಂಶ ಸ್ಥಾಪಕರಾಗಿದ್ದು, ಮೈಸೂರು ರಾಜ್ಯವನ್ನು ಕ್ರಿ.ಶ. 1399ರಲ್ಲಿ ಸ್ಥಾಪಿಸಿದರು. ಯದುವಂಶದ ಕೊನೆಯ ಕುಡಿಯಾದ ಯದುವೀರ್ ಅವರು ಈ ಪ್ರತಿಮೆಯನ್ನು ಅನಾವರಣ ಮಾಡುವುದು ಒಂದು ಐತಿಹಾಸಿಕ ಘಟನೆಯಾಗಿ ಉಳಿಯಲಿದೆ.

–ಆರ್. ರಂಗಸ್ವಾಮಿ ಶಾಂತ, ಅಶೋಕಪುರಂ, ಮೈಸೂರು.

ವೈದ್ಯರ ನಿರ್ಲಕ್ಷ್ಯಕ್ಕೆ ಅಮೂಲ್ಯ ಜೀವ ಬಲಿ, ತಾಲೂಕು ಆಡಳಿತದ ವೈಫಲ್ಯ

ಮಾನ್ಯರೆ,

ಹೆಚ್.ಡಿ. ಕೋಟೆ ಪಟ್ಟಣದ ಸೇಂಟ್ ಮೇರಿಸ್ ಆಸ್ಪತ್ರೆಯಲ್ಲಿ ವೈದ್ಯರ ನಿರ್ಲಕ್ಷ್ಯಕ್ಕೆ 6 ವರ್ಷದ ಅಮೂಲ್ಯ ಜೀವ ಮೃತಪಟ್ಟಿದೆ. ಈ ಪ್ರಕರಣಕ್ಕೆ ನಮ್ಮ ತಾಲೂಕು ಆಡಳಿತ ವೈಫಲ್ಯವು ಸಹ ಎದ್ದು ಕಾಣುತ್ತಿದೆ. ನಮ್ಮ ತಾಲೂಕಿನಲ್ಲಿ ಸುಸಜ್ಜಿತ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಇದೆ. ಆದರೆ ಕಳೆದ 6 ತಿಂಗಳಿನಿಂದ ಮಕ್ಕಳ ವೈದ್ಯರೇ ಇಲ್ಲ. ಸಾರ್ವಜನಿಕ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ದೊರೆಯದೇ ಇದ್ದುದರಿಂದ ಸಾರ್ವಜನಿಕರು ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗಳ ಮೊರೆ ಹೋಗುತ್ತಿದ್ದಾರೆ. ಸಂಬಂಧಪಟ್ಟ ತಾಲೂಕು ಆಡಳಿತಾಧಿಕಾರಿಗಳು ಇನ್ನಾದರೂ ಎಚ್ಚೆತ್ತು ಸಾರ್ವಜನಿಕ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ನೀಡುವ ಮೂಲಕ ಅಮೂಲ್ಯ ಜೀವಗಳನ್ನು ಉಳಿಸಿ ಹಾಗೂ ಪದೇ ಪದೇ ಜೀವಗಳ ಜೊತೆ ಅಸಡ್ಡೆ ತೋರುವ ಖಾಸಗಿ ಆಸ್ಪತ್ರೆಗಳ ವಿರುದ್ಧ ಸೂಕ್ತ ಕ್ರಮವನ್ನು ಕೈಗೊಳ್ಳಿ.

–ಕೆ.ಎಸ್.ಸುರೇಶ್, ಮುಖ್ಯ ಶಿಕ್ಷಕರು, ಸರಗೂರು.

ಹೊಸ ಕಾನೂನುಗಳಿಂದ ಜನರಿಗೆ ಆಗುವ ಅನುಕೂಲಗಳಾದರೂ ಏನು

ಮಾನ್ಯರೆ,

ಇದೇ ಜುಲೈ ತಿಂಗಳ ಒಂದನೇ ತಾರೀಖಿನಿಂದ ಭಾರತೀಯ ಕಾನೂನು ಮತ್ತು ನ್ಯಾಯ ಸಂಹಿತೆಯಲ್ಲಿ ಹಲವಾರು ಮಹತ್ವದ ಬದಲಾವಣೆಗಳು ಬಂದಿವೆ ಎಂದು ಮಾಧ್ಯಮಗಳು ವರದಿ ಮಾಡಿವೆ.

ಹಳೆಯ ಕಾನೂನು ಮತ್ತು ಈಗ ತರಲು ಉದ್ದೇಶಿಸಿರುವ ಹೊಸ ಕಾನೂನುಗಳಲ್ಲಿ ಏನೇನು ಬದಲಾವಣೆಗಳಿವೆ. ಈಗ ತರುತ್ತಿರುವ ಹೊಸ ಕಾನೂನುಗಳಿಂದ ಸಾರ್ವಜನಿಕರಿಗೆ ಆಗುವ ಅನುಕೂಲಗಳಾದರೂ ಏನು? ಇದರ ಸಾಧಕ– ಬಾಧಕಗಳ ಬಗ್ಗೆ ಸಾರ್ವಜನಿಕ ಚರ್ಚೆಯಾಗಬೇಕು ಮತ್ತು ಮುಖ್ಯವಾಗಿ ಕಾನೂನು ತಜ್ಞರು ಇದನ್ನು ಒಪ್ಪಬೇಕು. ಈ ಬಗ್ಗೆ ನಾನು ಮೈಸೂರಿನ ಖ್ಯಾತ ನ್ಯಾಯವಾದಿಯೊಬ್ಬರನ್ನು ವಿಚಾರಿಸಿದಾಗ, ಹೊಸ ಕಾನೂನುಗಳಲ್ಲಿ ಯಾವುದೇ ರೀತಿಯ ಮಹತ್ತರ ಬದಲಾವಣೆಗಳೂ ಇಲ್ಲ. ಬ್ರಿಟಿಷರ ಕಾಲದಲ್ಲಿ ಇದ್ದ ಕಾನೂನುಗಳಿಗೆ ಸುಣ್ಣ– ಬಣ್ಣ ಬಳಿದು ಹೊಸ ರೂಪ ಕೊಟ್ಟಿದ್ದಾರೆ ಅಷ್ಟೆ ಎನ್ನುತ್ತಾರೆ. ಸರ್ಕಾರ ತರುತ್ತಿರುವ ಹೊಸ ಕಾನೂನುಗಳಿಂದ ಸಾರ್ವಜನಿಕರಿಗೆ ಆಗುವ ಅನುಕೂಲಗಳು ಏನು ಎಂಬುದನ್ನು ಪ್ರಕಟಿಸಿ, ಸಾರ್ವಜನಿಕರ ಅಭಿಪ್ರಾಯ ಸಂಗ್ರಹಿಸಲಿ.

–ಬೂಕನಕೆರೆ ವಿಜೇಂದ್ರ, ಕುವೆಂಪು ನಗರ, ಮೈಸೂರು

ಆಧ್ಯಾತ್ಮ ಮೇರು!

ಮಾನ್ಯರೆ,

ಮೇ 26ರ 'ಮೈಸೂರು ಮಿತ್ರ' ಸಂಚಿಕೆಯಲ್ಲಿ (ವಾರದ ಮಿತ್ರ) ಎಸ್.ಪ್ರಕಾಶ್ ಬಾಬು ಅವರು ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಬಗೆಗೆ ಬರೆದ ಲೇಖನ ಸಮಯೋಚಿತವೂ ಸಮುಚಿತವೂ ಆಗಿತ್ತು. ಪೂಜ್ಯ ಸ್ವಾಮೀಜಿಯವರು ಒಬ್ಬ ಆಧ್ಯಾತ್ಮ ಮೇರು; 'ಜಗದ್ಗುರು'. ನನ್ನಂಥ (?) ವ್ಯಕ್ತಿಗೆ 'ದತ್ತಪೀಠ ಆಸ್ಥಾನ ವಿದ್ವಾನ್' ಬಿರುದನ್ನು ಕೆಲವು ವರ್ಷಗಳ ಹಿಂದೆ ಅಯಾಚಿತವಾಗಿ ಅನುಗ್ರಹಿಸಿದರು. ಅವರಿಗೆ ನಾನು ಕೃತಜ್ಞ, ಅವರು ಚಿರಾಯುವಾಗಲಿ. –ಸಿಪಿಕೆ, ಮೈಸೂರು.



ನಿವೇದಿತ ಹೆಚ್.
ಇಂಗ್ಲಿಷ್ ಉಪನ್ಯಾಸಕಿ
ಯುವರಾಜ ಕಾಲೇಜು
ಮೈಸೂರು.

ಮಂಥನ

ಸಮ್ಮೇಳನಗಳೂ... ಕನ್ನಡ ಅಸ್ಮಿತೆಯೂ



1915ರಲ್ಲಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ಮೊದಲ ಬಾರಿಗೆ ಬೆಂಗಳೂರಿನಲ್ಲಿ ಮೇ 3–6ರವರೆಗೂ ಜರುಗಿತು. ಎಚ್.ವಿ. ನಂಜುಂಡಯ್ಯನವರು ಅಧ್ಯಕ್ಷರಾಗಿದ್ದ ಈ ಸಮ್ಮೇಳನದ ಉದ್ದೇಶ; ಕನ್ನಡವನ್ನು, ಕನ್ನಡ ಸಂಸ್ಕೃತಿಯನ್ನು, ಕನ್ನಡ ಸಾಹಿತ್ಯವನ್ನು ಸಾಮಾನ್ಯ ಜನರ ಹತ್ತಿರಕ್ಕೆ ತೆಗೆದುಕೊಂಡು ಹೋಗುವುದು. ಸಾಕಷ್ಟು ಅನಪೇಕ್ಷಿತ ಪ್ರಭಾವಗಳಿಗೆ ಒಳಗಾಗಿ ಕನ್ನಡ, ಅದರ ಭಾಷೆ, ಸಂಸ್ಕೃತಿ ಮತ್ತು ಸಾಹಿತ್ಯ ಹಿನ್ನೆಲೆಗೆ ಸರಿಯುತ್ತಿದೆ, ಅವಗಣನೆಗೆ ತುತ್ತಾಗುತ್ತಿದೆ, ಅಪಾಯದಲ್ಲಿದೆ ಎಂಬ ಸೂಕ್ಷ್ಮದ ಅರಿವಾದಾಗ, ಕನ್ನಡ ಸಾಹಿತ್ಯ ಪರಿಷತ್ತಿನ ಸ್ಥಾಪನೆಯಾಯಿತು. ಕನ್ನಡ ಅಸ್ಮಿತೆ ಕಾಯ್ದುಕೊಳ್ಳಲು ಪರಿಷತ್ತು ಕೈಗೊಂಡ ಅನೇಕ ಉತ್ತಮ ನಿರ್ಧಾರಗಳಲ್ಲಿ ಸಮ್ಮೇಳನವೂ ಒಂದು. ಕನ್ನಡಕ್ಕಾಗಿ ಮಿಡಿಯುವ, ತುಡಿಯುವ, ಹಂಬಲಿಸುವ ಮನಸುಗಳನ್ನು ಒಂದೆಡೆ ತರುವ ಮಹತ್ ಕಾರ್ಯಕ್ಕೆ ಕೈಹಾಕಿದ್ದು ಶ್ಲಾಘನೀಯ ಕಾರ್ಯ.



ಎಚ್.ವಿ.ನಂಜುಂಡಯ್ಯ

1915ರಿಂದ ಇಲ್ಲಿಯವರೆಗೆ 87 ಸಾಹಿತ್ಯ ಸಮ್ಮೇಳನಗಳು ಜರುಗಿವೆ. 88ನೆಯದು ನಮ್ಮ ಸಕ್ಕರೆ ನಾಡಿನಲ್ಲಿ ಮೂರನೆಯ ಬಾರಿಗೆ ಡಿಸೆಂಬರ್‌ನಲ್ಲಿ ನಡೆಯುವುದೆಂದು ನಿಶ್ಚಯವಾಗಿದೆ. ಮೊದಲ ಮೂರು ಸಮ್ಮೇಳನಗಳಿಗೆ ಎಚ್.ವಿ.ನಂಜುಂಡಯ್ಯನವರೇ ಅಧ್ಯಕ್ಷರಾಗಿದ್ದು ಬಿಟ್ಟರೆ, ನಂತರದ ವರ್ಷಗಳಲ್ಲಿ ಪ್ರತಿ ಬಾರಿ ಹೊಸ ಅಧ್ಯಕ್ಷರನ್ನು ಆರಿಸಿ ಸಂಭ್ರಮಿಸುವ ಪರಿಪಾಠ ಪ್ರಾರಂಭವಾಯಿತು ಮತ್ತು ಸಮ್ಮೇಳನದ ಅಧ್ಯಕ್ಷರಾಗುವುದು ಹೆಮ್ಮೆಯ ವಿಷಯವೆನಿಸಿತು. ವರ್ಷಕ್ಕೊಮ್ಮೆ ನಡೆಯಬೇಕೆಂಬ ರೂಢಿಯಿದ್ದರೂ ಕೆಲವೊಂದು ಅನಿವಾರ್ಯ ಕಾರಣಗಳಿದ್ದಾಗ ಮುಂದೂಡಿಕೆಯಾಗಿದ್ದೂ ಇದೆ. 88ನೇ ಸಮ್ಮೇಳನ ನಾಡಿನಲ್ಲಿ ತಲೆದೋರಿದ ಕ್ಷಾಮದ ಕಾರಣಕ್ಕೆ ಮುಂದೂಡಲ್ಪಟ್ಟು, ಈಗ ಡಿಸೆಂಬರ್‌ನಲ್ಲಿ ನಿಗದಿಯಾಗಿದೆ.

ಕರ್ನಾಟಕದ ಹಲವು ಸ್ಥಳಗಳಲ್ಲಿ ನಡೆದಿರುವ ಸಮ್ಮೇಳನದ ಆಯೋಜನೆ ಸವಾಲೂ ಹೌದು, ಸಂಭ್ರಮವೂ ಹೌದು. ನಾಡಿನ ಮೂಲೆಮೂಲೆಗಳಿಂದ ಕನ್ನಡದ ಈ ಹಬ್ಬಕ್ಕಾಗಿ ಬರುವವರಿಗೆ ಊಟ, ವಸತಿಯ ವ್ಯವಸ್ಥೆ ಮಾಡುವುದು ಸುಲಭದ ಕೆಲಸವಲ್ಲ. 3 ದಿನ ನಡೆಯುವ ಸಮ್ಮೇಳನದಲ್ಲಿ ಸಾಹಿತ್ಯ ಪ್ರಿಯರಿಗೆ ಜ್ಞಾನದ ರಸದೌತಣವಾಗುವುದಂತೂ ಖಚಿತ. ಸಾಹಿತ್ಯದ ಹಲವು ಮಗ್ಗುಲುಗಳ ಮೇಲೆ ಏರ್ಪಡುವ ಗೋಷ್ಠಿಗಳು ಜ್ಞಾನ ದಾಸೋಹಕ್ಕೆಂದೇ ಮೀಸಲಾಗಿರುತ್ತವೆ. ಜೊತೆಗೆ ಕನ್ನಡದ ಕಲೆ, ಸಂಸ್ಕೃತಿ, ನೃತ್ಯ, ಜನಪದವನ್ನು ಪರಿಚಯಿಸುವ ಮನರಂಜನಾ ಕಾರ್ಯಕ್ರಮಗಳೂ ಇರುತ್ತವೆ. ಪುಸ್ತಕಪ್ರಿಯರಿಗೆ ಸಾವಿರಾರು ಪುಸ್ತಕಗಳ ನಡುವೆ ತಮ್ಮದನ್ನು ಆಯ್ದುಕೊಳ್ಳುವ ಅಗ್ನಿಪರೀಕ್ಷೆ! ಒಂದೇ... ಎರಡೇ... ಸಾಹಿತ್ಯ ಸಮ್ಮೇಳನವೆಂದರೆ ಅದು ಅಕ್ಷರಶಃ ಕನ್ನಡದ ಹಬ್ಬ.

ಸಮ್ಮೇಳನಗಳು ಜಾತ್ರೆಯಾಗಿ ಮಾರ್ಪಡುತ್ತಿವೆ. ರಾಜಕೀಯವೂ ನುಸುಳಿದೆ, ಅವ್ಯವಸ್ಥೆಯ ಗೂಡಾಗಿರುತ್ತವೆ ಎಂಬೆಲ್ಲಾ ಆರೋಪಗಳನ್ನು ಮಾಡುವವರಿದ್ದಾರಾದರೂ, ಸಮ್ಮೇಳನದ ಸೂರಿನಡಿ ನಿಂತ ಎಂತಹ ನಿರಭಿಮಾನಿಗೂ ಕನ್ನಡತನವನ್ನು ಬಡಿದೆಬ್ಬಿಸುತ್ತದೆ, ಅಭಿಮಾನವನ್ನು ಜಾಗೃತಗೊಳಿಸುತ್ತದೆ. ಅಷ್ಟರ ಮಟ್ಟಿಗೆ ಸಮ್ಮೇಳನಗಳು ಕನ್ನಡ ಮನಸುಗಳು ಹಂಬಲಿಸುವ ಕನ್ನಡಿಗರ ಜಾತ್ರೆಗಳಾಗಿವೆ.

ಹೋಬಳಿ, ತಾಲೂಕು, ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ನಡೆಯುವ ಈ ಸಮ್ಮೇಳನಗಳ ಆಯೋಜನೆಯನ್ನು ಪರಿಷತ್ತು, ಮಾಡುತ್ತದಾದರೂ, ಖರ್ಚು–ವೆಚ್ಚವನ್ನು ಸರ್ಕಾರ ನೋಡಿಕೊಳ್ಳುತ್ತದೆ. ಅಖಿಲ ಭಾರತೀಯ ಸಾಹಿತ್ಯ ಸಮ್ಮೇಳನವಲ್ಲದೆ, 1985ರಿಂದ, ವಿಶ್ವಕನ್ನಡ ಸಮ್ಮೇಳನವೂ ನಡೆಯುತ್ತಿದ್ದು ವಿಶ್ವಮಟ್ಟದಲ್ಲಿ ಕನ್ನಡಿಗರ ಜ್ಯೋತಿ ಬೆಳಗಿಸುವ ಪ್ರಯತ್ನಗಳಾಗುತ್ತಿವೆ ಎಂಬುದು ಅತ್ಯಂತ ಶ್ಲಾಘನೀಯ ವಿಷಯವೇ ಸರಿ.

ಈ ಸಮ್ಮೇಳನದಲ್ಲಿ ಎಲ್ಲ ವಿಷಯಗಳು ಒಳಗೊಂಡಿರುತ್ತವೆ. ಇದಲ್ಲದೆ, ದಲಿತ ಸಾಹಿತ್ಯ, ಬಂಡಾಯ ಸಾಹಿತ್ಯ, ಜನಪರ–ಜನಪದ ಸಾಹಿತ್ಯ, ಮಹಿಳಾ ಸಾಹಿತ್ಯ, ವಚನ ಸಾಹಿತ್ಯ, ಶರಣ ಸಾಹಿತ್ಯ, ಮಕ್ಕಳ ಸಾಹಿತ್ಯ, ವೈದ್ಯಕೀಯ ಸಾಹಿತ್ಯ ಸಮ್ಮೇಳನ, ಪ್ರತ್ಯೇಕ ಕವಿ ಕಾದಂಬರಿಕಾರರ ಕುರಿತ ಸಮ್ಮೇಳನಗಳೂ ಆಗಾಗ ನಡೆದು ಓದುಗನಿಗೆ ಸಾಹಿತ್ಯದ ವೈವಿಧ್ಯತೆಯ ಅಪಾರ ವ್ಯಾಪ್ತಿಯನ್ನು ಕೈಗೆಟಕುವಂತೆ ಮಾಡುತ್ತಿವೆ. ಪೊಲೀಸ್ ಸಾಹಿತ್ಯ ಸಂಭ್ರಮವೂ 2017ರಲ್ಲಿ ನಡೆದಿತ್ತು!

ಭಾರತದ ಎಲ್ಲ ರಾಜ್ಯಗಳಲ್ಲಿ ಈ ಸಮ್ಮೇಳನಗಳನ್ನು ಸರ್ಕಾರ ಆಯೋಜಿಸುತ್ತದೆ. ಅಲ್ಲದೆ, ಸಮಾನ–ಮನಸ್ಕರು ಒಂದಾಗಿ, ಸಾಹಿತ್ಯವನ್ನು ಸಂಭ್ರಮಿಸುವ ಹೊಸ ಪರಿಪಾಠವನ್ನು ಹುಟ್ಟು ಹಾಕಿದ್ದಾರೆ. ಸರ್ಕಾರದ ಯಾವುದೇ ಅನುದಾನವನ್ನು ಬಯಸದೆಯೇ, ತಮ್ಮ ಇತಿಮಿತಿಯಲ್ಲಿ ವೆಚ್ಚ ಹಂಚಿಕೊಂಡು ಸಾಹಿತ್ಯದ ನಿಜ ಆಸ್ವಾದನೆಯಲ್ಲಿ ತೊಡಗುತ್ತಿದ್ದಾರೆ. ಕಾರ್ಪೊರೇಟ್ ಸಂಸ್ಕೃತಿ ಸಾಹಿತ್ಯಕ್ಕೆ ಆವರಿಸಿರುವುದು ಅಪಾಯಕಾರಿ ಎಂಬ ಒಂದು ವಾದ ಇದೆಯಾದರೂ, ಅದನ್ನು ಚರ್ಚಿಸದೆ, ಸಾಹಿತ್ಯ ಎಲ್ಲರನ್ನೂ ತಲುಪಲು ಈ ಸಮ್ಮೇಳನಗಳು ಸೋಪಾನವಿದ್ದಂತೆ ಎನ್ನುವುದು ನಾವು ಒಪ್ಪಿಕೊಳ್ಳಲೇಬೇಕು.

ವಿದೇಶಗಳಲ್ಲಿ ನೆಲೆಸಿರುವ ಕನ್ನಡಿಗರು ನಡೆಸುವ ಹಲವು ಸಮ್ಮೇಳನಗಳು ಇಂದು ಪ್ರಸಿದ್ಧವಾಗಿವೆ. ಅಕ್ಕ ಸಮ್ಮೇಳನದ ಬಗ್ಗೆ ನಮಗೆಲ್ಲರಿಗೂ ತಿಳಿದೇ ಇದೆ. ಅಮೆರಿಕದ ಕನ್ನಡ ಒಕ್ಕೂಟಗಳು ಕನ್ನಡಿಗರನ್ನು ವಿದೇಶೀ ನೆಲದಲ್ಲಿ ಒಟ್ಟುಗೂಡಿಸಿವೆ. ಇದಲ್ಲದೆ, ಬಹುದೊಡ್ಡ ಭೂಭಾಗವಾಗಿರುವ ಅಮೆರಿಕದ ಎಲ್ಲ ದಿಕ್ಕುಗಳಲ್ಲಿ ನೆಲೆಸಿರುವ ಕನ್ನಡಿಗರು ತಮ್ಮ ತಮ್ಮ ಪ್ರಾಂತ್ಯಗಳಲ್ಲಿ ಸಮ್ಮೇಳನ ನಡೆಸುತ್ತಾರೆ. ಇಂಗ್ಲೆಂಡ್, ಜರ್ಮನಿ, ಫ್ರಾನ್ಸ್, ಬೆಹ್ರೇನ್, ಕೆನಡಾ, ಕತಾರ್, ದುಬೈಗಳಲ್ಲಿ ನೆಲೆಸಿರುವ ಕನ್ನಡಿಗರು ತಮ್ಮ ತವರನ್ನು ಸಮ್ಮೇಳನಗಳ ಆಯೋಜನೆ ಮೂಲಕ ತಾವಿರುವ ಸ್ಥಳಗಳಿಗೇ ಬರಮಾಡಿಕೊಳ್ಳುತ್ತಾರೆ.

ಇನ್ನು ಕರ್ನಾಟಕದಲ್ಲಿಯೇ, ಧಾರವಾಡ ಸಾಹಿತ್ಯ ಸಂಭ್ರಮ ಚನ್ನವೀರ ಕಣವಿ ಅವರ ನೇತೃತ್ವದಲ್ಲಿ 2013ರಲ್ಲಿ ಆರಂಭಗೊಂಡಿತು. ಪರ್ಯಾಯ ಸಮ್ಮೇಳನ ಎಂಬ ಹಣೆಪಟ್ಟಿ ಇತ್ತಾದರೂ ಸಾಹಿತ್ಯದ ರಸಕವಳ ಬಡಿಸಿದ್ದಂತೂ ಸುಳ್ಳಲ್ಲ. ಕೋವಿಡ್‌ನ ಬಿಕ್ಕಟ್ಟಿನ ನಂತರ ಧಾರವಾಡ ಸಾಹಿತ್ಯ ಸಂಭ್ರಮ ನಿಂತುಹೋಗಿರುವುದಕ್ಕೆ ಸಾಹಿತ್ಯ ಪ್ರೇಮಿಗಳಲ್ಲಿ ವಿಷಾದ ಆವರಿಸಿದೆ.

ಧಾರವಾಡ ಸಾಹಿತ್ಯ ಸಂಭ್ರಮವನ್ನು ಮಾದರಿಯಾಗಿ ಇಟ್ಟುಕೊಂಡು, ಹಾಸನ, ಕಲಬುರಗಿ, ಬಳ್ಳಾರಿಗಳಲ್ಲೂ ಇದೇ ಮಾದರಿಯ ಕಾರ್ಯಕ್ರಮಗಳು ನಡೆದವಾದರೂ, ವರ್ಷಂಪ್ರತಿ ನಡೆಸುವುದಕ್ಕೆ ಅನೇಕ ಅಡಚಣೆಗಳುಂಟಾಗಿ ಈಗ ನಡೆಯುತ್ತಿಲ್ಲ.

ಬುಕ್ ಬ್ರಹ್ಮ, ಮೈ ಲ್ಯಾಂಗ್, ವೀರಲೋಕದಂತಹ ಸಂಸ್ಥೆಗಳು ಅರ್ಥಪೂರ್ಣ ಸಾಹಿತ್ಯ ಉತ್ಸವಗಳನ್ನು ಆಯೋಜಿಸುತ್ತಿರುವುದಲ್ಲದೆ, ವಿಸ್ತಾರದಂತಹ ಕೆಲವು ವಾರ್ತಾ ಚಾನೆಲ್‌ಗಳೂ ಸಾಹಿತ್ಯದ ಕಾರ್ಯಕ್ರಮಗಳನ್ನು ನಡೆಸುತ್ತಿರುವುದು ಹೆಮ್ಮೆಯ ಸಂಗತಿ.

ಇವೆಲ್ಲಾ ಅಚ್ಚ ಕನ್ನಡ ಸಾಹಿತ್ಯವನ್ನು ಮಾತ್ರ ಉಣಬಡಿಸುವ ಸಮ್ಮೇಳನಗಳ ಬಗೆಗಿನ ಮಾತಾದರೆ, ಇಂದು ಭಾರತದ ಹಲವೆಡೆ ಪ್ರಾಂತೀಯ ಭಾಷೆಯನ್ನೊಳಗೊಳ್ಳುವುದರ ಜೊತೆಗೆ ಇಂಗ್ಲಿಷ್–ಭಾರತೀಯ ಮತ್ತು ವಿಶ್ವ ಮಟ್ಟದ–ಸಾಹಿತ್ಯದ ವೇದಿಕೆಗಳಲ್ಲಿ ಪರಿಚಯಿಸಿಕೊಡುವಂತಹ ಬಹುಭಾಷೀಯ ಸಮ್ಮೇಳನಗಳು ನಡೆಯುತ್ತಿವೆ. ಇವುಗಳಲ್ಲಿ ಕಳಶಪ್ರಾಯವೆನಿಸುವುದು ಜೈಪುರ ಸಾಹಿತ್ಯ ಸಂಭ್ರಮ. 2006ರಿಂದ ನಡೆದುಕೊಂಡು ಬರುತ್ತಿರುವ ಈ ಸಮ್ಮೇಳನ, ಪ್ರತಿವರ್ಷ ಜನವರಿಯಲ್ಲಿ ರಾಜಸ್ಥಾನದ ಜೈಪುರದಲ್ಲಿ ಆಯೋಜಿತವಾಗುತ್ತದೆ. 18 ಜನ ಸಾಹಿತಿಗಳು ಮತ್ತು 100 ಜನ ಸಾಹಿತ್ಯ ಪ್ರೇಮಿ ವೀಕ್ಷಕರಿಂದ ಪ್ರಾರಂಭವಾದ 5 ದಿನಗಳ ಈ ಉತ್ಸವದಲ್ಲಿ ಇಂದು 2000 ಸಾಹಿತಿಗಳು ಮತ್ತು ಲಕ್ಷಕ್ಕೂ ಮೀರಿ ವೀಕ್ಷಕರು ಭಾಗವಹಿಸುತ್ತಾರೆ. ಪ್ರಪಂಚದಲ್ಲಿ ನಡೆಯುವ ಸಾಹಿತ್ಯ ಸಮ್ಮೇಳನಗಳಲ್ಲಿ ಇದು 5ನೇ ಸ್ಥಾನದಲ್ಲಿದೆ.

ಅದಲ್ಲದೆ, ಕಸೌಲಿಯಲ್ಲಿ ನಡೆಯುವ ಖುಷ್ವಂತ್ ಸಿಂಗ್ ಸಾಹಿತ್ಯೋತ್ಸವ, ಡೆಹ್ರಾಡೂನ್ ಸಾಹಿತ್ಯ ಸಂಭ್ರಮ, ಶಿಲ್ಲಾಂಗ್ ಸಾಹಿತ್ಯೋತ್ಸವ, ಮುಂಬೈನ ಟಾಟಾ ಲಿಟರೇಚರ್ ಫೆಸ್ಟಿವಲ್, ಉತ್ತರಾಖಂಡ್‌ನ ಅಲ್ಮೋರಾ ಸಾಹಿತ್ಯೋತ್ಸವ, ಕೇರಳದ ಕೋಝಿಕೋಡ್ ಸಾಹಿತ್ಯೋತ್ಸವ, ಮಹಾರಾಷ್ಟ್ರದ ನಾಗ್ಪುರದಲ್ಲಿನ ಆರೆಂಜ್ ಲಿಟರೇಚರ್ ಫೆಸ್ಟಿವಲ್, ಪುಣೆ ಸಾಹಿತ್ಯೋತ್ಸವ, ಕೊಲ್ಕತ್ತಾದ ಅಪೀಜೆ ಲಿಟರೇಚರ್ ಫೆಸ್ಟ್, ಹಿಂದು ಮತ್ತು ಟೈಮ್ಸ್ ಪತ್ರಿಕೆಗಳ ಸಾಹಿತ್ಯೋತ್ಸವ, ಹೈದರಾಬಾದ್ ಗೋವಾ ಲಖ್ನೋನ ಸಾಹಿತ್ಯ ಸಂಭ್ರಮಗಳು ಹೀಗೆ ಪಟ್ಟಿಯನ್ನು ಇನ್ನೂ ಮುಂದುವರೆಸಬಹುದು!

ಈ ಸಾಹಿತ್ಯೋತ್ಸವಗಳಲ್ಲಿ ಸಮ್ಮೇಳನಾಧ್ಯಕ್ಷರ ಸಂಪ್ರದಾಯವಿಲ್ಲ. ಎಲ್ಲವೂ ಪ್ರತಿವರ್ಷ ಒಂದು ನಿಗದಿತ ತಿಂಗಳಿನಲ್ಲಿ ನಡೆಯುತ್ತವೆ. ದಿನಾಂಕದಲ್ಲಿ ಮಾತ್ರ ಬದಲಾವಣೆ ಇರುತ್ತದೆ. ಅಚ್ಚುಕಟ್ಟಾಗಿ ನಡೆಯುವ ಈ ಸಮ್ಮೇಳನಗಳಲ್ಲಿ ಸಾಹಿತ್ಯವಲ್ಲದೆ ಕೆಲವಷ್ಟು ಪ್ರಚಲಿತ ವಿದ್ಯಮಾನಗಳ ಕುರಿತೂ ಗೋಷ್ಠಿಗಳು ಏರ್ಪಾಡಾಗುವುದು ಸ್ವಾರಸ್ಯಕರ. ದೇಶ ವಿದೇಶಗಳ ಜನಪ್ರಿಯ ಸಾಹಿತಿಗಳು ಕೆಲವೊಮ್ಮೆ ನೊಬೆಲ್ ಪ್ರಶಸ್ತಿ ಪುರಸ್ಕೃತರೂ ಭಾಗವಹಿಸುವುದು ವಿಶೇಷ.

ಬೆಂಗಳೂರು ಸಾಹಿತ್ಯ ಸಂಭ್ರಮ ಜೈಪುರ ಸಾಹಿತ್ಯೋತ್ಸವವನ್ನು ಮಾದರಿಯಾಗಿ ಇಟ್ಟುಕೊಂಡು, 2012ರಿಂದ ನಡೆದುಕೊಂಡು ಬರುತ್ತಿದ್ದು, ದೇಶದಲ್ಲಿರುವ ಸಾಹಿತ್ಯಪ್ರೇಮಿಗಳು ಒಮ್ಮೆಯಾದರೂ ಭೇಟಿ ಕೊಡಲೇಬೇಕು ಎನಿಸುವಷ್ಟರ ಮಟ್ಟಿಗೆ ಪ್ರತಿಷ್ಠಿತ ಸ್ಥಾನ ಗಳಿಸಿಕೊಂಡಿರುವುದು ಸಂತಸದ ವಿಷಯ.

ಇಷ್ಟೆಲ್ಲಾ ಹೇಳಲು ಕಾರಣ; ಡಿಸೆಂಬರ್ ನಲ್ಲಿ ಮಂಡ್ಯ ಅಖಿಲ ಭಾರತ ಸಾಹಿತ್ಯ ಸಮ್ಮೇಳನಕ್ಕೆ ಸಿದ್ಧವಾಗುತ್ತಿರುವ ಖುಷಿ ಒಂದೆಡೆಯಾದರೆ, ಇದೇ ಜುಲೈ 6 ಮತ್ತು 7ರ ಶನಿವಾರ ಮತ್ತು ಭಾನುವಾರ ನಡೆಯಲಿರುವ ಮೈಸೂರು ಸಾಹಿತ್ಯ ಸಂಭ್ರಮದ 8ನೆಯ ಆವೃತ್ತಿ ಕೂಡ ಖುಷಿ ತಂದಿದೆ.

ಮೈಸೂರು ಬ್ರಾಂಡ್ ಆಗುತ್ತಿದೆ ಮೈಸೂರು ಸಾಹಿತ್ಯ ಸಂಭ್ರಮ

ಹೌದು, ಸಾಂಸ್ಕೃತಿಕ ರಾಜಧಾನಿಯಾದ ಮೈಸೂರಿನಲ್ಲಿ ನಡೆಯುವ ಸಾಹಿತ್ಯಕ ಚಟುವಟಿಕೆ ಗಳು, ಸಮ್ಮೇಳನಗಳು ಅಸಂಖ್ಯ. ಆದರೆ ಈಗ್ಗೆ 7 ವರುಷಗಳಿಂದ ಮೈಸೂರು ಸಾಹಿತ್ಯ ಸಂಭ್ರಮ ಒಂದು ರೀತಿಯಲ್ಲಿ ಮೈಸೂರಿನ ಬ್ರಾಂಡ್ ಆಗಿ ಬಿಟ್ಟಿರುವ ಹೆಮ್ಮೆಯ ವಿಷಯ. ಮೈಸೂರು ಬುಕ್ ಕ್ಲಬ್‌ನ ವತಿಯಿಂದ ನಡೆಯುವ ಈ ಸಮ್ಮೇಳನ ಮೊದಲ ಬಾರಿಗೆ 2017ರಲ್ಲಿ ನಡೆಯಿತು.

ನಂತರ ನಿರಂತರವಾಗಿ ನಡೆದುಕೊಂಡು ಬಂದಿ ರುವ ಈ ಸಾಹಿತ್ಯೋತ್ಸವ, ಕೋವಿಡ್ ಸಮಯ ದಲ್ಲಿ ಆನ್‌ಲೈನ್‌ನಲ್ಲೇ ಯಶಸ್ವಿಯಾಗಿ ನಡೆದಿತ್ತು. 2015ರಲ್ಲಿ ಉದ್ಯಮಿ ಶುಭಾ ಸಂಜಯ್ ಅರಸ್ ರಿಂದ ಸ್ಥಾಪಿತವಾದ ಬುಕ್ ಕ್ಲಬ್ ಇಂದು 22 ಶಾಖೆಗಳಾಗಿ ಮಾರ್ಪಟ್ಟು ಹಲವು ಸ್ತರದ ಓದು ಗರನ್ನೊಳಗೊಂಡಿದೆ. ಆ ಎಲ್ಲ ಬುಕ್ ಕ್ಲಬ್‌ನ ಸದಸ್ಯರು ಒಟ್ಟಾಗಿ ಮೈಸೂರು ಸಾಹಿತ್ಯ ಸಂಭ್ರಮ ವನ್ನು ಪ್ರತಿವರ್ಷ ಜುಲೈನಲ್ಲಿ ಆಚರಿಸುತ್ತಿದ್ದಾರೆ.

ಮೈಸೂರು ಸಾಹಿತ್ಯ ಸಂಭ್ರಮದ 8 ನೇ ಆವೃತ್ತಿ –2024 ಕಾರ್ಯಕ್ರಮಗಳು

SCHEDULE

ಸ್ಥಳ : ಹೋಟೆಲ್ ಸದರನ್ ಸ್ಟಾರ್, ಮೈಸೂರು — ಗಾರ್ಡೇನಿಯಾ, ಈಜುಕೊಳದ ಬದಿಯಲ್ಲಿ

ಶನಿವಾರ 6 ಜುಲೈ

ಸಮಯ	ಗೋಷ್ಠಿ /ಪ್ಯಾನೆಲ್	ಗೋಷ್ಠಿಯಲ್ಲಿ ಭಾಗವಹಿಸುವವರು
1:00PM - 01:15PM	ಡೊಳ್ಳು ಕುಣಿತ	ಕೆ. ಹೆಮ್ಮರಗಹಳ್ಳಿ ತಂಡದಿಂದ
01:15PM - 02:15PM	"ಕಾಡು–ನಾಡು–ಕಾಣಾಡು" ಸಾಹಿತ್ಯ–ಸಿನಿಮಾ ಮತ್ತು ಪರಿಸರ ಚಿಂತನೆ.	ಸುರೇಶ್ ಹೆಬ್ಳೀಕರ್, ಶಶಿಧರ ಹಾಲಾಡಿ, ಲಕ್ಷ್ಮೀಕಾಂತ ರಾಜೇ ಅರಸ್
02:15PM - 03:15PM	"ಸಿರಿಧಾನ್ಯಗಳ ಸರದಾರ" ಸುಸ್ಥಿರ ಬದುಕನ್ನು ಬಾಳುವುದು ಹೇಗೆ?	ಡಾ ಖಾದರ್ ವಲ್ಲಿ ದೂದೇಕುಲ
03:15PM - 04:15PM	ಸುದ್ದಿ ಸರ್ಕಸ್‌ಗಳ ನಡುವೆ ಮಾಧ್ಯಮಗಳ ಜವಾಬ್ದಾರಿಗಳು	ರವೀಂದ್ರ ಭಟ್ಟ, ಅಂಶಿ ಪ್ರಸನ್ನಕುಮಾರ್, ಧರ್ಮೇಂದ್ರ ಕುಮಾರ್
04:15PM - 04:30PM	ಸರೋದ್ ಮಾಂತ್ರಿಕನ ಸುಮಧುರ ನೆನಪುಗಳು	ಸುರೇಶ್ ಹೆಬ್ಳೀಕರ್, ರೂಮಿ ಹರೀಶ್, ಕೃಷ್ಣ ಮನವಳ್ಳಿ
04:30PM - 06:00PM	ನಾಟಕ: ಕನ್ನಡ ಕಾವ್ಯ ಕಣಜ ನಟನ ತಂಡದ ಸಂಸ್ಥಾಪಕರು: ಮಂಡ್ಯ ರಮೇಶ್	ಸಂಗೀತ ಮತ್ತು ನಿರ್ದೇಶನ: ಡಾ. ಶ್ರೀಪಾದ್ ಭಟ್, ಸಂಗೀತ ಸಹಾಯಕರು ಮತ್ತು ಸಹಾಯಕ ನಿರ್ದೇಶಕರು: ಮೇಘ ಸಮೀರ, ದಿಶಾ ರಮೇಶ್

ಭಾನುವಾರ 7 ಜುಲೈ

ಸಮಯ	ಗೋಷ್ಠಿ /ಪ್ಯಾನೆಲ್	ಗೋಷ್ಠಿಯಲ್ಲಿ ಭಾಗವಹಿಸುವವರು
09:30AM - 10:30AM	ಏಕ ವ್ಯಕ್ತಿ ತಾಳಮದ್ದಲೆ ಆಖ್ಯಾನ: ರಾವಣನ ತಂಗಿ ಕವಿ: ಪಾರ್ತಿಸುಬ್ಬ	ಪ್ರಸ್ತುತಿ: ಶ್ರೀ ದಿವಾಕರ ಹೆಗಡೆ, ಕೆರೆಹೊಂಡ. ಭಾಗವತರು: ಶ್ರೀ ಪ್ರಸನ್ನ ಹೆಗಡೆ, ಮಾಗೋಡು. ಮದ್ದಳೆ: ಶ್ರೀ ಅನ್ಯಯ್, ಅಂಬಾರಗೋಡ್ಲು.
10:30AM - 11:30AM	ರಾಷ್ಟ್ರ ಪ್ರಶಸ್ತಿಗಳ ಸುರಿಮಳೆ : ಕಾಸರವಳ್ಳಿ ಮಾಯಾಲೋಕ	ಗಿರೀಶ್ ಕಾಸರವಳ್ಳಿ, ದೀಪಾ ರವಿಶಂಕರ್, ಗೋಪಾಲಕೃಷ್ಣ ಪೈ
11:30AM - 12:00PM	ಭಾಷಾ ಪಾಂಡಿತ್ಯ ಸೃಜನಶೀಲತೆಯನ್ನು ಮಸುಕು ಮಾಡುವುದೇ ?	ಕಬ್ಬಿನಾಲೆ ವಸಂತ ಭಾರದ್ವಾಜ್
12:00PM - 12:45PM	ನಗಿಸುವವನ ಮನದ ಮಾತು	ಗಂಗಾವತಿ ಪ್ರಾಣೇಶ್, ಡಾ. ಮಾಧುರಿ ಕುಲಕರ್ಣಿ
12:45PM - 01:45PM	ಅಂತರ್ಜಾಲ ಯುಗದಲ್ಲಿ ಸಂಬಂಧಗಳ ಸುಳಿಗಳು	ಉಷಾ ನರಸಿಂಹನ್, ಬಿ.ಆರ್. ನಾಗರತ್ನ, ಸಂಧ್ಯಾರಾಣಿ, ಎನ್ ವಸುಮತಿ ಉಡುಪ
01:45PM - 02:45PM	ಆನ್‌ಲೈನ್ ಸಂಬಂಧಗಳ ಸಮಾಜದಲ್ಲಿ ಕವನಗಳ ಪ್ರಸ್ತುತತೆ	ಹೆಚ್.ಎಸ್. ಶಿವಪ್ರಕಾಶ್, ಡಾ. ಕೃತಿ ಆರ್, ಮಧುರಾಣಿ, ಆರಿಫ್ ರಾಜ, ರಾಜೇಂದ್ರ ಪ್ರಸಾದ್, ಎಂ.ಎಸ್ ಶೇಖರ್
02:45PM - 03:45PM	ಅಜ್ಞಾತ ಅಲೆಮಾರಿ ಕಲಾವಿದರ ಜೊತೆಗೆ 60 ನಿಮಿಷಗಳು	[illegible] ಅಬ್ದುಲ್ ರಶೀದ್
03:45PM - 04:45PM	ಪ್ರಕಾಶನ ಕಲೆ– ಓದುಗರ ಮತ್ತು ಲೇಖಕರ ನಡುವಿನ ಕೊಂಡಿ	ಜಮೀಲ್ ಸಾವಣ್ಣ, ಪ್ರತಿಭಾ ಛಾಯಪತಿ, ಸಿಂಗರಾಜು ಚಿತ್ರಣನವರ್, ಅಭಿರುಚಿ ಗಣೇಶ್, ಮೀನಾ ಮೈಸೂರು
04:45PM - 05:30PM	ಭಾಷಾಂತರ : ಸಾಂಸ್ಕೃತಿಕ ಸಂಬಂಧಗಳ ಜಾಲತಾಣದ ಪಾಸ್ ವರ್ಡ್	ಪ್ರಧಾನ್ ಗುರುದತ್ತ, ವಿಕ್ರಂ ಚದುರಂಗ, ಧರ್ಮೇಂದ್ರ ಕುಮಾರ್
05:30PM - 06:15PM	ಸಮಾಜ ಪರ ಪೊಲೀಸ್ : ಬಲಾಢ್ಯ ಹೃದಯವಂತಿಕೆ	ರವಿಚನ್ನಣ್ಣನವರ್

•ಪುಸ್ತಕ ಮಾರಾಟ ಮತ್ತು ಪ್ರದರ್ಶನಗಳು
•ಚಿಂತನ ಚಿತ್ತಾರ, ಮೈಸೂರು
•ಪುಸ್ತಕಗಳನ್ನು ಬದಲಾಯಿಸಿ ಕೊಳ್ಳುವ ಸ್ಥಳ
•ಮೈಸೂರಿನ ಸಮಕಾಲೀನ ಬರಹಗಾರರ ಪುಸ್ತಕ ಮಾರಾಟ ಸ್ಥಳ

ಶುಭಾ ಸಂಜಯ್ ಅರಸ್
ನಿರ್ದೇಶಕರು
ಮೈಸೂರು ಸಾಹಿತ್ಯ ಸಂಭ್ರಮ

ಮೈಸೂರು ಸಾಹಿತ್ಯ ಸಂಭ್ರಮ 2024

• ಅನಿರೀಕ್ಷಿತ ಸಂದರ್ಭಗಳಿಂದಾಗಿ ವೇಳಾಪಟ್ಟಿ ಬದಲಾವಣೆಗೆ ಒಳಪಟ್ಟಿರುತ್ತದೆ.

ಎರಡು ದಿನ ನಡೆಯುವ ಈ ಸಂಭ್ರಮದಲ್ಲಿ ಕನ್ನಡ ಮತ್ತು ಇಂಗ್ಲಿಷ್ ಭಾಷೆಗಳಲ್ಲಿ ಸಮಾನಾಂತರವಾಗಿ 30ಕ್ಕೂ ಹೆಚ್ಚು ಗೋಷ್ಠಿಗಳು ನಡೆಯಲಿವೆ. ಕನ್ನಡದ ಜನಪ್ರಿಯ ನಟರಾದ ರಮೇಶ್ ಅರವಿಂದ್, ನಿರ್ದೇಶಕ ಗಿರೀಶ್ ಕಾಸರವಳ್ಳಿ ಡಾ.ಪ್ರಧಾನ್ ಗುರುದತ್ತ, ಎಚ್.ಎಸ್.ಶಿವಪ್ರಕಾಶ್, ವಿವೇಕ್ ಶಾನುಭಾಗ್, ಡಾ.ಖಾದರ್, ಪ್ರಾಣೇಶ್, ಗೋಪಾಲಕೃಷ್ಣ ಪೈ, ಸುರೇಶ್ ಹೆಬ್ಳೀಕರ್, ವಸುಮತಿ ಉಡುಪ, ಉಷಾ ನರಸಿಂಹನ್, ಡಾ.ಕಬ್ಬಿನಾಲೆ ವಸಂತ ಭಾರದ್ವಾಜ್, ಸಂಧ್ಯಾರಾಣಿ, ಅಬ್ದುಲ್ ರಶೀದ್, ಮೀನಾ ಮೈಸೂರು ಮತ್ತು ಇನ್ನೂ ಹಲ ಹಿರಿ ಕಿರಿ ಸಾಹಿತ್ಯ ದಿಗ್ಗಜರು ಭಾಗವಹಿಸುತ್ತಿರುವ ಈ ಸಾಹಿತ್ಯ ಸಂಭ್ರಮದಲ್ಲಿ ಹಲವು ಪ್ರಸಿದ್ಧ ಪ್ರಕಾಶನ ಸಂಸ್ಥೆಗಳು ತಮ್ಮ ಪುಸ್ತಕ ಮಳಿಗೆಗಳನ್ನು ತೆರೆಯಲಿವೆ. ಪುಸ್ತಕಗಳ ಬಿಡುಗಡೆಯೂ ನೆರವೇರಲಿದೆ.

ಕತೆ, ಕಾದಂಬರಿ, ಅನುಭವ ಕಥನ, ಆರೋಗ್ಯ, ಪುಸ್ತಕ ಲೋಕ, ಮಹಿಳಾ ಸಾಹಿತ್ಯ, ಸಾಹಿತ್ಯದ ಮೇಲೆ ಪ್ರಚಲಿತ ವಿದ್ಯಮಾನಗಳ ಪ್ರಭಾವ, ಕನ್ನಡ ಸಂಸ್ಕೃತಿಯನ್ನು ಇನ್ನೂ ಜೀವಂತವಾಗಿರಿಸಿರುವ ವ್ಯಕ್ತಿತ್ವಗಳ ಪರಿಚಯ, ಪರಿಸರ ಪ್ರಜ್ಞೆಯ ಕುರಿತು ಚಿಂತನೆ ಎಲ್ಲವೂ ಇರಲಿದೆ. ಈ ಜಿಜ್ಞಾಸೆಗಳಲ್ಲಿ ದಣಿದ ಮನವನ್ನು ತಣಿಸಿ ರಂಜಿಸಲು ನಾಟಕ ಮತ್ತು ತಾಳಮದ್ದಲೆ ಪ್ರಸ್ತುತಿಯೂ ಇರಲಿದೆ. ಒಟ್ಟಾರೆಯಾಗಿ ಇಡೀ ಎರಡು ದಿನಗಳ ಕಾಲ ನಡೆಯುವ ಗೋಷ್ಠಿಗಳು ಸಾಹಿತ್ಯ ಪ್ರಿಯ ಸಜ್ಜನರನ್ನು ಮಂತ್ರಮುಗ್ಧಗೊಳಿಸುವಂತಿವೆ.

ಮೈಸೂರಿನ ಹೃದಯ ಭಾಗದಲ್ಲಿರುವ ಸದರ್ನ್ ಸ್ಟಾರ್ ಹೋಟೆಲಿನಲ್ಲಿ ನಡೆಯುವ ಈ ಸಮೃದ್ಧ ಸಾಹಿತ್ಯ ಸಂಭ್ರಮಕ್ಕೆ ಎಲ್ಲರಿಗೂ ಮುಕ್ತ ಮತ್ತು ಉಚಿತ ಪ್ರವೇಶವಿರುತ್ತದೆ. ಪಂಚತಾರಾ ಹೋಟೆಲಿನಲ್ಲಿ ನಡೆಯುವ ಈ ಕಾರ್ಯಕ್ರಮಕ್ಕೆ ಆಸಕ್ತಿ ಯಿದ್ದರೂ ಹಾಜರಾಗಲು ಹಿಂಜರಿಯುವ ಮನಸು ಗಳಿಗೆ ಆಯೋಜಕಿ ಶುಭಾ ಸಂಜಯ್ ಹೇಳುವುದು, "ಇದು ಕನ್ನಡ ಸಾಹಿತ್ಯ ಪ್ರಿಯರಿಗಾಗಿ ನಡೆಯುವ ಅಚ್ಚ ಸಾಹಿತ್ಯದ ಸಮಾರಂಭ. ಹೃದಯ ಭಾಗದಲ್ಲಿರುವ ಈ ಸ್ಥಳ ಅತ್ಯಂತ ಅನುಕೂಲಕರ ಎಂಬುದಷ್ಟೇ ನಮ್ಮ ಯೋಜನೆ. ಇಲ್ಲಿ ನಿಮಗೆ ಯಾವುದೇ ಆಡಂಬರವಾ ಗಲೀ ಬಡಿವಾರ ಬಿಂಕಗಳು ಅನು ಭವಕ್ಕೆ ಬರುವುದಿಲ್ಲ. ನಿಮಗೆ ಶುದ್ಧ ಸಾಹಿತ್ಯವನ್ನಷ್ಟೇ ನಾವು ಉಣಬಡಿಸುವುದು.



ಶುಭಾ ಸಂಜಯ್ ಅರಸ್

ಸಾಹಿತ್ಯ ಸಂಭ್ರಮಗಳು ನಮಗೆ ಹೊಸತೇನಲ್ಲ. ಪುರಾಣಕಾಲದಿಂದಲೂ ನಮ್ಮಲ್ಲಿನ ಭಾರತೀಯ ರಾಜಮಹಾರಾಜರು ಕಾವ್ಯವನ್ನು ಆಸ್ವಾದಿಸುವ ಮನಸ್ಸುಳ್ಳವರಾಗಿ ಕನ್ನಡದ ಅಕ್ಷರಕೆ ಲಕ್ಷಹೊನ್ನು ಎಂದು ಕವಿಗಳನ್ನು ಸನ್ಮಾನಿಸಿದ್ದವರು. ಕನಕಾಭಿಷೇಕ ಕೂಡ ಮಾಡಿದವರು. ಆಸ್ಥಾನ ಕವಿಗಳನ್ನು ಉತ್ತಮ ಕಾವ್ಯ ರಚನೆಗೆ ಪ್ರೋತ್ಸಾಹಿಸಿ ಉತ್ಸವಗಳಲ್ಲಿ ಅವು ಗಳ ವಾಚನವನ್ನು ಎಲ್ಲರಿಗಾಗಿ ಆಯೋಜಿಸುತ್ತಿದ್ದವರು. ಅನುಭವ ಮಂಟಪ ನಮಗೆ ಗೊತ್ತು. ಮೈಸೂರು ಅರಸರ ಸಾಹಿತ್ಯಪ್ರೀತಿ ನಮಗೆ ಗೊತ್ತು.

ಬದಲಾಗಿರುವ ಈ ಕಾಲದಲ್ಲಿ, ಸಮಯದ ಅಭಾವ, ಸಾಮಾಜಿಕ ಜಾಲತಾಣಗಳ ಬಲೆಯಲ್ಲಿ ಸಿಲುಕಿ ಕೊಂಡಿರುವ ನಮಗೆ, ಎಲ್ಲವನ್ನು ಒಂದು ತಟ್ಟೆಯಲ್ಲಿ ಅಂದವಾಗಿ ಜೋಡಿಸಿಟ್ಟು ಆಹ್ವಾನ ಕೊಟ್ಟ ಹಾಗೆ, ಈ ಸಮ್ಮೇಳನಗಳು ನಮ್ಮ ಸಾಹಿತ್ಯ ಪ್ರೀತಿಗೆ ನೀರೆರೆಯುತ್ತಿವೆ. ಅವುಗಳ ಸದುಪಯೋಗ ಮಾಡಿಕೊಂಡು ನಾವೂ ಸೃಜನಶೀಲರಾಗೋಣ. ಎಲ್ಲರಲ್ಲೂ ಸೃಜನ ಶೀಲತೆ ಸ್ಫುರಿಸುವಂತೆ ಮಾಡೋಣ.

ರಾಯಲ್ ಸಿಟಿ ಕ್ಲಬ್‌ನ ಅಧ್ಯಕ್ಷರಾಗಿ ಲಯನ್ ಕೆ.ಆರ್ ಭಾಸ್ಕರಾನಂದ ಆಯ್ಕೆ



ಮೈಸೂರಿನ ಕೇರ್ಗಳ್ಳಿಯ ಖಜಾನೆ ಬಡಾವಣೆಯಲ್ಲಿರುವ ರಾಯಲ್ ಸಿಟಿ ಕ್ಲಬ್‌ನ 2024–26ನೇ ಸಾಲಿನ ಅಧ್ಯಕ್ಷರಾಗಿ ಐದನೇ ಬಾರಿಗೆ ಲಯನ್ ಕೆ.ಆರ್. ಭಾಸ್ಕರಾನಂದ, ಉಪಾಧ್ಯಕ್ಷರಾಗಿ ಎಸ್.ಕೆ.ಗೋಪಾಲಯ್ಯ, ಕಾರ್ಯದರ್ಶಿಯಾಗಿ ಸಿ.ನಾಗರಾಜ್, ಜಂಟಿ ಕಾರ್ಯದರ್ಶಿಯಾಗಿ ಎನ್.ರಮೇಶ್, ಖಜಾಂಚಿಯಾಗಿ ಕೆ.ಆರ್.ಶ್ರೀರಂಗಯ್ಯ, ನಿರ್ದೇಶಕರಾಗಿ ಜಯರಾಂ, ತಿಮ್ಮರಾಜು, ಗಿರೀಶ್, ಹೆಚ್.ವಿ.ಚಂದ್ರೇಗೌಡ, ಎಸ್.ಎನ್.ಮಂಜುನಾಥ್, ಸುರೇಶ್, ಲಕ್ಷ್ಮಿ ನಾರಾಯಣ್, ರೋಟರಿಯನ್ ಸತೀಶ್, ಎನ್.ಶಿವಶಂಕರ್ ಪದಾಧಿಕಾರಿಗಳಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಚೀನಾದ 116 ಅಕ್ರಮ ವಲಸಿಗರನ್ನು ಗಡೀಪಾರು ಮಾಡಿದ ಅಮೆರಿಕ

ವಾಷಿಂಗ್ಟನ್, ಜು.3– 5 ವರ್ಷಗಳಲ್ಲಿ ಇದೇ ಮೊದಲ ಬಾರಿಗೆ ಚೀನಾದ 116 ಮಂದಿ ಅಕ್ರಮ ವಲಸಿಗರನ್ನು ಅಮೆರಿಕದಿಂದ ಗಡೀಪಾರು ಮಾಡಲಾಗಿದೆ. ದೊಡ್ಡ ಚಾರ್ಟರ್ ವಿಮಾನದಲ್ಲಿ ಚೀನಿಯರನ್ನು ತವರಿಗೆ ಕಳುಹಿಸಲಾಗಿದೆ.

ಮುಂಬರುವ ಅಮೆರಿಕದ ಅಧ್ಯಕ್ಷೀಯ ಚುನಾವಣೆಯಲ್ಲಿ ಅಕ್ರಮ ವಲಸಿಗರ ವಿಷಯ ಅತ್ಯಂತ ಪ್ರಮುಖ ಚರ್ಚಾ ವಿಷಯಗಳಲ್ಲಿ ಒಂದಾಗಿದೆ. ಕಾನೂನುಬಾಹಿರವಾಗಿ ಅಮೆರಿಕದಲ್ಲಿ ನೆಲೆಸಿರುವ ವಿದೇಶಿಗರನ್ನು ಗಡೀಪಾರು ಮಾಡಲು ನಿರಂತರವಾಗಿ ನಮ್ಮ ವಲಸೆ ಕಾನೂನನ್ನು ಜಾರಿಗೊಳಿಸುತ್ತಿರುತ್ತೇವೆ ಎಂದು ಹೋಮ್‌ಲ್ಯಾಂಡ್ ಕಾರ್ಯದರ್ಶಿ ಅಲೆಜಾಂಡ್ರೊ ಮಯೊರ್ಕಾಸ್ ಹೇಳಿದ್ದಾರೆ. ಅನಿಯಮಿತ ವಲಸೆಯನ್ನು ನಿಯಂತ್ರಿಸಲು ಮತ್ತು ತಡೆಯಲು ಹಾಗೂ ವಿಸ್ತೃತ ಕಾನೂನು ಜಾರಿ ಪ್ರಯತ್ನಗಳ ಮೂಲಕ ಅಕ್ರಮ ಮಾನವ ಕಳ್ಳಸಾಗಣೆಗೆ ಕಡಿವಾಣ ಹಾಕಲು ಚೀನಾ ಜೊತೆ ಅಮೆರಿಕ ಕಾರ್ಯನಿರ್ವಹಿಸುತ್ತಿದೆ ಎಂದು ಇಲಾಖೆ ಹೇಳಿದೆ. ಈಗ ಗಡೀಪಾರು ಮಾಡಲಾಗಿರುವ ಚೀನಾ ವಲಸಿಗರು ಅಮೆರಿಕದಲ್ಲಿ ಎಷ್ಟು ಸಮಯದಿಂದ ಇದ್ದರು ಎಂಬ ಪ್ರಶ್ನೆಗಳಿಗೆ ಅಮೆರಿಕ ಪ್ರತಿಕ್ರಿಯೆ ನೀಡಿಲ್ಲ. ಚೀನಿಯರ ವಲಸೆ ವಿಚಾರವನ್ನು ರಿಪಬ್ಲಿಕ್ ಪಕ್ಷ, ಅಮೆರಿಕ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಿರಂತರವಾಗಿ ಪ್ರಸ್ತಾಪಿಸಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600+30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 2496522/23

A It Hardware Sales And Services Company Requires Technical Trainees & Experienced Engineers. Any Qualification Contact
Absolute Technologies Sarawathipuram, Mysore
9880302902 | 9845064384

SITE FOR SALE
#1243, 30x40 North face, Opposite park, Full White Transaction
8217042841

ಬೇಕಾಗಿದ್ದಾರೆ
1) ಸೆಕ್ಯೂರಿಟಿ ಸೂಪರ್‌ವೈಸರ್
2) ಸೆಕ್ಯೂರಿಟಿ ಗಾರ್ಡ್ಸ್
3) ಹೌಸ್ ಕೀಪರ್ (ಸ್ವಚ್ಛಕೆಲಸಗಾರರು)
ಪುರುಷರು ವಯಸ್ಸು 25 ರಿಂದ 50 ವರ್ಷದೊಳಗಿರಬೇಕು. ಆಕರ್ಷಕ ವೇತನ: ESI, PF ಸೌಲಭ್ಯವಿರುತ್ತದೆ.
ಸಂಪರ್ಕಿಸಿ: ಕರ್ನಾಟಕ ಸೆಕ್ಯೂರಿಟಿ ಏಜೆನ್ಸಿ ನಂ. 513, ಕೆ.ಎನ್.ಅಗ್ರಹಾರ, ಕೆ.ಆರ್.ಮೊಹಲ್ಲಾ, ಮೈಸೂರು–24
0821-4247385

JOB OPENING
FOR WOMEN EMPLOYEES ONLY
Age group 30 to 45 Years
Education Degree/Diploma
Salary 15 K to 20K
ESI and PF
8050292837

HOUSE FOR RENT
3BHK East facing ; Vidyanagara Opposite Teresian College
9880700580
8861576939
Brokers Execuse

WANTED
COMPUTER TYPIST (Male / Female) FOR ADVOCATE OFFICE
Qualification: Typing - English & Kannada (Kan - Nudi / Baraha) in M.S. Word & Excel / Page Maker 9.30 am to 5.30 pm. Sunday: 10.30 to 3 pm. Salary: 15,000/- per month. For evening: (Male only). 7.00 pm to 11.30 pm. Salary: Rs. 10,000/- per month.
7349337469, 9448525072

HOME APPLIANCES SERVICE
ಫ್ರಿಡ್ಜ್, ವಾಶಿಂಗ್‌ಮೇಶೀನ್, ಮೈಕ್ರೋ ವೋವೆನ್, ಎಲ್‌ಸಿಡಿ, ಸೋಲಾರ್, ಯುಪಿಎಸ್, ಗೀಸರ್, ಸೇಲ್ಸ್ ಅಂಡ್ ಸರ್ವೀಸ್, ನಿಮ್ಮ ಮನೆಯ ಹತ್ತಿರ ದೊರೆಯುತ್ತದೆ.
Contact: Srinivas
9379699229

neem BOND PLATINUM®
PLYWOOD DOORS
10 YEARS WARRANTY
@ FACTORY DEPOT RATES
✆9731591267, 9901291267

ಶ್ರೀ ಗೌರೀಶಂಕರ ಟ್ರಾವೆಲ್ಸ್
14–7–24 (1 ದಿನ): ಘಾಟಿ ಸುಬ್ರಮಣ್ಯ, ಇಶಾ ಫೌಂಡೇಶನ್. 28–7–24 (6 ದಿನ): ಅಯೋಧ್ಯೆ, ಕಾಶಿ, ಗಯಾ, ಪ್ರಯಾಗ್‌ರಾಜ್. 24–8–24 (4 ದಿನ): ಉಜ್ಜಯಿನಿ, ಓಂಕಾರೇಶ್ವರ, ಇಂದೋರ್. 28–9–24 (4 ದಿನ): ಭೀಮಾಶಂಕರ, ಘೃಶ್ನೇಶ್ವರ, ಶಿರಡಿ, ತ್ರ್ಯಯಂಬಕೇಶ್ವರ. (ವಿಮಾನ, ಎಸಿ ಬಸ್, ಊಟ, ರೂಂ)
Mob: 9620002114

SK CONSTRUCTION
ಹೊಸ ಮನೆ ಕಟ್ಟಬೇಕೆ ಚಿಂತೇ ಬೇಡ ನಿಮ್ಮ ಕೈಗೆಟುಕುವ ಬೆಲೆಯಲ್ಲಿ ಅತಿ ಉತ್ತಮ ಗುಣಮಟ್ಟದಲ್ಲಿ Engineer Plan, 3D Elevation ಸಹಿತ ನಾವೇ ಲೋನ್ ಮಾಡಿ ನಿಮ್ಮ ಕನಸಿನ ಮನೆ ಕಟ್ಟಿ ಕೊಡುತ್ತೇವೆ.
9620528490

ಹೋಟೆಲ್ ಬಾಡಿಗೆಗೆ ದೊರೆಯುತ್ತದೆ
ಚಾಮರಾಜನಗರದ, ಪಚ್ಚಪ್ಪ ಸರ್ಕಲ್ ಹತ್ತಿರ ಸೌತ್ ಇಂಡಿಯನ್ ಹೋಟೆಲ್ (ಸಸ್ಯಾಹಾರಿ) ಸುಸಜ್ಜಿತ ವ್ಯವಸ್ಥೆಯೊಂದಿಗೆ ಬಾಡಿಗೆಗೆ ದೊರೆಯುತ್ತದೆ. ಆಸಕ್ತರು ಸಂಪರ್ಕಿಸಿ:
9880806789
9341090513

ವೃದ್ಧಾಶ್ರಮ
ನಮ್ಮ ಸಂಸ್ಥೆಯಲ್ಲಿ ವಯಸ್ಸಾದ ವೃದ್ಧರು, ಪುರುಷ ಮತ್ತು ಮಹಿಳೆಯರಿಗೆ ಹಾಸಿಗೆ ಹಿಡಿದ ವೃದ್ಧರು ಮತ್ತು ಪಾರ್ಶ್ವವಾಯು ಪೀಡಿತರನ್ನು ನಮ್ಮ ಸಂಸ್ಥೆಯಲ್ಲಿ ನೋಡಿಕೊಳ್ಳಲಾಗುವುದು ನಮ್ಮ ಸಂಸ್ಥೆಯಲ್ಲಿ ಸಸ್ಯಹಾರಿ ತಿಂಡಿ–ಊಟ ಮತ್ತು ಬಿಸಿ ನೀರಿನ ಸೌಲಭ್ಯ, ನಿಯಮಿತ ವೈದ್ಯಕೀಯ ಸೌಲಭ್ಯವಿರುತ್ತದೆ, ಇಚ್ಛೆಯುಳ್ಳವರು ಸಂಪರ್ಕಿಸಿ:
9110455297 | 9591557126

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

HOUSE FOR SALE 30'X40'
HEBBAL RING ROAD - KIADB LAYOUT
Ground Floor - PARKING + 1BHK
1st Floor - 2 BHK
2nd Floor - 2 BHK DUPLEX
Behind Bharat Petrol Bunk
CONTACT :
8618213845 | 7795448940

ಬೇಕಾಗಿದ್ದಾರೆ
ಮೈಸೂರಿನ ಇನ್ಫೋಸಿಸ್‌ಗೆ ಪುರುಷರು ಅಭ್ಯರ್ಥಿಗಳು
ಸೆಕ್ಯೂರಿಟಿ ಗಾರ್ಡ್ಸ್
ಆಕರ್ಷಕ ಸಂಬಳ : 21,000/-
ವಿದ್ಯಾರ್ಹತೆ: 10ನೇ ತರಗತಿ & ಪಿಯುಸಿ ತೇರ್ಗಡೆ
ವಯಸ್ಸು : 22 ರಿಂದ 40 ವರ್ಷ
78296 48007

V-GUARD
10 ವರ್ಷಗಳ ವ್ಯಾರಂಟಿ
Solar Water Heater SALES & SERVICE
BAJAJ FINSERV
SUNZONE SOLAR SYSTEM
VM Double Road, Kuvempunagar, Mysuru
9845175443

ಬೇಕಾಗಿದ್ದಾರೆ
OFFICE ASSISTANT (MALE)
TELECALLER (FEMALE)
R-155, 7th Main, Hebbal Industrial, Estate Mysore-16
9448247741
9448186377

SITE FOR SALE
40X60 W/F
LALBAHADUR SASTRI NAGARA MYSORE
9844985868

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8618373596

ಮೆಕ್ಯಾನಿಕ್ ಬೇಕಾಗಿದ್ದಾರೆ
ಮೈಸೂರಿನ ಮೇಟಗಳ್ಳಿಯಲ್ಲಿರುವ ಸಣ್ಣ ಕೈಗಾರಿಕಾ ಘಟಕಕ್ಕೆ, ಕೈಗಾರಿಕಾ ಘಟಕದಲ್ಲಿ ಕನಿಷ್ಠ 3 ವರ್ಷ ಅನುಭವವಿರುವ ITI ಯಾದವರು ಬೇಕಾಗಿದ್ದಾರೆ. ಆಸಕ್ತರು ಸಂಪರ್ಕಿಸಿ:
90350 08247

ADMISSION OPEN
Govt.of Karnataka Dept. of Tourism
FOOD CRAFT INSTITUTE-MYSURU
EXHIBITION GROUND. ITTEGEGUDU
HOTEL MANAGEMENT
100% Job Placements | Govt. College | 80% Practical Classes
www.fcimysuru.com
6362018821

ಸುವರ್ಣ ಯಾತ್ರ
1. ನೇಪಾಳ ಪ್ರವಾಸ ಒಂಭತ್ತು ದಿನಗಳು ಮುಕ್ತಿನಾಥ ಪಶುಪತಿನಾಥ ಕಠ್ಮಂಡು – 27–7–24
2) ಗುಜರಾತ್ ಪ್ರವಾಸ – ಎರಡು ಜ್ಯೋತಿರ್ಲಿಂಗ ಸೇರಿ 8 ದಿನಗಳು– 18–7–24
3. ಕಾಶಿ ಅಯೋಧ್ಯ ಪ್ರವಾಸ 7 ದಿನಗಳು 23–7–24 ಹಾಗೂ 1–08–24
9480843945
8660233673

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8861401315

MUDA SITE FOR SALE
ಸಾತಗಳ್ಳಿ ರಿಂಗ್ ರೋಡ್ ನಿಂದ 1km ದೂರದಲ್ಲಿರುವ "ಅಡ್ವೋಕೇಟ್ ಲೇಔಟ್"ನಲ್ಲಿ 31'×60' ಅಳತೆಯ NORTH-WEST ಕಾರ್ನರ್ ಸೈಟ್.
ಬೆಲೆ – 3500/- Per Sqft [Negotiable]
9886048471

MUDA ಸೈಟ್ ಮಾರಾಟಕ್ಕಿದೆ
ಮೈಸೂರು
K.C. ಲೇಔಟ್‌ನಲ್ಲಿ 40'×60' ಅಳತೆಯ South ಫೇಸಿಂಗ್ ಸೈಟ್.
ಬೆಲೆ– 8250/- Per Sqft
9886048471

Kashi - Ayodhya - Prayagraj escorted group tour.
Mysore to Bangalore by Fly Bus and Kashi by flight. July 30, Aug. 12 & Sept. 15 - 5 Days. Rs. 38,000/- (All inclusive). 1st 5 persons Rs. 1000/- discount. For all national and international package tours. Contact:
Prism Tours & Travels with Apna Holidays
Hebbal, Mysore-570 017
9886609990, 8310642530

ವಿಶೇಷತೆ ಆರ್ಥೋಪೆಡಿಕ್ ಕ್ಲಿನಿಕ್
ಪಾದ ಮತ್ತು ಪಾದದ ಕೀಲಿನ ಸಮಸ್ಯೆಗಳಿಗೆ
ಭೇಟಿ ಕೊಡಿ : ಮಹಾವೀರ್ ಪಾದ ಮತ್ತು ಪಾದದ ಕೀಲಿನ ಸೆಂಟರ್ ನಂ. 926, ವಿಶ್ವಧಾತ್ರಿ ರಸ್ತೆ, ವಿವೇಕಾನಂದನಗರ, ವಿವೇಕಾನಂದ ವೃತ್ತ, ಮೈಸೂರು–23
ಪ್ರತಿ ಮಂಗಳವಾರ ಬೆ. 9 ರಿಂದ ಮ.12
ಫಿಸಿಯೋಥೆರಪಿ ಪ್ರತಿ ದಿನ ಸಂಜೆ 5.30PM-8PM
ಸಂದರ್ಶನಕ್ಕೆ ಕರೆ ಮಾಡಿ
7204080539, 0821-4000961
Main Clinic ಬೆಂಗಳೂರಿನಲ್ಲಿ

CHANGE OF NAME
I, SHINEY DION, residing at # 4532, Ashirvad, 3rd Stage, Dattagalli Extension, Chamaraja Mohalla, Mysore-570022, do hereby solemnly affirm & state on oath that, I have changed my name from SHINEY DION KALYANSING to SHINEY DION on my own free will vide affidavit sworn in before Notary Rama devi.M on 28/06/2024.
Sd/- SHINEY DION

ಹೊಸ ಮನೆ ಮಾರಾಟಕ್ಕಿದೆ
ಸರ್ದಾರ್ ವಲ್ಲಭಾಯಿಪಟೇಲ್ ನಗರ ಮುಡಾ ಅನುಮೋದಿತ ಲೇಔಟ್ 20*40 ಅಡಿ, ಪೂರ್ವ ದಿಕ್ಕು, 3 ಬಿಹೆಚ್‌ಕೆ, ಬೋರ್‌ವೆಲ್ ಮತ್ತು ಪಿಲ್ಲರ್ ಹೊಂದಿದೆ, 100% ವಾಸ್ತು, ಉತ್ತಮ ಗುಣಮಟ್ಟದ ಹೊಸ ಮನೆ
Call: 9380284276

ಕೊಳ್ಳೇಗಾಲದ ಜ್ಯೋತಿಷ್ಯರು
ಪಂ. ಎಸ್. ಕುಮಾರಸ್ವಾಮಿ (ಮೋಡಿ ಮಾಂತ್ರಿಕರು)
MOB: 9880583804
ಇವರು ಕೊಳ್ಳೇಗಾಲದ ಚೌಡಿ, ಭೂತರಾಯ ಅಘೋರ ಶಕ್ತಿಯಿಂದ ಸ್ತ್ರೀ ಪುರುಷ ಪ್ರೇಮ, ದಾಂಪತ್ಯ ಸಮಸ್ಯೆ, ಶತ್ರು ದೋಷ, ಸಾಲ ಬಾಧೆ, ಯಾವುದೇ ಸಮಸ್ಯೆಗಳಿಗೆ ಮೋಡಿ ಮಾಂತ್ರಿಕ ಶಕ್ತಿಯಿಂದ ಚೌಡಿ ಮತ್ತು ಭೂತರಾಯನ ಪ್ರಯೋಗದಿಂದ ಎರಡೇ ದಿನದಲ್ಲಿ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ಎಟಿಎಂ ಪಕ್ಕ, ಟಿಕೆಟ್ ಬುಕ್ಕಿಂಗ್ ಕೌಂಟರ್ ಹತ್ತಿರ (ರಿಲಾಯನ್ಸ್ ಮಾಲ್) (ಕೆ.ಎಸ್.ಆರ್.ಟಿ.ಸಿ) ಸಬರ್ಬ್ ಬಸ್ ಸ್ಟ್ಯಾಂಡ್, ಮೈಸೂರು–1

ಬೇಕಾಗಿದ್ದಾರೆ
ಸನ್‌ಡೈರೆಕ್ಟ್ ಡಿ.ಟಿ.ಹೆಚ್.ನಲ್ಲಿ ಟೆಕ್ನಿಷಿಯನ್ ಆಗಿ ಕೆಲಸ ಮಾಡಲು ದ್ವಿಚಕ್ರ ವಾಹನವಿರುವ ಹುಡುಗರು ಬೇಕಾಗಿದ್ದಾರೆ. ITI, SSLC, PUC ಪಾಸ್ ಅಥವಾ ಫೇಲ್ ಆಗಿದ್ದವರು ತರಬೇತಿಯನ್ನು ನಾವೇ ಕೊಡುತ್ತೇವೆ. ಆಕರ್ಷಕ ಸಂಬಳ ಮತ್ತು ಇನ್‌ಸೆಂಟೀವ್ ಇರುತ್ತದೆ. ಸಂಪರ್ಕಿಸಿ
9964555920, 8867019475

MUDA ALLOTED SITE FOR SALE
ದಟ್ಟಗಳ್ಳಿ 3ನೇ ಹಂತದಲ್ಲಿ 30'×40' ಅಳತೆಯ EAST ಫೇಸಿಂಗ್ ಮೂಡಾ ಸೈಟ್.
9886048471

ಬೇಕಾಗಿದ್ದಾರೆ
ಹೋಟೆಲ್ ಉದ್ಯಮದಲ್ಲಿ ಅನುಭವವಿರುವ
* ಹೌಸ್‌ಕೀಪಿಂಗ್ ಹುಡುಗರು
* ಹೌಸ್‌ಕೀಪಿಂಗ್ ಮಹಿಳೆಯರು
30 ರೂಂಗಳಿರುವ ಪ್ರತಿಷ್ಠಿತ ಹೋಟೆಲ್ (ಲಾಡ್ಜ್)ಗೆ ಬೇಕಾಗಿದ್ದಾರೆ. ಸೆಂಟ್ ಫಿಲೋಮಿನಾ ಚರ್ಚ್ ಹತ್ತಿರ, ಅಶೋಕ ರಸ್ತೆ, ಮೈಸೂರು. ಸಂಪರ್ಕಿಸಿ:
6363477213, 9538651845

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7204494854

ಕೊಳ್ಳೇಗಾಲದ ಜ್ಯೋತಿಷ್ಯರು
ಜ್ಯೋತಿಷ್ಯ ರತ್ನ ಮೋಡಿ ಮಾಂತ್ರಿಕ ಪಂ॥ ಎಸ್.ಕೆ. ಪ್ರಶಾಂತ್ ಆಚಾರ್ಯ
ಮೊ: 9740947045
ಸ್ತ್ರೀ ಪುರುಷ ಪ್ರೇಮ, ಸಂತಾನ, ವಿವಾಹ, ದಾಂಪತ್ಯ ಸಮಸ್ಯೆ, ನಾಗದೋಷ, ಕುಜದೋಷ, ದುಷ್ಟಶಕ್ತಿ, ಪ್ರೇತಬಾಧೆ, ಸಾಲಬಾಧೆ, ವ್ಯಾಪಾರದಲ್ಲಿ ತೊಂದರೆ ತನ್ನವರೆ ತನಗೆ ಶತ್ರು ನಿಮ್ಮ ಯಾವುದೇ ಗುಪ್ತ ಹಾಗೂ ಕಠಿಣವಾದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಮಾಡುತ್ತಾರೆ. ಸ್ಥಳ: ಹೋಟೆಲ್ ಗೋವರ್ಧನ, ಡಾ॥ ರಾಜ್‌ಕುಮಾರ್ ಪಾರ್ಕ್ ಹತ್ತಿರ, ಶ್ರೀ ಹರ್ಷ ರಸ್ತೆ (ಹೊಸ ಸುಮಂಗಲಿ ಸಿಲ್ಕ್ಸ್ ಹತ್ತಿರ), ಮೈಸೂರು

Paramedical Science College, Mysore
(Affiliated to Kar.Govt) R R Nagar
ಪ್ರವೇಶ ತೆರೆದಿದೆ
DMLT, OT, IT, For SSLC/ PUC Pass/Fail Students contact
8073195952
Limit Seats

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8880558064

ಬೇಕಾಗಿದ್ದಾರೆ
ರೂಂ ಬಾಯ್ಸ್ – 2 ಹುದ್ದೆ
ಶ್ರೀ ಗಣೇಶ್ ಪ್ರಸಾದ್ ಲಾಡ್ಜ್
1096 ಶಿವರಾಂ ಪೇಟೆ ಮುಖ್ಯ ರಸ್ತೆ, ಮೈಸೂರು– 570001
9986756866

URGENTLY REQUIRED
5 LADY STAFF FOR SUPER MARKET IN MYSORE
9880721849

ಕಳೆದಿದೆ
ರಾಜಪ್ಪ ಎಂ., ನಾಗವಾಲ ಗ್ರಾಮ, ಇಲವಾಲ ಹೋಬಳಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ, ನನಗೆ ಸೇರಿದ ನಾಗವಾಲ ಗ್ರಾಮದ ಮನೆಯನ್ನು ಶುಚಿಗೊಳಿಸುವಾಗ ಸೇರಿದ ನಿವೇಶನ ಸಂ. 1/ಬಿ ಗೆ ನೀಡಿದ ಹಕ್ಕು ಪತ್ರವು ಆಕಸ್ಮಿಕವಾಗಿ ಕಳೆದುಹೋಗಿರುತ್ತದೆ.
ಸಿಕ್ಕಿದವರು ಸಂಪರ್ಕಿಸಿ:
Mob: 9902417885

AFFIDAVIT
I, Nithin Uthappa, residing at #306, Sowparnika Blue Bells Apartment, Vijayanagar 3rd Stage, Mysuru-570 030, hereby declare that my daughter name is Anvi Poovanna M. was born on 25-01-2010, and we taken her birth certificate. Her name is mentioned as Anvi Poovanna Mukkatira in her birth certificate & her name is mentioend as Anvi Poovanna M. in her school records. I declare that Anvi Poovanna M. has changed her name as Anvi Poovanna Mukkatira & also to get changed her name as Anvi Poovanna Mukkatira in her school records. I declare this in front of Notary S.N. Hemalatha on 2-07-2024.
Sd/- Nithin Uthappa

ಕಳೆದಿದೆ
ಈಶ್ವರ್ ನಟರಾಜ್, ಮನೆ ನಂ. 2962, 6ನೇ ಮೇನ್ ರೋಡ್, ವಿ.ವಿ. ಮೊಹಲ್ಲಾ, ಮೈಸೂರು ರಲ್ಲಿ ವಾಸವಾಗಿದ್ದು, ತಮ್ಮ ತಂದೆ ಕಾಲವಾದ ನಂತರ ಮೇಲ್ಕಂಡ ವಿಳಾಸದ ಮನೆಯ ಖಾತೆ ಕಂದಾಯ, ಅಸಲಿ ವಿಲ್ ಪತ್ರ ಮತ್ತು ಕುಟುಂಬದ ವಂಶವೃಕ್ಷ ಪತ್ರಗಳು, 20 ದಿನಗಳ ಹಿಂದೆ ಕಳೆದುಹೋಗಿದೆ.
ಸಿಕ್ಕಿದವರು ಸಂಪರ್ಕಿಸಿ:
Mob: 9483082273

ಪ್ರಮಾಣ ಪತ್ರ
ಮೈಸೂರು ಜಿಲ್ಲೆ, ಹೆಚ್.ಡಿ. ಕೋಟೆ ತಾಲ್ಲೂಕು, ಅಂತರಸಂತೆ ಹೋಬಳಿ, ನೇರಳೆ ಗ್ರಾಮದಲ್ಲಿ ವಾಸವಾಗಿರುವ ನಾನು ಪ್ರಮಾಣ ಮಾಡಿ ಹೇಳುವುದೇನೆಂದರೆ, ಆದಾಗಿ ನನ್ನ ಹೆಸರು ಶೇಖರ ಎನ್.ಎಸ್. ನನ್ನ ಆಧಾರ್ ಕಾರ್ಡ್ (8801 5075 7408) ನಲ್ಲಿ ನನ್ನ ಹೆಸರು ಸರಿಯಾಗಿ ಇರುತ್ತದೆ. ನಾನು ಮಹೇಂದ್ರ ಬ್ಯಾಂಕ್ ಲಿಮಿಟೆಡ್, ಸರಸ್ವತಿಪುರಂ ಶಾಖೆ, ಮೈಸೂರು ಇಲ್ಲಿ 9911189897 ನಂಬರಿನಲ್ಲಿ ಖಾತೆ ತೆರೆದಿದ್ದು, ಅದರಲ್ಲಿ ನನ್ನ ಹೆಸರನ್ನು Shekhara.S ಎಂದು ತಪ್ಪಾಗಿ ನಮೂದಾಗಿರುತ್ತದೆ. ಸದರಿ ಖಾತೆಯಲ್ಲಿ ನನ್ನ ಹೆಸರನ್ನು ಶೇಖರ ಎನ್.ಎಸ್. ಎಂದು ತಿದ್ದುಪಡಿ ಮಾಡಿಸಲು ಈ ಮೂಲಕ ನೋಟರಿ ಶ್ರೀನಿವಾಸ ಎನ್. ರವರ ಎದುರು ಪ್ರಮಾಣೀಕರಿಸಿರುತ್ತೇನೆ.
ಸಹಿ/– ಶೇಖರ ಎನ್.ಎಸ್.

ಉದ್ಯೋಗ ಅವಕಾಶ
ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th, SSLC, PUC, ITI, Any Degree ಪಾಸ್ / ಫೇಲ್ ಆದ ಯುವಕ / ಯುವತಿಯರು ಇಂದೇ ಬೇಕಾಗಿದ್ದಾರೆ. ESI / PF ನೊಂದಿಗೆ ಊಟ, ವಸತಿಯಿರುತ್ತದೆ. ಸಂಬಳ + ಓಟಿ, 15200 – 86,000.
8147560344, 7892046990

ಬೇಕಾಗಿದ್ದಾರೆ
ಮೈಸೂರಿನ ಪೆಟ್ರೋಲ್ ಬಂಕ್‌ನಲ್ಲಿ ಕೆಲಸಕ್ಕಾಗಿ ಪುರುಷರು/ಮಹಿಳೆಯರು ಬೇಕಾಗಿದ್ದಾರೆ.
ಸಂಬಳ: 15,000/–
8892258814

ಚಾಮುಂಡೇಶ್ವರಿ ಮ್ಯಾರೇಜ್ ಬ್ಯೂರೋ
ಒಕ್ಕಲಿಗ BE ವರನಿಗೆ ವಧುಬೇಕು ಕುಂಬಾರ, ವರನಿಗೆ ವಧು ಬೇಕು, ಮೊದಲಿಯಾರ್ ವರನಿಗೆ ವಧುಬೇಕು ಗಾಣಿಗ MSC ವರನಿಗೆ ವಧುಬೇಕು. 55 ವರ್ಷ ಮೇಲ್ಪಟ್ಟು ಅನುಕೂಲ ಇರುವ ವಿಧುರ ವಿಧವೆಗೆ ವರಬೇಕು. Cast No Bar ಎಲ್ಲಾ ಜಾತಿಯ ಮೊದಲನೇ ಮತ್ತು ಎರಡನೇ ಮರು ಮದುವೆಯಾಗುವ ವಿಚ್ಛೇದಿತರು, ವಿಧುರರು, ವಿಧವೆಯರು ನೇರವಾಗಿ ಸಂಪರ್ಕಿಸಿ.
(ಹಾಗೂ Man Power Placement)
ವಾಟ್ಸ್ ಅಪ್ ಮಾಡಿ 8951241381
9945622601

HOUSE FOR SALE
Vijayanagar 4th Stage, 1st Phase
4 Floors rent earning, 1 year old house,
30x40 MUDA
Price: Rs. 1.95 Cr.
500 Mtrs from Aishwarya Hospital
8660105902

SITES FOR SALE
Vijayanagar 4th Stage
30x40 - 69 Lakhs
30x50 - 78 Lakhs
West facing site, Preethi Layout, MUDA App.
8660105902

SITES for SALE
JP Nagar Ring Road
30x40
33 Lakhs
Near Gurur Bus Stop, Ramabainagar, Mysore.
DTCP approved (Corporation limits)
1.5 Kms from JP Nagar Ring Road
8660105902

ಅಂಜನ ಶಾಸ್ತ್ರದ ಮೂಲಕ ಪರಿಹಾರ
ಶ್ರೀ ಅಂಜನ ದೇವಿ ಆರಾಧಕರು ಪಂ॥ ಶ್ರೀನಿವಾಸ್ ಆಚಾರ್ಯ
ಮೈಸೂರಿನಲ್ಲಿ ಬಹು ವರ್ಷದಿಂದ ಖಾಯಂ ಆಗಿ ನೆಲೆಸಿರುತ್ತಾರೆ. ಅನೇಕ ಜನರು ಇವರಲ್ಲಿ ಪರಿಹಾರ ಪಡೆದಿರುತ್ತಾರೆ. ಇವರು ವಂಶಪಾರಂಪರ್ಯ ಜ್ಯೋತಿಷ್ಯರು, ಇವರಲ್ಲಿ ಜ್ಯೋತಿಷ್ಯ ಕೇಳಿದರೆ ನಿರಾಶೆ ಆಗುವ ಮಾತೆ ಇಲ್ಲ. ಫೋನಿನ ಮೂಲಕ ಪರಿಹಾರ.
Mob: 9663466548

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

WANTED
FEMALE STAFF FOR MEDICAL DISTRIBUTORS
10TH/PUC/DEGREE PASS OR FAIL
TIMINGS 10 AM - 7.30 PM
LOCATION: NEAR CITY BUS STAND
9739377827
7022345675

WANTED
OFFICE BOY
CALL BETWEEN : 10 AM TO 6 PM
7259016514

Poornima Medical Systems
Shop No. G3, Veerashaiva Anathalaya, Allamaprabhu Complex, 5th Cross, Ramanuja Road, Mysuru-570 004
WANTED
1) Marketing Executive - Male
2) System Operator - Male / Female (MS Office & Tally)
9845033351, 9972543351

Security Guard Wanted
ONLY FOR GENTS.
Qualification: SSLC pass and above. Salary: 19,000/-. Age: 25 to 45 years. Hours: 8 hours shift. Benefits: ESI, PF, Bonus, Gratuity, NFH etc. Location: Hebbal Industrial Area.
9538014456, 9008794218

ಪರಮ ಪ್ರಭು ಶ್ರೀ ಕೃಷ್ಣ ಜ್ಯೋತಿಷ್ಯಾಲಯ
ಪಂಡಿತ್ ವಾಸು ದೇವನ್
ಇವರು ವಂಶ ಪಾರಂಪರೆ ಜ್ಯೋತಿಷ್ಯರು ಚೈತನ್ಯದ ದರ್ಶನ, ಕರ್ಮ ನಿರ್ಮೂಲನೆ ಮಾಡಿಕೊಳ್ಳುವ ದಾರಿ, ಜೀವನದಲ್ಲಿ ಜಿಗುಪ್ಸೆ ದೂರ ಮಾಡಿಕೊಳ್ಳುವುದು ಹೇಗೆ, ಗೌಪ್ಯ ವಿಚಾರಗಳ ಮಾರ್ಗ, ಪಾಪ, ಕರ್ಮಗಳನ್ನು ಮುಕ್ತಗೊಳಿಸುವ ಆರೋಗ್ಯದ ತೊಂದರೆ ಇನ್ನೂ ಇತರೆ ಮುಂತಾದ ಸಮಸ್ಯೆಗಳಿಗೆ ಮಾರ್ಗದರ್ಶನವೇ ಈ ಜ್ಯೋತಿಷ್ಯ ಮಂದಿರ ಕೇವಲ 2 ದಿನದಲ್ಲಿ ಪರಿಹಾರ ಶತಸಿದ್ಧ. ಇಂದೇ ಭೇಟಿ ನೀಡಿ.
Mob: 9663038257

ವಧು–ವರರಿಗೆ ಸಂಪರ್ಕಿಸಿ
ಎಲ್ಲಾ ಜಾತಿಯ ವಧು–ವರರು ವಿಧುರ–ವಿಧವೆಯರು ವಿಚ್ಛೇದಿತರು, ವೈವಾಹಿಕ ಮಾಹಿತಿಗಾಗಿ ಸಂಪರ್ಕಿಸಿ
9036621339

ಹೋಮ್ ನರ್ಸ್
ವಯಸ್ಸಾದವರನ್ನು ನೋಡಿಕೊಳ್ಳಲು ಅನುಭವ ಇರುವ ಇಲ್ಲದೆ ಇರುವ ಹುಡುಗ/ಹುಡುಗಿಯರು ಬೇಕಾಗಿದ್ದಾರೆ. ಬೆಳಿಗ್ಗೆ ಅಥವಾ ರಾತ್ರಿ ಅಥವಾ 24 ಗಂಟೆಸೇವೆ ಮಾಡುವವರು ಸಂಪರ್ಕಿಸಿ ಹಾಗೂ ಮನೆ ಕೆಲಸದವರು ಸಂಪರ್ಕಿಸಿ
8123252840

WANTED
(RECEPTIONIST)
SERVICE APARTMENT, JPNAGAR. (FEMALE)
AGE - BELOW 30 YRS
LANGUAGE - ENGLISH, KANNADA, HINDI, FLUENCY
DEGREE WITH EXCEL, WORD COMPUTER KNOWLEDGE
9686225522

ಪ್ರದರ್ಶನಕಾರರು ಬೇಕಾಗಿದ್ದಾರೆ
ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು, ಹಾಸನ ಜಿಲ್ಲೆಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆಗಳಲ್ಲಿ ನಮ್ಮ ಭಾರತ ಮಕ್ಕಳ ಚಲನಚಿತ್ರವನ್ನು ಪ್ರದರ್ಶನ ಮಾಡಲು ಹಂಚಿಕೆದಾರರು ಬೇಕಾಗಿದ್ದಾರೆ. ಚಿತ್ರವು ಅಂಗೀಕೃತವಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: ಕುಮಾರಸ್ವಾಮಿ, ನಿರ್ದೇಶಕರು
9448263260

ತಕ್ಷಣ ಬೇಕಾಗಿದ್ದಾರೆ
ಹೂಟಗಳ್ಳಿ ಸುನಂದಾ ಸ್ಟಾಪ್ ದೇವೇಗೌಡ ಸರ್ಕಲ್ ಬಂಡಿಪಾಳ್ಯ ರಾಮಸ್ವಾಮಿ ಸರ್ಕಲ್ ಹಾಗೂ ಮೈಸೂರಿನ ಪ್ರದೇಶಗಳಿಗೆ ಸೆಕ್ಯೂರಿಟಿ ಗಾರ್ಡ್ಸ್, ಸೂಪರ್ ವೈಸರ್ ಬೇಕಾಗಿದ್ದಾರೆ. ಮತ್ತು ಫೀಲ್ಡ್ ಆಫೀಸರ್ ಬೇಕಾಗಿದ್ದಾರೆ. ಮೊದಲು ಬಂದವರಿಗೆ ಆದ್ಯತೆ.
8951661568
9632049421

ಶೀಟ್ ಮೆಟಲ್ ವರ್ಕರ್ಸ್ ಫ್ಯಾಬ್ರಿಕೇಟರ್ಸ್ ಮತ್ತು ಹೆಲ್ಪರ್ಸ್ ಬೇಕಾಗಿದ್ದಾರೆ.
9845809755

SITES FOR SALE
20X30, 30X40, 40X60
* Gokulam, Jayanagar
* Kuvempunagara
* Saraswathipuram
SS PROPERTY SERVICES
(Opp. Kuvempu School) SS Puram
9342125252

An independent 3BHK HOUSE FOR RENT
161/A ,5th cross Vidyanagar- Opposite Teresian College- Mysore. Proposed rent is Rs 18,000/- per Month . The property is not for lease. "Brokers / Agents Please don't contact"
Vassu Govinda Gowda:
9880700580; 8861576939

WANTED RESIDENTAIL/ NON RESIDENTAIL TEACHERS
SUB : ABACUS, ENGLISH, SCIENCE
ವಸತಿ ಶಾಲೆಗೆ ಆಯಾ, ವಾಚ್ ಮ್ಯಾನ್ ಬೇಕಾಗಿದ್ದಾರೆ.
7676522224
9980918990

WANTED
Accountant - Female
Minimum 1 Yr Experience
Work- Furniture Showroom
Salary : 12 K - 15K
Timing : 11am - 7.30 pm
Add: Sharadevi Nagar, Mysore
8050744784

AL-Kabir English Medium School
SS Nagar Bannimantap 'B' Layout, Mysore-570015
TEACHERS REQUIRED
1. BA, B.Ed (English & Social)
2. B.Sc B.Ed (PCM)
9972166786
(Timings: 10:00am to 01:00pm)

ಕರ್ನಾಟಕದಾದ್ಯಂತ ಪ್ರಸಿದ್ಧ MNC ಕಂಪನಿಗಳಿಗೆ
ಕಂಪನಿ, ಮತ್ತು ಆಫೀಸ್ ಕೆಲಸದ ಉದ್ಯೋಗಗಳಿಗೆ ತಕ್ಷಣ ಯುವಕ ಯುವತಿಯರು ಬೇಕಾಗಿದ್ದಾರೆ ಯಾವುದೇ ಸಂದರ್ಶನ ಇರುವುದಿಲ್ಲ ಪ್ರಸಿದ್ಧ ಕಂಪನಿಗಳಲ್ಲಿ, ಅಕೌಂಟೆಂಟ್, ಡೇಟಾ ಆಪರೇಟರ್, ಟೆಲಿಕಾಲರ್, ಕ್ಯಾಶಿಯರ್, ಆಫೀಸ್ ಬಾಯ್, ಮತ್ತು ಮ್ಯಾನುಫ್ಯಾಕ್ಚರಿಂಗ್ ಕೆಲಸಕ್ಕೆ ಬೇಕಾಗಿದ್ದಾರೆ, ಶಿಕ್ಷಣ 4ನೇ ತರಗತಿ ಇಂದ ಯಾವುದೇ ಪದವೀಧರರು, (ಸಂಬಳ: 18000rs ಇಂದ 30000rs + ಇನ್ಸೆಂಟಿವ್) ಹೆಚ್ಚಿನ ಮಾಹಿತಿಗಾಗಿ ಇಂದೇ ಸಂಪರ್ಕಿಸಿ:
9632831680, 7411273440

ತಕ್ಷಣ ಬೇಕಾಗಿದ್ದಾರೆ
ಮೈಸೂರು, ಹೆಬ್ಬಾಳಿನ ಕಂಪನಿಯಲ್ಲಿ ಕೆಲಸ ಮಾಡಲು ಹುಡುಗರು, ಹುಡುಗಿಯರು, ಗಂಡಸರು, ಹೆಂಗಸರು ಟೈಲರು ಮತ್ತು ಹೆಲ್ಪರ್ ಕೆಲಸಕ್ಕೆ ಬೇಕಾಗಿದ್ದಾರೆ. ಮತ್ತು ಮನೆ ಕೆಲಸಕ್ಕೆ ಹೆಂಗಸರು ಬೇಕಾಗಿದ್ದಾರೆ
8105249880
7795285485

ಸೆಕ್ಯೂರಿಟಿ ಗಾರ್ಡುಗಳು ಬೇಕಾಗಿದ್ದಾರೆ
ಸ್ಥಳ: 1) ಕುವೆಂಪುನಗರ 2) ವಿದ್ಯಾರಣ್ಯಪುರಂ, 3) ದಟ್ಟಗಳ್ಳಿ 4) ಶೂಟಿಂಗ್ ಮಹದೇವಪುರ
ESI & PF ಉಚಿತ ವಸತಿ ಹಾಗೂ ಊಟ
9686422400
9242406261

JOB VACANCY
MARKETING EXECUTIVE
Qualification: Any Degree
Experience: 1-2 Years in Pharma / Hospital Marketing
Skills: Good Communication & Management Skills. Job Location - Mysuru, Age Limit: Below 35 Year (Two Wheeler Must)
0821-4242351
9606714441, 7349278503

Opening at Mysore MAROOR MOTORS
Authorised Distributor for Maruti SUZUKI Genuine Parts Required
Office Boy
Accessories Sales Executive
For our Mysore Warehouse Minimum 1 Year Experience in Automobile Sector
For Accessories Sales Executive
Email:hrmaroor@gmail.com
9880675354

SITE FOR SALE
NEW HOUSE READY FOR REGISTRATION
35X50
30X50, 20X30 30X40
9945321020

SITE FOR SALE
40X40 CORNER
VISHWAMANAVA ENCLAVE
VIJAYANAGARA 4TH STAGE
8050821108
8792207164

GOVT JOB ಇರುವ ಮಕ್ಕಳಿಲ್ಲದ ವಿಚ್ಛೇದಿತೆಗೆ 2ನೇ ಸಂಬಂಧಕ್ಕೆ ವರಬೇಕಾಗಿದ್ದಾರೆ
Beautiful Hindu 43/5.5/B.Sc
Govt Health Dept. Officer
Salary 85000/- ಇರುವಂತಹ ವಿಚ್ಛೇದಿತೆಗೆ ವಿಧುರ/ವಿಚ್ಛೇದಿತ/ನೌಕರಸ್ಥ, ವ್ಯಾಪಾರಸ್ಥ/ ವಿದ್ಯಾವಂತ/ವರಬೇಕಾಗಿದ್ದಾರೆ. ಯಾವುದೇ ಜಾತಿಯ ಅಭ್ಯಂತರವಿಲ್ಲ (ಮಕ್ಕಳಿದ್ದರೂ ಪರವಾಗಿಲ್ಲ)
ಮೈಸೂರು: 9742458242
ಬೆಂಗಳೂರು: 9480385742

ಬೇಕಾಗಿದ್ದಾರೆ
ಹೆಚ್.ಡಿ.ಕೋಟೆಯಲ್ಲಿ ಫೀಲ್ಡ್ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ.
ಸಂಬಳ : 10,000 ರಿಂದ 20,000 ವರೆಗೆ
9008504456


WANTED
* OFFICE WORK (ONLY FOR LADIES)
* REQUIRED COMPUTER KNOWLEDGE
* QUALIFICATION : PUC/ABOVE
* WORKING PLACE: MYSORE
7975368452

DTCP Approved Layout
21x40 @ Rs. 11.20 Lac
24x40 @ Rs. 12.40 Lac
26x40 @ Rs. 13.65 Lac
East Face Site For Sale
Next to Marashettihalli Behind Chamundi Hill
9538583377

ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮೈಸೂರು ಮಿತ್ರ

ನಾಳೆ ಮಂಡ್ಯದಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಜನತಾ ದರ್ಶನ



ಮಂಡ್ಯ,ಜು.3– ಕೇಂದ್ರದ ಭಾರಿ ಕೈಗಾರಿಕೆ ಹಾಗೂ ಉಕ್ಕು ಸಚಿವ ಹೆಚ್.ಡಿ. ಕುಮಾರಸ್ವಾಮಿ ತಮ್ಮ ತವರು ಕ್ಷೇತ್ರ ಮಂಡ್ಯದಲ್ಲಿ ಜು.5 (ಶುಕ್ರವಾರ) ಜನತಾ ದರ್ಶನ ಹಮ್ಮಿಕೊಂಡಿದ್ದು, ಸಾರ್ವಜನಿಕರು ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು ಮನವಿ ಮಾಡಲಾಗಿದೆ.

ಶುಕ್ರವಾರ ಮಂಡ್ಯ ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಬೆಳಿಗ್ಗೆ 10 ಗಂಟೆಗೆ ಜನತಾ ದರ್ಶನ ಆಯೋಜಿಸಿದ್ದು, ಮಂಡ್ಯ ಲೋಕಸಭಾ ಕ್ಷೇತ್ರದ ಎಂಟು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಜನರು ಪಾಲ್ಗೊಂಡು ತಮ್ಮ ಸಮಸ್ಯೆಗಳನ್ನು ಮಂಡ್ಯ ಸಂಸದರೂ ಆದ ಕೇಂದ್ರ ಸಚಿವ ಕುಮಾರಸ್ವಾಮಿ ಅವರ ಬಳಿ ಹೇಳಿಕೊಳ್ಳಬಹುದಾಗಿದೆ.

ಈ ಸಂಬಂಧ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅವರಿಗೆ ಪತ್ರ ಬರೆದಿರುವ ಹೆಚ್ಡಿಕೆ ಆಪ್ತ ಕಾರ್ಯದರ್ಶಿ ತೇಜಸ್ವಿ ಎಸ್. ನಾಯಕ್, ಕಾರ್ಯಕ್ರಮಕ್ಕೆ ಬೇಕಾದ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಸೂಚಿಸಿದ್ದಾರೆ.

2006ರಲ್ಲಿ ಮೊದಲ ಬಾರಿಗೆ ರಾಜ್ಯದ ಮುಖ್ಯಮಂತ್ರಿಯಾಗಿದ್ದ ಹೆಚ್.ಡಿ.ಕುಮಾರಸ್ವಾಮಿ ಅವರು ಜನತಾ ದರ್ಶನವನ್ನು ಆರಂಭಿಸಿದ್ದರು. ಈ ಯೋಜನೆ ದೇಶದಲ್ಲಿ ಬಹಳ ಜನಪ್ರಿಯಗೊಂಡಿತ್ತು. ಸಾರ್ವಜನಿಕರು ಜನತಾ ದರ್ಶನದಲ್ಲಿ ಪಾಲ್ಗೊಂಡು ಸಿಎಂ ಬಳಿ ತಮ್ಮ ಸಮಸ್ಯೆಗಳನ್ನು ಹೇಳುತ್ತಿದ್ದರು. ಸಿಎಂ ಜನರ ಸಮಸ್ಯೆಗಳನ್ನು ಆಲಿಸುವ ಮಹತ್ವದ ಯೋಜನೆ ಇದಾಗಿತ್ತು. ಇದಾದ ಬಳಿಕ ರಾಜ್ಯವನ್ನಾಳಿದ ಹಲವು ಮುಖ್ಯಮಂತ್ರಿಗಳು ಈ ಯೋಜನೆಯನ್ನು ಮುಂದುವರೆಸಿದರು.

ಅದೇ ರೀತಿ ಸಂಸದ ಅಥವಾ ಕೇಂದ್ರ ಸಚಿವರುಗಳು ಯಾರೂ ಸಹ ಆರಂಭಿಸದ ಜನತಾ ದರ್ಶನವನ್ನು ಹೆಚ್ಡಿಕೆ ಆರಂಭಿಸಿದ್ದಾರೆ. ಈ ಮೂಲಕ ಮಂಡ್ಯ ಜಿಲ್ಲೆಯ ರೈತರು, ಕಾರ್ಮಿಕರು, ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸುವ ಸಲುವಾಗಿ ಜನತಾ ದರ್ಶನವನ್ನು ಆರಂಭಿಸಲಾಗಿದ್ದು, ಇದೇ ರೀತಿ ಮುಂದುವರೆಯಲಿದೆ ಎಂದು ಮುಖಂಡರು ಹೇಳಿದ್ದಾರೆ.

ತೆಂಗಿನ ಮರದಿಂದ ಬಿದ್ದು ಗಾಯಗೊಂಡಿದ್ದ ರೈತನಿಗೆ ಆರ್ಥಿಕ ನೆರವು

ಕೆ.ಆರ್.ಪೇಟೆ, ಜು.3–ಆಕಸ್ಮಿಕವಾಗಿ ತೆಂಗಿನ ಮರದಿಂದ ಬಿದ್ದು ಗಾಯಗೊಂಡಿರುವ ರೈತನಿಗೆ ಹೆಚ್ಚಿನ ಚಿಕಿತ್ಸೆಗಾಗಿ ಮಂಡ್ಯ ಜಿಲ್ಲಾ ಹಾಲು ಒಕ್ಕೂಟ ನಿರ್ದೇಶಕ ಡಾಲು ರವಿ ಆರ್ಥಿಕ ಸಹಾಯ ನೀಡಿ ಸಾಂತ್ವನ ಹೇಳಿದರು. ತಾಲೂಕಿನ ಕಸಬಾ ಹೋಬಳಿಯ ಕರೋಟಿ ಗ್ರಾಮದ ಕೃಷ್ಣೇಗೌಡ ರೈತರ ತೆಂಗು ಮತ್ತು ಅಡಿಕೆ ಮರಗಳನ್ನು ಹತ್ತಿ ಕಾಯಿ ಮತ್ತು ಅಡಿಕೆಯನ್ನು ಕಿತ್ತುಕೊಟ್ಟು ಅವರು ಕೊಡುವ ಕೂಲಿಯಿಂದ ಜೀವನ ಸಾಗಿಸುತ್ತಿದ್ದರು. ಕೆಲ ದಿನಗಳಿಂದಷ್ಟೇ ಆಕಸ್ಮಿಕವಾಗಿ ತೆಂಗಿನ ಮರದಿಂದ ಕೆಳಗೆ ಬಿದ್ದು ಗಾಯಗೊಂಡು ಮನೆಯಲ್ಲಿ ವಿಶ್ರಾಂತಿ ಪಡೆಯುತ್ತಿದ್ದು, ಅವರ ನಿವಾಸಕ್ಕೆ ಮನ್ಮುಲ್ ನಿರ್ದೇಶಕ ಡಾಲು ರವಿ ತೆರಳಿ ಗಾಯಾಳು ಯೋಗಕ್ಷೇಮ ವಿಚಾರಿಸಿ ಹೆಚ್ಚಿನ ಚಿಕಿತ್ಸೆಗಾಗಿ ಆರ್ಥಿಕ ಸಹಾಯ ನೀಡಿದರು.

ಗ್ರಾಮದ ಯುವ ಮುಖಂಡ ಅಜಯ್ ಕುಮಾರ್, ರೈತ ಸಂಘದ ತಮ್ಮಯ್ಯ ಚಂದ್ರೇಗೌಡ, ದಿನೇಶ್, ರಾಮೇಗೌಡ ಗುಂಡೇಗೌಡ, ಯುವ ಮುಖಂಡ ರಾಕೇಶ್, ಸೇರಿದಂತೆ ಇತರರು ಈ ವೇಳೆ ಉಪಸ್ಥಿತರಿದ್ದರು.

3 ತಿಂಗಳಲ್ಲಿ ಮಂಡ್ಯ ಕ್ಯಾನ್ಸರ್ ಆಸ್ಪತ್ರೆ ಕಾಮಗಾರಿ ಪೂರ್ಣಗೊಳ್ಳಬೇಕು

ಮಿಮ್ಸ್‌ಗೆ ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಸೂಚನೆ

ಮಂಡ್ಯ,ಜು.3– ಮಿಮ್ಸ್ ಆವರಣದಲ್ಲಿ ನಿರ್ಮಾಣವಾಗುತ್ತಿರುವ ಕ್ಯಾನ್ಸರ್ ಆಸ್ಪತ್ರೆ ಕಾಮಗಾರಿಗಳು 3 ತಿಂಗಳೊಳಗಾಗಿ ಪೂರ್ಣಗೊಳ್ಳಬೇಕು ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದರು.

ಬುಧವಾರ ಮಿಮ್ಸ್ ಸಭಾಂಗಣದಲ್ಲಿ ಪ್ರಗತಿ ಪರಿಶೀಲನೆ ನಡೆಸಿ ಬಳಿಕ ಮಾತನಾಡಿದ ಅವರು, ಕ್ಯಾನ್ಸರ್ ಆಸ್ಪತ್ರೆಯ ಸಿವಿಲ್ ಕಾಮಗಾರಿಗಳು ಒಂದು ತಿಂಗಳೊಳಗೆ ಪೂರ್ಣಗೊಳಿಸಬೇಕು. ಆಸ್ಪತ್ರೆಗೆ ಅವಶ್ಯಕವಿರುವ ವೈದ್ಯಕೀಯ ಉಪಕರಣಗಳು ಹಾಗೂ ಇನ್ನಿತರೆ ಟೇಬಲ್, ಚೇರ್, ಬೆಡ್ ವಿದ್ಯುತ್ ಸಂಪರ್ಕ ಇತ್ಯಾದಿ ಕೆಲಸಗಳು 3 ತಿಂಗಳೊಳಗೆ ಪೂರ್ಣಗೊಳ್ಳಬೇಕು. ಅಷ್ಟರಲ್ಲಿ ಆಸ್ಪತ್ರೆಗೆ ಬೇಕಿರುವ ವೈದ್ಯರು ಹಾಗೂ ಇನ್ನಿತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲು ಆರ್ಥಿಕ ಇಲಾಖೆಯಿಂದ ಒಪ್ಪಿಗೆ ಪಡೆದು ಕಾರ್ಯ ಪ್ರವೃತ್ತರಾಗಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಎಂಆರ್ಐ ಹಾಗೂ ಸಿ.ಟಿ ಸ್ಕ್ಯಾನ್ ಆದ ನಂತರ ರೋಗಿಗಳ ವರದಿ ನೀಡಲು ಮೂರರಿಂದ ಐದು ದಿನ ಆಗುತ್ತಿದೆ ಎಂಬ ದೂರುಗಳು ಕೇಳಿ ಬರುತ್ತಿವೆ. ಖಾಲಿ ಇರುವ ರೇಡಿಯಾಲಜಿಸ್ಟ್ ಹುದ್ದೆಗಳನ್ನು ಭರ್ತಿ ಮಾಡಿ ಟೆಲಿ ಸರ್ವಿಸ್ ಉಪಯೋಗಿಸಿಕೊಂಡು ಒಂದು ದಿನದೊಳಗಾಗಿ ವರದಿ ನೀಡುವ ವ್ಯವಸ್ಥೆ ಮಾಡಬೇಕು. ಹೊರಗುತ್ತಿಗೆ ಮೇಲೆ ಲ್ಯಾಬ್ ಸೇವೆ ಒದಗಿಸುತ್ತಿರುವ ಸಂಸ್ಥೆ ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ. ಹೆಚ್ಚಿನ ದರ ವಿಧಿಸುತ್ತಿದ್ದಾರೆ ಎಂದು ದೂರು ಕೇಳಿ ಬರುತ್ತಿದ್ದು, ಇದನ್ನು ಪರಿಶೀಲಿಸಿ ತಪ್ಪು ಕಂಡು ಬಂದಲ್ಲಿ ಟೆಂಡರ್ ರದ್ದುಪಡಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.



ಮಿಮ್ಸ್ ಆಸ್ಪತ್ರೆ ಆವರಣದಲ್ಲಿನ ಕಾನ್ಸರ್ ಆಸ್ಪತ್ರೆ ಕಾಮಗಾರಿ ವೀಕ್ಷಿಸಿ ಮಾತನಾಡಿದ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್

ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಂಡಿರುವ ಸಿಬ್ಬಂದಿಗಳ ಖಾತೆಗೆ ಸರಿಯಾಗಿ ಸಂಬಳ, ಪಿಎಫ್ ಜಮೆಯಾಗುತ್ತಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಿ. ಇದರ ಬಗ್ಗೆ ದೂರುಗಳು ಕೇಳಿಬಂದಲ್ಲಿ ಶಿಸ್ತು ಕ್ರಮ ವಹಿಸುವುದಾಗಿ ಎಚ್ಚರಿಸಿದ ಅವರು, ವೈದ್ಯರು ತಮ್ಮ ಕಾಲೇಜಿನ ಕೆಲಸ ನಿರ್ವಹಿಸಬೇಕಿರುವ ಸಮಯದಲ್ಲಿ ಹೊರಗೆ ಖಾಸಗಿ ಆಸ್ಪತ್ರೆ ಮತ್ತು ಕ್ಲಿನಿಕ್‌ಗಳಲ್ಲಿ ಕಾರ್ಯನಿರ್ವಹಿಸುವಂತಿಲ್ಲ, ಕಂಡುಬಂದರೆ ಕ್ರಮ ಜರುಗಿಸುವುದಾಗಿ ಎಚ್ಚರಿಕೆ ನೀಡಿದರು. ಇನ್ನು ಮುಂದೆ ಮಧ್ಯಾಹ್ನದ ವೇಳೆ ಸಹ ಈ ಹಾಜರಾತಿ ಸಂಗ್ರಹಿಸಲು ತಿಳಿಸಲಾಗುವುದು ಎಂದರು.

ಶಾಸಕ ಪಿ.ರವಿಕುಮಾರ್ ಗಣಿಗ ಮಾತನಾಡಿ ಬಿ.ಹೊಸೂರಿನಲ್ಲಿ ಪ್ಯಾರಾ ಮೆಡಿಕಲ್ ಕಾಲೇಜು ಮತ್ತು ಹಾಸ್ಟೆಲ್‌ಗೆ ಸ್ಥಳದ ವ್ಯವಸ್ಥೆ ಮಾಡಿಕೊಡಲಾಗುವುದು. ಇದಕ್ಕೆ ಯೋಜನೆ ರೂಪಿಸುವಂತೆ ಸಚಿವರಿಗೆ ಮನವಿ ಸಲ್ಲಿಸಿದರು.

ವರ್ಚುಯಲ್ ಡಿಸ್ಸೆಕ್ಟ್ ಟೇಬಲ್‌ಗೆ ಚಾಲನೆ

ವೈದ್ಯಕೀಯ ವಿದ್ಯಾರ್ಥಿಗಳ ಅನುಕೂಲಕ್ಕಾಗಿ 2.50 ಕೋಟಿ ರೂ ವೆಚ್ಚದಲ್ಲಿ ಖರೀದಿಸಲಾಗಿರುವ ಅನಾಟಮಿ ವರ್ಚುಯಲ್ ಡಿಸೆಕ್ಟ್ ಟೇಬಲ್‌ಗೆ ಸಚಿವರು ಚಾಲನೆ ನೀಡಿದರು. ಸಭೆಯ ನಂತರ ಸಚಿವರು ಮಿಮ್ಸ್ ಆಸ್ಪತ್ರೆಯ ವಾರ್ಡ್‌ಗಳಿಗೆ ತೆರಳಿ ಪರಿಶೀಲನೆ ನಡೆಸಿದರು.

ಸಭೆಯಲ್ಲಿ ಶಾಸಕರಾದ ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಮಧು ಜಿ.ಮಾದೇಗೌಡ, ದಿನೇಶ್ ಗೂಳಿಗೌಡ, ಜಿಲ್ಲಾಧಿಕಾರಿ ಡಾ.ಕುಮಾರ, ವೈದ್ಯಕೀಯ ಶಿಕ್ಷಣ ಇಲಾಖೆಯ ನಿರ್ದೇಶಕಿ ಡಾ.ಸುಜಾತಾ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಕೆಆರ್‌ಎಸ್ ಸಮೀಪ ತಡೆಗೋಡೆ ನಿರ್ಮಾಣ

ಗ್ರಾಮಸ್ಥರ ಆಕ್ರೋಶ, ಅಧಿಕಾರಿಗೆ ತರಾಟೆ



ತಡೆಗೋಡೆ ನಿರ್ಮಿಸುತ್ತಿರುವ ಸ್ಥಳದಲ್ಲಿ ಗ್ರಾಮಸ್ಥರು ಪ್ರತಿರೋಧ ವ್ಯಕ್ತಪಡಿಸುತ್ತಿರುವುದು

ಶ್ರೀರಂಗಪಟ್ಟಣ,ಜು.3–ಕೆ.ಆರ್.ಸಾಗರ ಅಣೆಕಟ್ಟೆಯ ಸಮೀಪ ನದಿಯಲ್ಲಿ ಪವರ್ ಪ್ಲಾಂಟ್ ನಿರ್ಮಿಸಲು ಮುಂದಾಗಿರುವ ವ್ಯಕ್ತಿಯೊಬ್ಬರು ಯಾವುದೇ ಗಡಿ ಗುರುತು ಮಾಡದೆ ಅಕ್ರಮವಾಗಿ ನದಿ ಮತ್ತು ರಸ್ತೆಗೆ ತಡೆಗೋಡೆ ನಿರ್ಮಿಸುತ್ತಿರುವುದನ್ನು ಖಂಡಿಸಿ ಗ್ರಾಮಸ್ಥರು ಪ್ರತಿರೋಧ ವ್ಯಕ್ತಪಡಿಸಿ ಘೋಷಣೆ ಕೂಗಿದರು.

ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಕಾವೇರಿ ನೀರಾವರಿ ನಿಗಮದ ಸಹಾಯಕ ಅಭಿಯಂತರ ಸುರೇಶ್ ಕುಮಾರ್ ಅವರನ್ನು ತರಾಟೆಗೆ ತೆಗೆದುಕೊಂಡ ಗ್ರಾಮಸ್ಥರು ಕಾವೇರಿ ನೀರಾವರಿ ನಿಗಮಕ್ಕೆ ಸೇರಿದ ಜಾಗದಲ್ಲಿ ಅಕ್ರಮವಾಗಿ ತಡೆಗೋಡೆ ನಿರ್ಮಿಸುತ್ತಿದ್ದರೂ ಕೂಡ ಸುಮ್ಮನಿದ್ದೀರಿ, ಯಾರ ಪ್ರಭಾವಕ್ಕೆ ಒಳಗಾಗಿದ್ದೀರಿ ಎಂದು ಪ್ರಶ್ನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಹಾಯಕ ಅಭಿಯಂತರ ಅವೈಜ್ಞಾನಿಕ ಕಾಮಗಾರಿ ಬಗ್ಗೆ ನೀವು ನೀಡಿದ ಮನವಿಯನ್ನು ನಾನು ಪರಿಶೀಲನೆ ನಡೆಸಿ ವರದಿಯನ್ನು ಹಿರಿಯ ಅಧಿಕಾರಿಗಳ ಗಮನಕ್ಕೆ ತರುತ್ತೇನೆ ಎಂದರು.

ಮಜ್ಜಿಗೆಪುರ, ಬೆಳಗೊಳ, ಕೆ.ಆರ್.ಸಾಗರ, ಹೊಂಗಳ್ಳಿ ಗ್ರಾಮಗಳ ಗ್ರಾಮಸ್ಥರು ಕೆಆರ್‌ಎಸ್ ಸಮೀಪದ ಎಡಮುರಿಯನ್ನು ಅವಲಂಬಿಸಿದ್ದು, ವ್ಯಕ್ತಿಯೊಬ್ಬರು ಪವರ್ ಪ್ಲಾಂಟ್ ನಿರ್ಮಾಣದ ನೆಪದಲ್ಲಿ ಏಕಾಏಕಿ ಎಡಮುರಿ ನದಿ ಮತ್ತು ರಸ್ತೆಯಲ್ಲಿ ತಡೆಗೋಡೆ ನಿರ್ಮಾಣ ಮಾಡುತ್ತಿರುವುದು ಸರಿಯಲ್ಲ. ಹಲವು ವರ್ಷಗಳ ಹಿಂದೆ ಅನುಮತಿ ಪಡೆದು ಸ್ಥಳ ನಿಗದಿಪಡಿಸದೆ ಅವೈಜ್ಞಾನಿಕವಾಗಿ ನದಿಯಲ್ಲಿ ಕೆಲಸ ಮಾಡುತ್ತಿರುವುದು ಸರಿಯಲ್ಲ, ಸಂಬಂಧಪಟ್ಟ ಅಧಿಕಾರಿಗಳು ಇದನ್ನು ತೆರವುಗೊಳಿಸಬೇಕು, ಹಾಗೂ ಪವರ್ ಪ್ಲಾಂಟ್ ಸ್ಥಳಾಂತರ ಮಾಡಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಬೆಳಗೊಳ ಗ್ರಾ.ಪಂ ಅಧ್ಯಕ್ಷ ಬಿ.ವಿ.ಸುರೇಶ್ ತಿಳಿಸಿದರು.

ಈ ಸಂದರ್ಭದಲ್ಲಿ ಬೆಳಗೊಳ ತಾ.ಪಂ ಮಾಜಿ ಸದಸ್ಯ ಬಿ.ಟಿ.ಸ್ವಾಮಿಗೌಡ, ಬೆಳಗೊಳ ಗ್ರಾ.ಪಂ ಸದಸ್ಯ ಪುಟ್ಟರಾಜು, ಗ್ರಾ.ಪಂ ಮಾಜಿ ಸದಸ್ಯ ಮಂಜನಾಥ್, ಭಾರ್ಗವ, ಪುಟ್ಟೇಗೌಡ, ರಾಮೇಗೌಡ, ಶಿವೇಗೌಡ, ಎಂ.ಬಿ.ಚಂದ್ರು, ಎಂ.ಸಿ.ಚಂದ್ರ, ಶ್ರೀನಿವಾಸ್, ಕೆಆರ್‌ಎಸ್ ಗ್ರಾ.ಪಂ ಸದಸ್ಯ ರವಿಕುಮಾರ್, ಹೊಸ ಉಂಡವಾಡಿ ಸಂಜು ಸೇರಿದಂತೆ ಮಜ್ಜಿಗೆಪುರ, ಬೆಳಗೊಳ, ಕೆ.ಆರ್.ಸಾಗರ, ಹೊಂಗಳ್ಳಿ ಗ್ರಾಮಗಳ ಗ್ರಾಮಸ್ಥರು ಇದ್ದರು.

ಬಾಬೂಜಿ ಪುಣ್ಯತಿಥಿ

ಮಂಡ್ಯ, ಜು.3– ಹಸಿರು ಕ್ರಾಂತಿಯ ಹರಿಕಾರ ಭಾರತದ ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನ ರಾಂರವರ 38ನೇ ಪುಣ್ಯತಿಥಿಯನ್ನು ಜುಲೈ 6 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಮುಂಭಾಗದ ಉದ್ಯಾನವನದಲ್ಲಿರುವ ಪ್ರತಿಮೆಗೆ ಮಾಲಾರ್ಪಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು, ಅಧಿಕಾರಿಗಳು/ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರುಗಳು ಭಾಗವಹಿಸಲು ಪ್ರಕಟಣೆಯಲ್ಲಿ ಕೋರಲಾಗಿದೆ.

ಹಾಲು ಉತ್ಪಾದನೆಯಲ್ಲಿ ಮಂಡ್ಯ ಮನ್‌ಮುಲ್ ರಾಜ್ಯಕ್ಕೇ ಪ್ರಥಮ

ಮದ್ದೂರು, ಜು.3– ಮಂಡ್ಯ ಹಾಲು ಒಕ್ಕೂಟ ರಾಜ್ಯದಲ್ಲಿಯೇ ಅತಿ ಹೆಚ್ಚು ಹಾಲು ಉತ್ಪಾದನೆ ಮಾಡುವ ಜಿಲ್ಲೆಯಾಗಿದ್ದು, ಪ್ರತಿದಿನ ಹನ್ನೊಂದೂವರೆ ಲಕ್ಷ ಲೀಟರ್ ಹಾಲು ಉತ್ಪಾದನೆ ಮಾಡುವ ಮೂಲಕ ಪ್ರಥಮ ಸ್ಥಾನದಲ್ಲಿದೆ ಎಂದು ಮನ್‌ಮುಲ್ ಮಾಜಿ ಅಧ್ಯಕ್ಷ ಹಾಗೂ ನಿರ್ದೇಶಕ ಬಿ.ಆರ್.ರಾಮಚಂದ್ರ ತಿಳಿಸಿದರು.

ತಾಲೂಕಿನ ಬಸರಾಳು ಹೋಬಳಿಯ ಜಿ.ಹೊಸಹಳ್ಳಿ, ಹಾಲು ಉತ್ಪಾದಕರ ಸಹಕಾರ ಸಂಘದ ಹಾಲು ಶೀತಲೀಕರಣ (ಬಿಎಂಸಿ) ಘಟಕದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಮಂಡ್ಯ ಹಾಲು ಒಕ್ಕೂಟ ಗುಣಮಟ್ಟದಲ್ಲೂ ಒಳ್ಳೆಯ ಸ್ಥಾನದಲ್ಲಿ ಮುಂದೆ ಬರುತ್ತಿದೆ. ಎಲ್ಲರ ಸಹಕಾರವಿಲ್ಲದೆ ಹೋದರೆ ಯಾವುದೇ ಸಂಘಗಳು ಮುಂದೆ ಬರಲು ಸಾಧ್ಯವಿಲ್ಲ ಎಂದು ಹೇಳಿದರು.

ಮಂಡ್ಯಕ್ಕೆ ಮಲ್ಲಿಕಾರ್ಜುನ ಬಾಲದಂಡಿ ಎಸ್ಪಿ

ದೀರ್ಘಕಾಲ ಎಸ್ಪಿಯಾಗಿ ಕಾರ್ಯನಿರ್ವಹಿಸಿದ ಯತೀಶ್ ದಕ್ಷಿಣ ಕನ್ನಡಕ್ಕೆ ವರ್ಗಾವಣೆ



ಮಂಡ್ಯ,ಜು.3– ಮಂಡ್ಯ ಜಿಲ್ಲೆಯ ನೂತನ ಎಸ್ಪಿಯಾಗಿ ಮಲ್ಲಿಕಾರ್ಜುನ ಬಾಲದಂಡಿ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದ್ದು, ಈ ಹಿಂದೆ ಎಸ್ಪಿಯಾಗಿ ಕೆಲಸ ಮಾಡುತ್ತಿದ್ದ ಎನ್. ಯತೀಶ್ ಅವರನ್ನು ದಕ್ಷಿಣ ಕನ್ನಡ ಜಿಲ್ಲೆಗೆ ವರ್ಗಾವಣೆ ಮಾಡಲಾಗಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಯಾಗಿದ್ದ ಮಲ್ಲಿಕಾರ್ಜುನ ಬಾಲದಂಡಿ ಅವರು ಹುಬ್ಬಳ್ಳಿ–ಧಾರವಾಡ ಪೊಲೀಸ್ ಕಮಿಷನರೇಟ್ ಘಟಕದಲ್ಲಿ ಅಪರಾಧ ಹಾಗೂ ಸಂಚಾರ ವಿಭಾಗದಲ್ಲಿ ಉಪ ಪೊಲೀಸ್ ಆಯುಕ್ತರಾಗಿ ಹಾಗೂ ತುಮಕೂರು ಎಸ್ಪಿಯಾಗಿ ಕಾರ್ಯನಿರ್ವಹಿಸಿದ್ದರು.

ಕಳೆದ ಮೂರು ವರ್ಷಗಳ ಹಿಂದೆ ಮಂಡ್ಯ ಎಸ್ಪಿಯಾಗಿದ್ದ ಪರುಶುರಾಮ್ ಚಿತ್ರದುರ್ಗಕ್ಕೆ ವರ್ಗಾವಣೆಯಾಗಿದ್ದರಿಂದ ಮಂಡ್ಯಕ್ಕೆ ನಿಯೋಜನೆಗೊಂಡಿದ್ದ ಎನ್.ಯತೀಶ್ ಮಂಡ್ಯ ಜಿಲ್ಲೆಯಲ್ಲಿ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಣೆ ಮಾಡಿದ್ದರು. ಜನಮಾನಸದಲ್ಲಿ ಉತ್ತಮ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದ ಎನ್.ಯತೀಶ್, ಮಂಡ್ಯದ ಕೆ.ಆರ್.ಪೇಟೆಯಲ್ಲಿ ನಡೆದ ಕುಂಭಮೇಳ, ಪ್ರಧಾನಿ ನರೇಂದ್ರಮೋದಿ, ಗೃಹ ಸಚಿವ ಅಮಿತ್ ಶಾ, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹಾಗೂ ರಾಹುಲ್ ಗಾಂಧಿ ನೇತೃತ್ವದ ಭಾರತ್ ಜೋಡೋ ಯಾತ್ರೆಯಲ್ಲಿ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಿದ್ದರು.


ಅದೇ ರೀತಿ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು, ಜೊತೆಗೆ ಅಪರಾಧ ಪ್ರಕರಣಗಳನ್ನು ಕಡಿವಾಣ ಹಾಕಲು ಹಾಗೂ ಸಂಚಾರಿ ವ್ಯವಸ್ಥೆಯನ್ನು ಉತ್ತಮ ರೀತಿಯಲ್ಲಿ ಕಾಪಾಡಲು ಯತೀಶ್ ಬಹಳ ಮಹತ್ವದ ರೀತಿಯಲ್ಲಿ ಕಾರ್ಯನಿರ್ವಹಿಸಿದ್ದರು. ಎಲ್ಲಕ್ಕಿಂತ ಹೆಚ್ಚಾಗಿ ಮಂಡ್ಯದಲ್ಲಿ 3 ವರ್ಷಕ್ಕೂ ಅಧಿಕ ದಿನಗಳ ಕಾಲ ಎಸ್ಪಿಯಾಗಿ ಕಾರ್ಯನಿರ್ವಹಿಸಿದ್ದ ಏಕೈಕ ಅಧಿಕಾರಿ ಎಂಬ ಕೀರ್ತಿಗೆ ಯತೀಶ್ ಭಾಜನರಾಗಿದ್ದರು.

ಕೋಡಿ ಹೊಸೂರು ಗ್ರಾಮದಲ್ಲಿ 11 ಅಡಿ ಉದ್ದದ ಹೆಬ್ಬಾವು ಸೆರೆ

ನಾಗಮಂಗಲ: ತಾಲೂಕಿನ ಬಿಂಡಿಗನವಿಲೆ ಹೋಬಳಿ ಕೋಡಿ ಹೊಸೂರು ಗ್ರಾಮದ ಖಾಸಗಿ ಜಮೀನೊಂದರಲ್ಲಿ ಬೃಹತ್ ಗಾತ್ರದ ಹೆಬ್ಬಾವು ಪತ್ತೆಯಾಗಿದ್ದು ಉರಗ ರಕ್ಷಕರ ಸಹಾಯದಿಂದ ಸೆರೆಹಿಡಿಯಲಾಗಿದೆ. ಸುಮಾರು 11 ಅಡಿ ಉದ್ದದ ಬೃಹತ್ ಗಾತ್ರದ ಹೆಬ್ಬಾವು ಪತ್ತೆಯಾಗಿದ್ದು ಸ್ಥಳೀಯರ ಮಾಹಿತಿ ಮೇರೆಗೆ ಸ್ಥಳಕ್ಕೆ ಆಗಮಿಸಿದ ಅರಣ್ಯ ಇಲಾಖೆಯ ಆರ್‌ಎಫ್‌ಓ ಮಂಜುನಾಥ್ ಹಾಗೂ ಸಿಬ್ಬಂದಿಗಳು, ನಾಗಮಂಗಲ ಪಟ್ಟಣದ ಉರಗ ರಕ್ಷಕ ಆನಂದ್ ಅಲಿಯಾಸ್ ಸೆಡೆ ಅವರ ಸಹಕಾರದೊಂದಿಗೆ ಹೆಬ್ಬಾವು ಸುರಕ್ಷಿತವಾಗಿ ಹಿಡಿದು ರಕ್ಷಣೆ ಮಾಡಲಾಗಿದ್ದು ಅದನ್ನು ಮೇಲುಕೋಟೆ ಅರಣ್ಯ ಪ್ರದೇಶಕ್ಕೆ ಬಿಡಲಾಗುವುದು.

ಡೆಂಗ್ಯೂ ಟೆಸ್ಟ್‌ಗೆ ಬೆಲೆ ನಿಗದಿಪಡಿಸಿದ ಸರ್ಕಾರ

ಖಾಸಗಿ ಆಸ್ಪತ್ರೆಗಳಿಗೆ ಆರೋಗ್ಯ ಸಚಿವರ ಕಡಿವಾಣ



ಬೆಂಗಳೂರು, ಜು. 3– ಮಳೆಗಾಲದಲ್ಲಿ ಹೆಚ್ಚಾಗಿ ಕಂಡುಬರುವ ಡೆಂಗ್ಯೂ ಜ್ವರ ಜನಸಾಮಾನ್ಯರಿಗೆ ಹೊರೆಯಾಗದಂತೆ ತಡೆಯುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಮಹತ್ವದ ಆದೇಶ ಹೊರಡಿಸಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಡೆಂಗ್ಯೂ ಜ್ವರಕ್ಕೆ ಉಚಿತ ಚಿಕಿತ್ಸೆ ಲಭ್ಯವಿದೆ. ಆದರೆ ಖಾಸಗಿ ಆಸ್ಪತ್ರೆಗಳು ಕೂಡ ಮನಬಂದಂತೆ ಡೆಂಗ್ಯೂ ಟೆಸ್ಟಿಂಗ್‌ಗೆ ಬೆಲೆ ವಿಧಿಸದಂತೆ ಕ್ರಮ ಕೈಗೊಳ್ಳಲು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು.



ದಿನೇಶ್ ಗುಂಡೂರಾವ್

ಸಚಿವರ ಸೂಚನೆ ಮೇರೆಗೆ ಖಾಸಗಿ ಆಸ್ಪತ್ರೆಗಳಿಗೆ ಅನ್ವಯವಾಗುವಂತೆ ಆದೇಶ ಹೊರಡಿಸಿರುವ ಆರೋಗ್ಯ ಇಲಾಖೆ, ಡೆಂಗ್ಯೂ ಟೆಸ್ಟಿಂಗ್‌ಗೆ ದರ ನಿಗದಿಪಡಿಸಿದೆ. ಎರಡು ರೀತಿಯ ಟೆಸ್ಟಿಂಗ್‌ಗಳಿಗೆ ಒಟ್ಟು 600 ರೂ. ದರ ನಿಗದಿ ಮಾಡಿ ಆದೇಶಿಸಿದೆ. NS1 ಹಾಗೂ Igm ಎರಡು ಟೆಸ್ಟಿಂಗ್‌ಗಳಿಗೆ ತಲಾ 300 ರೂ.ಗಳನ್ನು ನಿಗದಿಪಡಿಸಲಾಗಿದೆ. ಖಾಸಗಿ ಆಸ್ಪತ್ರೆಗಳು ಹಾಗೂ ಲ್ಯಾಬೊರೇಟರಿಗಳು ಡೆಂಗ್ಯೂ ಟೆಸ್ಟಿಂಗ್ ಮಾಡಲು 600 ರೂಪಾಯಿಗಿಂತ ಹೆಚ್ಚು ವಿಧಿಸುವಂತಿಲ್ಲ.

ಡೆಂಗ್ಯೂ ನಿಯಂತ್ರಣ ಮುಂಜಾಗೃತ ಕ್ರಮಗಳ ಕುರಿತು ಈಗಾಗಲೇ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸೂಚನೆ ನೀಡಿರುವ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಗುರುವಾರ ಜಿಲ್ಲಾಧಿಕಾರಿಗಳು ಹಾಗೂ ಸಿಇಓಗಳ ವಿಡಿಯೋ ಕಾನ್ಫರೆನ್ಸ್ ಸಭೆ ಕರೆದಿದ್ದಾರೆ. ಎಲ್ಲ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತಿ ಸಿಇಓ, ನಗರ ಸ್ಥಳೀಯ ಸಂಸ್ಥೆಗಳು, ಡೆಂಗಿ ಈಡಿಸ್ ಸೊಳ್ಳೆಯ ಲಾರ್ವಾ ನಾಶಪಡಿಸುವ ಕ್ರಮಗಳತ್ತ ಹೆಚ್ಚಿನ ಗಮನ ಹರಿಸಬೇಕಾಗಿದ್ದು, ಈ ನಿಟ್ಟಿನಲ್ಲಿ ಮಹತ್ವದ ಸಭೆ ಕರೆದಿರುವ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಡೆಂಗ್ಯೂ ನಿಯಂತ್ರಣ ಕುರಿತು ಅಧಿಕಾರಿಗಳೊಂದಿಗೆ ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳ ಕುರಿತು ಪರಾಮರ್ಶೆ ನಡೆಸಲಿದ್ದಾರೆ.

ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷ, ನಿರ್ದೇಶಕರ ಸ್ಥಾನಕ್ಕೆ ನಾಮಪತ್ರ ಸಲ್ಲಿಕೆ

ಕೆ.ಆರ್.ಪೇಟೆ, ಜು.3– ಅಖಿಲ ಭಾರತ ವೀರಶೈವ ಮಹಾಸಭಾದ ತಾಲೂಕು ಅಧ್ಯಕ್ಷರ ಸ್ಥಾನಕ್ಕೆ ವಕೀಲ ವಿ.ಎಸ್.ಧನಂಜಯ್ ಕುಮಾರ್ ಮತ್ತು ಅವರ ನೇತೃತ್ವದಲ್ಲಿ ಸಂಘದ ನಿರ್ದೇಶಕರ ಸ್ಥಾನಕ್ಕೆ ಬಯಸಿ 14 ಮಂದಿ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದರು.



ಅಖಿಲ ಭಾರತ ವೀರಶೈವ ಮಹಾಸಭಾದ ತಾಲೂಕು ಅಧ್ಯಕ್ಷರ ಸ್ಥಾನಕ್ಕೆ ವಕೀಲ ವಿ.ಎಸ್ ಧನಂಜಯ್ ಕುಮಾರ್ ಮತ್ತು ಅವರ ನೇತೃತ್ವದಲ್ಲಿ ಸಂಘದ ನಿರ್ದೇಶಕರ ಸ್ಥಾನ ಬಯಸಿ 14 ಮಂದಿ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಮುಂದಿನ ಐದು ವರ್ಷದ ಅವಧಿಯ ಕಾರ್ಯನಿರ್ವಾಹಕ ಸಮಿತಿ ಸದಸ್ಯರ ಸ್ಥಾನಕ್ಕೆ ಜು.21 ಚುನಾವಣೆ ನಡೆಯುವ ಹಿನ್ನೆಲೆಯಲ್ಲಿ ಕೆ.ಆರ್.ಪೇಟೆ ಪಟ್ಟಣದ ದುರ್ಗಾಭವನ್ ವೃತ್ತ ಸಮೀಪವಿರುವ ಸಂಘದ ಕಚೇರಿಯಲ್ಲಿ ಅಧ್ಯಕ್ಷ ಸ್ಥಾನ ಬಯಸಿ ವಕೀಲ ವಿ.ಎಸ್ ಧನಂಜಯ್ ಕುಮಾರ್, ನಿರ್ದೇಶಕರ ಸ್ಥಾನ ಬಯಸಿ ಚೌಡಸಮುದ್ರ ಪವಿತ್ರ ಕುಮಾರ್, ಬಸವನಹಳ್ಳಿ ಕೆ.ಆರ್.ಲೀಲಾವತಿ ಮಹೇಶ್, ಸೋಮನಾಥಪುರ ಎ.ಬಿ.ಯಶೋಧ ನಂದೀಶ್ವರ, ಸೋಮನಾಥಪುರ ಮಂಜುಳಾ ಮಹದೇವಪ್ಪ, ಗೋವಿಂದನಹಳ್ಳಿ ಮೀನಾಕ್ಷಿ ಚಂದ್ರಶೇಖರ್, ಗೋವಿಂದನಹಳ್ಳಿ ಪ್ರಕಾಶ್, ಗೋವಿಂದನಹಳ್ಳಿ ಸೋಮಣ್ಣ, ಮಂಚಿಬೀಡು ಎಂ.ಸಿ.ಬಸವಲಿಂಗಪ್ಪ, ಸಾಸಲು ಉಮೇಶ್, ದೊಡ್ಡಯಾಚೇನಹಳ್ಳಿ ಶಿವಪ್ಪ, ನಾಡಭೋಗನಹಳ್ಳಿ ಎನ್.ಪಿ.ರೇವಣ್ಣ, ಚೋಕನಹಳ್ಳಿ ಮಹದೇವಪ್ಪ, ಅಂಚನಹಳ್ಳಿ ಈರಪ್ಪ, ಲಿಂಗಾಪುರ ಶಿವಪ್ಪ ಚುನಾವಣಾ ಅಧಿಕಾರಿ ನಂದೀಶ್ ಅವರಿಗೆ ತಮ್ಮ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡ ಯಗಚಕುಪ್ಪೆ ಎಲ್.ಐ.ಸಿ ಶಿವಪ್ಪ ಚೌಡಸಮುದ್ರ ರಾಜಪ್ಪ ಮಂಚಿಬೀಡು ಕೆಂಡಗಣ್ಣ, ಲಿಂಗಾಪುರ ಹರೀಶ್, ಸೋಮನಾಥಪುರ ಮಾದೇಶ್, ವಡ್ಡಹಳ್ಳಿ ಕುಮಾರ್, ಶಿವಕುಮಾರ್, ರೈತ ಸಂಘ ಮಂಜುನಾಥ್, ಸೇರಿದಂತೆ ಉಪಸ್ಥಿತರಿದ್ದರು.

ಪಾಲಿಕೆ ವ್ಯಾಪ್ತಿ ಆಸ್ತಿ ತೆರಿಗೆ ಶೇ.5 ರಿಯಾಯಿತಿ ಜು.31ವರೆಗೆ ವಿಸ್ತರಣೆ

ಮೈಸೂರು, ಜು.3(ಎಸ್‌ಪಿಎನ್)– 2024–25ನೇ ಸಾಲಿನ ಆಸ್ತಿ ತೆರಿಗೆ ಪಾವತಿಗೆ ನೀಡಲಾಗುತ್ತಿರುವ ಶೇ.5ರ ರಿಯಾಯಿತಿ ಅವಧಿಯನ್ನು ಜು.31ರವರೆಗೆ ವಿಸ್ತರಿಸಿ ನಗರಾಭಿವೃದ್ಧಿ ಇಲಾಖೆ (ಪೌರಾಡಳಿತ–2 ಮತ್ತು ಮಂಡಳಿ) ಯ ಅಧೀನ ಕಾರ್ಯದರ್ಶಿ ಸತೀಶ್ ಕಬಾಡಿ ಬುಧವಾರ ಆದೇಶಿಸಿದ್ದಾರೆ. ರಾಜ್ಯದ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಪಾವತಿಯನ್ನು ಪರಿಣಾಮಕಾರಿಯಾಗಿ ಹೆಚ್ಚಿಸಲು ಹಾಗೂ ಸ್ವಯಂ ತೆರಿಗೆ ಪಾವತಿಯನ್ನು ಉತ್ತೇಜಿಸುವ ಸಲುವಾಗಿ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಕಲಂ 105(1)ರನ್ವಯ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ (ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ) ಆರ್ಥಿಕ ವರ್ಷದ ಪ್ರಾರಂಭದ 30 ದಿನಗಳಲ್ಲಿ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿ ಮಾಡಿದ್ದಲ್ಲಿ ಶೇ.5 ರಷ್ಟು ರಿಯಾಯಿತಿ ನೀಡಲು ಕಲ್ಪಿಸಿರುವ ಅವಧಿಯನ್ನು ಜು.31ವರೆಗೆ ವಿಸ್ತರಿಸಿ ಆದೇಶ ಹೊರಡಿಸಿದ್ದಾರೆ.



ಒಂಭತ್ತನೇ ತರಗತಿ ಪಠ್ಯದಲ್ಲಿ ಬಸವಣ್ಣನ ಕುರಿತಾದ ವಿಷಯ ಸಮಂಜಸ

ಮೈಸೂರು, ಜು.3(ಎಸ್‌ಪಿಎನ್)– ಈ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಶಾಲಾ ಶಿಕ್ಷಣ ಇಲಾಖೆ ಪ್ರಕಟಿಸಿರುವ ಒಂಭತ್ತನೇ ತರಗತಿಯ ಸಮಾಜ ವಿಜ್ಞಾನ ಪಠ್ಯ ಪುಸ್ತಕದಲ್ಲಿ ಬಸವಣ್ಣನವರನ್ನು ಕುರಿತು ಅಳವಡಿಸಿರುವ ವಿಷಯದಲ್ಲಿ ಯಾವುದೇ ಅವಾಸ್ತವ ಸಂಗತಿಗಳಿಂದ ಕೂಡಿಲ್ಲ ಎಂದು ಜಾಗತಿಕ ಲಿಂಗಾಯತ ಮಹಾಸಭಾ ಮೈಸೂರು ಜಿಲ್ಲಾ ಘಟಕದ ಅಧ್ಯಕ್ಷ ಶರಣ ಎಂ.ಮಹದೇವಪ್ಪ ತಿಳಿಸಿದ್ದಾರೆ.

ಈ ಹಿಂದಿನ ಪಠ್ಯದಲ್ಲಿದ್ದ ತಪ್ಪುಗಳನ್ನು ಸರಿಪಡಿಸಿ, ಬಸವಣ್ಣನವರ ವ್ಯಕ್ತಿತ್ವಕ್ಕೆ ಚ್ಯುತಿ ಬರದ ರೀತಿಯಲ್ಲಿ ನಿರೂಪಿಸಲಾಗಿದೆ. ಪಠ್ಯದಲ್ಲಿ ವಿಶ್ವಗುರು ಬಸವಣ್ಣನವರು ಸಾಂಸ್ಕೃತಿಕ ನಾಯಕ ಎಂಬ ಪಠ್ಯದಲ್ಲಿ ವೀರಶೈವ ಎಂಬ ಪದವನ್ನು ಕೈಬಿಟ್ಟಿರುವುದಕ್ಕೆ ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ವಿಭೂತಿ ಮಠದ ಡಾ.ಮಹಂತಲಿಂಗ ಶಿವಾಚಾರ್ಯ ಸ್ವಾಮೀಜಿ ಅವರ ತಕರಾರಿಗೆ ಯಾವುದೇ ಅರ್ಥವಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. 'ವೀರಶೈವ' ಪದವನ್ನು ತೆಗೆದು 'ಲಿಂಗಾಯತ' ಪದ ಸೇರಿಸಿರುವುದಕ್ಕೆ ಜಾಗತಿಕ ಲಿಂಗಾಯತ ಮಹಾಸಭಾ ಮೈಸೂರು ಜಿಲ್ಲಾ ಘಟಕ ಸರ್ಕಾರದ ನಿಲುವನ್ನು ತುಂಬು ಹೃದಯದಿಂದ ಸ್ವಾಗತಿಸಿ, ಅಭಿನಂದಿಸುತ್ತದೆ. ಈ ವಿಷಯದಲ್ಲಿ ಜಾಗತಿಕ ಲಿಂಗಾಯತ ಮಹಾಸಭಾ ಬೆಂಬಲಕ್ಕೆ ನಿಲ್ಲುತ್ತದೆ. ಹೊಸ ಪಠ್ಯಪುಸ್ತಕದ ವಿಷಯವಾಗಿ ಕೆಲವು ವ್ಯಕ್ತಿ ಹಾಗೂ ಸಂಸ್ಥೆಗಳಿಂದ ಏನಾದರೂ ಆಕ್ಷೇಪಣೆ ಬಂದರೆ ಸರ್ಕಾರ ಅದಕ್ಕೆ ಕಿವಿಗೊಡಬಾರದು ಎಂದು ಮನವಿ ಮಾಡಿದ್ದಾರೆ.

ಬೆಂ–ಮೈ ಎಕ್ಸ್‌ಪ್ರೆಸ್ ವೇನಲ್ಲಿ ಸಂಚಾರ ನಿಯಮ ಉಲ್ಲಂಘನೆ

ಒಂದೇ ತಿಂಗಳಲ್ಲಿ 8.99 ಕೋಟಿ ದಂಡ ವಿಧಿಸಿದ ಪೊಲೀಸರು

ಬೆಂಗಳೂರು,ಜು.3– ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ (ಎನ್‌ಹೆಚ್ 275) ಸಂಚಾರ ನಿಯಮ ಉಲ್ಲಂಘನೆ ಸಂಬಂಧ ಜೂನ್ 1ರಿಂದ 30ರವರೆಗಿನ ಒಂದೇ ತಿಂಗಳ 1,61,491 ಪ್ರಕರಣಗಳನ್ನು ದಾಖಲಿಸಿಕೊಂಡಿರುವ ಪೊಲೀಸರು, 8.99 ಕೋಟಿ ದಂಡ ವಿಧಿಸಿದ್ದಾರೆ.

ಈ ಪೈಕಿ 9,003 ಪ್ರಕರಣಗಳಿಗೆ ಸಂಬಂಧಿಸಿದ 48.23 ಲಕ್ಷ ದಂಡವಷ್ಟೇ ವಸೂಲಿಯಾಗಿದ್ದು, ಬಾಕಿ 1,52,488 ಪ್ರಕರಣಗಳ ಸಂಬಂಧ 8.51 ಕೋಟಿ ದಂಡವನ್ನು ವಾಹನ ಮಾಲೀಕರು ಪಾವತಿಸಬೇಕಿದೆ. ಸೀಟ್ ಬೆಲ್ಟ್ ಧರಿಸದ ಪ್ರಕರಣಗಳೇ ಅತೀ ಹೆಚ್ಚಿನ ಸಂಖ್ಯೆಯಲ್ಲಿವೆ. ಸೀಟ್ ಬೆಲ್ಟ್ ಧರಿಸದಿದ್ದರೆ ಮತ್ತು ಪಥ ಶಿಸ್ತು ಉಲ್ಲಂಘನೆಗೆ ತಲಾ 500 ರೂ., ಅತಿವೇಗಕ್ಕೆ 1 ಸಾವಿರ ರೂ. ಮತ್ತು ಚಾಲನೆ ವೇಳೆ ಮೊಬೈಲ್ ಬಳಕೆಗೆ 3 ಸಾವಿರ ರೂ. ದಂಡ ವಿಧಿಸಲಾಗುತ್ತಿದೆ. ಎಕ್ಸ್‌ಪ್ರೆಸ್ ವೇನಲ್ಲಿ ಆಯ್ದ 12 ಸ್ಥಳಗಳಲ್ಲಿ 3.5 ಕೋಟಿ ರೂ. ವೆಚ್ಚದಲ್ಲಿ 'ಇಂಟಲಿಜೆಂಟ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಂ (ಐ.ಟಿ.ಎಂ.ಎಸ್) ವ್ಯವಸ್ಥೆಯಡಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಈ ವ್ಯವಸ್ಥೆಯಡಿಯಲ್ಲಿ ಜುಲೈ 1ರಿಂದ ಸಂಚಾರ ನಿಯಮ ಉಲ್ಲಂಘನೆಗಳು ದಾಖಲಾಗುತ್ತಿವೆ. ಉಲ್ಲಂಘಿಸಿದವರಿಗೆ ತಕ್ಷಣ ಇ–ಚಲನ್ ಮೂಲಕ ನೋಟಿಸ್ ರವಾನೆಯಾಗುತ್ತಿದೆ.



ನಿಯಮ ಉಲ್ಲಂಘಿಸಿದ ಸ್ಥಳ, ದಿನಾಂಕ, ಸಮಯ, ಉಲ್ಲಂಘನೆ ಬಗೆ ಹಾಗೂ ವಾಹನ ನೋಂದಣಿ ಸಂಖ್ಯೆ ಸಹಿತ ಮಾಲೀಕರ ಮೊಬೈಲ್ ಫೋನ್‌ಗೆ ಎಸ್‌ಎಂಎಸ್ ರವಾನೆಯಾಗುತ್ತದೆ. ಕಳುಹಿಸಿದ ಲಿಂಕ್ ಮೂಲಕ ದಂಡ ಪಾವತಿಸಬಹುದು. ಉಲ್ಲಂಘನೆ ಬಗ್ಗೆ ಬೆಂಗಳೂರಿನ ಕಂಟ್ರೋಲ್ ರೂಂನಲ್ಲಿ ನಿರಂತರ ಕಣ್ಗಾವಲಿಡಲಾಗಿದೆ.

ಮೈಶುಗರ್ ಕಾರ್ಖಾನೆಯ ವಿದ್ಯುತ್ ಬಿಲ್ ಮನ್ನಾ ಮಾಡಿ

ಸಿಎಂ, ಡಿಸಿಎಂ, ಇಂಧನ ಸಚಿವರಿಗೆ ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಪತ್ರ ಬರೆದು ಒತ್ತಾಯ



ಮಂಡ್ಯ,ಜು.3– ಮಂಡ್ಯ ಜಿಲ್ಲೆಯ ರೈತರ ಜೀವನಾಡಿ ಮೈಶುಗರ್ ಕಾರ್ಖಾನೆಯ ಬಾಕಿ ಉಳಿದಿರುವ ವಿದ್ಯುತ್ ಬಿಲ್ ಮನ್ನಾ ಮಾಡುವಂತೆ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಇಂಧನ ಸಚಿವ ಕೆ.ಜೆ.ಜಾರ್ಜ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅವರಿಗೆ ಪತ್ರ ಬರೆದಿರುವ ಅವರು, ಮೈಶುಗರ್ ರಾಜ್ಯದ ಏಕೈಕ ಸರ್ಕಾರಿ ಸ್ವಾಮ್ಯದ ಕಾರ್ಖಾನೆಯಾಗಿದೆ. ದೇಶ ಮಾತ್ರವಲ್ಲ ಇಡೀ ಏಷ್ಯಾ ಖಂಡದಲ್ಲೇ ಮೊದಲು ಆರಂಭವಾಗಿರುವ ಕಾರ್ಖಾನೆಯು 1932ರಲ್ಲಿ ಪ್ರಾರಂಭವಾಯಿತು. ಇದು ಮಂಡ್ಯ ಜಿಲ್ಲೆಯ ಹಾಗೂ ಕರ್ನಾಟಕದ ಹೆಮ್ಮೆಯಾಗಿದೆ. ಆದರೆ, ಇದೀಗ ಕಳೆದ 25 ವರ್ಷಗಳಿಂದ ವಿದ್ಯುತ್ ಬಿಲ್ ಕಟ್ಟದೆ ತೀವ್ರ ಸಂಕಷ್ಟಕ್ಕೆ ಗುರಿಯಾಗಿದೆ. ಇದರಿಂದ ಪಾರು ಮಾಡುವ ಗುರುತರ ಜವಾಬ್ದಾರಿ ಸರ್ಕಾರದ ಮೇಲಿದ್ದು, ಸಂಪುಟ ಸಭೆ ಕರೆದು ಬಾಕಿ ಇರುವ ವಿದ್ಯುತ್ ಬಿಲ್ 52.25 ಕೋಟಿ ರೂಪಾಯಿಯನ್ನು ಮನ್ನಾ ಮಾಡಬೇಕೆಂದು ಕೋರಿದ್ದಾರೆ.

ಹಲವು ವರ್ಷಗಳಿಂದ ಹಲವಾರು ಕಾರಣಗಳಿಂದಾಗಿ ಬಂದ್ ಆಗಿದ್ದ ಸಕ್ಕರೆ ಕಾರ್ಖಾನೆಯು ಕಳೆದ ವರ್ಷ ರಾಜ್ಯ ಕಾಂಗ್ರೆಸ್ ಸರ್ಕಾರದ ಮುತುವರ್ಜಿಯಿಂದ ಪುನರಾರಂಭವಾಗಿದೆ. ಕಳೆದ ವರ್ಷ ಕಾರ್ಖಾನೆಯು ಮಂಡ್ಯದ ರೈತರು ಬೆಳೆದ 2 ಲಕ್ಷ 41 ಸಾವಿರ ಟನ್ ಕಬ್ಬನ್ನು ನುರಿಸಲಾಗಿತ್ತು. ರೈತರಿಗೆ ಕಬ್ಬಿನ ಹಣ ಪಾವತಿಯಾಗಿದೆ. ಕಾರ್ಖಾನೆಯಿಂದ ರೈತರಿಗೆ ತುಂಬಾ ಅನುಕೂಲವಾಗುತ್ತಿದೆ. ಈ ವರ್ಷ ಕನಿಷ್ಠ 2 ಲಕ್ಷ 5 ಸಾವಿರ ಟನ್ ಕಬ್ಬನ್ನು ನುರಿಸುವ ಸಂಬಂಧ ರೈತರು ಒಪ್ಪಂದವನ್ನು ಮಾಡಿಕೊಂಡಿದ್ದಾರೆ ಎಂದು ತಿಳಿಸಿದ್ದಾರೆ.

ಕಾರ್ಖಾನೆ ಕೆಲವು ಅನಿವಾರ್ಯ ಕಾರಣಗಳಿಂದ ಕಳೆದ 25 ವರ್ಷಗಳಿಂದ ವಿದ್ಯುತ್ ಬಿಲ್ ಕಟ್ಟಿಲ್ಲ. 52.25 ಕೋಟಿ ರೂ. ವಿದ್ಯುತ್ ಬಿಲ್ ಬಾಕಿ ಇರುವ ಬಗ್ಗೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿ ಕಾರ್ಖಾನೆಗೆ ನೋಟಿಸ್ ನೀಡಿದೆ. 7 ದಿನಗಳಲ್ಲಿ ವಿದ್ಯುತ್ ಪಾವತಿ ಮಾಡುವಂತೆ ಜೂನ್ 3 ರಂದೇ ನೀಡಿದ ನೋಟಿಸ್‌ನಲ್ಲಿ ತಿಳಿಸಲಾಗಿದೆ. ಆದರೆ, ಕಾರ್ಖಾನೆಯ ಆರ್ಥಿಕ ಪರಿಸ್ಥಿತಿ ಸಮರ್ಪಕವಾಗಿಲ್ಲ ಕೋಟ್ಯಂತರ ರೂಪಾಯಿ ನಷ್ಟದಲ್ಲಿದೆ ಎಂದು ಅವರು ಹೇಳಿದ್ದಾರೆ. ಅಷ್ಟೊಂದು ಹಣವನ್ನು ವಿದ್ಯುತ್ ಬಿಲ್‌ಗೆ ಪಾವತಿಸಿದರೆ, ಈ ಹಂಗಾಮಿನಲ್ಲಿ ಕಬ್ಬು ನುರಿಸುವುದೇ ಕಷ್ಟವಾಗಬಹುದು. ಇದರಿಂದ ಈಗಾಗಲೇ ಕಾರ್ಖಾನೆ ನಂಬಿ ಕಬ್ಬು ಬೆಳೆದಿರುವ ರೈತರಿಗೆ ನಷ್ಟವಾಗಬಹುದು. ಈ ಹಿನ್ನೆಲೆಯಲ್ಲಿ ಕ್ಯಾಬಿನೆಟ್‌ನಲ್ಲಿ ನಿರ್ಣಯ ಕೈಗೊಂಡು ವಿದ್ಯುತ್ ಬಿಲ್ ಮನ್ನಾ ಮಾಡಬೇಕು ಎಂದು ಮನವಿ ಮಾಡಿದ್ದಾರೆ.

ಪ್ರತ್ಯೇಕ ಪ್ರಕರಣಗಳಲ್ಲಿ ಮೂವರ ನಾಪತ್ತೆ

ಮಂಡ್ಯ,ಜು.3– ಜಿಲ್ಲೆಯ ಮೂರು ಪ್ರತ್ಯೇಕ ಪ್ರಕರಣಗಳಲ್ಲಿ ಮೂವರು ನಾಪತ್ತೆಯಾಗಿದ್ದಾರೆ. ಮೊದಲನೆ ಪ್ರಕರಣದಲ್ಲಿ ಮಂಡ್ಯದ ಕಾವೇರಿ ನಗರದಲ್ಲಿ ವಾಸವಾಗಿದ್ದ ಶ್ರೀಧರ.ಬಿ(33) ಎಂಬುವವರು ಕಾಣೆಯಾಗಿದ್ದಾರೆ. ಮಂಡ್ಯ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿರುತ್ತದೆ. ವ್ಯಕ್ತಿಯ ಸುಳಿವು ಸಿಕ್ಕಲ್ಲಿ 9480804800, 08232–224200, 9480804808 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಗ್ರಾಮಾಂತರ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ಮಂಡ್ಯದ ನಗರದ ಪುಟ್ಟರಾಜು (35) ಎಂಬುವವರು ಕಾಣೆಯಾಗಿದ್ದಾರೆ ಎಂದು ಮಂಡ್ಯ ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಇದೇ ರೀತಿ ಮಂಡ್ಯದ ನಗರದ ರಘುರಾವ್ (48) ಎಂಬುವವರು ಕಾಣೆಯಾಗಿದ್ದಾರೆ ಎಂದು ಮಂಡ್ಯ ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಇವರುಗಳ ಸುಳಿವು ಸಿಕ್ಕಲ್ಲಿ 08232–224500/08232–224666 ಅನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಮೈಸೂರು ಮಿತ್ರ

ದೇಶ - ವಿದೇಶ

ಹತ್ರಾಸ್ ಕಾಲ್ತುಳಿತಕ್ಕೆ 121 ಮಂದಿ ಬಲಿ



ಹತ್ರಾಸ್: ಉತ್ತರಪ್ರದೇಶದ ಹತ್ರಾಸ್‌ನಲ್ಲಿ ನಡೆದ ಧಾರ್ಮಿಕ ಸಭೆಯೊಂದರಲ್ಲಿ ನಡೆದ ಕಾಲ್ತುಳಿತದಲ್ಲಿ 121 ಮಂದಿ ಸಾವನ್ನಪ್ಪಿದ್ದು, ಅನೇಕರು ಗಾಯಗೊಂಡಿದ್ದಾರೆ. ಈ ಪೈಕಿ ಗಾಯಗೊಂಡ ನೂರಾರು ಜನರನ್ನು ಸಮೀಪದ ಎಟಾ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ನಡುವೆ, ಗಾಯಾಳುಗಳನ್ನು ಹಾಗೂ ಶವಗಳನ್ನು ಎಟಾ ಆಸ್ಪತ್ರೆಗೆ ಟ್ರಕ್ ಹಾಗೂ ಟೆಂಪೋಗಳಲ್ಲಿ ತರಲಾಗಿದೆ. ಹತ್ರಾಸ್ ಭೋಲೆಬಾಬಾ ಸತ್ಸಂಗ್ ಕಾಲ್ತುಳಿತ ಘಟನೆಯ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಲೋಕಸಭೆಯಲ್ಲಿನ ತಮ್ಮ ಭಾಷಣದ ವೇಳೆ ತೀವ್ರ ಆಘಾತ ವ್ಯಕ್ತಪಡಿಸಿದ್ದಾರೆ. ಮೃತರ ಕುಟುಂಬಕ್ಕೆ ಮೋದಿ ತಲಾ 2 ಲಕ್ಷ ರೂ. ಹಾಗೂ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ತಲಾ 2 ಲಕ್ಷ ರೂ. ಪರಿಹಾರ ಘೋಷಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಕೂಡ ಘಟನೆಯ ಬಗ್ಗೆ ಅತೀವ ದುಃಖ ವ್ಯಕ್ತಪಡಿಸಿದ್ದಾರೆ.

ಸತ್ಸಂಗ ಹಮ್ಮಿಕೊಂಡವರು ಬಾಬಾ ನಾರಾಯಣ ಸಾಕರ್ ಹರಿ ಅಲಿಯಾಸ್ ಭೋಲೆ ಬಾಬಾ. ಇವರು ಉತ್ತರ ಪ್ರದೇಶದ ಎಟಾದವರು. ತಾವು ಗುಪ್ತಚರ ದಳದಲ್ಲಿ ಉದ್ಯೋಗಿ ಆಗಿದ್ದೆ ಎಂದು ಹೇಳುವ ಅವರು 26 ವರ್ಷಗಳ ಹಿಂದೆ ತಮ್ಮ ಸರ್ಕಾರಿ ಕೆಲಸ ತೊರೆದು ಧಾರ್ಮಿಕ ಪ್ರವಚನ ನೀಡಲು ಪ್ರಾರಂಭಿಸಿದ್ದರು. ಪಶ್ಚಿಮ ಉತ್ತರ ಪ್ರದೇಶ, ಉತ್ತರಾಖಂಡ, ಹರಿಯಾಣ, ರಾಜಸ್ಥಾನ, ದೆಹಲಿ ಸೇರಿದಂತೆ ದೇಶಾದ್ಯಂತ ಭೋಲೆ ಬಾಬಾಗೆ ಲಕ್ಷಾಂತರ ಅನುಯಾಯಿಗಳಿದ್ದಾರೆ.

ಪಾಕಿಸ್ತಾನದಲ್ಲಿ ಲೀಟರ್ ಪೆಟ್ರೋಲ್‌ಗೆ 265 ರೂ.



ಇಸ್ಲಾಮಾಬಾದ್: ಪಾಕಿಸ್ತಾನದಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ದರಗಳನ್ನು ತೀವ್ರವಾಗಿ ಹೆಚ್ಚಿಸಲಾಗಿದೆ. ಬಕ್ರೀದ್ ಹಬ್ಬದ ಮುಂಚಿತವಾಗಿ ಇಂಧನ ದರಗಳನ್ನು ಸ್ವಲ್ಪ ಮಟ್ಟಿಗೆ ಕಡಿಮೆ ಮಾಡಲಾಗಿತ್ತು. ಆದರೆ, ಪಾಕಿಸ್ತಾನದಲ್ಲಿ ಹೊಸ ಹಣಕಾಸು ವರ್ಷ ಪ್ರಾರಂಭವಾಗುತ್ತಿದ್ದಂತೆಯೇ ಮತ್ತೆ ಪೆಟ್ರೋಲ್ ಹಾಗೂ ಡೀಸೆಲ್ ದರಗಳನ್ನು ಹೆಚ್ಚಿಸಲಾಗಿದೆ ಹೊಸ ದರಗಳು ಮುಂದಿನ 15 ದಿನಗಳವರೆಗೆ ಜಾರಿಯಲ್ಲಿರುತ್ತವೆ. ಅಧಿಸೂಚನೆ ಪ್ರಕಾರ, 2024–25ರ ಬಜೆಟ್‌ನ ಮೊದಲ ದಿನದಂದು ಪೆಟ್ರೋಲ್ ಮತ್ತು ಹೈಸ್ಪೀಡ್ ಡೀಸೆಲ್ (ಎಚ್‌ಎಸ್‌ಡಿ) ಬೆಲೆಗಳನ್ನು ಕ್ರಮವಾಗಿ ಲೀಟರ್‌ಗೆ 7.45 ಮತ್ತು 9.56 ರೂ.ಗೆ ಹೆಚ್ಚಿಸಲಾಗಿದೆ ಕಳೆದ ತಿಂಗಳು, ಈದ್ ಉಲ್ ಅಧಾಗೆ ಮುಂಚಿತವಾಗಿ ಸರ್ಕಾರವು ಪೆಟ್ರೋಲ್ ಮತ್ತು ಎಚ್‌ಎಸ್‌ಡಿ ಬೆಲೆಯನ್ನು ಕ್ರಮವಾಗಿ ಲೀಟರ್‌ಗೆ 10.20 ರೂ. ಮತ್ತು 2.33 ಪಾಕಿಸ್ತಾನಿ ರೂ.ಗಳಷ್ಟು ಕಡಿತಗೊಳಿಸಿತ್ತು. ತೈಲ ಮತ್ತು ಅನಿಲ ನಿಯಂತ್ರಣ ಪ್ರಾಧಿಕಾರದ ಶಿಫಾರಸುಗಳ ಆಧಾರದ ಮೇಲೆ ಮತ್ತು ಪ್ರಧಾನಿ ಅವರ ಅನುಮೋದನೆಯೊಂದಿಗೆ ಪೆಟ್ರೋಲಿಯಂ ಉತ್ಪನ್ನಗಳ ಬೆಲೆಗಳನ್ನು ಹೆಚ್ಚಿಸಲಾಗಿದೆ. ಜುಲೈ 1 ರಿಂದ 15ರವರೆಗೆ ಹೊಸ ಎಕ್ಸ್–ಡಿಪೋ ಪೆಟ್ರೋಲ್ ಬೆಲೆ ಪ್ರತಿ ಲೀಟರ್‌ಗೆ 265.61 ರೂ.ಗಳಾಗಿದ್ದು, ಹಿಂದಿನ 15 ದಿನಗಳಲ್ಲಿ ಇದ್ದ 258.16 ರೂ.ಗೆ ಹೋಲಿಸಿದರೆ, ಬೆಲೆ ಶೇ.2.9ರಷ್ಟು ಹೆಚ್ಚಾಗಿದೆ ಎಂದು ಡಾನ್ ಪತ್ರಿಕೆ ವರದಿ ಮಾಡಿದೆ.

ಅಮರನಾಥ ಯಾತ್ರಿಗಳಿದ್ದ ಬಸ್ ಬ್ರೇಕ್ ಫೇಲ್: ಕಾಪಾಡಿದ ಯೋಧರು



ಜಮ್ಮು: ಅಮರನಾಥ ಯಾತ್ರೆಯಿಂದ ಹಿಂದಿರುಗುತ್ತಿದ್ದ ಯಾತ್ರಾರ್ಥಿಗಳ ಬಸ್ ಬ್ರೇಕ್ ಫೇಲ್ ಆದ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಬ್ರೇಕ್‌ಫೇಲ್ ಆದ ಬಸ್‌ನಲ್ಲಿ 44 ಪ್ರಯಾಣಿಕರು ಯಾತ್ರೆಯಿಂದ ಹಿಂದಿರುಗುತ್ತಿದ್ದರು. ಮಂಗಳವಾರ ಬೆಳಗ್ಗೆ ರಾಮಬನ್ ಜಿಲ್ಲೆಯ ಹೆದ್ದಾರಿ ಮಾರ್ಗವಾಗಿ ತೆರಳುತ್ತಿದ್ದ ಬಸ್ ಬ್ರೇಕ್‌ಫೇಲ್ ಆಗಿ ಚಾಲಕನ ನಿಯಂತ್ರಣ ಕಳೆದುಕೊಂಡಿತ್ತು. ಕೂಡಲೇ ದೇವರಂತೆ ಆಗಮಿಸಿದ ಸೈನಿಕರು ಎಲ್ಲರ ಜೀವವನ್ನು ಉಳಿಸಿದ್ದಾರೆ. ಈ ಬಸ್‌ನಲ್ಲಿದ್ದ ಎಲ್ಲಾ ಯಾತ್ರಾರ್ಥಿಗಳು ಪಂಜಾಬ್ ಮೂಲದವರು ಎಂದು ವರದಿಯಾಗಿದೆ.

ಬನಿಹಾಲ ಸಮೀಪದ ನಚಲಾನಾ ಬಳಿ ಬರುತ್ತಿದ್ದಂತೆ ಬಸ್‌ನ ಬ್ರೇಕ್ ಫೇಲ್ ಆಗಿತ್ತು. ಚಾಲಕ ಬಸ್ ನಿಲ್ಲಿಸಲು ಪ್ರಯತ್ನಿಸಿದರೂ ಸಾಧ್ಯವಾಗಿಲ್ಲ. ಇದರಿಂದ ಬಸ್ ಅಡ್ಡಾದಿಡ್ಡಿಯಾಗಿ ಚಲಿಸಲು ಆರಂಭಿಸಿದೆ. ರಸ್ತೆಯ ಪಕ್ಕದಲ್ಲಿಯೇ ಆಳವಾದ ಕಣಿವೆ ಇರುವ ಕಾರಣ ಕೆಲ ಪ್ರಯಾಣಿಕರು ಚಲಿಸುತ್ತಿರುವ ಬಸ್‌ನಿಂದಲೇ ಕೆಳಗೆ ಹಾರಿದ್ದಾರೆ. ಘಟನೆಯಲ್ಲಿ ಆರು ಪುರುಷರು, ಮೂರು ಮಹಿಳೆಯರು ಹಾಗೂ ಒಂದು ಮಗು ಸೇರಿದಂತೆ 10 ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಬ್ರೇಕ್‌ಫೇಲ್ ಆದ ಬಸ್ ಗಮನಿಸಿದ ಸೈನಿಕರು ಮತ್ತು ಪೊಲೀಸರು ಕೂಡಲೇ ಕಾರ್ಯಪ್ರವೃತ್ತರಾಗಿದ್ದಾರೆ. ಬಸ್ ಚಕ್ರಕ್ಕೆ ಸಾಧ್ಯವಾದಷ್ಟು ದೊಡ್ಡ ದೊಡ್ಡ ಕಲ್ಲುಗಳನ್ನು ಅಡ್ಡಲಾಗಿ ಹಾಕಿದ್ದಾರೆ. ಈ ಮೂಲಕ ಬಸ್ ನದಿಗೆ ಉರುಳುವುದನ್ನು ತಪ್ಪಿಸಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ನ್ಯೂಯಾರ್ಕ್‌ನಲ್ಲಿ ಭಾರತೀಯ ದಿನದ ಮೆರವಣಿಗೆಯಲ್ಲಿ ಅಯೋಧ್ಯಾ ರಾಮಮಂದಿರ ಪ್ರಮುಖ ಆಕರ್ಷಣೆ



ವಾಷಿಂಗ್ಟನ್: ಆಗಸ್ಟ್ 18 ರಂದು ಅಮೆರಿಕದ ನ್ಯೂಯಾರ್ಕ್‌ನಲ್ಲಿ ನಡೆಯಲಿರುವ ಭಾರತೀಯ ದಿನದ ಹಾಗೂ 500 ವರ್ಷಗಳ ಕನಸಾಗಿದ್ದ ರಾಮ ಮಂದಿರ ನನಸಾಗಿರುವ ಹಿನ್ನೆಲೆಯಲ್ಲಿ ಮಂದಿರದ ಪ್ರತಿಕೃತಿಯನ್ನು ಮೆರವಣಿಗೆಯಲ್ಲಿ ಟ್ಯಾಬ್ಲೋ ರೀತಿ ಪ್ರದರ್ಶನ ಮಾಡಲಿದ್ದಾರೆ.

ನ್ಯೂಯಾರ್ಕ್‌ನಲ್ಲಿ ನಡೆಯಲಿರುವ ಭಾರತೀಯ ದಿನದ ಪರೇಡ್‌ನಲ್ಲಿ ಸುಮಾರು 18 ಅಡಿ ಉದ್ದ, 9 ಅಡಿ ಅಗಲ ಹಾಗೂ 8 ಅಡಿ ಎತ್ತರ ಇರುವ ಅಯೋಧ್ಯಾ ರಾಮಮಂದಿರದ ಪ್ರತಿಕೃತಿಯನ್ನು ನಿರ್ಮಾಣ ಮಾಡಲಾಗುತ್ತಿದ್ದು, ಆಗಸ್ಟ್ 18 ರಂದು ನಡೆಯಲಿರುವ ಮೆರವಣಿಗೆಯ ಪ್ರಮುಖ ಆಕರ್ಷಣೆ ಆಗಿರಲಿದೆ ಎಂದು ಅಮೆರಿಕದ ವಿಶ್ವ ಹಿಂದೂ ಪರಿಷತ್‌ನ ಪ್ರಧಾನ ಕಾರ್ಯದರ್ಶಿ ಅಮಿತಾಭ್ ಮಿತ್ತಲ್ ಮಾಹಿತಿ ನೀಡಿದ್ದಾರೆ. ಹಾಗೆ ನೋಡಿದರೆ ಅಮೆರಿಕ ದೇಶದಲ್ಲಿ ಇದೇ ಮೊದಲ ಬಾರಿಗೆ ಅಯೋಧ್ಯಾ ರಾಮಮಂದಿರದ ಪ್ರತಿಕೃತಿ ಪ್ರದರ್ಶನ ಮಾಡಲಾಗುತ್ತಿದೆ. ಭಾರತದ ಹೊರಗೆ ಭಾರತ ದೇಶದ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮಿಸುವ ಅತಿ ದೊಡ್ಡ ಕಾರ್ಯಕ್ರಮ ಇದಾಗಿದೆ. ನ್ಯೂಯಾರ್ಕ್‌ನಲ್ಲಿ ಪ್ರತಿ ವರ್ಷ ಆಗಸ್ಟ್ 18ರಂದು ಭಾರತೀಯ ದಿನದ ಮೆರವಣಿಗೆ ನಡೆಸಲಾಗುತ್ತದೆ. ಈ ಮೆರವಣಿಗೆಯಲ್ಲಿ ಸರಾಸರಿ 1 ಲಕ್ಷದ 50 ಸಾವಿರ ಜನರು ಭಾಗಿಯಾಗುತ್ತಾರೆ. ನ್ಯೂಯಾರ್ಕ್ ನಗರದ ಮಿಡ್‌ಟೌನ್ ರಸ್ತೆಯ ಈಸ್ಟ್ 38ನೇ ರಸ್ತೆಯಿಂದ ಈಸ್ಟ್ 27ನೇ ರಸ್ತೆವರೆಗೆ ಈ ಮೆರವಣಿಗೆ ಸಾಗುತ್ತದೆ.

ಅದಾನಿ ವಿರುದ್ಧ ಅಕ್ರಮದ ಆರೋಪ; ಹಿಂಡನ್‌ಬರ್ಗ್‌ಗೆ ಸೆಬಿ ನೋಟಿಸ್



ನವದೆಹಲಿ, ಜು.3– ಗೌತಮ್ ಅದಾನಿ ಒಡೆತನದ ಅದಾನಿ ಸಮೂಹ ಭಾರಿ ಗೋಲ್‌ಮಾಲ್ ನಡೆಸಿದೆ ಎಂದು ಆರೋಪ ಮಾಡಿದ್ದ ಅಮೆರಿಕ ಮೂಲದ ಹಿಂಡನ್‌ಬರ್ಗ್ ಸಂಸ್ಥೆ ವಿರುದ್ಧ ಷೇರು ಮಾರುಕಟ್ಟೆ ನಿಯಂತ್ರಣಾ ಸಂಸ್ಥೆ 'ಸೆಬಿ' ನೋಟಿಸ್ ಜಾರಿ ಮಾಡಿದೆ. ಅದಾನಿ ವಿರುದ್ಧ ಆರೋಪ ಮಾಡಿದ ವೇಳೆ ಶಾರ್ಟ್ ಸೆಲ್ಲಿಂಗ್ ನಡೆಸುವ ಮೂಲಕ ಷೇರು ಬೆಲೆ ತಿರುಚಿದ ಆರೋಪದ ಕಾರಣಕ್ಕಾಗಿ ಸೆಬಿ ಈ ನೋಟಿಸ್ ಜಾರಿ ಮಾಡಿದೆ. ಆದರೆ, ಸೆಬಿ ನೋಟಿಸ್ ಅಸಂಬದ್ಧ ಎಂದು ಕಿಡಿಕಾರಿರುವ ಹಿಂಡನ್‌ಬರ್ಗ್ ಸಂಸ್ಥೆ, ಭಾರತದಲ್ಲಿ ಅತ್ಯಂತ ಪ್ರಭಾವಿ ವ್ಯಕ್ತಿಗಳ ಅಕ್ರಮ ಬಯಲಿಗೆಳೆದಿದ್ದಕ್ಕೆ ನೋಟಿಸ್ ನೀಡಿ ನಮ್ಮನ್ನು ಹೆದರಿಸುವ ಕೆಲಸ ಮಾಡಲಾಗುತ್ತಿದೆ ಎಂದು ಕಿಡಿಕಾರಿದೆ. ಇದೇ ವೇಳೆ ಭಾರತದ ಕೋಟಕ್ ಬ್ಯಾಂಕ್, ಇಂಥ ಹೂಡಿಕೆ ಮಾಡಲೆಂದೇ ವಿದೇಶದಲ್ಲಿ ಹೂಡಿಕೆ ವಿಭಾಗವೊಂದನ್ನು ತೆರೆದಿದೆ. ಅದರ ಮೂಲಕವೇ ನಾವು ಅದಾನಿ ಕಂಪನಿಯ ಷೇರುಗಳನ್ನು ಶಾರ್ಟ್ ಮಾಡಿದ್ದು ಎಂದು ಹಿಂಡನ್‌ಬರ್ಗ್ ಹೇಳಿದೆ. ಆದರೆ ಈ ಆರೋಪವನ್ನು ಕೋಟಕ್ ಸ್ಪಷ್ಟವಾಗಿ ತಳ್ಳಿಹಾಕಿದೆ ಹಾಗೂ ಹಿಂಡನ್‌ಬರ್ಗ್ ಜತೆ ನಾವು ಯಾವುದೇ ನಂಟು ಹೊಂದಿಲ್ಲ ಎಂದು ಸ್ಪಷ್ಟಪಡಿಸಿದೆ.

ಮೈಸೂರು ಪಾಲಿಕೆಯ 252 ಪೌರಕಾರ್ಮಿಕರ ಕಾಯಂಗೆ ಆಗ್ರಹ

● ಪೌರಕಾರ್ಮಿಕರ ಸಂಘದ ಸಭೆಯಲ್ಲಿ ನಿರ್ಧಾರ ● ನೇಮಕಾತಿ ಕುರಿತು ಜಾಗೃತಿ ಕಾರ್ಯಕ್ರಮ



ಮೈಸೂರಿನ ಪಡುವಾರಹಳ್ಳಿಯಲ್ಲಿರುವ ಬಾಬು ಜಗಜೀವನ್‌ರಾಂ ಭವನದಲ್ಲಿ ಬುಧವಾರ ಕರ್ನಾಟಕ ರಾಜ್ಯ ನಗರಪಾಲಿಕೆ, ನಗರಸಭೆ, ಪುರಸಭೆಗಳ ಪೌರಕಾರ್ಮಿಕರ ಮಹಾ ಸಂಘದ ಜಿಲ್ಲಾ ಸಮಿತಿ ವತಿಯಿಂದ ಆಯೋಜಿಸಿದ್ದ ನೇಮಕಾತಿ ಕುರಿತ ಜಾಗೃತಿ ಕಾರ್ಯಕ್ರಮವನ್ನು ಮಾಜಿ ಮೇಯರ್ ನಾರಾಯಣ್ ಉದ್ಘಾಟಿಸಿದರು.

ಮೈಸೂರು, ಜು.3(ಎಂಟಿವೈ)– ಮೈಸೂರು ಮಹಾನಗರ ಪಾಲಿಕೆಯಲ್ಲಿ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವ 252 ಪೌರಕಾರ್ಮಿಕರನ್ನು ಜೇಷ್ಠತೆ ಆಧರಿಸಿ ಕಾಯಂ ಮಾಡುವಂತೆ ಒತ್ತಾಯಿಸುವ ನಿಟ್ಟಿನಲ್ಲಿ ಪೌರಕಾರ್ಮಿಕರ ಸಂಘದ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ.

ಮೈಸೂರಿನ ಪಡುವಾರಹಳ್ಳಿಯಲ್ಲಿರುವ ಬಾಬು ಜಗಜೀವನ್‌ರಾಂ ಭವನದಲ್ಲಿ ಬುಧವಾರ ಕರ್ನಾಟಕ ರಾಜ್ಯ ನಗರ ಪಾಲಿಕೆ, ನಗರಸಭೆ, ಪುರಸಭೆಗಳ ಪೌರಕಾರ್ಮಿಕರ ಮಹಾ ಸಂಘದ ಜಿಲ್ಲಾ ಸಮಿತಿ ವತಿಯಿಂದ ಆಯೋಜಿಸಿದ್ದ ನೇಮಕಾತಿ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಪೌರಕಾರ್ಮಿಕರ ಹಿತಕಾಯುವ ನಿರ್ಣಯ ಅಂಗೀಕರಿಸಲಾಯಿತು.

ಸಭೆಯಲ್ಲಿ ಕರ್ನಾಟಕ ರಾಜ್ಯ ನಗರ ಪಾಲಿಕೆ, ನಗರಸಭೆ, ಪುರಸಭೆಗಳ ಪೌರ ಕಾರ್ಮಿಕರ ಮಹಾಸಂಘದ ರಾಜ್ಯಾಧ್ಯಕ್ಷರೂ ಆದ ಮಾಜಿ ಮೇಯರ್ ನಾರಾಯಣ ಮಾತನಾಡಿ, ಮಹಾನಗರ ಪಾಲಿಕೆಯಲ್ಲಿ ಪ್ರಸ್ತುತ 1300 ಪೌರಕಾರ್ಮಿಕರು ನೇರ ಪಾವತಿ ಮತ್ತು ಹೆಚ್ಚುವರಿ ಪಾವತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಅವರಲ್ಲಿ 252 ಪೌರಕಾರ್ಮಿಕರನ್ನು ಕಾಯಂಗೊಳಿಸಲು ನಿರ್ಧರಿಸಲಾಗಿದೆ. ಈ ವೇಳೆ ಪೌರಕಾರ್ಮಿಕರ ಜೇಷ್ಠತೆ ಪರಿಗಣಿಸಬೇಕು. ಅರ್ಜಿ ಸಲ್ಲಿಸಲು 55 ವರ್ಷ ವಯಸ್ಸು ನಿಗದಿಪಡಿಸಿದ್ದಾರೆ. ಕೆಲವು ಕಾರ್ಮಿಕರಿಗೆ ಈಗಾಗಲೇ 53, 54 ವರ್ಷವಾಗಿದೆ. ಇವರಿಗೆ ಮೊದಲ ಪ್ರಾಶಸ್ತ್ಯ ನೀಡಬೇಕು. ಈಗ ಇವರನ್ನು ಕಾಯಂ ಮಾಡದಿದ್ದರೆ ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗುತ್ತಾರೆ. ನೇಮಕಾತಿ ಪ್ರಾಧಿಕಾರ ಇದನ್ನು ಆದ್ಯತೆಯಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ಪೌರಕಾರ್ಮಿಕರ ಆಯ್ಕೆ ಸಮಿತಿ ಪ್ರಾಧಿಕಾರ ರಚಿಸಲಾಗಿದೆ. ಈ ಸಮಿತಿಯಲ್ಲಿ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ಇರಬೇಕು. ಆದರೆ, ಮಹಾನಗರ ಪಾಲಿಕೆಯ ಆರೋಗ್ಯ ವಿಭಾಗದ ಐವರು ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಇದು ಹಲವು ಅನುಮಾನಗಳಿಗೆ ಎಡೆ ಮಾಡಿದೆ. ಹಾಗಾಗಿ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಸೇರಿದಂತೆ ಬೇರೆ ಇಲಾಖೆ ಅಧಿಕಾರಿಗಳನ್ನು ನಿಯೋಜಿಸಬೇಕು. ನೇಮಕಾತಿ ಪ್ರಕ್ರಿಯೆಯನ್ನು ಸರ್ಕಾರವೇ ಮಾಡುತ್ತಿದೆ. ಇದರಲ್ಲಿ ಯಾರು ಮಧ್ಯಪ್ರವೇಶ ಮಾಡುವುದಿಲ್ಲ. ಆದರೆ, ಕೆಲವು ಪೌರಕಾರ್ಮಿಕ ಮುಖಂಡರು ಕೆಲಸ ಕೊಡಿಸುವುದಾಗಿ ನಂಬಿಸಿ ಹಣ ಕೇಳುತ್ತಿರುವುದು ನಮ್ಮ ಗಮನಕ್ಕೆ ಬಂದಿದೆ. ಈ ಬಗ್ಗೆ ಪೌರಕಾರ್ಮಿಕರು ಮೋಸ ಹೋಗಬಾರದು. ಈಗಾಗಲೇ 18 ವರ್ಷ ಸೇವೆ ಮಾಡಿದ್ದಾರೆ, ಅವರ ಬಳಿ ಎಲ್ಲ ದಾಖಲಾತಿಗಳು ಇದೆ. ಆದರೂ ಕೆಲವು ಪೌರಕಾರ್ಮಿಕರು ದಾಖಲೆಗಳ ಜೆರಾಕ್ಸ್ ಪ್ರತಿ ಪಡೆಯುತ್ತಿದ್ದಾರೆ. ಈ ಪ್ರಕ್ರಿಯೆಯಲ್ಲಿ ಭ್ರಷ್ಟಾಚಾರವೂ ನಡೆಯಲಿದೆ ಎಂದು ಅನುಮಾನ ವ್ಯಕ್ತಪಡಿಸಿದರು.

ಸಂಘದ ಜಿಲ್ಲಾಧ್ಯಕ್ಷ ಆರ್ಟಿಸ್ಟ್ ನಾಗರಾಜ್ ಮಾತನಾಡಿ, ಮಹಾನಗರ ಪಾಲಿಕೆಯಲ್ಲಿ 252 ಪೌರಕಾರ್ಮಿಕರ ನೇಮಕಾತಿ ಪ್ರಕ್ರಿಯೆಗೆ ಜು.18ರಂದು ಅರ್ಜಿ ಸ್ವೀಕರಿಸಲಾಗುತ್ತದೆ. ನೇಮಕಾತಿ ವೇಳೆ ಹಲವು ಅಕ್ರಮಗಳನ್ನು ನಡೆಯುವ ಸಾಧ್ಯತೆ ಇದ್ದು, ಪೌರಕಾರ್ಮಿಕರು ಎಚ್ಚರಿಕೆಯಿಂದ ಇರಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರಪಾಲಿಕೆ ಮಾಜಿ ಸದಸ್ಯ ಆರ್.ಶಿವಣ್ಣ, ಮುಖಂಡರಾದ ಯತಿರಾಜ್, ಆರ್.ದಾಸ್, ಜಯರಾಮು, ಅರುಣ್‌ಕುಮಾರ್, ಪಿ.ಮಂಜುನಾಥ್, ಶಂಕರ್ ಬಾಬು, ಮಹದೇವು, ರೈಲ್ವೆ ಗಂಗಣ್ಣ, ಎಂ.ಡಿ.ವೆಂಕಟೇಶ್, ಗುರುದತ್ತ ಎನ್.ಪಿ, ಶಂಕರಪ್ಪ ಶೇಷ, ವಿಜಯ್ ಸೇರಿದಂತೆ ಪೌರಕಾರ್ಮಿಕ ಇನ್ನಿತರರು ಪಾಲ್ಗೊಂಡಿದ್ದರು.

ದಾಖಲೆಗಳ ತಿದ್ದುಪಡಿ

"ಇಎಸ್‌ಐ, ಪಿಎಫ್ ದಾಖಲಾತಿಗಳನ್ನು ಅರ್ಜಿ ಸಲ್ಲಿಕೆ ವೇಳೆ ಪರಿಗಣಿಸಲಾಗುತ್ತಿದೆ. ದಾಖಲೆಗಳನ್ನು ತಿದ್ದುಪಡಿ ಮಾಡಿ ನಕಲಿ ದಾಖಲೆ ಪಡೆಯಲಾಗುತ್ತಿದೆ. ಈಗಾಗಲೇ ಕೆಲವು ಪೌರಕಾರ್ಮಿಕರು ನಕಲಿ ದಾಖಲೆ ಪಡೆದುಕೊಂಡಿದ್ದಾರೆ. ಹಾಗಾಗಿ ಈ ಬಗ್ಗೆ ತನಿಖೆ ನಡೆಸುವಂತೆ ನಗರಾಭಿವೃದ್ಧಿ ಇಲಾಖೆ ಸಚಿವರು ಮತ್ತು ಮೈಸೂರು ಜಿಲ್ಲಾಧಿಕಾರಿಗಳಿಗೆ ದೂರು ಕೊಡಲಾಗುವುದು.

–ನಾರಾಯಣ್

ವಾಲ್ಮೀಕಿ ನಿಗಮ, ಮುಡಾ ಹಗರಣ ಖಂಡಿಸಿ ಸಿಎಂ ನಿವಾಸಕ್ಕೆ ಮುತ್ತಿಗೆ ಯತ್ನ: ಬಿಜೆಪಿ ಮುಖಂಡರ ಬಂಧನ



ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ಅವರ ನಿವಾಸಕ್ಕೆ ಮುತ್ತಿಗೆ ಹಾಕಲು ಮುಂದಾದ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರನ್ನು ಪೊಲೀಸರು ಬುಧವಾರ ಬೆಂಗಳೂರಲ್ಲಿ ಬಂಧಿಸಿ, ವಶಕ್ಕೆ ಪಡೆದರು.

ಬೆಂಗಳೂರು, ಜು.3(ಕೆಎಂಶಿ)– ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿನ ಪರಿಶಿಷ್ಟ ಸಮುದಾಯದವರ ಹಣ ಅಕ್ರಮ ವರ್ಗಾವಣೆ ಹಾಗೂ ಮೈಸೂರಿನ ಮುಡಾ ನಿವೇಶನ ಹಂಚಿಕೆ ಅವ್ಯವಹಾರ ಖಂಡಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ಅವರ ನಿವಾಸಕ್ಕೆ ಮುತ್ತಿಗೆ ಹಾಕಲು ಮುಂದಾದ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರನ್ನು ಪೊಲೀಸರು ಇಂದಿಲ್ಲಿ ಬಂಧಿಸಿ, ವಶಕ್ಕೆ ಪಡೆದರು.

ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ, ವಿಧಾನಸಭೆಯಲ್ಲಿನ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ನೇತೃತ್ವದಲ್ಲಿ ಪಕ್ಷದ ಶಾಸಕರು, ಮೇಲ್ಮನೆ ಸದಸ್ಯರು, ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಮುಖ್ಯಮಂತ್ರಿಗಳ ಮನೆ ಮುತ್ತಿಗೆಗೆ ಮುಂದಾದಾಗ ಅವರನ್ನೆಲ್ಲಾ ಬಂಧಿಸಲಾಯಿತು.

ಮುಖ್ಯಮಂತ್ರಿಗಳ ಮನೆ ಮುತ್ತಿಗೆಗೆ ಕುಮಾರಕೃಪಾ ವಸತಿ ಗೃಹದಿಂದ ಬಿಜೆಪಿ ನಾಯಕರು, ಶಾಸಕರು ಹೊರಬರುತ್ತಿದ್ದಂತೆ ಮಧ್ಯದಲ್ಲೇ ತಡೆದ ಪೊಲೀಸರು ಹಲವು ಜನಪ್ರತಿನಿಧಿಗಳನ್ನು ವಶಕ್ಕೆ ಪಡೆದರು. ಈ ಸಂದರ್ಭದಲ್ಲಿ ಆರ್. ಅಶೋಕ್ ಮಾತನಾಡಿ, ವಿಧಾನಸಭೆಯ ವಿರೋಧ ಪಕ್ಷದ ನಾಯಕನಾಗಿ ಪ್ರತಿ ಭಟನೆ ನಡೆಸಲು ಅವಕಾಶ ಕೊಡುತ್ತಿಲ್ಲ, ಸರ್ಕಾರದ ಈ ದೌರ್ಜನ್ಯ ಖಂಡನೀಯ ಎಂದರು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರು ಮತ್ತು ಪೊಲೀಸ್ ಅಧಿಕಾರಿಗಳ ನಡುವೆ ಮಾತಿನ ಚಕಮಕಿ ನಡೆಯಿತು.

ಪ್ರತಿಭಟನಾನಿರತ ನಾಯಕರು ಹಾಗೂ ಶಾಸಕರು ಕಾಂಗ್ರೆಸ್ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿದರು.

ಭಾರತೀಯ ಮೂಲದ ಅಮೆರಿಕ ವೈದ್ಯೆಗೆ 10 ವರ್ಷ ಜೈಲು ಶಿಕ್ಷೆ!



ಚಿಕಾಗೋ: 51 ವರ್ಷದ ಭಾರತೀಯ ಮೂಲದ ಅಮೆರಿಕ ವೈದ್ಯೆ ಮೋನಾ ಘೋಷ್ ಇದೀಗ ಇದೀಗ ಜೈಲು ಸೇರಿದ್ದು, ನ್ಯಾಯಾಲಯ ಈಕೆಯನ್ನು ದೋಷಿ ಎಂದು ಪರಿಗಣಿಸಿದೆ. ರೋಗಿಗಳಿಗೆ ಯಾವುದೇ ಚಿಕಿತ್ಸೆ ನೀಡದೆ ವಿಮೆ ಹಣವನ್ನು ಲಪಟಾಯಿಸಿದ ಪ್ರಕರಣದಲ್ಲಿ ಮೋನಾ ಘೋಷ್ ತಪ್ಪಿತಸ್ಥೆ. ಸ್ತ್ರೀರೋಗ ಹಾಗೂ ಪ್ರಸೂತಿ ತಜ್ಞೆ ಮೋನಾ ಘೋಷ್, ತಮ್ಮದೇ ಆಸ್ಪತ್ರೆಯನ್ನು ಅಮೆರಿಕದಲ್ಲಿ ಹೊಂದಿದ್ದಾರೆ. ಇವರು ಸರ್ಕಾರಿ ವಿಮೆ ಹಾಗೂ ಖಾಸಗಿ ವಿಮೆಯನ್ನು ದುರ್ಬಳಕೆ ಮಾಡಿಕೊಂಡು ಯಾರಿಗೂ ಚಿಕಿತ್ಸೆ ನೀಡದೆ ನಕಲಿ ದಾಖಲೆ ಸೃಷ್ಟಿಸಿ ಮೋಸ ಮಾಡುತ್ತಿದ್ದರು ಎಂಬುದು ದೃಢಪಟ್ಟಿದೆ. ಎರಡು ಪ್ರಕರಣಗಳಲ್ಲಿ ಆಕೆಯ ವಿರುದ್ಧದ ಆರೋಪ ಸಾಬೀತಾಗಿದೆ. ಅಮೆರಿಕದಲ್ಲಿ ಇತ್ತೀಚೆಗೆ ನಡೆದ ಆರೋಗ್ಯ ಸೇವಾ ವಲಯದ ಅಕ್ರಮಗಳಲ್ಲಿ ಇದು ಭಾರಿ ಗಮನ ಸೆಳೆದ ಪ್ರಕರಣವಾಗಿತ್ತು

ಇಂದಿನಿಂದ ವಿಕಲಚೇತನರು, ಹಿರಿಯ ನಾಗರಿಕರಿಗೆ ತಪಾಸಣಾ ಶಿಬಿರ



ಮೈಸೂರು, ಜು.3–ಬೆಂಗಳೂರಿನ ಅಲಿಮ್ಕೋ ಸಾಮಾಜಿಕ ನ್ಯಾಯ ಹಾಗೂ ಸಬಲೀಕರಣ ಮಂತ್ರಾಲಯದವರು ಮೈಸೂರು ಜಿಲ್ಲೆಯಲ್ಲಿ ವಿಕಲಚೇತನರು ಹಾಗೂ ಹಿರಿಯ ನಾಗರಿಕರಿಗೆ ವೈದ್ಯಕೀಯ ತಪಾಸಣೆ ಮೂಲಕ ವಿವಿಧ ಸಾಧನ ಸಲಕರಣೆಗಳಿಗಾಗಿ ತಪಾಸಣೆ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ.

ವಿಶೇಷಚೇತನರು ಹಾಗೂ ಹಿರಿಯ ನಾಗರಿಕರು ಆಧಾರ್ ಕಾರ್ಡ್, ಯು.ಡಿ.ಐ.ಡಿ ಕಾರ್ಡ್, ಬಿ.ಪಿ.ಎಲ್ ಕಾರ್ಡ್ ಅಥವಾ ಆದಾಯ ಪ್ರಮಾಣ ಪತ್ರ, ಇತ್ತೀಚಿನ ಭಾವಚಿತ್ರದೊಂದಿಗೆ ಶಿಬಿರಕ್ಕೆ ಹಾಜರಾಗಬಹುದು. ಜು.4ರಂದು ತಿ.ನರಸೀಪುರದ ತಾಲೂಕು ಆಸ್ಪತ್ರೆಯಲ್ಲಿ, ಜು.5 ರಂದು ಹುಣಸೂರಿನ ಶಿಕ್ಷಕರ ಭವನದಲ್ಲಿ, ಜು.6ರಂದು ಕೆ.ಆರ್.ನಗರದ ಸಿ.ಎಂ ರಸ್ತೆಯಲ್ಲಿರುವ ಶ್ರೀಕೃಷ್ಣ ಮಂದಿರದಲ್ಲಿ, ಜು.8ರಂದು ಮೈಸೂರಿನ ತಿಲಕ್‌ನಗರದ ಅಂಧ ಮಕ್ಕಳ ಸರ್ಕಾರಿ ಪಾಠಶಾಲೆಯಲ್ಲಿ, ಜು.9ರಂದು ಸರಗೂರಿನ ಸಾರ್ವಜನಿಕ ಆಸ್ಪತ್ರೆಯಲ್ಲಿ, ಜು.10ರಂದು ನಂಜನಗೂಡಿನ ಅಂಬೇಡ್ಕರ್ ಸಮುದಾಯ ಭವನದಲ್ಲಿ, ಜು.11 ರಂದು ಪಿರಿಯಾಪಟ್ಟಣದ ಪುರಸಭೆ ಕಾರ್ಯಾಲಯದಲ್ಲಿ ಹಾಗೂ ಜು.12 ರಂದು ಹೆಚ್.ಡಿ.ಕೋಟೆಯ ಅಂಬೇಡ್ಕರ್ ಭವನದಲ್ಲಿ ಶಿಬಿರ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ತಿಲಕ್‌ನಗರದ ಪುಲಕೇಶಿ ರಸ್ತೆಯಲ್ಲಿರುವ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ ದೂ.ಸಂ: 0821–2490333 ಅನ್ನು ಸಂಪರ್ಕಿಸಬಹುದು.

ಧರ್ಮಗುರು ಮೌಲಾನಾ ಅಕ್ಮಲ್ ಕೊಲೆ ಪ್ರಕರಣ ತನಿಖಾಧಿಕಾರಿ ಬದಲಿಸುವಂತೆ ಎಸ್‌ಡಿಪಿಐ ಆಗ್ರಹ

ಮೈಸೂರು, ಜು.3(ಜಿಎ)–ಇತ್ತೀಚೆಗೆ ನಡೆದ ಮುಸ್ಲಿಂ ಸಮುದಾಯದ ಧರ್ಮಗುರು ಮೌಲಾನಾ ಅಕ್ಮಲ್ ಅವರ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೊಲೆ ಆರೋಪಿಗಳನ್ನು ತನಿಖಾ ತಂಡ ಇನ್ನೂ ಬಂಧಿಸದೇ ನಿರ್ಲಕ್ಷ್ಯ ಧೋರಣೆ ತಾಳಿದೆ. ಹೀಗಾಗಿ ನಗರ ಪೊಲೀಸ್ ಆಯುಕ್ತರು ತನಿಖಾಧಿಕಾರಿಯನ್ನು ಬದಲಿಸಬೇಕೆಂದು ಎಸ್‌ಡಿಪಿಐ ರಾಜ್ಯಾಧ್ಯಕ್ಷ ಅಬ್ದುಲ್ ಮಜೀದ್ ಆಗ್ರಹಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಆತನನ್ನು ಬೆಂಗಳೂರಿಗೆ ಕರೆತಂದ ಕ್ಯಾಬ್ ಚಾಲಕನನ್ನು ಸಹಾ ಆರೋಪಿಯನ್ನಾಗಿಸಲಾಗಿದೆ. ಆದರೆ ಅಕ್ಮಲ್ ಕೊಲೆ ಪ್ರಕರಣದಲ್ಲಿ ಪ್ರಮುಖ ಆರೋಪಿಯನ್ನು ಕರೆತಂದವರು, ಆತ ಗೆಸ್ಟ್ ಹೌಸ್‌ನಲ್ಲಿದ್ದಾಗ ಜೊತೆಯಲ್ಲಿದ್ದವರನ್ನು ಇನ್ನೂ ಬಂಧಿಸಿಲ್ಲ. ಕೆಲವರು ತಪ್ಪಿಸಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸುತ್ತಾರೆ. ಆದರೆ ಈಗಿನ ಆಧುನಿಕ ತಂತ್ರಜ್ಞಾನದ ದಿನಗಳಲ್ಲಿ ಅವರನ್ನು ಬಂಧಿಸಲು ಇಷ್ಟು ಕಾಲ ಬೇಕೇ ಎಂದು ಪ್ರಶ್ನಿಸಿದರು.

ಪೊಲೀಸರು ಕೆಲ ಆರೋಪಿಗಳನ್ನು ಉದ್ದೇಶಪೂರ್ವಕವಾಗಿ ರಕ್ಷಿಸುತ್ತಿದ್ದಾರೆ. ಇದರ ಹಿಂದೆ ಭಾರಿ ಅವ್ಯವಹಾರ ನಡೆದಿದೆ. ಮೃತನ ಕುಟುಂಬದವರು ಕ್ಷುಲ್ಲಕ ಕಾರಣಕ್ಕೆ ನಡೆದ ಕೊಲೆ ಪ್ರಕರಣದಿಂದಾಗಿ ಬೀದಿಪಾಲಾಗಿದ್ದಾರೆ. ಈ ಸಂಬಂಧ ಸಂಬಂಧಪಟ್ಟ ಸಚಿವರು, ಹಿರಿಯ ಪೊಲೀಸ್ ಅಧಿಕಾರಿಗಳಿಗೆಲ್ಲ ಮನವಿ ಸಲ್ಲಿಸಿದ್ದಾರೆ. ಹೀಗಿದ್ದರೂ ಪೊಲೀಸರು ನ್ಯಾಯ ದೊರಕಿಸಿಕೊಡದಿರಲು ತನಿಖಾಧಿಕಾರಿಯ ಧೋರಣೆಯೇ ಕಾರಣವಾಗಿದೆ. ಹೀಗಾಗಿ ಈಗಿನವರ ಬದಲು ಬೇರೊಬ್ಬ ನಿಷ್ಠಾವಂತ ಅಧಿಕಾರಿಯನ್ನು ನೇಮಕ ಮಾಡಬೇಕೆಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಎಸ್.ಸ್ವಾಮಿ, ಮೊಹಮ್ಮದ್ ಅಫೀಜುಲ್ಲಾ, ಅಮ್ಜದ್ ಖಾನ್, ರಫತ್ ಖಾನ್, ನೂರುದ್ದೀನ್ ಮೌಲಾನಾ ಉಪಸ್ಥಿತರಿದ್ದರು.

ಅನಂತಗೀತ ವಿದ್ಯಾಲಯದಲ್ಲಿ ಅಕ್ಷರಾಭ್ಯಾಸ



ಮೈಸೂರು ಅನಂತಗೀತ ವಿದ್ಯಾಲಯದಲ್ಲಿ ಎಲ್‌ಕೆಜಿ ಮತ್ತು ಯುಕೆಜಿ ವಿದ್ಯಾರ್ಥಿಗಳಿಗೆ ಭಾರತೀಯ ಸಂಪ್ರದಾಯದಂತೆ "ವಿದ್ಯಾರಂಭಂ" ಅಕ್ಷರಾಭ್ಯಾಸ ಕಾರ್ಯಕ್ರಮ ಆಯೋಜಿಸಲಾಗಿತ್ತು. ವಿದ್ಯಾರ್ಥಿಗಳು ಪೋಷಕರೊಂದಿಗೆ ಕುಳಿತು ಅಕ್ಷರಾಭ್ಯಾಸ ಪ್ರಾರಂಭಿಸಿದರು. ಸಂಸ್ಥೆಯ ಅಧ್ಯಕ್ಷ ವೇಣುಗೋಪಾಲ್, ಕಾರ್ಯದರ್ಶಿ ಗೀತಾ ಅನಂತರಾಮಯ್ಯ, ನಿರ್ದೇಶಕರಾದ ಮಂಜುಳಾ, ಮುಖ್ಯ ಶಿಕ್ಷಕ ಲೋಕೇಶ್, ಶಿಕ್ಷಕರು ಹಾಜರಿದ್ದರು.

ಮೈಸೂರಲ್ಲಿ ನೀರಿನ ಗುಣಮಟ್ಟ ಪರೀಕ್ಷೆ



ಮೈಸೂರು ಜಿಪಂ ಸಭಾಂಗಣದಲ್ಲಿ ಫೀಲ್ಡ್ ಟೆಸ್ಟ್ ಕಿಟ್(ಎಫ್‌ಟಿಕೆ)ಮೂಲಕ ನೀರಿನ ಗುಣಮಟ್ಟ ಪರೀಕ್ಷಿಸುವ ಕುರಿತು ತರಬೇತಿ ಕಾರ್ಯಾಗಾರ ನಡೆಯಿತು.

ಮೈಸೂರು, ಜು.3– ಮೈಸೂರು ಜಿಲ್ಲೆಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮೂರು ತಂಡಗಳಾಗಿ ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಮೈಸೂರು, ನಂಜನಗೂಡು ಹಾಗೂ ಟಿ.ನರಸೀಪುರ, ಹೆಗ್ಗಡದೇವನಕೋಟೆ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಹೆಗ್ಗಡದೇವನಕೋಟೆ, ಸರಗೂರು ಮತ್ತು ಹುಣಸೂರು ತಾಲೂಕುಗಳು ಹಾಗೂ ಕೃಷ್ಣರಾಜನಗರ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಕೃಷ್ಣರಾಜನಗರ, ಸಾಲಿಗ್ರಾಮ ಮತ್ತು ಪಿರಿಯಾಪಟ್ಟಣ ತಾಲೂಕುಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಫೀಲ್ಡ್ ಟೆಸ್ಟ್ ಕಿಟ್(ಎಫ್‌ಟಿಕೆ) ಮೂಲಕ ನೀರಿನ ಗುಣಮಟ್ಟ ಪರೀಕ್ಷಿಸುವ ಕುರಿತು ತರಬೇತಿ ಕಾರ್ಯಾಗಾರ ನಡೆಸಲಾಯಿತು.

ಕಾರ್ಯಾಗಾರಕ್ಕೆ ಮೈಸೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ.ಗಾಯಿತ್ರಿ ಅಬ್ದುಲ್ ನಜೀರ್ ಸಾಬ್ ಸಭಾಂಗಣದಿಂದ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದಲ್ಲಿ ಕಾಲಕಾಲಕ್ಕೆ ನೀರಿನ ಮಾದರಿಗಳನ್ನು ಪರೀಕ್ಷಿಸಿ ಸಾರ್ವಜನಿಕರಿಗೆ ಶುದ್ಧ–ಸುರಕ್ಷಿತ ನೀರನ್ನು ಪೂರೈಸುವುದು ಗ್ರಾಮ ಪಂಚಾಯಿತಿಯ ಜವಾಬ್ದಾರಿಯಾಗಿದೆ. ತಮ್ಮ ಗ್ರಾಮ ಪಂಚಾಯತಿಗಳಲ್ಲಿ ಬರುವ ಎಲ್ಲಾ ನೀರಿನ ಮೂಲಗಳನ್ನು ಪರೀಕ್ಷಿಸಲು, ಓಹೆಚ್‌ಟಿಗಳನ್ನು ಮತ್ತು ನೀರಿನ ತೊಂಬೆಗಳನ್ನು ಕಾಲಕಾಲಕ್ಕೆ ಶುಚಿಗೊಳಿಸಿ ನೀರು ಕಲುಷಿತಗೊಳ್ಳದಂತೆ ಎಚ್ಚರ ವಹಿಸಲು ಹಾಗೂ ನೀರಿನ ಮಾದರಿಗಳನ್ನು ಪರೀಕ್ಷಿಸಿದ ವರದಿಯನ್ನು ಡಬ್ಲ್ಯುಕ್ಯೂಎಂಐಎಸ್ ಪೋರ್ಟಲ್‌ನಲ್ಲಿ ಅಪಲೋಡ್ ಮಾಡಲು ಸೂಚನೆ ನೀಡಿದರು.

ಡಬ್ಲ್ಯುಕ್ಯೂಎಂಎಸ್ ಟಾಸ್ಕ್‌ಫೋರ್ಸ್ ಸಮಿತಿಯ ಜವಾಬ್ದಾರಿ ಮತ್ತು ಕಾರ್ಯವೈಖರಿಯ ಕುರಿತು ಸೂಚನೆ ನೀಡಿದರು. ಸದರಿ ಕಾರ್ಯಾಗಾರಕ್ಕೆ ಹೆಗ್ಗಡದೇವನಕೋಟೆ ಮತ್ತು ಕೃಷ್ಣರಾಜನಗರದಲ್ಲಿ ನಡೆಯುತ್ತಿದ್ದ ಕಾರ್ಯಾಗಾರಕ್ಕೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವೀಡಿಯೋ ಸಂವಾದದ ಮುಖಾಂತರ ಸೂಚನೆ ನೀಡಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ರಂಜಿತ್‌ಕುಮಾರ್, ಮಾತನಾಡಿ, ಎಫ್‌ಟಿಕೆ ಕಿಟ್ ಮತ್ತು ಹೆಚ್2ಎಸ್ ಪರೀಕ್ಷೆಗಳನ್ನು ಬಳಸಿಕೊಂಡು ಗ್ರಾಮಗಳ ಹಂತದಲ್ಲಿ ಕುಡಿಯುವ ನೀರು ಕಲುಷಿತವಾಗದಂತೆ ತಡೆಯಲು ಮುಂಜಾಗ್ರತಾ ಕ್ರಮಗಳ ಕುರಿತು ವಿವರಿಸಿದರು. ಕಾರ್ಯಾಗಾರದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ (ಅಭಿವೃದ್ಧಿ) ಡಾ.ಕೃಷ್ಣರಾಜು, ಜಿಪಂ ಉಪ ಕಾರ್ಯದರ್ಶಿ (ಆಡಳಿತ) ಸವಿತಾ, ಮೇಘಲ, ಯೋಜನಾ ನಿರ್ದೇಶಕ ರುದ್ರೇಶ್, ಉಪನಿರ್ದೇಶಕರು. ಎಲ್ಲಾ ತಾಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

ಕಾರ್ಯಾಗಾರದಲ್ಲಿ ಡಬ್ಲ್ಯುಕ್ಯೂಎಂಐಎಸ್ ಪೋರ್ಟಲ್‌ನಲ್ಲಿನ ವರದಿಗಳನ್ನು ಪರಿಶೀಲಿಸಿಕೊಳ್ಳುವ ಕುರಿತು ಹ್ಯಾಂಡ್ಸ್–ಆನ್ ತರಬೇತಿ ನೀಡಿದ ನಂತರ ಎಫ್‌ಟಿಕೆ ಕಿಟ್ ಮೂಲಕ ಕುಡಿಯುವ ನೀರಿನ ಮಾದರಿಗಳ ಪರೀಕ್ಷೆ ಮಾಡುವ ವಿಧಾನಗಳು ಮತ್ತು ಪರೀಕ್ಷೆ ನಂತರ ಕೈಗೊಳ್ಳಬೇಕಾಗಿರುವ ಚಟುವಟಿಕೆಯ ಕುರಿತು ಪ್ರಾಯೋಗಿಕವಾಗಿ ಜಿಲ್ಲಾ ಪ್ರಯೋಗಾಲಯದ ಸಿಬ್ಬಂದಿಗಳಿಗೆ ತರಬೇತಿ ನೀಡಲಾಯಿತು.

ನಾಳೆ ನಂಜನಗೂಡು ತಾಲೂಕು ಮಟ್ಟದ ಜನಸ್ಪಂದನಾ

ಮೈಸೂರು, ಜು.3(ಪಿಎಂ)– ನಂಜನಗೂಡು ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಜು.5ರಂದು ಬೆಳಗ್ಗೆ 10ರಿಂದ ಸಂಜೆ 2ರವರೆಗೆ ತಾಲೂಕು ಮಟ್ಟದ ಜನಸ್ಪಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯ ತಿಳಿಸಿದೆ.

ಸಾರ್ವಜನಿಕರ ಕುಂದು ಕೊರತೆಗಳನ್ನು ಶೀಘ್ರವಾಗಿ ಪರಿಹರಿಸುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಪಂ ಸಿಇಓಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಜಂಟಿಯಾಗಿ ತಾಲೂಕು ಮಟ್ಟದಲ್ಲಿ ಜನಸ್ಪಂದನಾ ಕಾರ್ಯಕ್ರಮ ಹಮ್ಮಿಕೊಳ್ಳಬೇಕೆಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ಸೂಚನೆ ನೀಡಿದ್ದಾರೆ.

ಅದರಂತೆ ನಂಜನಗೂಡಿನಲ್ಲಿ ಜನಸ್ಪಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳು, ಜಿಪಂ ಸಿಇಓ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಪಾಲ್ಗೊಳ್ಳಲಿದ್ದು, ತಾಲೂಕಿನ ಸಾರ್ವಜನಿಕರು ಅಹವಾಲುಗಳಿದ್ದಲ್ಲಿ ಸಲ್ಲಿಸಲು ಕೋರಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಮನೆಗೆ ನುಗ್ಗಿ ವೃದ್ಧನಿಂದ ಚಿನ್ನದ ಸರ ಕಸಿದು ಪರಾರಿಯಾಗಿದ್ದ ಚೆಸ್ಕಾಂ ಲೈನ್‌ಮ್ಯಾನ್ ಬಂಧನ



ಮಡಿಕೇರಿ,ಜು.3– ಮನೆಗೆ ನುಗ್ಗಿ ವೃದ್ಧರೊಬ್ಬರ ಕುತ್ತಿಗೆಯಲ್ಲಿದ್ದ ಚಿನ್ನದ ಸರವನ್ನು ಅಪಹರಿಸಿ ಪರಾರಿಯಾಗಿದ್ದ ಚೆಸ್ಕಾಂ ಲೈನ್‌ಮ್ಯಾನ್‌ನನ್ನು ಶನಿವಾರಸಂತೆ ಪೊಲೀಸರು ಬಂಧಿಸಿದ್ದಾರೆ.

ಮೂಲತಃ ಹೊಳೆನರಸೀಪುರ ತಾಲೂಕಿನ ಉದ್ದೂರು ಗ್ರಾಮ ನಿವಾಸಿ ಆರ್.ಸಂದೀಪ್(27) ಬಂಧಿತ ಆರೋಪಿ. ಕಳವು ಮಾಡಿದ್ದ 27 ಗ್ರಾಂ ಚಿನ್ನದ ಸರ ಮತ್ತು ಕೃತ್ಯಕ್ಕೆ ಬಳಸಿದ್ದ ದ್ವಿಚಕ್ರ ವಾಹನವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಜೂ.28ರಂದು ಶನಿವಾರಸಂತೆ ಪೊಲೀಸ್ ಠಾಣಾ ವ್ಯಾಪ್ತಿಯ ಗೌಡಳ್ಳಿ ಗ್ರಾಮ ನಿವಾಸಿ ಅಣ್ಣಯ್ಯ(76) ಅವರು ರಾತ್ರಿ 8.30ರ ಸಮಯದಲ್ಲಿ ಊಟ ಮಾಡುವ ಸಂದರ್ಭ ಮನೆಗೆ ನುಗ್ಗಿದ ವ್ಯಕ್ತಿಯೊಬ್ಬ ಅವರು ಚಳಿಗಾಗಿ ಧರಿಸಿದ್ದ ಮಂಕಿ ಕ್ಯಾಪ್ ಅನ್ನು ಹಿಂಬದಿಯಿಂದ ಕಣ್ಣು ಮುಚ್ಚುವಂತೆ ಎಳೆದು ಕುತ್ತಿಗೆಯಲ್ಲಿದ್ದ 27 ಗ್ರಾಂ ಚಿನ್ನದ ಸರವನ್ನು ಕಿತ್ತುಕೊಂಡು ಪರಾರಿಯಾಗಿದ್ದ.

ಈ ಕುರಿತು ಶನಿವಾರಸಂತೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ತನಿಖೆ ಕೈಗೊಂಡ ಸೋಮವಾರಪೇಟೆ ಡಿವೈಎಸ್‌ಪಿ ಆರ್.ವಿ ಗಂಗಾಧರಪ್ಪ ನೇತೃತ್ವದ ತಂಡ ಕೃತ್ಯಕ್ಕೆ ಸಂಬಂಧಿಸಿದ ಮಾಹಿತಿ ಮತ್ತು ಸಾಕ್ಷ್ಯಾಧಾರಗಳನ್ನು ಕಲೆ ಹಾಕಿ ಜು.3ರಂದು ಆರೋಪಿ ಸಂದೀಪ್‌ನನ್ನು ಬಂಧಿಸಿ ನ್ಯಾಯಾಂಗ ವಶಕ್ಕೆ ಒಪ್ಪಿಸಿದ್ದಾರೆ. ಶನಿವಾರಸಂತೆ ಪೊಲೀಸ್ ವೃತ್ತ ನಿರೀಕ್ಷಕ ಡಿ.ಪ್ರೀತಂ ಶ್ರೇಯಾಕರ್, ಠಾಣಾಧಿಕಾರಿ ಗೋವಿಂದರಾಜು, ಮತ್ತು ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿದ್ದಾರೆ.

ಭಾರಿ ಮರ ಬಿದ್ದು, ಸಂಚಾರ ಅಸ್ತವ್ಯಸ್ತ



ರಸ್ತೆಗೆ ಅಡ್ಡಲಾಗಿ ಬಿದ್ದಿರುವ ಭಾರಿ ಗಾತ್ರದ ಮರ ತೆರವುಗೊಳಿಸುತ್ತಿರುವ ಸಿಬ್ಬಂದಿ.

ಮಡಿಕೇರಿ,ಜು.3– ಮಡಿಕೇರಿ–ಮಂಗಳೂರು ರಾಷ್ಟ್ರೀಯ ಹೆದ್ದಾರಿ 275ರ ದೇವರ ಕೊಲ್ಲಿ ಬಳಿ ರಸ್ತೆಗೆ ಅಡ್ಡಲಾಗಿ ಭಾರಿ ಗಾತ್ರದ ಮರ ಮುರಿದು ಬಿದ್ದ ಪರಿಣಾಮ ಕೆಲಕಾಲ ರಸ್ತೆ ಸಂಚಾರದಲ್ಲಿ ವ್ಯತ್ಯಯವಾದ ಬಗ್ಗೆ ವರದಿಯಾಗಿದೆ. ಗಾಳಿ ಮಳೆಗೆ ಸಂಜೆ 5 ಗಂಟೆ ವೇಳೆಗೆ ರಸ್ತೆಗೆ ಮರ ಬಿದ್ದಿದ್ದು, ಮಡಿಕೇರಿ ಮಾರ್ಗವಾಗಿ ಸಂಪಾಜೆ ಹಾಗೂ ಮಂಗಳೂರು ಮಾರ್ಗವಾಗಿ ಮಡಿಕೇರಿ ಕಡೆಗೆ ತೆರಳುತ್ತಿದ್ದ ನೂರಾರು ವಾಹನಗಳು ರಸ್ತೆಯಲ್ಲಿ ಕಿ.ಮೀ. ಉದ್ದಕ್ಕೂ ಸಾಲುಗಟ್ಟಿ ನಿಂತಿದ್ದವು. ಅರಣ್ಯ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಚೆಸ್ಕಾಂ ಸಿಬ್ಬಂದಿಗಳು ಮರ ತೆರವು ಮಾಡುವ ಮೂಲಕ ವಾಹನಗಳ ಸಂಚಾರಕ್ಕೆ ಅನುವು ಮಾಡಿದರು.

ಜಲಪಾತ, ಅಣೆಕಟ್ಟು, ನದಿ, ತೊರೆ, ಕೆರೆಗಳಿಗೆ ಇಳಿಯದಂತೆ ನಿಷೇಧ

ಮಡಿಕೇರಿ: ಮಳೆಗಾಲ ಸಂದರ್ಭದಲ್ಲಿ ಸಾವಿನ ಪ್ರಕರಣಗಳ ತಡೆಗೆ ಜಿಲ್ಲಾಡಳಿತ ಮುಂದಾಗಿದ್ದು, ಅನಿರ್ದಿಷ್ಟಾವಧಿ ಕಾಲ ಕೊಡಗಿನಾದ್ಯಂತ ಇರುವ ಜಲಪಾತ, ಅಣೆಕಟ್ಟು, ನದಿ, ತೊರೆಗಳು ಹಾಗೂ ಕೆರೆಗಳಿಗೆ ಇಳಿಯುವುದಕ್ಕೆ ಜಿಲ್ಲಾಧಿಕಾರಿಗಳು ನಿಷೇಧ ಹೇರಿದ್ದಾರೆ.

ಮಳೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕೊಡಗಿನಾದ್ಯಂತ ಜಲಪಾತಗಳು ಭೋರ್ಗರೆಯುತ್ತಿದ್ದು, ನದಿ ಕೆರೆಗಳು ತುಂಬುತ್ತಿವೆ. ಇವುಗಳನ್ನು ವೀಕ್ಷಿಸಲು ಪ್ರವಾಸಿಗರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಜಿಲ್ಲೆಗೆ ಆಗಮಿಸುತ್ತಿದ್ದು, ಸಾವಿನ ಪ್ರಕರಣಗಳು ಕೂಡ ನಡೆದಿದೆ. ಇಂತಹ ಜಲ ಸಂಬಂಧಿ ಸಾವುಗಳಿಗೆ ಕಡಿವಾಣ ಹಾಕಲು ಜಿಲ್ಲಾಡಳಿತ ಮುಂದಾಗಿದೆ. ಹೀಗಾಗಿ ನೀರಿಗೆ ಅನಧಿಕೃತವಾಗಿ ಇಳಿದು ಕ್ರೀಡೆ, ಫೋಟೋ ತೆಗೆಯುವುದು, ಈಜುವುದು ಸೇರಿದಂತೆ ಎಲ್ಲಾ ಬಗೆಯ ದುಸ್ಸಾಹಸಕ್ಕೆ ಕಡಿವಾಣ ಹಾಕಿ ಜಿಲ್ಲಾಧಿಕಾರಿ ವೆಂಕಟರಾಜಾ ಆದೇಶಿಸಿದ್ದಾರೆ. ಈ ಆದೇಶ ಉಲ್ಲಂಘಿಸಿದವರ ವಿರುದ್ಧ ಕಠಿಣ ಕ್ರಮಕ್ಕೆ ಸಂಬಂಧಪಟ್ಟ ಇಲಾಖೆಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

ಹಿಂದೂ ಸಮುದಾಯದವರ ಭಾವನೆಗಳಿಗೆ ಧಕ್ಕೆಯಾಗುವಂತೆ ಮಾತನಾಡಿರುವ

ರಾಹುಲ್ ಗಾಂಧಿ ರಾಷ್ಟ್ರದ ಜನರ ಕ್ಷಮೆ ಯಾಚಿಸಲಿ

ವಿಧಾನಸಭೆಯ ಮಾಜಿ ಅಧ್ಯಕ್ಷ ಕೆ.ಜಿ. ಬೋಪಯ್ಯ ಆಗ್ರಹ

ಮಡಿಕೇರಿ,ಜು.3– ಲೋಕಸಭಾ ಅಧಿವೇಶನದಲ್ಲಿ ಮುಕ್ತವಾಗಿ ಮಾತನಾಡುವ ವಿಶೇಷ ಅವಕಾಶವನ್ನು ಬಳಸಿಕೊಂಡು ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹಿಂದೂ ಸಮುದಾಯದ ಭಾವನೆಗಳಿಗೆ ಧಕ್ಕೆಯನ್ನುಂಟು ಮಾಡುವಂತೆ ಮಾತನಾಡಿದ್ದು, ಈ ಕುರಿತು ಅವರು ರಾಷ್ಟ್ರದ ಜನತೆಯ ಮುಂದೆ ಕ್ಷಮೆ ಯಾಚಿಸಬೇಕೆಂದು ಕರ್ನಾಟಕ ವಿಧಾನಸಭೆಯ ಮಾಜಿ ಅಧ್ಯಕ್ಷರು ಹಾಗೂ ಮಾಜಿ ಶಾಸಕರಾದ ಕೆ.ಜಿ. ಬೋಪಯ್ಯ ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿರೋಧ ಪಕ್ಷದ ಸ್ಥಾನವನ್ನು ಅಲಂಕರಿಸಿರುವ ರಾಹುಲ್ ಗಾಂಧಿ, ತಮ್ಮ ತಪ್ಪುಗಳನ್ನು ತಿದ್ದಿಕೊಂಡು ಮುನ್ನಡೆಯಬೇಕು. ಇಲ್ಲವಾದಲ್ಲಿ ಅವರ ವಿರುದ್ಧ ಆಂದೋಲನವನ್ನೆ ಹುಟ್ಟು ಹಾಕಬೇಕಾಗುತ್ತದೆ ಎಂದು ಎಚ್ಚರಿಸಿದರು. ರಾಷ್ಟ್ರಪತಿಗಳ ಭಾಷಣ ಎನ್ನುವುದು ಸರ್ಕಾರ ಮುನ್ನಡೆಯಬೇಕಾದ ಹಾದಿಯ ಕುರಿತಾದ ದಿಕ್ಸೂಚಿ ಭಾಷಣವಾಗಿರುತ್ತದೆ ಈ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆಯ ಸಂದರ್ಭ ಸರ್ಕಾರ ಮುನ್ನಡೆಸುವ ಬಗ್ಗೆ ಆರೋಗ್ಯಕರವಾದ ಸಲಹೆ ಸೂಚನೆಗಳನ್ನು ನೀಡಬೇಕಾದ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ, ತಮ್ಮ ಭಾಷಣದ ಬಹುತೇಕ ಅವಧಿಯನ್ನು, ಹಿಂದೂ ಧರ್ಮದ ವಿರುದ್ಧವಾಗಿ ಮಾತನಾಡುವ ಮೂಲಕ, ಹಿಂದೂ ಸಮುದಾಯದ ಭಾವನೆಗಳಿಗೆ ಧಕ್ಕೆಯನ್ನುಂಟು ಮಾಡಿದ್ದಾರೆಂದು ಆರೋಪಿಸಿದರು. ರಾಹುಲ್ ಗಾಂಧಿ ಅವರು ಲೋಕಸಭೆಯ ಅಧಿವೇಶನದ ತಮ್ಮ ಭಾಷಣದ ಸಂದರ್ಭ ಸಣ್ಣ ಮಕ್ಕಳಂತೆ ಬಾಲಿಶ ವಾಗಿ ವರ್ತಿಸಿದ್ದಾರೆಂದು ಟೀಕಿಸಿದ ಬೋಪಯ್ಯ, ಇನ್ನಾದರು ಅವರು ಜವಾಬ್ದಾರಿಯುತವಾಗಿ ವರ್ತಿಸುವ ಮೂಲಕ ಜವಾಬ್ದಾರಿಯುತ ವಿರೋಧ ಪಕ್ಷವಾಗಬೇಕೆಂದು ದೃಢವಾಗಿ ನುಡಿದರು.



ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿರುವ ಮಾಜಿ ಶಾಸಕ ಕೆ.ಜಿ. ಬೋಪಯ್ಯ.

ರಾಜೀನಾಮೆ ನೀಡಲಿ: ಜಿಲ್ಲಾ ಬಿಜೆಪಿ ಅಧ್ಯಕ್ಷ ನಾಪಂಡ ರವಿ ಕಾಳಪ್ಪ ಮಾತನಾಡಿ, ರಾಹುಲ್ ಗಾಂಧಿ ತಮ್ಮ ಭಾಷಣದಲ್ಲಿ 'ಹಿಂದೂ' ಅಂದರೆ ಹಿಂಸೆ ಎಂದು ಪ್ರತಿಬಿಂಬಿಸುವ ಪ್ರಯತ್ನ ಮಾಡಿದ್ದಾರೆ. ಯಾವುದೇ ಕಾರಣಕ್ಕೂ ಹಿಂದೂ ಧರ್ಮವನ್ನು ಟೀಕಿಸುವುದನ್ನು ನಾವು ಒಪ್ಪುವುದಿಲ್ಲ ಹಿಂದೂ ಧರ್ಮದ ಬಗ್ಗೆ ಅಭಿಮಾನವಿಲ್ಲದಿದ್ದರೆ ಅವರು ಈ ದೇಶದಲ್ಲಿ ಇರುವುದೇ ಬೇಡವೆಂದು ಹೇಳಿದರು. ಹಿಂದೂ ಧರ್ಮವನ್ನು ಅವಹೇಳನ ಮಾಡುವ ಮೂಲಕ ಹಿಂದೂ ಧರ್ಮೀಯರಿಗೆ ನೋವನ್ನುಂಟು ಮಾಡಿರುವ ರಾಹುಲ್ ಗಾಂಧಿ ಅವರ ಸ್ಥಾನದಲ್ಲಿ ಮುಂದುವರೆಯಲು ಅನರ್ಹರಾಗಿದ್ದು, ರಾಜೀನಾಮೆ ನೀಡಬೇಕೆಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಮಹೇಶ್ ಜೈನಿ, ಮಾಧ್ಯಮ ಜಿಲ್ಲಾ ಪ್ರಮುಖ್ ಸಜಿಲ್ ಕೃಷ್ಣ, ಉಪಾಧ್ಯಕ್ಷ ಮನು ಮಂಜುನಾಥ್, ಮಾಧ್ಯಮ ವಕ್ತಾರ ಬಿ.ಕೆ. ಅರುಣ್ ಕುಮಾರ್ ಉಪಸ್ಥಿತರಿದ್ದರು.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಸೈಟ್ ಹಂಚಿಕೆಯಲ್ಲಿನ ಭ್ರಷ್ಟಾಚಾರ ಮೇಲ್ನೋಟಕ್ಕೆ ಸಾಬೀತಾಗಿದ್ದು, ಇದರ ಸತ್ಯಾಸತ್ಯತೆಯನ್ನು ಬಯಲಿಗೆಳೆಯಲು ಒಟ್ಟು ಪ್ರಕರಣವನ್ನು ಸಿಬಿಐಗೆ ಒಪ್ಪಿಸುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಾವೊಬ್ಬ ನಿಷ್ಕಳಂಕ ಎನ್ನುವುದನ್ನು ತೋರಿಸಲಿ ಎಂದು ವಿಧಾನಸಭೆಯ ಮಾಜಿ ಅಧ್ಯಕ್ಷ ಕೆ.ಜಿ. ಬೋಪಯ್ಯ ಆಗ್ರಹಿಸಿದರು.

ಸೈಟ್ ಹಗರಣದ ಬೆನ್ನಲ್ಲೆ ಅದಕ್ಕೆ ಸಂಬಂಧಿಸಿದ ಅಧಿಕಾರಿಗಳನ್ನು ವರ್ಗಾವಣೆ ಮಾಡಿರುವ ಬಗ್ಗೆ ಸಂಶಯ ವ್ಯಕ್ತಪಡಿಸಿದ ಕೆ.ಜಿ.ಬೋಪಯ್ಯ, ಒಟ್ಟು ಪ್ರಕರಣದ ಸಮಗ್ರ ತನಿಖೆ ಅಗತ್ಯವಾಗಿ ನಡೆಯಬೇಕಿದೆ ಎಂದು ಅಭಿಪ್ರಾಯಿಸಿದರು. ರಾಜ್ಯದ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿಗಳು ಲೋಕ ಚುನಾವಣೆಯವರೆಗೆ ಮಾತ್ರ ಎಂದು ಬಿಜೆಪಿ ಹೇಳುತ್ತಲೆ ಬಂದಿತ್ತು. ಬಿಜೆಪಿ ಪಕ್ಷ, ಕಾಂಗ್ರೆಸ್‌ನ ಗ್ಯಾರಂಟಿಗಳನ್ನು ನಂಬಬೇಡಿ ಎಂದು ಜನತೆಗೆ ತಿಳಿಸಿತ್ತು. ಪ್ರಸ್ತುತ ರಾಜ್ಯದ ಆರ್ಥಿಕ ಸ್ಥಿತಿ ಸಂಪೂರ್ಣ ಹದಗೆಟ್ಟಿದೆ. ಪರಿಸ್ಥಿತಿ ಇದೇ ರೀತಿ ಮುಂದುವರಿದಲ್ಲಿ ಸರ್ಕಾರಿ ಸಿಬ್ಬಂದಿಗಳಿಗೆ ವೇತನ ಪಾವತಿಯು ಸಾಧ್ಯವಾಗಲಾರದೆಂದು ಬೋಪಯ್ಯ ಹೇಳಿದರು.

ಲೈನ್ ಮನೆ ಬೇಡ, ಸ್ವಂತ ಮನೆಗೆ ನಿವೇಶನ ಕೊಡಿ

ಬುಡಕಟ್ಟು ಕಾರ್ಮಿಕರ ಸಂಘ, ಅರಣ್ಯ ಮೂಲ ಬುಡಕಟ್ಟು ಒಕ್ಕೂಟದ ವತಿಯಿಂದ ಗ್ರಾಪಂ ಎದುರು ಪ್ರತಿಭಟನೆ

ಮಡಿಕೇರಿ,ಜು.3– ಬುಡಕಟ್ಟು ಜನಾಂಗದ ಕುಟುಂಬಗಳನ್ನು ಲೈನ್ ಮನೆಗಳಿಂದ ಮುಕ್ತಗೊಳಿಸಬೇಕು ಮತ್ತು ಸ್ವಂತ ವಸತಿಗಾಗಿ ನಿವೇಶನ ಮಂಜೂರು ಮಾಡಬೇಕೆಂದು ಆಗ್ರಹಿಸಿ ಬುಡಕಟ್ಟು ಕಾರ್ಮಿಕರ ಸಂಘ ಹಾಗೂ ಕರ್ನಾಟಕ ಅರಣ್ಯ ಮೂಲ ಬುಡಕಟ್ಟು ಸಮುದಾಯಗಳ ಒಕ್ಕೂಟ ಹೊಸೂರು ಗ್ರಾಮ ಪಂಚಾಯಿತಿ ಎದುರು ಧರಣಿ ಸತ್ಯಾಗ್ರಹ ನಡೆಸಿತು.

ಮಳೆಯ ನಡುವೆ ಮಹಿಳೆಯರು, ಮಕ್ಕಳು ಸೇರಿದಂತೆ ಅನೇಕರು ಪ್ರತಿಭಟನೆ ನಡೆಸಿ ಲೈನ್ ಮನೆ ಜೀವನ ಬೇಡ, ಸ್ವಂತ ಮನೆ ನಿರ್ಮಿಸಿಕೊಳ್ಳಲು ಸರ್ಕಾರ ನಿವೇಶನ ನೀಡಬೇಕು ಎಂದು ಆಗ್ರಹಿಸಿದರು.

ಹೊಸೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುತ್ತಾಡುವಿನಲ್ಲಿ ನಿವೇಶನ ರಹಿತರಿಗೆ ವಿತರಿಸಲು ಭೂಮಿ ಲಭ್ಯವಿದೆ ಈ ಭೂಮಿಯನ್ನು ಹೊಸೂರು ಪಂಚಾಯಿತಿ ವ್ಯಾಪ್ತಿಯಲ್ಲಿ ಲೈನ್ ಮನೆಗಳಲ್ಲಿ ಹಾಗೂ ಬಾಡಿಗೆ ಮನೆಯಲ್ಲಿ ವಾಸಿಸುತ್ತಿರುವ ಬುಡಕಟ್ಟು ಕುಟುಂಬಗಳಿಗೆ ಹಂಚಿಕೆ ಮಾಡಬೇಕು ಎಂದು ಒತ್ತಾಯಿಸಿದರು.

ಬುಡಕಟ್ಟು ಕಾರ್ಮಿಕರ ಸಂಘದ ಅಧ್ಯಕ್ಷ ಗಪ್ಪು ಮಾತನಾಡಿ, ಕಾಫಿತೋಟಗಳ ಲೈನ್‌ಮನೆಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಕುಟುಂಬಗಳಿಗೆ ನಿವೇಶನ ಒದಗಿಸುವಂತೆ ಆಗ್ರಹಿಸಿ ಕಳೆದ 9 ವರ್ಷಗಳಿಂದ ನಿರಂತರ ಹೋರಾಟ ಮಾಡುತ್ತಾ ಬರಲಾಗಿದೆ. ಆದರೆ ಕೇವಲ ಆಶ್ವಾಸನೆ ನೀಡುತ್ತಾ ಬಂದಿರುವ ಅಧಿಕಾರಿಗಳು ನಮ್ಮ ಬೇಡಿಕೆಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ನಿವೇಶನದ ಬೇಡಿಕೆ ಈಡೇರುವವರೆಗೂ ನಿರಂತರ ಹೋರಾಟ ಹಮ್ಮಿಕೊಳ್ಳುವುದಾಗಿ ಎಚ್ಚರಿಕೆ ನೀಡಿದರು.



ನಿವೇಶನಕ್ಕೆ ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿರುವ ಸಂಘಟನೆಯ ಸದಸ್ಯರು.

ಸಂಘಟನೆಯ ಪ್ರಮುಖರಾದ ಭವ್ಯ ಮಾತನಾಡಿ, ಬುಡಕಟ್ಟು ಕುಟುಂಬಗಳಿಗೆ ನಿವೇಶನಕ್ಕಾಗಿ ಆಗ್ರಹಿಸಿ ಪೊನ್ನಂಪೇಟೆ ತಾಲೂಕು ಕಾರ್ಯನಿರ್ವಹಣಾಧಿಕಾರಿ ಕಚೇರಿ ಎದುರು ಈ ಹಿಂದೆ 8 ತಿಂಗಳ ಕಾಲ ಅಹೋರಾತ್ರಿ ಧರಣಿ ನಡೆಸಿದ ಸಂದರ್ಭ ಅಧಿಕಾರಿಗಳು ನಿವೇಶನ ಒದಗಿಸುವ ಭರವಸೆ ನೀಡಿದ್ದರು, ಆದರೆ ಇಲ್ಲಿಯವರೆಗೆ ಭರವಸೆ ಈಡೇರಿಲ್ಲ ಎಂದು ಆರೋಪಿಸಿದರು.

ಪೊನ್ನಂಪೇಟೆ ತಾಲೂಕಿನ ಹೊಸೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಾಫಿ ತೋಟಗಳ ಲೈನ್ ಮನೆಗಳಲ್ಲಿ ಹಾಗೂ ಬಾಡಿಗೆ ಮನೆಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಕುಟುಂಬಗಳಿಗೆ ನಿವೇಶನದ ಹಕ್ಕುಪತ್ರ ಮತ್ತು ವಸತಿ ಮಂಜೂರು ಆಗುವವರೆಗೆ ನಿರಂತರ ಹೋರಾಟ ನಡೆಸಲಾಗುವುದು ಎಂದರು.

ಶಾಲಾ ಮಕ್ಕಳಲ್ಲಿ ಶಿಸ್ತು ಬೆಳೆಸಲು ಸ್ಕೌಟ್ಸ್, ಗೈಡ್ಸ್ ಸಹಕಾರಿ: ಡಿಡಿಪಿಐ ರಂಗಧಾಮಪ್ಪ

ಮಡಿಕೇರಿ, ಜು.3– ಶಾಲಾ ಮಕ್ಕಳಲ್ಲಿ ಶಿಸ್ತು ಸಂಯಮ, ಉತ್ತಮ ನಾಯಕತ್ವ ಗುಣ ಬೆಳೆಸಲು ಸಹಕಾರಿಯಾಗಿರುವ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಚಟುವಟಿಕೆಗಳು ವಿದ್ಯಾರ್ಥಿಗಳಲ್ಲಿ ರಾಷ್ಟ್ರೀಯ ಭಾವೈಕ್ಯತೆ ಬೆಳೆಸಲು ಹಾಗೂ ಭವಿಷ್ಯದಲ್ಲಿ ತಮ್ಮನ್ನು ಸೇವಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಉತ್ತಮ ವೇದಿಕೆ ಒದಗಿಸುತ್ತದೆ ಎಂದು ಕೊಡಗು ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸಿ.ರಂಗಧಾಮಪ್ಪ ಹೇಳಿದ್ದಾರೆ.

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಕೊಡಗು ಘಟಕದ ವತಿಯಿಂದ ನಗರದ ಡಿಡಿಪಿಐ ಕಚೇರಿಯಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಚಟುವಟಿಕೆಗಳ ಕುರಿತು ಜಿಲ್ಲಾ ಸಂಸ್ಥೆ ಪ್ರಧಾನ ಆಯುಕ್ತ ಕೆ.ಟಿ.ಬೇಬಿ ಮ್ಯಾಥ್ಯೂ ಮತ್ತು ಪದಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ ಅವರು, ಶಿಕ್ಷಣ ಇಲಾಖೆಯ ವತಿಯಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಕಾರ್ಯಚಟುವಟಿಕೆಗಳ ಕುರಿತು ಜಿಲ್ಲಾ ಸಂಸ್ಥೆಯ ಪ್ರಧಾನ ಆಯುಕ್ತ ಕೆ.ಟಿ.ಬೇಬಿ ಮ್ಯಾಥ್ಯೂ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಸ್ಥಾನಿಕ ಆಯುಕ್ತ ಎಚ್.ಎಂ.ಮುತ್ತಪ್ಪ, ಸಹ ಕಾರ್ಯದರ್ಶಿ ಬೊಳ್ಳಜಿರ ಬಿ.ಅಯ್ಯಪ್ಪ ಜಿಲ್ಲಾ ತರಬೇತಿ ಆಯುಕ್ತ ಕೆ.ಯು.ರಂಜಿತ್, ಸಂಪಾಜೆ ಸ್ಥಳೀಯ ಸಂಸ್ಥೆ ಅಧ್ಯಕ್ಷ ಎಂ.ಧನಂಜಯ, ಕಾರ್ಯದರ್ಶಿ ಕೆ.ಬಿ.ಉಷಾರಾಣಿ, ಸಂಸ್ಥೆ ಜಿಲ್ಲಾ ಸಂಘಟಕಿ ಯು.ಸಿ.ದಮಯಂತಿ ಇದ್ದರು.



ಗೈಡ್ಸ್ ಸಂಸ್ಥೆಯ ಚಟುವಟಿಕೆಗಳ ಕುರಿತು ನಡೆದ ಸಮಾಲೋಚನೆಯಲ್ಲಿ ಗಣ್ಯರು.

ಅಮ್ಮಾ ಎದ್ದೇಳಮ್ಮಾ..., ಏಳಮ್ಮ...

ತಾಯಿಯನ್ನು ಕಳೆದುಕೊಂಡ ಮರಿಯಾನೆಯ ರೋಧನೆ

ಕಳೇಬರದ ಬಳಿ ಬೀಡುಬಿಟ್ಟು ತಾಯಿ ಎಬ್ಬಿಸಲು ಪ್ರಯತ್ನ, ಯಾರೂ ಹತ್ತಿರ ಬಾರದಂತೆ ಘೀಳಿಡುತ್ತ ತಡೆ

ಕೊಳ್ಳೇಗಾಲ, ಜು.3– ಅಮ್ಮಾ ಎದ್ದೇಳಮ್ಮಾ..., ಅಮ್ಮಾ ಎದ್ದೇಳು... ಇದು ತಾಯಿಯನ್ನು ಕಳೆದುಕೊಂಡ ಮರಿಯಾನೆಯ ಆರ್ತನಾದ. ಇದು ಕರುಳು ಹಿಂಡುವ ದೃಶ್ಯವಾಗಿತ್ತು. ಮರಿಯಾನೆಯೇ ತಾಯಿಯ ಮೃತ ದೇಹದ ಮುಂದೆ ಬೀಡು ಬಿಟ್ಟು ಕಂಬನಿ ಗರೆಯುತ್ತಿರುವ ದೃಶ್ಯವೊಂದು ಮನಕಲಕುವಂತಿದೆ. ಈ ಮರಿಯಾನೆಗೆ ಇತರ ಆನೆಗಳು ಸಾಥ್ ನೀಡಿ ತಾವೂ ಕೂಡ ಮೌನವಾಗಿ ದುಃಖ ವ್ಯಕ್ತಪಡಿಸುತ್ತಿವೆ.

ತಾಲೂಕಿನ ಕಾವೇರಿ ವನ್ಯಜೀವಿಧಾಮ ವ್ಯಾಪ್ತಿಯ ಕೊತ್ತನೂರು ವಲಯದ ಮತ್ತಿಪುರ ಬಳಿ ಹೆಣ್ಣಾನೆಯೊಂದು ಸಾವನ್ನಪ್ಪಿತ್ತು. ಅದರ ಕಳೇಬರದ ಬಳಿ ಕಾಡಾನೆಗಳು ಹಾಗೂ ಮರಿ ಆನೆ ಸುತ್ತುವರೆದು ಯಾರೂ ಹತ್ತಿರ ಬರದಂತೆ ತಡೆದವಲ್ಲದೆ ದುಃಖ ವ್ಯಕ್ತಪಡಿಸಿದವು. ಸ್ಥಳಕ್ಕೆ ಅರಣ್ಯಾಧಿಕಾರಿಗಳು ಸಿಬ್ಬಂದಿಗಳು ತೆರಳಿದ ವೇಳೆ ಬೀಡುಬಿಟ್ಟಿದ್ದ ಕಾಡಾನೆಗಳು ಘೀಳಿಡುತ್ತ ಅರಣ್ಯ ಸಿಬ್ಬಂದಿ, ಅಧಿಕಾರಿಗಳತ್ತ ಮುನ್ನುಗ್ಗಿದವು. ಹಾಗಾಗಿ ಅಧಿಕಾರಿಗಳ ಮುಂದಿನ ಕಾರ್ಯಾಚರಣೆಗೆ ಹಿನ್ನಡೆಯಾಗಿದೆ.

ತಾಯಾನೆ ಬಳಿ ಮರಿ ಆನೆ ಕಾವಲಿದ್ದು ಯಾರಾದರೂ ಸ್ಥಳಕ್ಕೆ ಧಾವಿಸಲು ಪ್ರಯತ್ನಿಸಿದರೆ ಘೀಳಿಡುತ್ತಲೆ ಅತ್ತಿಂತಿದ್ದ ಓಡಾಡುತ್ತ ಅವರತ್ತ ನುಗ್ಗುತ್ತಿದೆ. ತನ್ನ ಸೊಂಡಲಿನಲ್ಲಿ ತನ್ನ ತಾಯಿಯ ಮುಖ, ಇಡೀ ದೇಹವನ್ನು ಸವರುತ್ತ ಸತ್ತು ಮಲಗಿರುವ ತಾಯಾನೆಯ ಎದ್ದೇಳಿಸುವ ಪ್ರಯತ್ನವನ್ನು ಮಾಡುತ್ತಿರುವ ದೃಶ್ಯ ಕಂಡು ಬಂತು. ತನ್ನ ತಾಯಾನೆ ಇನ್ನು ಮಲಗಿದೆ ಎಂಬ ಭಾವನೆ ತಳೆದ ಮರಿಯಾನೆ ತನ್ನ ಸೊಂಡಲಿನಿಂದ ತಾಯಾನೆ ಮುಖ ಸವರತ್ತು, ಎಬ್ಬಿಸುವ ಪ್ರಯತ್ನ ಮಾಡುತ್ತಲೇ ಇತ್ತು. ಸ್ವಲ್ಪ ಸಮಯದ ನಂತರ ಅತ್ತ ಕಡೆ, ಇತ್ತ ಕಡೆ ತೆರಳುವುದು ಪುನಃ ತಾಯಾನೆಯನ್ನು ಎಬ್ಬಿಸಿ ಕರೆದುಕೊಂಡು ಹೋಗುವ ಮರಿಯಾನೆಯ ಪ್ರಯತ್ನ ನಿಜಕ್ಕೂ ಮನಕಲಕುವಂತಿತ್ತು.

ತಾಯಿಯ ಮಮತೆ, ಪ್ರೀತಿಗೆ ಬಂಧಿಯಾಗಿ ಬೆಳೆಯಬೇಕಿದ್ದ ಮರಿಯಾನೆ ತಬ್ಬಲಿ ಮಗುವಂತೆ ತಾಯಿಯ ಮೃತದೇಹದ ಸುತ್ತಲೂ ಸುತ್ತಾಡುತ್ತಲೆ ತಾಯಿಯ ಕನವರಿಕೆ ಮಾಡುತ್ತಿದೆ. ಅದು ಘೀಳಿಡುವ ದೃಶ್ಯವಂತೂ ಎಲ್ಲರ ಮನಕಲಕುವಂತೆ ಮಾಡಿದೆ.

ಸ್ಥಳದಲ್ಲೆ ವಲಯ ಅರಣ್ಯಾಧಿಕಾರಿ ಸುಂದರ್, ಡಿಆರ್‌ಎಫ್ಓ ಸೂರ್ಯಕಾಂತ್, ಗಾರ್ಡ್‌ಗಳಾದ ಕಿರಣ್, ಬಸವಣ್ಣ ಮತ್ತಿತರರು ತೆರಳಿ ಮರಿಯಾನೆಯ ರೋದನೆ ಕಂಡು ಮರುಗಿದ್ದು ಮುಂದಿನ ಕ್ರಮಕ್ಕೆ ಸಿದ್ಧರಾಗಿದ್ದಾರೆ.





ಸಾವನ್ನಪ್ಪಿದ ತಾಯಿ ಆನೆ ಬಳಿ ಮರಿಯಾನೆ ನಿಂತು ರೋಧಿಸುತ್ತಿರುವುದು. ಮತ್ತೊಂದು ಚಿತ್ರದಲ್ಲಿ ಗಂಡಾನೆಯೊಂದು ಕಾವಲು ಕಾಯುತ್ತಿರುವುದು.

ನೂತನ ಎಸ್‌ಪಿ ಡಾ.ಬಿ.ಟಿ.ಕವಿತಾ ಅಧಿಕಾರ ಸ್ವೀಕಾರ

ಚಾಮರಾಜನಗರ, ಜು.3– ಚಾಮರಾಜನಗರ ನೂತನ ಪೊಲೀಸ್ ವರಿಷ್ಠಾಧಿಕಾರಿಯಾಗಿ ಡಾ.ಬಿ.ಟಿ. ಕವಿತಾ ಅವರು ಬುಧವಾರ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಉದೇಶ ಅವರಿಂದ ಅಧಿಕಾರ ಸ್ವೀಕರಿಸಿದರು. ವಿಶೇಷವೆಂದರೆ ಇವರ ಪತಿ ಚಾಮರಾಜನಗರ ಅಬಕಾರಿ ಇಲಾಖೆ ಉಪ ಆಯುಕ್ತರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಚಾಮರಾಜನಗರದಲ್ಲಿ ಎಸ್‌ಪಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಪದ್ಮಿನಿ ಸಾಹು ಅವರನ್ನು ಬೆಂಗಳೂರಿಗೆ ವರ್ಗ ಮಾಡಲಾಗಿದೆ.

ಕವಿತಾ ಅವರು 2016ರ ಕರ್ನಾಟಕ ಕೇಡರ್‌ನ ಅಧಿಕಾರಿಯಾಗಿದ್ದಾರೆ. ಪತಿ ನಾಗಶಯನ ಅಬಕಾರಿ ಇಲಾಖೆ ಉಪ ಆಯುಕ್ತರಾಗಿದ್ದಾರೇ ಪತ್ನಿ ಈಗ ಚಾಮರಾಜನಗರ ಪೊಲೀಸ್ ವರಿಷ್ಠಾಧಿಕಾರಿಯಾಗಿ ಪತ್ನಿ ಅಧಿಕಾರ ಸ್ವೀಕಾರಿಸಿದಾಗ ಪತಿಯೂ ಹಾಜರಾಗಿ ಶುಭ ಕೋರಿದರು.

ಅಧಿಕಾರ ಸ್ವೀಕರಿಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿ, ಚಾಮರಾಜನಗರ ಜಿಲ್ಲೆಯು ಎರಡು ರಾಜ್ಯಗಳ ಗಡಿ ಹಂಚಿಕೊಂಡಿದ್ದು ಚಾಮರಾಜನಗರವನ್ನು ಸುರಕ್ಷಿತ ಜಿಲ್ಲೆ ಮತ್ತು ಜನಸ್ನೇಹಿ ಪೊಲೀಸ್ ಮಾಡಲು ಮೊದಲ ಆದ್ಯತೆ. ಅಪಘಾತಗಳು, ಕಳವು ಪ್ರಕರಣ ಹೆಚ್ಚಾಗುತ್ತಿದ್ದು ಇದಕ್ಕೆ ಕಡಿವಾಣ ಹಾಕಲಾಗುತ್ತದೆ ಎಂದು ಅಭಯ ನೀಡಿದರು.

ಪತಿಯೂ ಜಿಲ್ಲೆಯಲ್ಲಿ ಅಧಿಕಾರಿ ಆಗಿರುವುದಕ್ಕೆ ಪ್ರತಿಕ್ರಿಯಿಸಿ, ಇಬ್ಬರು ಸರ್ಕಾರಿ ನೌಕರರಾಗಿದ್ದು ಮೊದಲು ಕರ್ತವ್ಯಕ್ಕೆ ಆದ್ಯತೆ ಬಳಿಕ ವೈಯಕ್ತಿಕ ವಿಚಾರ ಎಂದು ಹೇಳಿದರು.



ಎಸ್‌ಪಿ ಕವಿತಾ ಅಧಿಕಾರ ಸ್ವೀಕರಿಸುತ್ತಿರುವುದು.

ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ, ಇಬ್ಬರು ಬೈಕ್ ಸವಾರರು ಸಾವು

ಚಾಮರಾಜನಗರ, ಜು.3– ತಾಲೂಕಿನ ಬಸವಟ್ಟಿ ಗೇಟ್ ಬಳಿ ಕೆಎಸ್‌ಆರ್‌ಟಿಸಿ ಬಸ್ ಹಾಗೂ ಬೈಕ್ ನಡುವೆ ಸಂಭವಿಸಿದ ಅಪಘಾತದಲ್ಲಿ ಬೈಕ್ ಸವಾರರಿಬ್ಬರು ಮೃತಪಟ್ಟಿದ್ದಾರೆ.

ಕಮರವಾಡಿ ಗ್ರಾಮದ ಮಹೇಶ್(46) ಹಾಗೂ ಕಿಶೋರ್(48) ಮೃತಪಟ್ಟ ದುರ್ದೈವಿಗಳು. ಸಂತೇಮರಹಳ್ಳಿಯಿಂದ ಕಮರವಾಡಿಗೆ ಹೋಗುತ್ತಿದ್ದ ಬೈಕ್‌ಗೆ ನರಸೀಪುರದಿಂದ ಚಾಮರಾಜನಗರ ಕಡೆಗೆ ಬರುತ್ತಿದ್ದ ಬಸ್ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಸವಾರರಿಬ್ಬರು ಮೃತಪಟ್ಟಿದ್ದಾರೆ.

ಮೃತದೇಹಗಳನ್ನು ಸಂತೇಮರಹಳ್ಳಿ ಸರಕಾರಿ ಪ್ರಾಥಮಿಕ ಆಸ್ಪತ್ರೆಗೆ ರವಾನಿಸಿದ್ದು, ವಾಹನಗಳನ್ನು ವಶಕ್ಕೆ ಪಡೆದುಕೊಂಡಿರುವ ಸಂತೇಮರಹಳ್ಳಿ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಜು.7, ಅರಳೀಕಟ್ಟೆಯಲ್ಲಿ ಬಸವ ಜಯಂತಿ

50ಕ್ಕೂ ಹೆಚ್ಚು ನಂದಿ ಕಂಬಗಳ ಮೆರವಣಿಗೆ



ಚಾಮರಾಜನಗರ,ಜು.3– ತಾಲೂಕಿನ ಅರಳೀಕಟ್ಟೆ ಗ್ರಾಮದಲ್ಲಿ ಶ್ರೀ ಬಸವ ಬಳಗ ಹಾಗೂ ಗ್ರಾಮಸ್ಥರ ಸಹಯೋಗದಲ್ಲಿ ಎರಡನೇ ವರ್ಷದ ಶ್ರೀ ಬಸವೇಶ್ವರ ಜಯಂತ್ಯುತ್ಸವದ ಅಂಗವಾಗಿ ಜು.7 ರಂದು ಶ್ರೀ ಬಸವೇಶ್ವರ ಮೂರ್ತಿ ಮೆರವಣಿಗೆಯು 50ಕ್ಕೂ ಹೆಚ್ಚು ನಂದಿಕಂಬಗಳು ಹಾಗೂ ವಿವಿಧ ಜನಪದ ಕಲಾ ತಂಡಗಳೊಂದಿಗೆ ಅದ್ದೂರಿ ಮೆರವಣಿಗೆಯನ್ನು ಆಯೋಜನೆ ಮಾಡಲಾಗಿದೆ.

ಅಂದು ಬೆಳಗ್ಗೆ 11 ಗಂಟೆಗೆ ಗ್ರಾಮದ ಬಸವೇಶ್ವರ ದೇವಸ್ಥಾನದ ಮುಂಭಾಗದಿಂದ ಆರಂಭವಾಗುವ ಉತ್ಸವವನ್ನು ಚಾಮರಾಜನಗರ ವಿರಕ್ತ ಮಠಾಧ್ಯಕ್ಷರಾದ ಶ್ರೀ ಚನ್ನಬಸವಸ್ವಾಮೀಜಿಗಳು ನಂದಿಕಂಬಕ್ಕೆ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ. ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀ ಬಸವೇಶ್ವರ ಮೂರ್ತಿ ಮೆರವಣಿಗೆಯು ನಂದಿಕಂಬಗಳು, ವೀರಗಾಸೆ, ಮಂಗಳವಾದ್ಯ, ಸೇರಿದಂತೆ ವಿವಿಧ ಜನಪದ ಕಲಾತಂಡಗಳೊಂದಿಗೆ ಅದ್ದೂರಿಯಾಗಿ ನಡೆಯಲಿದೆ.

ಸಂಜೆ 7 ಗಂಟೆಗೆ ಪ್ರಸಾದ ವ್ಯವಸ್ಥೆ ಮಾಡಲಾಗಿದೆ. 50ಕ್ಕೂ ಹೆಚ್ಚು ಗ್ರಾಮಗಳಿಂದ ನಂದಿ ಕಂಬಗಳು ಮೆರವಣಿಗೆಯಲ್ಲಿ ಭಾಗವಹಿಸುವ ಮೂಲಕ ಬಹಳ ಅದ್ದೂರಿಯಾಗಿ ನಡೆಯಲಿದೆ. ರಾತ್ರಿ 10 ಗಂಟೆಗೆ ಅರಳಿಕಟ್ಟೆಯ ಶ್ರೀ ಮಲ್ಲಾರಾಧ್ಯ ಅವರಿಂದ ಶಿವಕಥೆಯನ್ನು ಏರ್ಪಡಿಸಲಾಗಿದ್ದು, ಈ ಎಲ್ಲಾ ಕಾರ್ಯಕ್ರಮಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಬಸವ ಭಕ್ತರು, ಸಾರ್ವಜನಿಕರು ಸುತ್ತಮುತ್ತಲಿನ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಶ್ರೀ ಬಸವ ಬಳಗ ಹಾಗೂ ಅರಳಿಕಟ್ಟೆ ಗ್ರಾಮಸ್ಥರು ಪತ್ರಿಕಾ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಗ್ರಾಮಾಂತರ ಪ್ರದೇಶಗಳಿಗೆ ಮೂಲಸೌಕರ್ಯ ಕಲ್ಪಿಸುವ ಯೋಜನೆ ಶೀಘ್ರ ಆರಂಭ

ಗುಂಡ್ಲುಪೇಟೆ, ಜು.3– ಕ್ಷೇತ್ರದಲ್ಲಿನ ಗ್ರಾಮಾಂತರ ಪ್ರದೇಶಗಳ ಮೂಲ ಸೌಕರ್ಯವನ್ನು ಕಲ್ಪಿಸುವ ಅಭಿವೃದ್ಧಿ ಕಾರ್ಯಗಳನ್ನು ಸದ್ಯದಲ್ಲಿಯೇ ಕೈಗೆತ್ತಿಕೊಳ್ಳಲಾಗುವುದು ಎಂದು ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ತಿಳಿಸಿದರು.

ಬುಧವಾರ ತಾಲೂಕಿನ ಬನ್ನಿತಾಳಪುರ ಗ್ರಾಮ ಪಂಚಾಯಿತಿ ಆವರಣದಲ್ಲಿ ನಿರ್ಮಿಸಿದ ರಾಜೀವ್ ಗಾಂಧಿ ಸೇವಾಕೇಂದ್ರ ಉದ್ಘಾಟಿಸಿ ಅವರು ಮಾತನಾಡಿದರು. ನರೇಗಾ ಯೋಜನೆಯಲ್ಲಿ ಕಾರ್ಮಿಕರಿಗೆ ಉದ್ಯೋಗ ದೊರಕಿಸಲು ಗ್ರಾಮಪಂಚಾಯಿತಿಗಳಲ್ಲಿ ರಾಜೀವ್ ಗಾಂಧಿ ಸೇವಾ ಕೇಂದ್ರಗಳು ಕಾರ್ಯಕ್ರಮ ಕೈಗೊಳ್ಳುತ್ತಿವೆ. ಈ ಹಿನ್ನೆಲೆಯಲ್ಲಿ ಬನ್ನಿತಾಳಪುರದಲ್ಲಿಯೂ ನನೆಗುದಿಗೆ ಬಿದ್ದಿದ್ದ ಕೇಂದ್ರವನ್ನು ಉದ್ಘಾಟನೆ ಮಾಡಿ ಬಳಕೆಗೆ ತರಲಾಗುತ್ತಿದೆ.ದೊಡ್ಡ ಗ್ರಾಮವಾರ ಬನ್ನಿತಾಳಪುರದ ಅಭಿವೃದ್ದಿಗೆ ಹೆಚ್ಚಿನ ಅನುದಾನ ನೀಡಲಾಗುವುದು. ಈ ಗ್ರಾಮದಲ್ಲಿ ಪಶುವೈದ್ಯ ಆಸ್ಪತ್ರೆ ಹಾಗೂ ಪಿಯುಸಿ ಕಾಲೇಜು ತೆರೆಯಲು ಕ್ರಮಕೈಗೊಳ್ಳಲಾಗುವುದು ಮತ್ತು ಕ್ಷೇತ್ರದಲ್ಲಿನ ಗ್ರಾಮಾಂತರ ಪ್ರದೇಶಗಳ ಮೂಲಸೌಕರ್ಯವನ್ನು ಕಲ್ಪಿಸುವ ಅಭಿವೃದ್ಧಿ ಕಾರ್ಯಗಳನ್ನು ಸದ್ಯದಲ್ಲಿಯೇ ಕೈಗೆತ್ತಿಕೊಳ್ಳಲಾಗುವುದು ಎಂದರು. ಗ್ರಾಮಾಂತರ ಪ್ರದೇಶಗಳ ಅಭಿವೃದ್ಧಿಗೆ ಸರ್ಕಾರ ಅನುದಾನ ಬಿಡುಗಡೆ ಮಾಡಿದ್ದು ಸದ್ಯದಲ್ಲಿಯೇ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತದೆ ತಾಲೂಕಿನ ಸರಿ ಸುಮಾರು 60 ಸಾವಿರ ಮಹಿಳೆಯರಿಗೆ ಸರ್ಕಾರದ ಗೃಹಲಕ್ಷ್ಮೀ ಸೇರಿದಂತೆ ಹಲವು ಉಚಿತ ಭಾಗ್ಯಗಳನ್ನು ತಲುಪಿದೆ ಎಂದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಮಹೇಶ, ಉಪಾಧ್ಯಕ್ಷೆ ಮಹದೇವಮ್ಮ, ಸದಸ್ಯರು ಹಾಗೂ ಗ್ರಾಮಸ್ಥರು ಮತ್ತು ಬಿಲ್ ಕಲೆಕ್ಟರ್ ಮಲ್ಲು ಸೇರಿದಂತೆ ಹಲವರು ಇದ್ದರು.



ಗುಂಡ್ಲುಪೇಟೆ ತಾಲೂಕಿನ ಬನ್ನಿತಾಳಪುರ ಗ್ರಾಮದಲ್ಲಿ ರಾಜೀವ್ ಗಾಂಧಿ ಸೇವಾ ಕೇಂದ್ರದ ನೂತನ ಕಟ್ಟಡವನ್ನು ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಉದ್ಘಾಟಿಸಿದರು.

'ಚಾಮರಾಜನಗರ ಅಭಿವೃದ್ಧಿಗೆ ಆದ್ಯತೆ': ಮಹಮದ್ ಅಸ್ಗರ್

ಚಾಮರಾಜನಗರ, ಜು.3– ಚಾಮರಾಜನಗರ ನಗರಾಭಿವೃದ್ಧಿ ಪ್ರಾಧಿಕಾರದ ನೂತನ ಅಧ್ಯಕ್ಷ ಮಹಮದ್ ಅಸ್ಗರ್ (ಮುನ್ನ) ಅವರನ್ನು ನಗರದ ಮದೀನ ಮಸೀದಿಯಲ್ಲಿ ಮಸೀದಿಯ ಧರ್ಮಗುರುಗಳು, ಆಡಳಿತ ಮಂಡಳಿ ಪದಾಧಿಕಾರಿಗಳು ಸನ್ಮಾನಿಸಿದರು.

ಸನ್ಮಾನ ಸ್ವೀಕರಿಸಿದ ಚುಡಾ ಅಧ್ಯಕ್ಷ ಮಹಮದ್ ಅಸ್ಗರ್(ಮುನ್ನಾ) ಮಾತನಾಡಿ, ಕಾಂಗ್ರೆಸ್ ಪಕ್ಷಕ್ಕೆ ಸಲ್ಲಿಸಿದ ಸೇವೆಯನ್ನು ಗುರುತಿಸಿ ಪಕ್ಷದ ವರಿಷ್ಠರು ಈಗಾಗಲೇ ಚಾಮರಾಜನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುದ್ದೆ ನೀಡಿದ್ದಾರೆ. ಚಾಮರಾಜನಗರ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಕಾಂಗ್ರೆಸ್ ಸರ್ಕಾರ ಚುಡಾ ಅಧ್ಯಕ್ಷರಾಗಿ ತಮ್ಮನ್ನು ನೇಮಕ ಮಾಡಿದೆ. ಇಂತಹ ದೊಡ್ಡಜವಾಬ್ದಾರಿ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರು, ಪಕ್ಷದ ಶಾಸಕರನ್ನು ಅಭಿನಂದಿಸುವುದಾಗಿ ಹೇಳಿದರು.

ನನ್ನ ಅವಧಿಯಲ್ಲಿ ಚಾಮರಾಜನಗರದಲ್ಲಿ ವಿವಿಧ ಬಡಾವಣೆಗಳನ್ನು ಅಭಿವೃದ್ಧಿಪಡಿಸುವ ಆಶಯ ಹೊಂದಿದ್ದೇನೆ ಎಂದರು.

ಈ ಸಂದರ್ಭದಲ್ಲಿ ಮದೀನ ಮಸೀದಿ ಅಧ್ಯಕ್ಷರಾದ ನಹೀಮುಲ್ಲಹಕ್, ಕಾರ್ಯದರ್ಶಿ ವಸೀಂ, ಮೌಲಾನಾ ಮುಕ್ತಿ ಜಾಫರ್ ಹುಸೇನ್, ಮುಕ್ತಾರ್ ಅಹಮದ್ ಹಾಜರಿದ್ದರು.



ಚಾ.ನಗರ ನಗರಾಭಿವೃದ್ಧಿ ಪ್ರಾಧಿಕಾರದ ನೂತನ ಅಧ್ಯಕ್ಷ ಮಹಮದ್ ಅಸ್ಗರ್ (ಮುನ್ನ) ಅವರನ್ನು ಚಾ.ನಗರದ ಮದೀನ ಮಸೀದಿಯಲ್ಲಿ ಮಸೀದಿಯ ಆಡಳಿತ ಮಂಡಳಿ ಪದಾಧಿಕಾರಿಗಳು ಸನ್ಮಾನಿಸಿದರು.

ಒಂದನೇ ಪುಟದಿಂದ

ಪರ–ವಿರೋಧ ಪ್ರತಿಭಟನೆ

ರೈತ ಸಂಘದ ಜಿಲ್ಲಾಧ್ಯಕ್ಷ ಎ.ಎಲ್. ಕೆಂಪೂಗೌಡ ಮಾತನಾಡಿ, ಬೇಬಿಬೆಟ್ಟದ ಪ್ರದೇಶದಲ್ಲಿ ನಡೆಯುತ್ತಿರುವ ಕಲ್ಲು ಗಣಿಗಾರಿಕೆಯಿಂದ ಕೆಆರ್‌ಎಸ್‌ಗೆ ಅಪಾಯ ವಿದೆ. ಹಾಗಾಗಿ ಅದನ್ನು ವಿರೋಧಿಸಿ ರೈತಸಂಘ ಮೊದಲಿಂದಲೂ ಪ್ರತಿಭಟನೆ ನಡೆಸಿದೆ. ಇದೀಗ ಅಧಿಕಾರಿಗಳು ಗಣಿ ಮಾಲೀಕರಿಗೆ ಅನುಕೂಲ ಮಾಡಿ ಕೊಡುವ ಉದ್ದೇಶದಿಂದ ಟ್ರಯಲ್ ಬ್ಲಾಸ್ಟ್ ನಡೆಸಲು ಮುಂದಾಗಿದ್ದಾರೆ ಎಂದು ಕಿಡಿಕಾರಿದರು. ಬೇಬಿ ಬೆಟ್ಟದಲ್ಲಿ ಯಾವುದೇ ಕಾರಣಕ್ಕೂ ಟ್ರಯಲ್ ಬ್ಲಾಸ್ಟ್ ನಡೆಸಲು ಅವಕಾಶ ನೀಡುವುದಿಲ್ಲ. ರೈತ ಸಂಘ ಮೊದಲಿಂದಲೂ ಟ್ರಯಲ್ ಬ್ಲಾಸ್ಟ್ ವಿರೋಧಿಸುತ್ತಾ ಬಂದಿದೆ. ಕೆಆರ್‌ಎಸ್ ಉಳಿದರೆ ಮಾತ್ರ ಜಿಲ್ಲೆಯ ಜನ, ರೈತರು ಬದುಕಲು ಸಾಧ್ಯ. ಈ ವಿಚಾರವಾಗಿ ಜಿಲ್ಲೆಯ ಶಾಸಕರು, ಸಂಸದರು, ಮಂತ್ರಿಗಳು ಚಕಾರ ಎತ್ತದೆ ಇರುವುದು ಶೋಚನೀಯ. ಗಣಿಗಾರಿಕೆ ವಿಚಾರವಾಗಿ ಮಠಾಧಿಪತಿಗಳೂ ಮಾತನಾಡಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯ ಮಧ್ಯ ಪ್ರವೇಶಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಎಚ್.ಎಲ್.ಪ್ರಕಾಶ್, ಪ್ರಿಯಾ ರಮೇಶ್, ಶಂಭೂಗೌಡ, ಪಾಂಡು, ಜಯರಾಮು, ಪಿ.ಆರ್.ರಮೇಶ್, ಪ್ರಭು, ವಿಜಿಕುಮಾರ್, ಮಹದೇವು, ಮಂಜು, ಕೃಷ್ಣ ಲಿಂಗಪ್ಪಾಜಿ, ರವೀಂದ್ರ ಹಲವರಿದ್ದರು.

ಟ್ರಯಲ್ ಬ್ಲಾಸ್ಟ್‌ಗಾಗಿ ಭರದ ಸಿದ್ಧತೆ

ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಟ್ರಯಲ್ ಬ್ಲಾಸ್ಟ್ ನಡೆಸಲು ಮುಂದಾಗಿದ್ದು, ಇದಕ್ಕಾಗಿ ಜಾರ್ಖಂಡ್‌ನ ಧನ್‌ಭಾಗ್‌ನ ಸೆಂಟ್ರಲ್ ಇನ್‌ಸ್ಟಿಟ್ಯೂಟ್ ಆಫ್ ಮೈನಿಂಗ್ ಆಂಡ್ ಫ್ಯೂಯಲ್ ರೀಸರ್ಚ್ ಸಂಸ್ಥೆಯಿಂದ ವಿಜ್ಞಾನಿಗಳ ತಂಡ ಆಗಮಿಸಲಿದ್ದು, ಅವರ ಸೂಚನೆಯಂತೆ ಬೇಬಿಬೆಟ್ಟದ ಆಯ್ದ ಐದು ಸ್ಥಳಗಳಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸಲು ಗಣಿ ಅಧಿಕಾರಿಗಳು ಬುಧವಾರ ಕುಳಿ ತೆಗೆಯುವ ಕಾರ್ಯ ನಡೆಸಿದರು.

ಟ್ರಯಲ್ ಬ್ಲಾಸ್ಟ್ ನಡೆಸಲು ಸಾಕಷ್ಟು ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸಲು ನಿಗಧಿಪಡಿಸುವ ಸ್ಥಳಗಳ ಬಳಿ ಬಿಗಿ ಪೊಲೀಸ್ ಬಂದೋಬಸ್ತ್ ನಿಯೋಜನೆ ಮಾಡಲಾಗಿದೆ.

ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಹಿರಿಯ ಭೂ ವಿಜ್ಞಾನಿ ರೇಷ್ಮಾ ಹಾಗೂ ಭೂ ವಿಜ್ಞಾನಿ ನಾಗಮಧು ನೇತೃತ್ವದಲ್ಲಿ ಬೇಬಿ ಬೆಟ್ಟದ ಕ್ವಾರೆ ನಂ.1, 2, ಎಸ್‌ಎಲ್‌ವಿ, ಎಸ್‌ಟಿಜಿ ಮತ್ತು ಶ್ರೀರಾಮ ಲಿಂಗೇಶ್ವರ ಕ್ವಾರೆಯ ಪ್ರದೇಶದಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸಲು ಕುಳಿ ತೆಗೆಸುವ ಕಾರ್ಯ ನಡೆಸಿದರು.

ವಿಜ್ಞಾನಿಗಳ ಸೂಚನೆಯಂತೆ ಗಣಿ ಅಧಿಕಾರಿಗಳು ಮೊದಲು ಕೆಆರ್‌ಎಸ್ ಅಣೆಕಟ್ಟೆಯಿಂದ 5.8 ಕಿಮೀ ದೂರದಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸಲು ಸಿದ್ಧತೆ ನಡೆಸಿಕೊಂಡಿದ್ದು, ಆ ಸ್ಥಳದಲ್ಲಿ ಸುಮಾರು 20 ಅಡಿ ಡ್ರಿಲ್ಲಿಂಗ್ ಹೋಲ್ ತೆಗೆಸಿದ್ದಾರೆ. ನಂತರ 6.27 ಕಿಮೀ. 8, 10 ಹಾಗೂ 20 ಕಿಮೀ ದೂರದಲ್ಲಿ ಸುಮಾರು 60–80 ಅಡಿ ಆಳದವರೆಗೆ ಡ್ರಿಲ್ಲಿಂಗ್ ಹೋಲ್ ತೆಗೆಸಿ ಟ್ರಯಲ್ ಬ್ಲಾಸ್ಟಿಂಗ್ ಮಾಡಲು ಸಿದ್ದತೆ ನಡೆಸಿಕೊಂಡಿದ್ದಾರೆ. ಬುಧವಾರ ಮತ್ತು ಗುರುವಾರ ಆಯ್ದ ಗಣಿಗಾರಿಕೆ ಪ್ರದೇಶದಲ್ಲಿ ಡ್ರಿಲ್ಲಿಂಗ್ ಹೋಲ್ ತೆಗೆಸುವ ಕಾರ್ಯ ನಡೆಯಲಿದ್ದು, ಶನಿವಾರ ಅಥವಾ ಭಾನುವಾರ ಗಣಿ ವಿಜ್ಞಾನಿಗಳು ಟ್ರಯಲ್ ಬ್ಲಾಸ್ಟ್ ನಡೆಸುವ ಸಾಧ್ಯತೆಗಳಿವೆ. ಹಿರಿಯ ಭೂ ವಿಜ್ಞಾನಿ ರೇಷ್ಮಾ ಮಾತನಾಡಿ, ಹೈಕೋರ್ಟ್ ಆದೇಶದಂತೆ ಬೇಬಿಬೆಟ್ಟದ ಕಲ್ಲುಗಣಿಗಾರಿಕೆ ಪ್ರದೇಶದಲ್ಲಿ ಗಣಿ ವಿಜ್ಞಾನಿಗಳ ಸೂಚನೆಯಂತೆ ಆಯ್ದ ಪ್ರದೇಶದಲ್ಲಿ ಡ್ರಿಲ್ಲಿಂಗ್ ಯಂತ್ರದ ಮೂಲಕ ಕುಳಿ ಕೊರೆಸುವ ಕಾರ್ಯದಲ್ಲಿ ತೊಡಗಿದ್ದೇವೆ. ಸುಮಾರು 5 ಸ್ಥಳಗಳನ್ನು ಭೂ ವಿಜ್ಞಾನಿಗಳು ಆಯ್ಕೆ ಮಾಡಿಕೊಂಡಿದ್ದು ಅದರಂತೆ ಕುಳಿ ತೆಗೆಸುವ ಕಾರ್ಯ ನಡೆಸುತ್ತಿದ್ದೇವೆ. ವಿಜ್ಞಾನಿಗಳು ಟ್ರಯಲ್ ಬ್ಲಾಸ್ಟ್ ನಡೆಸಿ ಕೋರ್ಟ್‌ಗೆ ವರದಿ ರವಾನಿಸಬೇಕಾಗಿದೆ ಅದರಂತೆ ಕುಳಿ ತೆಗೆಸಲಾಗುತ್ತಿದ್ದು, ಬುಧವಾರ ಮತ್ತು ಗುರುವಾರ ಎರಡು ದಿನವು ಸಹ ಕುಳಿ ತೆಗೆಸಲಾಗುವುದು, ನಂತರ ವಿಜ್ಞಾನಿಗಳು ಟ್ರಯಲ್ ಬ್ಲಾಸ್ಟ್ ನಡೆಸಲಿದ್ದಾರೆ ಎಂದು ತಿಳಿಸಿದರು.

ಮಲ್ಲಿಕಾರ್ಜುನ ಖರ್ಗೆ ಮುಖ್ಯಮಂತ್ರಿ?

ತಂದಿದ್ದಾರೆ ಮತ್ತು ಖರ್ಗೆ ಅವರಿಗೆ ಒಮ್ಮೆ ಅವಕಾಶ ಮಾಡಿಕೊಡಿ ಎಂದು ಸಲಹೆ ಮಾಡಿದ್ದಾರೆ. ಈ ಬೆಳವಣಿಗೆ ನಂತರ ಶಿವಕುಮಾರ್ ದೆಹಲಿಯಿಂದ ನಗರಕ್ಕೆ ಹಿಂತಿರುಗಿದ್ದವರು, ಮತ್ತೆ ದೆಹಲಿಗೆ ತೆರಳಿ ಖರ್ಗೆ ಅವರನ್ನು ಭೇಟಿ ಮಾಡಿ, ರಾಹುಲ್ ಪ್ರಸ್ತಾಪಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಸುದೀರ್ಘ ಚರ್ಚೆ ಮಾಡಿದ್ದಾರೆ ಎನ್ನಲಾಗಿದೆ.

ರಾಹುಲ್ ತೆಗೆದುಕೊಂಡಿರುವ ನಿರ್ಧಾರವನ್ನು ಸಿದ್ದರಾಮಯ್ಯ ಯಾವುದೇ ಕಾರಣಕ್ಕೂ ಪ್ರಶ್ನೆ ಮಾಡುವುದಿಲ್ಲ, ಅವರ ಬಗ್ಗೆ ಮುಖ್ಯಮಂತ್ರಿ ಅವರಿಗೆ ಬಹಳ ಅಭಿಮಾನವಿದೆ. ಎರಡು ಬಾರಿ ಮುಖ್ಯಮಂತ್ರಿ ಆಗುವುದರ ಜೊತೆಗೆ ವಿಧಾನಸಭೆಯ ಪ್ರತಿಪಕ್ಷದ ನಾಯಕನಾಗಿ ಕೆಲಸ ಮಾಡಲು ರಾಹುಲ್ ಗಾಂಧಿ ಕಾರಣ ಎಂಬ ಗೌರವ ಸಿದ್ದರಾಮಯ್ಯ ಅವರಲ್ಲಿದೆ.

ಈ ಕಾರಣಕ್ಕಾಗಿ ರಾಹುಲ್ ಸೂತ್ರಕ್ಕೆ ಸಂಪೂರ್ಣ ಸಹಮತ ವ್ಯಕ್ತಪಡಿಸಿದ್ದಾರೆ. ಜೊತೆಗೆ ಒಬ್ಬ ದಲಿತ ನಾಯಕನಿಗೆ ಅಧಿಕಾರ ಬಿಟ್ಟುಕೊಟ್ಟೆ ಎಂಬ ಹೆಗ್ಗಳಿಕೆಗೂ ಪಾತ್ರರಾಗುತ್ತಾರೆ. ಖರ್ಗೆ ಅವರನ್ನು ಮುಖ್ಯಮಂತ್ರಿ ಮಾಡುವುದರಿಂದ ಕಾಂಗ್ರೆಸ್‌ಗೆ ರಾಷ್ಟ್ರಮಟ್ಟದಲ್ಲಿ ದಲಿತ ನಾಯಕನೊಬ್ಬನನ್ನು ಮುಖ್ಯಮಂತ್ರಿ ಮಾಡಿದ ಕೀರ್ತಿ ಒಂದೆಡೆಯಾದರೆ, ಮತ್ತೊಂದೆಡೆ ಅವರ ಸರ್ಕಾರವನ್ನು ಉರುಳಿಸಲು ಪಕ್ಷದಲ್ಲಿ ಆಂತರಿಕವಾಗಿ ಇಲ್ಲವೇ ಬಾಹ್ಯವಾಗಿ ಯಾರೂ ಪ್ರಯತ್ನ ಮಾಡುವುದಿಲ್ಲ. ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಪೂರ್ಣಾವಧಿಗೆ ಅಧಿಕಾರ ನಡೆಸಲಿದೆ ಎಂಬ ಲೆಕ್ಕಾಚಾರದಿಂದ ಖರ್ಗೆ ಅವರಿಗೆ ಒಂದು ಅವಕಾಶ ನೀಡಲು ಸೋನಿಯಾ ಮತ್ತು ರಾಹುಲ್ ಈ ತೀರ್ಮಾನ ಕೈಗೊಂಡಿದ್ದಾರೆಂದು ಹೇಳಲಾಗಿದೆ. ಎಲ್ಲಕ್ಕಿಂತ ಮುಖ್ಯವಾಗಿ ಲೋಕಸಭಾ ಚುನಾವಣೆಯಲ್ಲಿ ಖರ್ಗೆ ಪ್ರತಿನಿಧಿಸುವ ಕಲ್ಯಾಣ ಕರ್ನಾಟಕದ ಐದೂ ಕ್ಷೇತ್ರಗಳು ಕಾಂಗ್ರೆಸ್ ಮಡಿಲಿಗೆ ಬಂದಿವೆ. ಇದೂ ಕೂಡ ಅವರಿಗೆ ಕರ್ನಾಟಕದಲ್ಲಿ ಅಧಿಕಾರ ದೊರಕಿಸಲು ಇರುವ ಕಾರಣಗಳಲ್ಲಿ ಒಂದಾಗಿದೆ ಎಂದು ಮೂಲಗಳು ತಿಳಿಸಿವೆ.

ಅಧಿಕಾರಿಗಳ ತಂಡದಿಂದ ತನಿಖೆ ಆರಂಭ

ಕ್ರಮ ಸಂಖ್ಯೆ ನಮೂದಿಸಿದರು. ನಂತರ ಸಂಬಂಧಪಟ್ಟ ಅಧಿಕಾರಿಗಳು, ಕಚೇರಿ ಅಧೀಕ್ಷಕರು, ವಲಯವಾರು ಕೇಸ್ ವರ್ಕರ್‌ಗಳನ್ನು ಒಬ್ಬೊಬ್ಬರಾಗಿ ಕರೆದು ಹೆಸರು, ಹುದ್ದೆ, ಮೊಬೈಲ್ ನಂಬರ್‌ಗಳನ್ನು ಪಡೆದು ದಾಖಲು ಮಾಡಿಕೊಂಡು, ತನಿಖೆಗೆ ಸಹಕರಿಸಬೇಕು, ರಜೆ ಹಾಕದೇ ನಾವು ಕರೆದಾಗ ಬಂದು ಮಾಹಿತಿ ನೀಡಬೇಕೆಂದು ತಾಕೀತು ಮಾಡಿದರು ಎಂದು ಮೂಲಗಳು ತಿಳಿಸಿವೆ.

ಮಧ್ಯಾಹ್ನ ಅಲ್ಲಿಗೇ ತರಿಸಿಕೊಂಡು ಊಟ ಮಾಡಿದ ಅಧಿಕಾರಿಗಳು, ಇಂದು ಸಂಜೆವರೆಗೂ ಕಡತಗಳನ್ನು ಪರಿಶೀಲಿಸಿದರು. ವಿಷಯ ತಿಳಿಯುತ್ತಿದ್ದಂತೆಯೇ ನೂತನ ಆಯುಕ್ತ ಎ.ಎನ್. ರಘುನಂದನ್ ಮಧ್ಯಾಹ್ನ 12.30ರ ವೇಳೆಗೆ ಬೆಂಗಳೂರಿನಿಂದ ಬಂದು ಮುಡಾ ಕಚೇರಿಯಲ್ಲಿ ತನಿಖಾಧಿಕಾರಿಗಳಿಗೆ ವರದಿ ಮಾಡಿಕೊಂಡರು. ವಸತಿ ಬಡಾವಣೆ ನಿರ್ಮಾಣಕ್ಕೆಂದು ಜಮೀನು ನೀಡಿದ ರೈತರ ಹೆಸರಲ್ಲಿ ಫಲಾನುಭವಿ ಎಂದು ಹೇಳಿ ಒಂದು ನಿವೇಶನ ಬದಲು 60ಕ್ಕೂ ಸೈಟುಗಳನ್ನು ನೀಡಿರುವುದು, ಮಧ್ಯವರ್ತಿಗಳ ಮೂಲಕ ಸಾವಿರಾರು ಕೋಟಿ ರೂ. ಹಣದ ಬದಲಾಗಿ ಪ್ರತಿಷ್ಠಿತ ವಿಜಯನಗರ, ದಟ್ಟಗಳ್ಳಿ, ಜೆ.ಪಿ.ನಗರ, ಆರ್.ಟಿ.ನಗರಗಳಲ್ಲಿ ಮೂಲ ಸೌಕರ್ಯಗಳೊಂದಿಗೆ ಅಭಿವೃದ್ಧಿಪಡಿಸಿರುವ ಅತೀ ಹೆಚ್ಚು ಬೆಲೆ ಬಾಳುವ ನಿವೇಶನ ಹಂಚಿಕೆ ಮಾಡಿರುವುದರ ಕುರಿತಂತೆ ಅಧಿಕಾರಿಗಳು ಕಡತಗಳ ಪರಿಶೀಲನೆ ಮಾಡುತ್ತಿದ್ದಾರೆ. ತನಿಖೆ ಪೂರ್ಣಗೊಳ್ಳುವವರೆಗೂ ಅಧಿಕಾರಿಗಳು ಮೈಸೂರಿನಲ್ಲೇ ವಾಸ್ತವ್ಯ ಹೂಡುವುದರಿಂದ ಸರ್ಕಾರಿ ಗೆಸ್ಟ್‌ಹೌಸ್‌ಗಳಲ್ಲಿ ಅವರಿಗೆ ಊಟ, ವಸತಿ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಮುಡಾ ಅಧಿಕಾರಿಗಳು ತಿಳಿಸಿದ್ದಾರೆ.

ಮುಡಾ ಆಯುಕ್ತರಿಗೆ ಪತ್ರ ಬರೆದಿದ್ದೆ

ಅಧ್ಯಕ್ಷರು ತಮ್ಮ ಟಿಪ್ಪಣಿಯಲ್ಲಿ ಕಟ್ಟುನಿಟ್ಟಿನ ಸೂಚನೆ ನೀಡಿರುವುದನ್ನು ಮಾಧ್ಯಮದಲ್ಲಿ ಗಮನಿಸಿದ್ದೇನೆ ಎಂದು ಜಿಟಿಡಿ ತಮ್ಮ ಪತ್ರದಲ್ಲಿ ತಿಳಿಸಿದ್ದಾರೆ.

ಅದೇ ರೀತಿ ಶೇ. 50:50 ಅನುಪಾತ ಹಾಗೂ ಬದಲಿ ನಿವೇಶನ ಹಂಚಿಕೆಯನ್ನು ಸ್ಥಗಿತಗೊಳಿಸಿ, 2021ರಿಂದ ಈವರೆಗೆ ಎಷ್ಟು ಈ ರೀತಿಯ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಎಂಬುದರ ಬಗ್ಗೆ ಮಾಹಿತಿ ನೀಡುವಂತೆ ಮರೀಗೌಡರು ಟಿಪ್ಪಣಿಯಲ್ಲಿ ಸೂಚನೆ ನೀಡಿದ್ದರಿಂದ ತಮಗೆ ಯಾವುದೇ ಮಾಹಿತಿ ಇಲ್ಲದ ಕಾರಣ ಈ ಪತ್ರ ತಲುಪಿದ 7 ದಿನದೊಳಗೆ ಮಾಹಿತಿ ನೀಡುವಂತೆ ತಾವು ಜೂನ್ 25ರಂದೇ ಆಯುಕ್ತರಿಗೆ ಪತ್ರ ಬರೆದಿದ್ದೇನೆ ಎಂದು ಜಿ.ಟಿ. ದೇವೇಗೌಡರು ತಿಳಿಸಿದ್ದಾರೆ.

ನಿವೇಶನ ದುರುಪಯೋಗ ಪತ್ತೆಗೆ ಕ್ರಮ

ತನಿಖೆ ನಡೆಸಲಾಗುತ್ತಿದೆ. ವರದಿ ಬಂದ ನಂತರ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದರು. ಎಲ್ಲವನ್ನೂ ಸಿಬಿಐ ತನಿಖೆಗೆ ಹಸ್ತಾಂತರಿಸಲು ಬಿಜೆಪಿಯವರು ಹೇಳುತ್ತಾರೆ. ಅವರು ಅಧಿಕಾರದಲ್ಲಿದ್ದಾಗ ಯಾವ ಪ್ರಕರಣವನ್ನು ಸಿಬಿಐಗೆ ಹಸ್ತಾಂತರ ಮಾಡಿದ್ದರು. ಜಮೀನು ಕೊಟ್ಟವರಿಗೆ ಪರ್ಯಾಯವಾಗಿ ನಿವೇಶನ ನೀಡಬೇಕೆಂದು ಬಿಜೆಪಿಯೇ ಕಾನೂನು ಮಾಡಿದೆ. ಪ್ರಕರಣದಲ್ಲಿ ನನ್ನ ಪಾತ್ರವೇನಿದೆ. ಪ್ರತಿಪಕ್ಷದ ನಾಯಕ ಆರ್.ಅಶೋಕ್ ಕರ್ತವ್ಯ ಲೋಪ ಎಸಗಿದ್ದಾರೆ ಎಂದರೆ ರಾಜೀನಾಮೆ ಕೊಡುತ್ತಾರೆಯೇ. ಅವರ ಕಾಲದಲ್ಲಿ ಅಕ್ರಮ–ಸಕ್ರಮ ಸರಿಯಾಗಿ ಆಗಿಲ್ಲ ಎಂಬ ಆರೋಪ ಕೇಳಿ ಬಂದಾಗ ನ್ಯಾಯಾಲಯದಿಂದ ಜಾಮೀನು ಪಡೆದಿದ್ದರು. ಅದಕ್ಕೆ ರಾಜೀನಾಮೆ ಕೊಡಿ ಅಂದರೆ ಕೊಡುತ್ತಾರೆಯೇ ಎಂದರು.

ವಾಲ್ಮೀಕಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣದ ತನಿಖೆಯನ್ನು ಎಸ್‌ಐಟಿಗೆ ವಹಿಸಲಾಗಿದೆ. ಆತ್ಮಹತ್ಯೆ ಮಾಡಿಕೊಂಡ ಅಧಿಕಾರಿ ಬರೆದ ಡೆತ್‌ನೋಟ್‌ನಲ್ಲಿ, ಮಂತ್ರಿಗಳು, ವ್ಯವಸ್ಥಾಪಕ ನಿರ್ದೇಶಕರಿಗೆ ಮೌಖಿಕವಾಗಿ ಮಾಹಿತಿ ನೀಡಿರುವುದಾಗಿ ನಮೂದಿಸಿದ ಹಿನ್ನೆಲೆಯಲ್ಲಿ ಸಚಿವ ನಾಗೇಂದ್ರ ಅವರ ರಾಜೀನಾಮೆ ಪಡೆದೆವು. ಪ್ರಕರಣದ ಬ್ಯಾಂಕ್ ವ್ಯವಹಾರಗಳ ಬಗ್ಗೆ ಸಿಬಿಐ ತನಿಖೆ ನಡೆಸುತ್ತಿದೆ ಎಂದರು.

ಸಂಕಷ್ಟಗಳ ನಡುವೆಯೂ ವಚನ ಸಾಹಿತ್ಯ ಸಂರಕ್ಷಣೆಗೆ ಶ್ರಮಿಸಿದ ಫ.ಗು.ಹಳಕಟ್ಟಿ

ಶ್ರೀಯುತರ ಪರಿಶ್ರಮ ಸ್ಮರಿಸಿದ ಗಣ್ಯರು

ಮೈಸೂರು,ಜು.3– ವಚನ ಸಾಹಿತ್ಯದ ಪಿತಾಮಹರೆನಿಸಿರುವ ಡಾ.ಫ. ಗು.ಹಳಕಟ್ಟಿ ಅವರು ವಚನ ಸಾಹಿತ್ಯ ಸಂಗ್ರಹ, ಮುದ್ರಣಕ್ಕೆ ನೀಡಿದ ಕೊಡುಗೆ ಅಪಾರ ಎಂದು ಅಂಕಣಕಾರ ಡಾ.ಜಿ.ಎಲ್. ತ್ರಿಪುರಾಂತಕ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ಜಿಲ್ಲಾ ಹಾಗೂ ತಾಲೂಕು ಶರಣ ಸಾಹಿತ್ಯ ಪರಿಷತ್ತು ವತಿಯಿಂದ ಶ್ರೀರಾಂಪುರದ ಶ್ರೀ ವಿವೇಕ ವಿದ್ಯಾಲಯ ಪದವಿಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ಡಾ.ಫಗು. ಹಳಕಟ್ಟಿಯವರ ಜಯಂತಿ, ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆಯಲ್ಲಿ ಸುತ್ತೂರು ಜಗದ್ಗುರು ಶ್ರೀ ಪರ್ವತೇಂದ್ರ ಶಿವಚಾರ್ಯ ಮಹಾಸ್ವಾಮಿಗಳ ಕ್ಷೇತ್ರದ ದತ್ತಿ ಉಪನ್ಯಾಸ ನೀಡಿದ ಅವರು, ವಚನ ಸಾಹಿತ್ಯ ಅತ್ಯಂತ ಶ್ರೀಮಂತವಾದುದು. ಅನುಭವದಿಂದ ರಚಿತವಾಗಿರುವ ಈ ವಚನ ಸಾಹಿತ್ಯ ಸುಲಿದ ಬಾಳೆ ಹಣ್ಣಿನಂತಿದೆ. ವಚನಕಾರರು ನುಡಿದಂತೆ ನಡೆದವರು. ಇಂತಹ ವಚನ ಸಾಹಿತ್ಯ ಇಂದು ನಮಗೆ ಸಿಗಲು ಫ.ಗು. ಹಳಕಟ್ಟಿ ಕಾರಣ. ಅವರು ಸಮಾಜಕ್ಕಾಗಿ ಬದುಕಿದರು. ಅವರು ವಚನ ಸಾಹಿತ್ಯ ಮುದ್ರಣಕ್ಕಾಗಿ ತಮ್ಮ ಮನೆಯನ್ನು ಮಾರಿ, ಹಿತಚಿಂತಕ ಎಂಬ ಮುದ್ರಣಾಲಯ ಆರಂಭಿಸಿದರು. ಅಲ್ಲದೇ ನ್ಯುಮೋನಿಯಾದಿಂದ ಬಳಲುತ್ತಿದ್ದಾಗಲೂ ವಚನ ಸಾಹಿತ್ಯ ಕಾಯಕವನ್ನು ನಿಲ್ಲಿಸಲಿಲ್ಲ ಎಂದು ಸ್ಮರಿಸಿದರು.



ಮೈಸೂರಿನ ಶ್ರೀರಾಂಪುರದ ಶ್ರೀ ವಿವೇಕ ವಿದ್ಯಾಲಯ ಪದವಿಪೂರ್ವ ಕಾಲೇಜಿನಲ್ಲಿ ನಡೆದ ಡಾ.ಫ.ಗು. ಹಳಕಟ್ಟಿಯವರ ಜಯಂತಿ ಅಂಗವಾಗಿ ಗಣ್ಯರು ಶ್ರೀಯುತರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಗೌರವ ಸಲ್ಲಿಸಿದರು.

ರಾಷ್ಟ್ರಕವಿ ಕುವೆಂಪು ಅವರಿಗೆ ಗುರುಗಳಾಗಿದ್ದ ಬಿಎಂಶ್ರೀಯವರು ಕಾರ್ಯಕ್ರಮವೊಂದರಲ್ಲಿ ಪಾಲ್ಗೊಳ್ಳಲು ಬಿಜಾಪುರಕ್ಕೆ ತೆರಳಿದ್ದಾಗ ಗೋಲಗುಮ್ಮಟ ನೋಡುವ ಸಂಘಟಕರು ನೀಡಿದ ಆಹ್ವಾನ ತಿರಸ್ಕರಿಸಿ ವಚನ ಗುಮ್ಮಟ ನೋಡಬೇಕು ಎಂದು ಫ.ಗು.ಹಳಕಟ್ಟಿಯವರನ್ನು ಭೇಟಿಯಾಗಿದ್ದರು. ವಚನ ಸಾಹಿತ್ಯಕ್ಕೆ ಹೆಚ್ಚಿನ ಶಕ್ತಿಯಿದೆ. ಆದರೆ ಜನರಿಗೆ ಈ ಸಾಹಿತ್ಯದ ಬಗ್ಗೆ ಹೆಮ್ಮೆ ಕಂಡು ಬರುತ್ತಿಲ್ಲ. ವಚನ ಸಾಹಿತ್ಯ ಉಳಿಯಬೇಕು ಮತ್ತು ಬೆಳೆಯಬೇಕು. ಆದ್ದರಿಂದ ಯುವಜನತೆ ದಿನಕ್ಕೆ ಎರಡು–ಮೂರು ವಚನವನ್ನು ಓದಿ, ಅರ್ಥೈಸಿಕೊಳ್ಳಬೇಕು. ಶರಣರ ಬದುಕನ್ನು ಅನುಸರಿಸಬೇಕು. ಆತ್ಮಕಥನಗಳನ್ನು ಓದಿ ಜೀವನಪಾಠ ಕಲಿಯಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿ, ಹನ್ನೆರಡನೇ ಶತಮಾನದ ಕಲ್ಯಾಣದ ಕೋಲಾಹಲದ ನಂತರ ಕಾಲಗರ್ಭದಲ್ಲಿಯೇ ಹೂತು ಹೋಗಿದ್ದ ವಚನ ಸಾಹಿತ್ಯವನ್ನು ಶೋಧಿಸಿ, ಸಂಶೋಧಿಸಿ, ಸಂರಕ್ಷಿಸಿದವರು ಫ.ಗು. ಹಳಕಟ್ಟಿಯವರು. ವಚನ ಸಾಹಿತ್ಯ ಪ್ರಚುರಪಡಿಸಲು ತಮ್ಮ ಬದುಕನ್ನು ಮುಡಿಪಾಗಿಟ್ಟಿದ್ದರು. ಇದರಿಂದಾಗಿಯೇ ನಮಗೆ ವಚನ ಸಾಹಿತ್ಯದಂತಹ ದೊಡ್ಡ ಪರಂಪರೆಯ ಪರಿಚಯವಾಗಿದೆ. ಹಳಕಟ್ಟಿಯವರು ಶಿಕ್ಷಣ, ಸಾಹಿತ್ಯ, ಸಹಕಾರ, ಪ್ರಕಟಣೆ, ಪತ್ರಿಕೋದ್ಯಮ, ರಾಜಕೀಯದಲ್ಲಿ ತೊಡಗಿಸಿಕೊಂಡಿದ್ದರು. ಬಿಜಾಪುರ ನಗರಸಭೆ ಸದಸ್ಯರಾಗಿದ್ದರು. ಮಹಾರಾಷ್ಟ್ರದ ವಿಧಾನಪರಿಷತ್ ಸದಸ್ಯರಾಗಿದ್ದರು. ಇಂದು ಬೃಹತ್ ಆಗಿ ಬೆಳೆದಿರುವ ಬಿಜಾಪುರ ಲಿಂಗಾಯತ್ ಸೊಸೈಟಿ ಆರಂಭಕ್ಕೆ ಅವರೇ ಕಾರಣಕರ್ತರು ಎಂದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಶ್ರೀ ವಿವೇಕ ವಿದ್ಯಾಲಯ ಪಿಯು ಕಾಲೇಜಿನ ವ್ಯವಸ್ಥಾಪಕ ನಿರ್ದೇಶಕ ಎಂ.ಎಸ್.ನಾಗೇಶ್, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಎಂ.ಚಂದ್ರಶೇಖರ್, ಮೈಸೂರು ತಾಲೂಕು ಘಟಕದ ಅಧ್ಯಕ್ಷ ದೇವರಾಜ್ ಪಿ.ಚಿಕ್ಕಹಳ್ಳಿ, ಶ್ರೀ ವಿವೇಕ ವಿದ್ಯಾಲಯ ಪಿಯು ಕಾಲೇಜಿನ ಆಡಳಿತಾಧಿಕಾರಿ ಭವಾನಿ ನಾಗೇಶ್, ಸಿದ್ದೇಶ್ ಬಾಬು, ಶಿವಕುಮಾರ್, ಬಸವಲಿಂಗಪ್ಪ, ಯಶವಂತ್, ಗೋವಿಂದಚಾರಿ ಇದ್ದರು.

ಜು.6ರಂದು ಚಂಪಕ ರಾಷ್ಟ್ರೀಯ ಕಲಾ ಉತ್ಸವ

ಮೈಸೂರು,ಜು.3–ಮೈಸೂರಿನ ಚಂಪಕ ಎಜುಕೇಷನಲ್ ಅಂಡ್ ಕಲ್ಚರಲ್ ಟ್ರಸ್ಟ್, ಭಾರತೀಯ ಪ್ರದರ್ಶಕ ಕಲೆಗಳ ಕಲಾವಿದರಿಗೆ ಪ್ರೋತ್ಸಾಹ ನೀಡಲು ಜು.6ರಂದು ಸಂಜೆ 4.30ಕ್ಕೆ ರಾಮಕೃಷ್ಣನಗರದ ಚಂಪಕ ಅಕಾಡೆಮಿ ಸಭಾಂಗಣದಲ್ಲಿ ಚಂಪಕ ರಾಷ್ಟ್ರೀಯ ಕಲಾ ಉತ್ಸವ ಶೀರ್ಷಿಕೆಯಲ್ಲಿ ಮಾಸಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಮೊದಲಿಗೆ ಚಂಪಕ ಅಕಾಡೆಮಿಯ ಸಂಸ್ಥಾಪಕಿ ವಿದುಷಿ ಡಾ॥ ನಾಗಲಕ್ಷ್ಮಿ ನಾಗರಾಜನ್ ಅವರ ಪುತ್ರಿ ಮತ್ತು ಶಿಷ್ಯೆ, ಕುಮಾರಿ ಶ್ರೇಯ ಕಶ್ಯಪ್ ಅವರು ಭರತ ನಾಟ್ಯ ಪ್ರದರ್ಶನ ನೀಡಲಿದ್ದಾರೆ. ಕುಮಾರಿ ಶ್ರೇಯ ಮೂರು ವರ್ಷ ವಯಸ್ಸಿನಿಂದ ಗುರು ಡಾ.ವಸುಂಧರಾ ದೊರೆಸ್ವಾಮಿ ಅವರ ಬಳಿ ಹಲವಾರು ವರ್ಷಗಳು ಭರತನಾಟ್ಯ ಕಲಿತು ನಂತರ ತನ್ನ ತಾಯಿ ವಿದುಷಿ ನಾಗಲಕ್ಷ್ಮಿ ನಾಗರಾಜನ್ ಅವರಲ್ಲಿ ಕಲಿಕೆ ಮುಂದುವರೆಸಿದ್ದಾಳೆ.

ಬೆಂಗಳೂರಿನ ಶ್ರೀ ಕೃಷ್ಣ ಕಲಾಲಯದ ಸಂಸ್ಥಾಪಕಿ, ನಿರ್ದೇಶಕಿ ವಿದುಷಿ ಸುನೀತ ಸುಕುಮಾರನ್ ಅವರ ಶಿಷ್ಯಂದಿರು ಭರತ ನಾಟ್ಯ ಕಾರ್ಯಕ್ರಮ ನೀಡಲಿದ್ದಾರೆ.

ಮೈಸೂರಿನ ಪ್ರಖ್ಯಾತ ನೃತ್ಯ ಸಂಸ್ಥೆಗಳಲ್ಲಿ ಒಂದಾದ ನಂದಿನಿ ನಿತ್ಯಾಲಯದ ನಿರ್ದೇಶಕ ಗುರು ವಿದ್ವಾನ್ ಆರ್.ಕಣ್ಣನ್ ಅವರ ಶಿಷ್ಯರು ಭರತನಾಟ್ಯ ವೈಶಿಷ್ಟ್ಯವನ್ನು ಪ್ರಸ್ತುತಪಡಿಸಲಿದ್ದಾರೆ. ಪ್ರೊ.ಎಂ.ಎಸ್.ಕೆ. ನರಹರಿಬಾಬು, ಸಂಸ್ಥಾಪಕ ಪ್ರಾಂಶುಪಾಲರು ಮತ್ತು ಕಾರ್ಯದರ್ಶಿಗಳು, ಸದ್ವಿದ್ಯಾ ಶಿಕ್ಷಣ ಸಂಸ್ಥೆಗಳು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಮುಡಾ ಹಗರಣದ ನ್ಯಾಯಾಂಗ ತನಿಖೆಗೆ ಎಸ್‌ಯುಸಿಐ ಆಗ್ರಹ

ಮೈಸೂರು, ಜು. 3– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿರುವ ಹಗರಣದ ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ಆಗಬೇಕೆಂದು ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯೂನಿಸ್ಟ್) ಪಕ್ಷದ ಮೈಸೂರು ಜಿಲ್ಲಾ ಸಮಿತಿ ಜಿಲ್ಲಾ ಕಾರ್ಯದರ್ಶಿ ಸಿ.ರವಿ ಒತ್ತಾಯಿಸಿದ್ದಾರೆ.



ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಮೈಸೂರು ನಗರದ ಯೋಜನಾಬದ್ಧ ಅಭಿವೃದ್ಧಿಯ ಸಲುವಾಗಿ ಅಸ್ತಿತ್ವಕ್ಕೆ ತರಲಾದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು, ತನ್ನ ಪ್ರಾಥಮಿಕ ಕೆಲಸವಾದ ನಿವೇಶನರಹಿತ ಬಡವರಿಗೆ ನಿವೇಶನಗಳನ್ನು ನೀಡುವ, ನಗರದ ಯೋಜನಾಬದ್ಧ ಬೆಳವಣಿಗೆಯನ್ನು ಖಾತ್ರಿಪಡಿಸುವ ಬದಲು ಕೇವಲ ಭೂಸ್ವಾಧೀನ–ಉಳ್ಳವರಿಗೆ ಬೇಕಾಬಿಟ್ಟಿ ನಿವೇಶನ ಹಂಚಿಕೆ, ಖಾಸಗಿ ಬಡಾವಣೆಗಳ ನಕ್ಷೆ ಅಂಗೀಕಾರಕ್ಕೆ ಮಾತ್ರ ಸೀಮಿತವಾಗಿದೆ. ನಗರದ ಸುತ್ತಮುತ್ತಲೂ ತಲೆ ಎತ್ತಿರುವ ಅನಧಿಕೃತ ಬಡಾವಣೆಗಳಲ್ಲಿ ಹಾಗೆಯೇ ಮುಡಾ ಅಭಿವೃದ್ಧಿಪಡಿಸಿರುವ ಬಡಾವಣೆಗಳಲ್ಲಿ ಮೂಲಸೌಕರ್ಯಗಳ ಕೊರತೆ ಇರುವುದು ಮುಡಾದ ಕಾರ್ಯದಕ್ಷತೆಗೆ ಹಿಡಿದಿರುವ ಕೈಗನ್ನಡಿಯಾಗಿದೆ.

ಬಡಾವಣೆಗಳ ಅಭಿವೃದ್ಧಿಗಾಗಿ ವಶಪಡಿಸಿಕೊಂಡ ಭೂಮಾಲೀಕ ರೈತರಿಗೆ ನಗದು ಪರಿಹಾರ ಅಥವಾ ಅಭಿವೃದ್ಧಿಪಡಿಸಿದ ಸದರಿ ನಿವೇಶನಗಳಲ್ಲಿ ಮುಂಚೆ 60:40 ಪ್ರಮಾಣದಲ್ಲಿ ನಿವೇಶನಗಳನ್ನು ಹಂಚಲಾಗುತ್ತಿತ್ತು. ಆದರೆ 2020ರಲ್ಲಿ ಆ ಪ್ರಮಾಣವನ್ನು 50:50ಕ್ಕೆ ಪರಿಷ್ಕರಿಸಲಾಯಿತು. ಸದರಿ ನಿವೇಶನಗಳ ಹಂಚಿಕೆಯಲ್ಲಿ ಈಗ ಭಾರಿ ಅಕ್ರಮ ನಡೆದಿದೆ ಎಂದು ಜನಪ್ರತಿನಿಧಿಗಳು ಆರೋಪಿಸಿದ್ದಾರೆ ಹಾಗೆಯೇ ಪತ್ರಿಕೆಗಳಲ್ಲೂ ವರದಿಯಾಗಿದ್ದು, ಸುಮಾರು 4 ಸಾವಿರ ಕೋಟಿ ಮೊತ್ತದ ಹಗರಣ ಎಂದು ಅರೋಪಿಸಲಾಗಿದೆ.

ಸದರಿ ನಿವೇಶನಗಳನ್ನು ಹಂಚುವಾಗ ರೈತರಿಂದ ವಶಪಡಿಸಿಕೊಂಡ ಜಮೀನಿನಲ್ಲಿಯೇ ನಿವೇಶನಗಳನ್ನು ಹಂಚಿಕೆ ಮಾಡಬೇಕು. ಆದರೆ ಬಹುತೇಕ ಪ್ರಕರಣಗಳಲ್ಲಿ, ಈ ನಿಯಮವನ್ನು ಉಲ್ಲಂಘಿಸಿ ಹಲವು ವರ್ಷಗಳ ಹಿಂದೆ ಅಭಿವೃದ್ಧಿಗೊಂಡ, ನಗರದ ಪ್ರತಿಷ್ಠಿತ ಬಡಾವಣೆಗಳಲ್ಲಿ, ಬೆಲೆಬಾಳುವ ನಿವೇಶನಗಳನ್ನು ಹಂಚಿರುವುದು ಪತ್ತೆಯಾಗಿದೆ. ಅಲ್ಲದೇ 2020 ಕ್ಕಿಂತಲೂ ಹಿಂದೆ ವಶಪಡಿಸಿಕೊಂಡ ಭೂಮಿಯ ಮಾಲೀಕರಿಗೂ 50:50 ಅನ್ವಯ ನಿವೇಶನಗಳನ್ನು ನೀಡಲಾಗಿದೆ. ಬೇನಾಮಿ ಮಾಲಿಕರಿಗೆ, ಹಾಗೆಯೇ ಕೆಲವು ಪ್ರಕರಣಗಳಲ್ಲಿ ಹೆಚ್ಚುವರಿ ನಿವೇಶನಗಳನ್ನು ಸಹ ನೀಡಲಾಗಿದೆ. ಅಲ್ಲದೇ ನಾಗರಿಕ ಸೌಲಭ್ಯಗಳಿಗಾಗಿ ಮೀಸಲಾಗಿರುವ ನಿವೇಶನಗಳನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ. ಈ ಎಲ್ಲಾ ಅವ್ಯವಹಾರಗಳ ಹಿಂದೆ ಪಕ್ಷಾತೀತವಾಗಿ ಜನಪ್ರತಿನಿಧಿಗಳ, ಪ್ರಭಾವಿ ವ್ಯಕ್ತಿಗಳ ಕೈವಾಡವಿರುವುದು ರಹಸ್ಯ ಸಂಗತಿಯಲ್ಲ. 2020ರಿಂದಲೂ ಅವ್ಯವಹಾರದ ಆರೋಪಗಳು ಕೇಳಿ ಬಂದಿದ್ದರೂ ಕೇವಲ 2022–23 ಸಾಲಿನಿಂದ ಆಗಿರುವ ನಿವೇಶನಗಳ ಹಂಚಿಕೆಯನ್ನು ರದ್ದುಪಡಿಸುವುದಾಗಿ ಹೇಳಿರುವುದು, ಕೆಲವೇ ಕೆಲವು ಅಧಿಕಾರಿಗಳನ್ನು ಮಾತ್ರ ವರ್ಗಾವಣೆ ಮಾಡಿ ಕೈತೊಳೆದು ಕೊಂಡಿರುವ ಸರ್ಕಾರ, ಈ ಅವಧಿಯ ರಾಜಕೀಯ ನಾಮನಿರ್ದೇಶಿತ ಅಧ್ಯಕ್ಷರ ಮೇಲೆ ಕ್ರಮದ ಬಗ್ಗೆ ಹೇಳದಿರುವುದು ಇನ್ನಷ್ಟು ಅನುಮಾನಗಳಿಗೆ ಎಡೆಮಾಡಿಕೊಡುತ್ತಿದೆ. ಹೀಗಾಗಿ ಸಂಪೂರ್ಣ ಪ್ರಕರಣವನ್ನು ನ್ಯಾಯಾಂಗ ತನಿಖೆಗೆ ಒಪ್ಪಿಸಬೇಕು ಎಂದು ಎಸ್‌ಯುಸಿಐ ಕಮ್ಯುನಿಸ್ಟ್ ಪಕ್ಷ ಒತ್ತಾಯಿಸುವುದಾಗಿ ರವಿ ಆಗ್ರಹಿಸಿದ್ದಾರೆ.

ಜು.21, ಕೈಬರಹ, ಕಾಗುಣಿತ ಸ್ಪರ್ಧೆ

ಮೈಸೂರು,ಜು.3–ಅಥರ್ವ ಲೈಫ್ ಸ್ಕಿಲ್ಸ್ ಫೌಂಡೇಶನ್ ವತಿಯಿಂದ ಕುವೆಂಪುನಗರದಲ್ಲಿ ಜು.21ರಂದು ಕೈಬರಹ ಸ್ಪರ್ಧೆ ಮತ್ತು ಕಾಗುಣಿತ ಸ್ಪರ್ಧೆ ಆಯೋಜಿಸಿದೆ. ವರ್ಗ 1ರಿಂದ 3ನೇ, ವರ್ಗ ಬಿ–4ರಿಂದ 7ರವರೆಗೆ, ವರ್ಗ ಸಿ–8ರಿಂದ 10ನೇ ವರ್ಗದವರಿಗೆ ಸ್ಪರ್ಧೆ ನಡೆಯಲಿದ್ದು, ಪ್ರತಿ ವಿಭಾಗದಲ್ಲಿ 3 ಟಾಪರ್‌ಗಳಿಗೆ ಬಹುಮಾನ ನೀಡಲಾಗುವುದು. ಭಾಗವಹಿಸುವವರಿಗೆ ಪದಕ ಮತ್ತು ಪ್ರಮಾಣಪತ್ರ ನೀಡಲಾಗುವುದು. ಜು.17 ನೋಂದಣಿಗೆ ಕೊನೇ ದಿನ. ನೋಂದಾಯಿಸಿಕೊಳ್ಳುವವರು ಮೊ.9035864203 ಸಂಪರ್ಕಿಸಬಹುದು

ಗೃಹಿಣಿ ನಾಪತ್ತೆ



ಮೈಸೂರು, ಜು.3–ನಂಜನಗೂಡು ತಾಲೂಕಿನ ಕಳಲೆ ಗ್ರಾಮದ ಗೃಹಿಣಿಯೊಬ್ಬರು ಕಾಣೆಯಾಗಿರುವ ಪ್ರಕರಣ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಮಲ್ಲಿಗೆ ದೇವಮ್ಮ (36) ಕಾಣೆಯಾದವರು. ಜೂ.29ರಂದು ತಮ್ಮ ಮನೆಯಿಂದ ಮಧ್ಯಾಹ್ನ 2 ಗಂಟೆಯಿಂದ ಕಾಣೆಯಾಗಿದ್ದಾರೆ ಎಂದು ಪತಿ ರಂಗಸ್ವಾಮಿ ನೀಡಿರುವ ದೂರಿನಲ್ಲಿ ತಿಳಿಸಿದ್ದು, ಗೃಹಿಣಿ ಬಗ್ಗೆ ಮಾಹಿತಿ ದೊರೆತಲ್ಲಿ ದೂ.ಸಂ–0821226259 ಸಂಪರ್ಕಿಸಿ ಎಂದು ಪೊಲೀಸ್ ಪ್ರಕಟಣೆ ತಿಳಿಸಿದೆ.

ಆಡಳಿತಕ್ಕೆ ಬಿರುಸು ನೀಡುವ ಉದ್ದೇಶದಿಂದ ಉನ್ನತ ಅಧಿಕಾರಿಗಳ ಭಾರೀ ವರ್ಗಾವರ್ಗಿಗೆ ಮುಂದಾದ ಸಿಎಂ

ಮೊದಲ ಹಂತದಲ್ಲಿ ಐಪಿಎಸ್ ಅಧಿಕಾರಿಗಳ ವರ್ಗಾವಣೆ

ಬೆಂಗಳೂರು, ಜು.3(ಕೆಎಂಶಿ)–ಲೋಕಸಭಾ ಚುನಾವಣೆ ಮುಗಿಯುತ್ತಿದ್ದಂತೆ ಆಡಳಿತವನ್ನು ಮತ್ತಷ್ಟು ಸಕ್ರಿಯಗೊಳಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಐಎಎಸ್, ಐಪಿಎಸ್, ಐಎಫ್‌ಎಸ್ ಸೇರಿದಂತೆ ದೊಡ್ಡ ಪ್ರಮಾಣದಲ್ಲಿ ಹಿರಿಯ ಅಧಿಕಾರಿಗಳ ವರ್ಗಾವರ್ಗಿಗೆ ನಿರ್ಧರಿಸಿದ್ದಾರೆ.

ಕಳೆದ ಎರಡು ದಿನಗಳಿಂದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಸಚಿವ ಬೈರತಿ ಸುರೇಶ್ ಸೇರಿದಂತೆ ತಮ್ಮ ಆಪ್ತ ಸಚಿವರ ಜೊತೆ ಸುದೀರ್ಘ ಚರ್ಚೆ ನಡೆಸಿ ವರ್ಗಾವಣೆ ಪಟ್ಟಿಗೆ ಹಸಿರು ನಿಶಾನೆ ತೋರಿದ್ದಾರೆ.

ವರ್ಗಾವಣೆಯ ಮೊದಲ ಭಾಗವಾಗಿ ಒಂದೇ ಹಂತದಲ್ಲಿ 25 ಮಂದಿ ಹಿರಿಯ ಪೊಲೀಸ್ ಅಧಿಕಾರಿಗಳ ವರ್ಗಾವಣೆ ಮಾಡಲಾಗಿದ್ದು, ಮೈಸೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಮಂಡ್ಯ ಸೇರಿದಂತೆ ಕೆಲವು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ಬದಲಾವಣೆ ಮಾಡಿ ಆದೇಶ ಹೊರಡಿಸಿದ್ದಾರೆ.

ಮೈಸೂರು ಪೊಲೀಸ್ ವರಿಷ್ಠಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸೀಮಾ ಲಾಟ್ಕರ್ ಅವರನ್ನು ಅಲ್ಲಿನ ಪೊಲೀಸ್ ಕಮೀಷನರ್ ಆಗಿ ನೇಮಕ ಮಾಡಲಾಗಿದೆ.

ಎನ್.ವಿಷ್ಣುವರ್ಧನ್ ಅವರನ್ನು ಮೈಸೂರಿಗೂ, ಮಲ್ಲಿಕಾರ್ಜುನ ಬಲದಂಡಿ ಅವರನ್ನು ಮಂಡ್ಯಕ್ಕೂ, ಡಾ.ಕವಿತಾ ಬಿ.ಟಿ. ಅವರನ್ನು ಚಾಮರಾಜನಗರಕ್ಕೂ, ಎಂ.ನಾರಾಯಣ್ ಅವರನ್ನು ಉತ್ತರ ಕನ್ನಡ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ. ಅಲ್ಲದೆ, ಪ್ರದೀಪ್ ಕುಂಟಿ ಅವರನ್ನು ಬೀದರ್‌ಗೂ, ಎನ್.ಯತೀಶ್ ದಕ್ಷಿಣ ಕನ್ನಡಕ್ಕೆ, ಡಾ.ಶೋಭಾರಾಣಿ ಬಳ್ಳಾರಿಗೆ, ಬಿ.ನಿಖಿಲ್ ಅವರನ್ನು ಕೋಲಾರಕ್ಕೂ, ಬಿ.ರಮೇಶ್ ಅವರನ್ನು ಪೂರ್ವ ವಲಯ (ದಾವಣಗೆರೆ) ಡಿಐಜಿ ಆಗಿ ನೇಮಿಸಲಾಗಿದೆ.

ಕೇಂದ್ರ ಗುಪ್ತಚರ ವಿಭಾಗದಲ್ಲಿ ಐಜಿಪಿಯಾಗಿದ್ದ ಲಾಬೂ ರಾಮ್ ಅವರನ್ನು ಐಜಿಪಿ ಕೇಂದ್ರ ವಲಯಕ್ಕೆ ನಿಯೋಜಿಸಲಾಗಿದೆ, ಈ ಸ್ಥಾನದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಡಾ. ಬಿ.ಆರ್.ರವಿಕಾಂತೇಗೌಡ ಅವರನ್ನು ಐಜಿಪಿ ಕೇಂದ್ರ ಕಚೇರಿಗೆ ವರ್ಗಾವಣೆ ಮಾಡಲಾಗಿದೆ. ಇದೇ ರೀತಿ ಇನ್ನೂ ಹಲವು ಪೊಲೀಸ್ ಅಧಿಕಾರಿಗಳು ವರ್ಗಾವಣೆಗೊಂಡಿದ್ದಾರೆ.

ಶುದ್ಧ ಕುಡಿಯುವ ನೀರನ್ನೇ ಪೂರೈಸಬೇಕು

ಇದರಲ್ಲಿ ವ್ಯತ್ಯಯವಾದರೆ ಕಠಿಣ ಕ್ರಮ: ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ



ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಸಿಗೆ ನೀರೆರೆಯುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು.

ಬೆಂಗಳೂರು, ಜು.3(ಕೆಎಂಶಿ)–ಶುದ್ಧ ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯವಾದರೆ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಎಚ್ಚರಿಸಿದರು.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ 'ಭೂ ಪರಿವರ್ತನೆ ಮತ್ತು ಒಣಭೂಮಿ ನಿರ್ವಹಣೆ' ಕಾರ್ಯಕ್ರಮ ಉದ್ಘಾಟಿಸಿ, ರಾಜ್ಯ ಪರಿಸರ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ಶುದ್ಧ ಕುಡಿಯುವ ನೀರು ಸರಬರಾಜು ಸರ್ಕಾರದ ಕರ್ತವ್ಯ, ಕಲುಷಿತ ನೀರಿನಿಂದಾದ ಅನಾಹುತಗಳನ್ನು ಕಂಡಿದ್ದೇವೆ. ಅನೇಕ ಮಂದಿ ಸಾವೀಗೀಡಾಗಿದ್ದು, ಕಾಯಿಲೆಗಳಿಗೂ ಒಳಗಾಗಿದ್ದಾರೆ. ಇತ್ತೀಚೆಗೆ ಡೆಂಗ್ಯೂ ಪ್ರಕರಣಗಳು ಹೆಚ್ಚಾಗುತ್ತಿದ್ದು, ಇದರ ನಿಯಂತ್ರಣಕ್ಕೆ ನಗರಪಾಲಿಕೆ, ಆರೋಗ್ಯ ಇಲಾಖೆ, ಪೌರಾಡಳಿತ ಇಲಾಖೆಗಳು ಒಟ್ಟಾಗಿ ಕಾರ್ಯ ನಿರ್ವಹಿಸುತ್ತಿವೆ. ಸಾರ್ವಜನಿಕರೂ ಕೈಜೋಡಿಸಿದಾಗ ಮಾತ್ರ ಇದರ ನಿರ್ಮೂಲನೆ ಸಾಧ್ಯ ಎಂದು ಹೇಳಿದರು.

ನಿಸರ್ಗವನ್ನು ಪ್ರತಿಯೊಬ್ಬರೂ ಪ್ರೀತಿಸಿ ರಕ್ಷಿಸಬೇಕು. ಇದು ಕಷ್ಟದ ಕೆಲಸವಲ್ಲ, ಎಲ್ಲರೂ ಮನಸ್ಸು ಮಾಡಬೇಕು. ಪ್ರತಿದಿನವೂ ಪರಿಸರ ದಿನವನ್ನಾಗಿ ಆಚರಿಸುವ ಪ್ರವೃತ್ತಿ ಅಗತ್ಯ. ತ್ಯಾಜ್ಯಗಳ ಸೂಕ್ತ ವಿಲೇವಾರಿ, ಮಳೆ ನೀರು ಕೊಯ್ಲು ಮುಂತಾದ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು. ಸ್ವಚ್ಛತೆಯಿಂದ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯ. ಎಲ್ಲರೂ ಪರಿಸರ ಪ್ರೇಮಿಗಳಾಗಿ ನೈರ್ಮಲ್ಯ ಕಾಪಾಡಿಕೊಳ್ಳೋಣ. ಪರಿಸರ ಸಂರಕ್ಷಣೆ ಎಲ್ಲರ ಹೊಣೆ, ಪ್ರತಿಯೊಬ್ಬರೂ ಪಾಲ್ಗೊಂಡರೆ ಮಾತ್ರ ಪರಿಸರ ಸಂರಕ್ಷಣೆ ಸಾಧ್ಯ. ಇದರಲ್ಲಿ ಸರ್ಕಾರ ಮತ್ತು ಸಾರ್ವಜನಿಕರು ಒಟ್ಟಾಗಿ ಕೈಜೋಡಿಸಬೇಕು. ವಿದ್ಯಾರ್ಥಿ ದೆಸೆಯಲ್ಲೇ ಪರಿಸರ, ಕಾಡು, ಜನಜೀವನ, ಪ್ರಾಣಿ ಸಂಕುಲಗಳ ಬಗ್ಗೆ ಅರಿತುಕೊಳ್ಳಬೇಕು, ಮನುಷ್ಯರಂತೆ ಪ್ರಾಣಿ ಸಂಕುಲಕ್ಕೂ ಬದುಕುವ ಹಕ್ಕಿದೆ, ಅದನ್ನು ಸಂರಕ್ಷಿಸುವ ಜವಾಬ್ದಾರಿ ಎಲ್ಲರ ಮೇಲಿದೆ.

ಒಂದು ಮರ ಕಡಿದರೆ ಮತ್ತೊಂದು ಸಸಿ ನೆಡಬೇಕು, ಕಾಡು ಬೆಳೆಸಬೇಕು, ಕಳೆದ 20 ವರ್ಷಗಳಲ್ಲಿ ಪ್ರವಾಹ ಹಾಗೂ ಬರಗಾಲ ಎದುರಿಸುತ್ತಿದ್ದು ಇದರ ಕಾರಣಗಳ ಬಗ್ಗೆ ಸಂಶೋಧನೆಗಳು ಅಗತ್ಯ, ಯಾವ ಭಾಗದಲ್ಲಿ ಯಾವ ಸಂಶೋಧನಾ ಕೇಂದ್ರಗಳನ್ನು ಸ್ಥಾಪಿಸಬೇಕೆನ್ನುವ ಬಗ್ಗೆ ಅರಣ್ಯ ಇಲಾಖೆ ಗಮನ ಹರಿಸಬೇಕು ಎಂದು ಸೂಚಿಸಿದರು.

ಕೆ.ಆರ್.ನಗರದಲ್ಲಿ ಏಕ್ ಪೇಡ್ ಮಾ ಕೆ ನಾಮ್ ಅಭಿಯಾನ

ಕೆ.ಆರ್.ನಗರ, ಜು.3– ಭಾರತೀಯ ಜನತಾ ಪಾರ್ಟಿಯ ವತಿಯಿಂದ ಕೆ.ಆರ್.ನಗರ ಮಂಡಲದ ಬೂತ್ ಸಂಖ್ಯೆ 16ರಲ್ಲಿ 'ಏಕ್ ಪೇಡ್ ಮಾ ಕೆ ನಾಮ್' ಅಭಿಯಾನ ಹಮ್ಮಿಕೊಳ್ಳ ಲಾಯಿತು. ಪಕ್ಷದ ಜಿಲ್ಲಾಧ್ಯಕ್ಷ ಎಲ್.ಆರ್ ಮಹದೇವಸ್ವಾಮಿ ಹತ್ತು ಗಿಡಗಳನ್ನು ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಕರೆಯ ಮೇರೆಗೆ ಈ ಕಾರ್ಯಕ್ರಮವು ರಾಜ್ಯಾದ್ಯಂತ ಈ ದಿನ ನಡೆಯುತ್ತಿದ್ದು, ಈ ಉತ್ತಮ ಕಾರ್ಯಕ್ರಮದಿಂದ ನಮ್ಮ ಪರಿಸರವು ಸಮೃದ್ಧಿಭರಿತವಾಗಿ ಮುಂದಿನ ಪೀಳಿಗೆಗೂ ಉಳಿಯುತ್ತದೆ. ಅದನ್ನು ಬೆಳೆಸಬೇಕಾದದ್ದು ಪ್ರಜ್ಞಾವಂತ ಪ್ರಜೆಗಳಾದ ನಮ್ಮೆಲ್ಲರ ಕರ್ತವ್ಯ ಎಂದು ಮೇಲಿನಂತೆ ತಿಳಿಸಿರು,

ಈ ಕಾರ್ಯಕ್ರಮವನ್ನು ಕಳೆದ 23ರಿಂದ ಜುಲೈ 6ರವರೆಗೆ ನಮ್ಮ ಜಿಲ್ಲೆಯ ಪ್ರತೀ ತಾಲೂಕಿನ ಮಂಡಲ ಹಾಗೂ ಬೂತ್ ಮಟ್ಟದಲ್ಲಿ ನಡೆಸಬೇಕೆಂದು ಜಿಲ್ಲಾಧ್ಯಕ್ಷರು ಕರೆ ನೀಡಿದರು. ರಾಜ್ಯ ಕಾಂಗ್ರೆಸ್ ಸರಕಾರವು ಪ್ರಸ್ತುತ ದಿವಾಳಿಯತ್ತ ಹೊರಟಿದ್ದು ಗೃಹ ಲಕ್ಷ್ಮಿ ಯೋಜನೆ ಸೇರಿದಂತೆ ಫ್ರೀ ಸ್ಕೀಂಗಳು ಕಾಲಕ್ರಮೇಣ ಜನಗಳು ಮರೆತು ಹೋಗುವ ನಿಟ್ಟಿನಲ್ಲಿವೆ.



ಭಾರತೀಯ ಜನತಾ ಪಾರ್ಟಿಯ ವತಿಯಿಂದ ಕೆ.ಆರ್.ನಗರ ಮಂಡಲದ ಬೂತ್ ಸಂಖ್ಯೆ 16ರಲ್ಲಿ 'ಏಕ್ ಪೇಡ್ ಮಾ ಕೆ ನಾಮ್' ಅಭಿಯಾನ ಹಮ್ಮಿಕೊಳ್ಳಲಾಯಿತು. ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಹತ್ತು ಗಿಡಗಳನ್ನು ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ದಿನನಿತ್ಯ ಬಳಸುವ ತರಕಾರಿ ಬೆಲೆ ಗಗನಕ್ಕೆ ಜಿಗಿಯುತ್ತಿದ್ದು, ಹಾಲಿನ ದರದ ಏರಿಕೆಯೂ ರಾಜ್ಯದ ಜನತೆಗೆ ದೊಡ್ಡ ಹೊಡೆತವಾಗಿ ಪರಿಣಮಿಸಿದೆ ಎಂದು ಸರಕಾರದ ಆಡಳಿತಗಾರರನ್ನು ತರಾಟೆಗೆ ತೆಗೆದುಕೊಂಡರು.

ವಾಲ್ಮೀಕಿ ನಿಗಮದಲ್ಲಿ ಭ್ರಷ್ಟಾಚಾರವಾದ ಬಳಿಕ ಆ ಹಣವನ್ನು ಮತ್ತೆ ಮರಳಿ ತರದೇ ಇರುವುದರಲ್ಲಿ ಕಾಂಗ್ರೆಸ್ ತನ್ನ ಭ್ರಷ್ಟಾಚಾರವನ್ನು ಸಾಬೀತುಪಡಿಸಿದೆ. ರಾಜ್ಯದ ರೈತರ ಮಕ್ಕಳಿಗೆ ವಿದ್ಯಾನಿಧಿ ಬಿಡುಗಡೆಯಾಗುತ್ತಿಲ್ಲ. ಯಡಿಯೂರಪ್ಪನವರು ತಮ್ಮ ಸರ್ಕಾರದಲ್ಲಿ ಕೃಷಿ ಸಮ್ಮಾನ್ ಯೋಜನೆಗೆ 4000 ರೂ. ಗೌರವ ಧನ ನೀಡುತ್ತಿದ್ದರು. ಈ ಸರ್ಕಾರ ಅದನ್ನು ನಿಲ್ಲಿಸಿ ರೈತರ ಜೀವನೋಪಾಯಕ್ಕೆ ಮುಳುವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ತವರು ಜಿಲ್ಲೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿರುವ ಭ್ರಷ್ಟಾಚಾರದಲ್ಲಿ ಭಾಗಿಯಾಗಿದ್ದು, ಅದರಿಂದ ತಪ್ಪಿಸಿಕೊಳ್ಳಲು ಹರಸಾಹಸಪಡುತ್ತಿರುವುದು ಜಗಜ್ಜಾಹೀರಾತಾಗಿದೆ ಎಂದು ಆರೋಪಿಸಿದರು,

ರೈತರಿಗೆ ಬೆಂಬಲ ಬೆಲೆ ಸಿಗುವಂತೆ ಮಾಡಿ ರಾಜ್ಯದ ರೈತರ ಹಿತಕಾಯುವ ನಿಟ್ಟಿನಲ್ಲಿ ಬಿ.ಎಸ್.ಯಡಿಯೂರಪ್ಪ ಅವರು ತಮ್ಮ ಸರ್ಕಾರದಲ್ಲಿ ಅಭಿವೃದ್ಧಿಯಲ್ಲಿ ಮುಂಚೂಣಿ ಪಾತ್ರ ವಹಿಸಿದ್ದರು. ಆದರೆ ಕಾಂಗ್ರೆಸ್ ಸರಕಾರದಲ್ಲಿ ರೈತರಿಗೆ ಸಿಗಬೇಕಾದ ಬೆಂಬಲ ಬೆಲೆ ಕಡಿತಗೊಳಿಸಿ, ಫ್ರೀ ಸ್ಕೀಂಗಳಿಗೆ ಬಳಸಿಕೊಳಲಾಗುತ್ತಿದೆ ಎಂದು ಅವರು ಆರೋಪಿಸಿದರು.

ಕೆ.ಆರ್.ನಗರ ಮಂಡಲ ಅಧ್ಯಕ್ಷ ಹೊಸೂರು ಧರ್ಮ, ಸಾಲಿಗ್ರಾಮ ಮಂಡಲ ಅಧ್ಯಕ್ಷ ತಿಲಕ್, ಜಿಲ್ಲಾ ಉಪಾಧ್ಯಕ್ಷೆ ಸ್ವಪ್ನ ನಾಗೇಶ್, ಪ್ರಧಾನ ಕಾರ್ಯದರ್ಶಿ ರಂಗಸ್ವಾಮಿ, ಮಾದೇವು, ಕೆ.ಆರ್.ನಗರ ಮಹಿಳಾ ಮೋರ್ಚಾ ಅಧ್ಯಕ್ಷೆ ಅಂಬುಜಾ, ಮುಖಂಡರಾದ ಶಿವಕುಮಾರ್ ಮುಂತಾದವರು ಉಪಸ್ಥಿತರಿದ್ದರು.

ನೀರು ಸರಾಗವಾಗಿ ಹರಿಯಲು

ನಾಲೆಗಳಲ್ಲಿ ಹೂಳು ತೆಗೆಸಲು ಕಬ್ಬು ಬೆಳೆಗಾರರ ಸಂಘ ಆಗ್ರಹ



ನಾಲೆಗಳಲ್ಲಿ ಹೂಳು ತೆಗೆಸುವಂತೆ ಕಾವೇರಿ ನೀರಾವರಿ ನಿಗಮದ ಎಇಇ ಮಂಜುನಾಥ್ ಅವರಿಗೆ ರೈತರು ಮನವಿ ಸಲ್ಲಿಸಿದರು.

ತಿ.ನರಸೀಪುರ, ಜು.3– ತಾಲೂಕಿನ ಬನ್ನೂರು ದೊಡ್ಡಕೆರೆ ಎಡದಂಡೆ, ಬಲ ದಂಡೆ ನಾಲೆ ಹಾಗೂ ಚಿಕ್ಕದೇವ ರಾಯ ಬಡಾವಣೆ ನಾಲೆ ಮತ್ತು ಕೆರೆಯ ಅಚ್ಚುಕಟ್ಟು ಪ್ರದೇಶದ ಹಳ್ಳ ಕೊಳ್ಳಗಳಲ್ಲಿ ಸರಾಗವಾಗಿ ನೀರು ಹರಿಯಲು ನಾಲೆಗಳಲ್ಲಿ ಗಿಡ ಗಂಟಿಗಳು ಹಾಗೂ ಹೂಳು ತೆಗೆಸುವಂತೆ ಕಬ್ಬು ಬೆಳೆಗಾರರ ಸಂಘ ಆಗ್ರಹಿಸಿದೆ.

ಕಾವೇರಿ ನೀರಾವರಿ ನಿಗಮ, ಕೆಆರ್‌ಎಸ್ ಉಪವಿಭಾಗ ಎಇಇ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜು, ಬನ್ನೂರು ದೊಡ್ಡಕೆರೆ ಎಡದಂಡೆ, ಬಲದಂಡೆ ನಾಲೆ ಹಾಗೂ ಚಿಕ್ಕ ದೇವರಾಯ ಬಡಾವಣೆ ನಾಲೆ ಗಳಲ್ಲಿ ವಿಪರೀತ ಗಿಡ ಗಂಟಿಗಳು ಬೆಳೆದು ಹೂಳು ತುಂಬಿದೆ. ಕೃಷಿ ಚಟುವಟಿಕೆಗೆ ನಾಲೆಗಳಲ್ಲಿ ನೀರು ಸರಾಗವಾಗಿ ಹರಿಯ ದಿದ್ದಲ್ಲಿ ರೈತರಿಗೆ ಸಮಸ್ಯೆಯಾಗಲಿದೆ. ಇನ್ನು, ದೊಡ್ಡಕೆರೆ ಅಚ್ಚುಕಟ್ಟು ತಳಭಾಗ ದಲ್ಲಿ ಹಳ್ಳ ಕೊಳ್ಳಗಳು ಹೂತು ಹೋಗಿದ್ದು, ಮಳೆಗಾಲದಲ್ಲಿ ನೀರು ಹಳ್ಳದಲ್ಲಿ ಸರಾಗವಾಗಿ ಹರಿಯದೆ ರೈತರ ಜಮೀನು ಹಾಗೂ ಬೆಳೆಗಳ ಮೇಲೆ ಹರಿಯುವುದರಿಂದ ನಷ್ಟ ಅನುಭವಿಸುವಂತಾಗಿದೆ ಎಂದರು.

ಕಳೆದ ವರ್ಷ ತಮಿಳುನಾಡಿಗೆ ನೀರು ಹರಿಸಿದ ಕಾರಣ ರೈತರು ಬೆಳೆ ಬೆಳೆಯಲು ಸಾಧ್ಯವಾಗದೆ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಈ ಬಾರಿಯಾದರು ಕೃಷಿ ಚಟುವಟಿಕೆ ಕೈಗೊಳ್ಳಲು ತುರ್ತಾಗಿ ಹೂಳು ತೆಗೆಸಿ ನಾಲೆಗಳಿಗೆ ನೀರು ಹರಿಸುವಂತೆ ಒತ್ತಾಯಿಸಿದರು.

ರೈತರ ಜಮೀನಿಗೆ ನೀರು ಪೂರೈಸಲು ನಿರ್ಮಾಣವಾಗಿರುವ ಒಡ್ಡುಗಳು ಸಂಪೂರ್ಣ ಒಡೆದು ಹೋಗಿರುವ ಕಾರಣ ಜಮೀನು ಗಳಿಗೆ ನೀರು ಪೂರೈಸಲು ಸಾಧ್ಯವಾಗುತ್ತಿಲ್ಲ. ಅಲ್ಲದೇ ಬಿ.ಬೆಟ್ಟಹಳ್ಳಿ– ಕುಂತನಹಳ್ಳಿ ನಡುವೆ ಇರುವ ಎಸ್ಕೇಪ್ ಹಳ್ಳದ ಒತ್ತುವರಿಯಿಂದ ಹಳ್ಳ ಮುಚ್ಚಿ ಹೋಗಿದ್ದು ಮಳೆ ಹಾಗೂ ಕೆರೆ ನೀರು ಹೆಚ್ಚಾದಾಗ ರೈತರು ಬೆಳೆಗಳ ಮೇಲೆ ನೀರು ಹರಿದು ಬೆಳೆ ಸಂಪೂರ್ಣ ನಾಶ ವಾಗಿ ನಷ್ಟ ಅನುಭವಿಸುತ್ತಿದ್ದಾರೆ. ಅಲ್ಲದೇ ಮಳೆಗಾಲದಲ್ಲಿ ಆಗುವ ಅನಾಹುತ ತಪ್ಪಿಸಲು ಸೂಕ್ತ ಕ್ರಮ ಕೈಗೊಂಡು ದುರಸ್ತಿ ಮಾಡಬೇಕು. 15 ದಿನದೊಳಗೆ ಕ್ರಮ ಕೈಗೊಳ್ಳದಿದ್ದರೆ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳವುದಾಗಿ ಎಚ್ಚರಿಸಿದರು.

ಈ ವೇಳೆ ಮನವಿ ಸ್ವೀಕರಿಸಿ ಮಾತನಾಡಿದ ಸಹಾಯಕ ಇಂಜಿನಿಯರ್ ಮಂಜುನಾಥ್, ಮೇಲಾಧಿಕಾರಿಗಳ ಗಮನಕ್ಕೆ ತಂದು ಎರಡು ವಾರದೊಳಗೆ ಕಾಮಗಾರಿ ಮುಗಿಸಿ ನೀರು ಹರಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭ ಬನ್ನೂರು ಗ್ರಾಮಾಂತರ ಘಟಕದ ಮುಖಂಡರಾದ ಅತ್ತಹಳ್ಳಿ ಸಿ.ಲಿಂಗಣ್ಣ, ಪಿ.ಚೇತನ್, ಬನ್ನೂರು ಸೂರಿ, ಕುಂತನಹಳ್ಳಿ ಸ್ವಾಮಿ, ರಾಮಕೃಷ್ಣ ಹೊನ್ನಯ್ಯ, ಕಗ್ಗಲೀಪುರ ಮಲ್ಲಿಕಾರ್ಜುನ, ಹನುಮನಾಳು ಚಿಕ್ಕಸ್ವಾಮಿ, ವೆಂಕಟೇಶ್ ಇದ್ದರು.

ಹಿರೀಕ್ಯಾತನಹಳ್ಳಿ ಪ್ರೌಢಶಾಲೆಗೆ ಕಂಪ್ಯೂಟರ್ ಕೊಡುಗೆ



ಮೈಸೂರಿನ ವಿದ್ಯಾವರ್ಧಕ ಕಾಲೇಜು ವತಿಯಿಂದ ಕಂಪ್ಯೂಟರ್ ಕೊಡುಗೆ ನೀಡಲಾಯಿತು.

ಹಿರೀಕ್ಯಾತನಹಳ್ಳಿ, ಜು.3– ಹುಣಸೂರು ತಾಲೂಕಿನ ಹಿರೀಕ್ಯಾತನ ಹಳ್ಳಿ ಸರ್ಕಾರಿ ಪ್ರೌಢಶಾಲೆಗೆ ಮೈಸೂರು ವಿದ್ಯಾವರ್ಧಕ ತಾಂತ್ರಿಕ ಮಹಾ ವಿದ್ಯಾಲಯ ಕಾಲೇಜು ವತಿಯಿಂದ ಕಂಪ್ಯೂಟರ್ ಕೊಡುಗೆ ನೀಡಲಾಯಿತು.

ಸರ್ಕಾರಿ ಪ್ರೌಢಶಾಲೆಗೆ ಕಂಪ್ಯೂಟರ್ ನೀಡಿ ಮಾತನಾಡಿದ ವಿದ್ಯಾವರ್ಧಕ ಕಾಲೇಜಿನ ಎನ್‌ಎಸ್‌ಎಸ್ ಶಿಬಿರದ ಕಾರ್ಯಕ್ರಮಾಧಿಕಾರಿ ಕಾರ್ತಿಕ್, ಕಳೆದ ನಾಲ್ಕೈದು ವರ್ಷಗಳಿಂದ ಹಿರೀಕ್ಯಾತನ ಹಳ್ಳಿ ಗ್ರಾಮವನ್ನು ದತ್ತು ಪಡೆದಿದ್ದು, ನಮ್ಮ ಕಾಲೇಜಿನ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಗ್ರಾಮದಲ್ಲಿ ಪರಿಸರ ಸ್ವಚ್ಛತೆ, ಪ್ಲಾಸ್ಟಿಕ್ ಬಳಕೆ ಬಗ್ಗೆ ಮನೆ ಮನೆಗೆ ತೆರಳಿ ಜಾಗೃತಿ ಮೂಡಿಸಿ ಪ್ಲಾಸ್ಟಿಕ್ ಬ್ಯಾಗ್ ಪಡೆದು ಬಟ್ಟೆ ಬ್ಯಾಗ್ ನೀಡಿದ್ದಾರೆ. ಜೊತೆಗೆ ಪ್ರತಿವರ್ಷ ಪರಿಸರ ದಿನಾಚರಣೆ ಪ್ರಯುಕ್ತ ಗ್ರಾಪಂ ವ್ಯಾಪ್ತಿಯ ಹಲವು ಶಾಲೆಗಳ ಆವರಣದಲ್ಲಿ ಗಿಡಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಜೊತೆಗೆ ವಿವಿಧ ಶಾಲೆಗಳಲ್ಲಿ ಮಕ್ಕಳಿಗೆ ಬೋಧನಾ ತರಗತಿಗಳ ಜೊತೆಗೆ ಸಾಂಸ್ಕೃತಿಕ ಚಟುವಟಿಕೆಗಳು, ಪರಿಸರ ಕಾಳಜಿ ಹಾಗೂ ಹಿರಿಯರಿಗೆ ಗೌರವ ನೀಡುವ ಬಗ್ಗೆ ತಿಳುವಳಿಕೆ ನೀಡಲಾಗಿದೆ ಎಂದರು.

ಇನ್ನು ಹತ್ತು ಹಲವು ಕಾರ್ಯಕ್ರಮ ಮಾಡುವ ಜೊತೆಗೆ ಗ್ರಾಮೀಣ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಒತ್ತು ನೀಡಲು ಗ್ರಾಮದ ಪ್ರೌಢಶಾಲೆಗೆ ಕಂಪ್ಯೂಟರ್ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಕಂಪ್ಯೂಟರ್ ಗಳನ್ನು ನೀಡುವುದಾಗಿ ತಿಳಿಸಿದರು.

ಪ್ರೌಢಶಾಲಾ ಮುಖ್ಯಶಿಕ್ಷಕಿ ಸರಳ ಮಾತನಾಡಿ, ಶಾಲೆಗೆ ಕಂಪ್ಯೂಟರ್ ನೀಡಲು ಶಿಫಾರಸ್ಸು ಮಾಡಿದ ವಿದ್ಯಾವರ್ಧಕ ಕಾಲೇಜಿನ ವಿದ್ಯುತ್ ವಿಭಾಗದ ಮುಖ್ಯಸ್ಥ ಡಾ.ಗೋಪಾಲ್ ರೆಡ್ಡಿ, ಸಹಾಯಕ ಉಪನ್ಯಾಸಕ ಡಾ.ರಾಜೇಂದ್ರ ಪ್ರಸಾದ್ ಅವರನ್ನು ಪ್ರಶಂಶಿಸಿದರು. ಜೊತೆಗೆ ಹಳ್ಳಿ ಮಕ್ಕಳ ವಿದ್ಯಾಭ್ಯಾಸಕ್ಕೆ ವಿದ್ಯಾವರ್ಧಕ ಕಾಲೇಜಿನ ಮುಖ್ಯಸ್ಥರು ಗ್ರಾಮೀಣ ಮಕ್ಕಳಿಗೂ ಜಿಲ್ಲಾ ಕೇಂದ್ರದ ರೀತಿ ಶಿಕ್ಷಣ ದೊರೆಯುವ ನಿಟ್ಟಿನಲ್ಲಿ ಸಹಾಯ ಮಾಡುತ್ತಿದ್ದಾರೆ ಎಂದರು.

ಈ ವೇಳೆ ಪ್ರೌಢಶಾಲಾ ಸಹ ಶಿಕ್ಷಕ ಮಹೇಶ್, ವಿದ್ಯಾವರ್ಧಕ ಕಾಲೇಜಿನ ವಿದ್ಯುತ್ ಹಾಗೂ ವಿದ್ಯುನ್ಮಾನ ವಿಭಾಗದ ಉಪನ್ಯಾಸಕ ಗೌತಮ್.ಬಿ., ಕಾಲೇಜಿನ ವಿದ್ಯಾರ್ಥಿಗಳಾದ ದರ್ಶನ್, ಆಶಿಶ್, ಚಿನ್ಮಯ್ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳು ಹಾಜರಿದ್ದರು.

ಅಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಕೆ



ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಸ್ಥಾನಕ್ಕೆ ಬಿ.ವೀರಭದ್ರಪ್ಪ ನಾಮಪತ್ರ ಸಲ್ಲಿಸಿದರು.

ತಿ.ನರಸೀಪುರ, ಜು.3– ತಿ.ನರಸೀಪುರ ತಾಲೂಕು ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಲು ಆಲಗೂಡು ಪಿಎಸಿಎಸ್ ಮಾಜಿ ಅಧ್ಯಕ್ಷ ಬಿ.ವೀರಭದ್ರಪ್ಪ ನಾಮಪತ್ರ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಅವರು, ವೀರಶೈವ ಲಿಂಗಾಯತ ಮಹಾಸಭಾ ಆಡಳಿತ ಮಂಡಳಿಗೆ ಜು.21 ರಂದು ಚುನಾವಣೆ ನಡೆಯಲಿದ್ದು, ಅಧ್ಯಕ್ಷ ಸ್ಥಾನದ ಆಯ್ಕೆ ಬಯಸಿ ನಾಮಪತ್ರ ಸಲ್ಲಿಸಿರುತ್ತೇನೆ. ಸಮಾಜದ ಶ್ರೇಯೋಭಿವೃದ್ಧಿಗೆ ಶ್ರಮಿಸಬೇಕೆಂಬ ಆಶಾಭಾವನೆ ಹೊಂದಿದ್ದೇನೆ. ಸಮಾಜದ ಭಾಂದವರು ಹಾಗೂ ಕಾರ್ಯಕಾರಿ ಸಮಿತಿಯ ಎಲ್ಲಾ ಸದಸ್ಯರು ನನ್ನನ್ನು ಸರ್ವಾನುಮತದಿಂದ ಆಯ್ಕೆ ಮಾಡುವ ಮೂಲಕ ಅವಕಾಶ ಕಲ್ಪಿಸಿಕೊಡಬೇಕೆಂದು ಮನವಿ ಮಾಡಿದರು.

ಹೈನುಗಾರಿಕೆಯಿಂದ ರೈತರ ಜೀವನ ಸುಧಾರಣೆ: ಶಾಸಕ ದರ್ಶನ್

ಮಲ್ಕುಂಡಿ, ಜು.3– ಹೈನುಗಾರಿಕೆಯಿಂದ ರೈತರ ಜೀವನ ಸುಧಾರಣೆಯಾಗಲಿದೆ ಎಂದು ಶಾಸಕ ದರ್ಶನ್ ತಿಳಿಸಿದರು.

ನಂಜನಗೂಡು ತಾಲೂಕಿನ ಕುರಿಹುಂಡಿ ಗ್ರಾಮದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಬಿಎಂಸಿ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರ ಸಂಘಗಳಿಗೆ ಸರ್ಕಾರ ಸಬ್ಸಿಡಿ ಸಾಲದ ಜೊತೆಗೆ ಅನೇಕ ಸೌಲಭ್ಯಗಳನ್ನು ನೀಡಿದೆ. ಅವುಗಳನ್ನು ಸಂಘದ ಸದಸ್ಯರು ಹಾಗೂ ಹಾಲು ಉತ್ಪಾದಕರು ಸದ್ಬಳಕೆ ಮಾಡಿಕೊಂಡು ಮುಂದೆ ಬರಬೇಕು. ಹಾಲು ಉತ್ಪಾದಕರ ಸಹಕಾರ ಸಂಘದ ಅಭಿವೃದ್ಧಿಗೆ ಗುಣಮಟ್ಟದ ಹಾಲನ್ನು ಪೂರೈಕೆ ಮಾಡಬೇಕು ಎಂದು ತಿಳಿಸಿದರು.

ಈ ವೇಳೆ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ ಕೆ.ಜಿ.ಮಹೇಶ್, ನಿರ್ದೇಶಕಿ ನೀಲಾಂಬಿಕೆ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ಜಿ.ಮಹೇಶ್, ಶ್ರೀಕಂಠನಾಯಕ, ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ರಾಜಶೇಖರಪ್ಪ, ನಿರ್ದೇಶಕ ಸದಾನಂದ,



ಬಿಎಂಸಿ ಕೇಂದ್ರವನ್ನು ಶಾಸಕ ದರ್ಶನ್ ಉದ್ಘಾಟಿಸಿದರು.

ಜಿಪಂ ಮಾಜಿ ಸದಸ್ಯ ಕೆಮಾರುತಿ, ಮುಖಂಡರಾದ ಕರಿಬಸವರಾಜಪ್ಪ, ಸಂತೋಷ್ ಕುಮಾರ್, ಗ್ರಾಪಂ ಉಪಾಧ್ಯಕ್ಷ ಮಂಜುನಾಯಕ್, ರಮೇಶ್, ಚಿಕ್ಕನಂಜಯ್ಯ, ವಿಸ್ತರಣಾಧಿಕಾರಿ ಶಿವಕುಮಾರ್, ನಂಜುಂಡಸ್ವಾಮಿ ಸೇರಿದಂತೆ ಪ್ರಮುಖರಿದ್ದರು.

ಅಂಬಳೆಯಲ್ಲಿ ಹೆಣ್ಣು ಚಿರತೆ ಸಾವು



ಮಲ್ಕುಂಡಿ, ಜು.3– ಇಲ್ಲಿಗೆ ಸಮೀಪದ ಅಂಬಳೆ ಗ್ರಾಮದಲ್ಲಿ 5 ವರ್ಷದ ಹೆಣ್ಣು ಚಿರತೆ ಅಸಹಜವಾಗಿ ಮೃತಪಟ್ಟಿದೆ.

ಗ್ರಾಮದ ವೀರಭದ್ರಪ್ಪ ಎಂಬುವರ ಜಮೀನಿನಲ್ಲಿ ಚಿರತೆ ಕಳೇಬರ ಪತ್ತೆಯಾಗಿದ್ದು, ತಕ್ಷಣ ಜಮೀನಿನ ಮಾಲೀಕ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಚಿರತೆ ಸಾವನ್ನಪ್ಪಿರುವ ಬಗ್ಗೆ ಮಾಹಿತಿ ನೀಡಿದರು.

ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಅರಣ್ಯ ಇಲಾಖೆ ವಲಯ ಅರಣ್ಯಾಧಿಕಾರಿ ನಿತಿನ್ ಕುಮಾರ್, ಸಹಾಯಕ ಸಂರಕ್ಷಣಾಧಿಕಾರಿ ಅಭಿಷೇಕ್ ಪರಿಶೀಲಿಸಿದರು. ಬಳಿಕ ಮಾತನಾಡಿ, ಸುಮಾರು ಒಂದರಿಂದ ಐದು ವರ್ಷದ ಹೆಣ್ಣು ಚಿರತೆಯಾಗಿದ್ದು, ಅಸಹಜವಾಗಿ ಚಿರತೆ ಸಾವನ್ನಪ್ಪಿದೆ ಎನ್ನಲಾಗಿದೆ. ಮರಣೋತ್ತರ ಪರೀಕ್ಷೆಗಾಗಿ ಚಿರತೆಯನ್ನು ರವಾನಿಸಲಾಗಿದ್ದು, ವನ್ಯಜೀವಿ ಕಾಯ್ದೆ ಅಡಿ ಪ್ರಕರಣ ದಾಖಲಿಸಿಕೊಂಡ ತನಿಖೆ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು. ಈ ವೇಳೆ ಅರಣ್ಯ ಇಲಾಖೆ ಸಿಬ್ಬಂದಿ ಹಾಜರಿದ್ದರು.

ಹೊಸ ಚೆಂಡು ಹೂವಿನ ಸಂಕರಣ ತಳಿ ಪರಿಚಯ



ಚೆಂಡು ಹೂ ಬೆಳೆಯ ನೂತನ ಬೇಸಾಯ ಕ್ರಮಗಳ ತರಬೇತಿ ಕಾರ್ಯಕ್ರಮ ನಡೆಯಿತು.

ನಂಜನಗೂಡು, ಜು.3– ಹೊಸ ಚೆಂಡು ಹೂವಿನ ಸಂಕರಣ ತಳಿ ಅರ್ಕ ಭಾನು ಹಳದಿ ಬಣ್ಣದ ಹೂ ಬಿಡುವ ತಳಿಯಾಗಿದ್ದು, ನಾಟಿ ಮಾಡಿದ 40ರಿಂದ 45 ದಿನಗಳಲ್ಲಿ ಮೊದಲ ಕೊಯ್ಲಿಗೆ ಬರುತ್ತದೆ. ಹೂವಿನ ಗಾತ್ರ ಹಾಗೂ ಇಳುವರಿಯೂ ಬೇರೆ ಸ್ಥಳೀಯ ತಳಿಗಳಿಗಿಂತ ಹೆಚ್ಚಾಗಿರುತ್ತದೆ ಎಂದು ಕೃಷಿ ವಿಜ್ಞಾನ ಕೇಂದ್ರದ ತೋಟಗಾರಿಕೆ ತಜ್ಞ ಡಾ.ಜಿ.ಎಂ.ವಿನಯ್ ತಿಳಿಸಿದರು.

ತಾಲೂಕಿನ ಹರತಲೆ ಗ್ರಾಮದಲ್ಲಿ ಬುಧವಾರ ಸುತ್ತೂರು ಕೃಷಿ ವಿಜ್ಞಾನ ಕೇಂದ್ರದಿಂದ ಆಯೋಜಿಸಿದ್ದ ಚೆಂಡು ಹೂವು ಬೆಳೆಯ ನೂತನ ಬೇಸಾಯ ಕ್ರಮಗಳ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹೊಸ ತಳಿ ದೀರ್ಘ ಕಾಲದವರೆಗೂ ಹೂವು ಬಿಡುತ್ತಿರುತ್ತದೆ. ಈ ತಳಿಯನ್ನು ಬೆಂಗಳೂರಿನ ಹೆಸರಘಟ್ಟದಲ್ಲಿರುವ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ ಬಿಡುಗಡೆ ಮಾಡಿದ್ದು, ಹೊಸ ತಳಿಗೆ ರೋಗಗಳ ಬಾಧೆ ಹೆಚ್ಚಿರುವುದಿಲ್ಲ, ರೈತರು ಹೊಸ ತಳಿಯನ್ನು ಬೆಳೆದು ಆರ್ಥಿಕ ಲಾಭ ಗಳಿಸಬಹುದಾಗಿದೆ ಎಂದರು.

ಗೃಹ ವಿಜ್ಞಾನಿ ಡಾ.ದೀಪಕ್ ಮಾತನಾಡಿ, ಮನೆ ಅಂಗಳ ಅಥವಾ ಕೈ ತೋಟದಲ್ಲಿ ಬೆಳೆಯಬಹುದಾದ ತರಕಾರಿ ಬೆಳೆಗಳಿವೆ. ತರಕಾರಿಗಳಿಗೆ ಒಳ್ಳೆಯ ಮಾರುಕಟ್ಟೆ, ಬೆಲೆ ಲಭ್ಯವಾಗುತ್ತಿದ್ದು ಹೆಚ್ಚು ಸಸ್ಯಹಾರ ಸೇವನೆಯಿಂದ ಆಹಾರ ಪದ್ಧತಿಗಳನ್ನು ಸರಿಪಡಿಸಿಕೊಂಡು ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಸುತ್ತೂರಿನ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ತಂತ್ರಜ್ಞಾನ ಪರಿಶೀಲನೆ ಅಡಿಯಲ್ಲಿ ರೈತರಿಗೆ ಚೆಂಡು ಹೂವಿನ ಬೆಳೆಯ ಹೊಸ ಸಂಕರಣ ತಳಿ ಅರ್ಕ ಭಾನು ಸಸಿಗಳನ್ನು ನೀಡಲಾಯಿತು. ಕಾರ್ಯಕ್ರಮದಲ್ಲಿ ಪ್ರಗತಿಪರ ರೈತರಾಜು, ಲೋಕೇಶ್, ಪ್ರವೀಣ್, ವಸಂತ ಹಾಗೂ 20ಕ್ಕೂ ಹೆಚ್ಚು ರೈತರು ಉಪಸ್ಥಿತರಿದ್ದರು.

ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷರಾಗಿ

ಬುಲೆಟ್ ಮಹದೇವಪ್ಪ ಮತ್ತೊಂದು ಅವಧಿಗೆ ಮುಂದುವರೆಯಲಿ

ಮಲ್ಲನಮೂಲೆ ಮಠದ ಶ್ರೀಚನ್ನಬಸವ ಸ್ವಾಮೀಜಿ ಆಶಯ



ಮಲ್ಲನಮೂಲೆ ಮಠದಲ್ಲಿ ನಡೆದ ಕಾರ್ಯಕ್ರಮದಲ್ಲಿ ಬುಲೆಟ್ ಮಹದೇವಪ್ಪ ಅವರನ್ನು ಅಭಿನಂದಿಸಲಾಯಿತು.

ನಂಜನಗೂಡು, ಜು.3– ಕಳೆದ 5 ವರ್ಷಗಳಿಂದ ಅಖಿಲ ಭಾರತ ವೀರಶೈವ ಮಹಾಸಭಾ ಸಂಘದ ಚಟುವಟಿಕೆಗಳನ್ನು ಯಶಸ್ವಿಯಾಗಿ ಮುನ್ನಡೆಸಿರುವ ಅಧ್ಯಕ್ಷ ಬುಲೆಟ್ ಮಹದೇವಪ್ಪರವರು ಸಂಘದ ಅಭಿವೃದ್ಧಿ ಹಿತದೃಷ್ಟಿಯಿಂದ ಮತ್ತೊಂದು ಅವಧಿಗೆ ಮುಂದುವರೆಯಬೇಕು ಎಂದು ಅಖಿಲ ಭಾರತ ವೀರಶೈವ ಮಹಾಸಭಾ ಗೌರವಾಧ್ಯಕ್ಷ, ಮಲ್ಲನಮೂಲೆ ಮಠದ ಶ್ರೀಚನ್ನಬಸವ ಸ್ವಾಮೀಜಿ ಆಶಯ ವ್ಯಕ್ತಪಡಿಸಿದರು.

ಮಲ್ಲನಮೂಲೆ ಮಠದಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾ ವತಿಯಿಂದ ಏರ್ಪಡಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ಅಧ್ಯಕ್ಷ ಬುಲೆಟ್ ಮಹದೇವಪ್ಪನವರು ಸಮಾಜಕ್ಕೆ ಉತ್ತಮ ಕೊಡುಗೆ ನೀಡಿದ್ದಾರೆ. ಜೊತೆಗೆ ತಾಲೂಕಿನಲ್ಲಿ ಅದ್ದೂರಿ ಬಸವ ಜಯಂತಿ ನಡೆಯಲು ಶ್ರಮಿಸಿದ್ದಾರೆ. ತಾಲೂಕಿನಲ್ಲಿ ಸಮುದಾಯದ ಅತ್ಯಂತ ಬೇಡಿಕೆಯಾಗಿದ್ದ ಬಸವ ಭವನ ನಿರ್ಮಾಣಕ್ಕೆ ಇವರ ಅವಧಿಯಲ್ಲಿ 10 ಕೋಟಿ ವೆಚ್ಚದಲ್ಲಿ ಶಂಕುಸ್ಥಾಪನೆಯಾಗಿ ಕೆಲಸ ಪ್ರಗತಿಯಲ್ಲಿದೆ. ಬಸವ ಭವನ ನಿರ್ಮಾಣಕ್ಕೆ ತಮ್ಮ ವೈಯಕ್ತಿಕ ಬದುಕನ್ನು ಮರೆತು ಓಡಾಟ ನಡೆಸಿ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪರವರ ಮನವೊಲಿಸಿ ನಿರ್ಮಾಣವಾಗಲು ಕಾರಣರಾಗಿದ್ದಾರೆ. ಆದ್ದರಿಂದ ಅವರು ಮತ್ತೊಂದು ಅವಧಿಗೆ ಮುಂದುವರೆದು ಬಸವ ಭವನ ಕಾಮಗಾರಿ ಪೂರ್ಣಗೊಂಡ ಬಳಿಕ ಉದ್ಘಾಟನೆ ಕಾರ್ಯ ನೆರವೇರಿಸಿ ಅಧ್ಯಕ್ಷ ಸ್ಥಾನದಿಂದ ಕೆಳಗಿಳಿಯಲಿ ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಬುಲೆಟ್ ಮಹದೇವಪ್ಪ ಮಾತನಾಡಿ, ನಿಮ್ಮೆಲ್ಲರ ಸಹಕಾರದಿಂದ ಕಳೆದ 5 ವರ್ಷಗಳಿಂದ ಸಂಘದ ಅಭಿವೃದ್ಧಿಗೆ ಶ್ರಮಿಸಿ ಸಂಘಟನೆಗೆ ಒತ್ತು ನೀಡಿದ ಆತ್ಮತೃಪ್ತಿ ನನಗಿದೆ. ಅಧಿಕಾರ ಕೇಂದ್ರೀಕರಣವಾಗದೆ ವಿಕೇಂದ್ರೀಕರಣವಾಗಬೇಕೆಂಬುದು ನನ್ನ ಅಭಿಪ್ರಾಯ. ಆದ್ದರಿಂದ ಅಧ್ಯಕ್ಷ ಸ್ಥಾನವನ್ನು ಬೇರೆಯವರಿಗೆ ಬಿಟ್ಟುಕೊಟ್ಟು ಅವಕಾಶ ಕಲ್ಪಿಸುತ್ತೇನೆ. ಸ್ವಾಮೀಜಿಯವರು ನನ್ನ ಮೇಲೆ ಇಟ್ಟಿರುವ ಪ್ರೀತಿ ವಿಶ್ವಾಸಕ್ಕೆ ನಾನು ಆಭಾರಿಯಾಗಿರುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ಬಸವ ಜಯಂತಿ ಕಾರ್ಯಕ್ರಮದ ಆದಾಯ ವೆಚ್ಚ ಮಂಡಿಸಲಾಯಿತು. ಸಮಾರಂಭದಲ್ಲಿ ಚಿನ್ನಸ್ವಾಮಿ, ಮಂಜುನಾಥ್, ಮಾಧು, ಶಿವಬಸಪ್ಪ, ಮಹೇಶ್, ಉಮಾ ಮಹೇಶ್ವರಿ, ಪ್ರಕಾಶ್, ಶಿವನಾಗಪ್ಪ, ಸುಧಾ, ಗುರುಪ್ರಸಾದ್, ಸುಬ್ಬಣ್ಣ, ಮುರಮಲ್ಲೇಶ್, ಆದಿಪಟೇಲ್, ಆನಂದ,

ಜಿಲ್ಲಾ ಸರ್ಕಾರಿ ವಕೀಲರಾಗಿ ನೇಮಕ



ತಿ.ನರಸೀಪುರ, ಜು.3– ದೊಡ್ಡೇ ಬಾಗಿಲು ಗ್ರಾಮದ ವಕೀಲ ಎಂ.ಮಹದೇವಸ್ವಾಮಿ ಅವರನ್ನು ಜಿಲ್ಲಾ ಸರ್ಕಾರಿ ವಕೀಲರಾಗಿ ನೇಮಕ ಮಾಡಿ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ (ಆಡಳಿತ–2) ಸರ್ಕಾರದ ಅಧೀನ ಕಾರ್ಯದರ್ಶಿ ಆದಿನಾರಾಯಣ ಆದೇಶ ಹೊರಡಿಸಿದ್ದಾರೆ. ಕರ್ನಾಟಕ ಕಾನೂನು ಅಧಿಕಾರಿ ಗಳ ನಿಯಮಗಳು, 1977ರ ನಿಯಮದ ಅನ್ವಯ ಒಂದು ವರ್ಷದ ಅವಧಿಗೆ ನೇಮಿಸಲಾಗಿದೆ ಎಂದು ಆದೇಶದಲ್ಲಿ ತಿಳಿಸಿದ್ದಾರೆ.

ಹಬ್ಬನಕುಪ್ಪೆಯಲ್ಲಿ ಬೋನಿಗೆ ಬಿದ್ದ ಚಿರತೆ



ಹುಣಸೂರು, ಜು.3– ಭಾನುವಾರ ಎರಡು ಕರುಗಳನ್ನು ಬಲಿ ಪಡೆದಿದ್ದ 5 ವರ್ಷದ ಚಿರತೆ ಬೋನಿಗೆ ಬಿದ್ದಿರುವ ಘಟನೆ ತಾಲೂಕಿನ ಹಬ್ಬನಕುಪ್ಪೆ ಯಲ್ಲಿ ನಡೆದಿದೆ. ತಾಲೂಕಿನ ಹನಗೋಡು ಹೋಬಳಿ ಹಬ್ಬನಕುಪ್ಪೆ ಗ್ರಾಮದಲ್ಲಿ ಚಿರತೆ ಸಾಕು ಪ್ರಾಣಿಗಳನ್ನು ಬಲಿ ಪಡೆಯುತ್ತಿರುವ ಬಗ್ಗೆ ಗ್ರಾಮಸ್ಥರು ನೀಡಿದ ದೂರಿನ ಮೇರೆಗೆ ಅರಣ್ಯ ಇಲಾಖೆ ಸಿಬ್ಬಂದಿ, ಡಿಸಿಎಫ್ ಸೀಮಾ ಅವರ ಮಾರ್ಗದರ್ಶನದಲ್ಲಿ ಗ್ರಾಮದ ಚನ್ನಬಸಪ್ಪನವರ ಜಮೀನಿನಲ್ಲಿ ಬೋನ್ ಇರಿಸಿದ್ದರು. ಸೋಮವಾರ ರಾತ್ರಿ ಅರಣ್ಯ ಇಲಾಖೆಯವರು ಇಟ್ಟಿದ್ದ ಬೋನಿಗೆ ಚಿರತೆ ಬಿದ್ದಿದ್ದು, ಚಿರತೆಯನ್ನು ಅರಣ್ಯದಲ್ಲಿ ಬಂಧಮುಕ್ತಗೊಳಿಸಲಾಗಿದೆ ಎಂದು ಆರ್‌ಎಫ್‌ಓ ನಂದಕುಮಾರ್ ತಿಳಿಸಿದ್ದಾರೆ.

ಮಲಗಿದ್ದಲ್ಲೇ ಸಾರಿಗೆ ಬಸ್ ನಿರ್ವಾಹಕ ಸಾವು



ಹುಣಸೂರು, ಜು.3– ಮನೆಯಲ್ಲಿ ಮಲಗಿದ್ದ ವೇಳೆ ಸಾರಿಗೆ ಬಸ್ ನಿರ್ವಾಹಕ ಸಾವನ್ನಪ್ಪಿರುವ ಘಟನೆ ತಾಲೂಕಿನ ಕಸಬಾ ಹೋಬಳಿ ರಂಗನಾಥಪುರದಲ್ಲಿ ಮಂಗಳವಾರ ನಡೆದಿದೆ.

ಗ್ರಾಮದ ಚೆಲುವಶೆಟ್ಟಿ–ಜಯಮ್ಮ ದಂಪತಿ ಪುತ್ರ, ಹುಣಸೂರು ಡಿಪೋ ಕಂಡಕ್ಟರ್ ಸಿ.ಪ್ರಸನ್ನ(38) ಸಾವನ್ನಪ್ಪಿದವರು. ಅವಿವಾಹಿತರಾಗಿದ್ದ ಇವರಿಗೆ ತಂದೆ, ತಾಯಿ, ಓರ್ವ ಸಹೋದರಿ, ಸಹೋದರನಿದ್ದಾನೆ. ಮನೆಯಲ್ಲಿ ಮಲಗಿದ್ದ ಇವರು ಎಷ್ಟು ಹೊತ್ತಾದರೂ ಏಳದಿದ್ದಾಗ ಮನೆಯವರು ಎಬ್ಬಿಸಲು ಹೋದ ವೇಳೆ ಸಾವನ್ನಪ್ಪಿರುವುದು ಬೆಳಕಿಗೆ ಬಂದಿದೆ.

ವಿಷಯ ತಿಳಿದು ಮೃತ ನಿರ್ವಾಹಕನ ಮನೆಗೆ ಆಗಮಿಸಿದ ಸಾರಿಗೆ ಸಂಸ್ಥೆ ಸಹಾಯಕ ಸಂಚಾರ ನಿರೀಕ್ಷಕ ಗಂಗಣ್ಣ, ಲೆಕ್ಕಪತ್ರ ಮೇಲ್ವಿಚಾರಕ ಮಂಜುನಾಥ್, ಸಿಬ್ಬಂದಿ ಮೇಲ್ವಿಚಾರಕ ಬಾಲಸುಬ್ರಮಣ್ಯಂ ಹಾಗೂ ಸಹೋದ್ಯೋಗಿಗಳು ಸಂತಾಪ ಸೂಚಿಸಿದರಲ್ಲದೆ ಸಂಸ್ಥೆ ಪರವಾಗಿ 15 ಸಾವಿರ ರೂ.ಗಳನ್ನು ಅಂತ್ಯಸಂಸ್ಕಾರಕ್ಕಾಗಿ ನೀಡಿದರು. ಸಂಜೆ ಸ್ವಗ್ರಾಮದಲ್ಲಿ ಅಂತ್ಯಕ್ರಿಯೆ ನಡೆಯಿತು.

ಶ್ರೀಆದಿಚುಂಚನಗಿರಿ ಕಾಲೇಜಿನ ವಿದ್ಯಾರ್ಥಿಗಳ ಸಾಧನೆ ಅನನ್ಯ

ಮೈಸೂರು ಶಾಖಾ ಮಠದ ಶ್ರೀಸೋಮೇಶ್ವರನಾಥ ಸ್ವಾಮೀಜಿ



ಕಾರ್ಯಕ್ರಮವನ್ನು ಶ್ರೀಸೋಮೇಶ್ವರನಾಥ ಸ್ವಾಮೀಜಿ ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ಜು.3– 2023–24ನೇ ಸಾಲಿನಲ್ಲಿ ಶ್ರೀಆದಿಚುಂಚನಗಿರಿ ಪದವಿ ಪೂರ್ವ ಕಾಲೇಜಿನ ವಿಜ್ಞಾನ, ವಾಣಿಜ್ಯ ಮತ್ತು ಕಲಾ ವಿಭಾಗದ ವಿದ್ಯಾರ್ಥಿಗಳ ಸಾಧನೆ ಅನನ್ಯ ಎಂದು ಶ್ರೀಆದಿಚುಂಚನಗಿರಿ ಮೈಸೂರು ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ ತಿಳಿಸಿದರು.

ಪಟ್ಟಣದ ಶ್ರೀಆದಿಚುಂಚನಗಿರಿ ಸಮುದಾಯ ಭವನದಲ್ಲಿ 2024–25ನೇ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿ ಹಿರಿಯ ವಿದ್ಯಾರ್ಥಿಗಳಿಂದ ಕಿರಿಯ ವಿದ್ಯಾರ್ಥಿಗಳಿಗೆ ಸ್ವಾಗತ, ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ ಮತ್ತು ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಕಾಲೇಜಿನ 90 ವಿದ್ಯಾರ್ಥಿಗಳು ಉನ್ನತ ಶ್ರೇಣಿ ಪಡೆದಿದ್ದು, ನಗರ ಪ್ರದೇಶದ ವಿದ್ಯಾರ್ಥಿಗಳಂತೆ ಸಾಧನೆ ಮಾಡಿದ್ದಾರೆ. ಈ ಮೂಲಕ ಗ್ರಾಮೀಣ ಮಕ್ಕಳು ಉತ್ತಮ ಸಾಧನೆ ಮಾಡುವಷ್ಟು ಶಕ್ತರು ಎಂಬುದನ್ನು ಸಾಬೀತು ಪಡಿಸಿದ್ದಾರೆ ಎಂದರು. ಪಿಯು ಹಂತಕ್ಕೆ ಬರುವ ವೇಳೆಗೆ ವಿದ್ಯಾರ್ಥಿಗಳಿಗೆ 17 ವರ್ಷವಾಗಿರುತ್ತದೆ. ಪಿಯು ಮುಗಿಯುವ ವೇಳೆಗೆ 18 ವರ್ಷ ತುಂಬಿರುತ್ತದೆ. ಈ ವಯಸ್ಸಿನಲ್ಲಿ ಮಕ್ಕಳ ಮನಸ್ಸು ಹೆಚ್ಚು ಚಂಚಲಗೊಳ್ಳುವ ಮತ್ತು ಕೆಲವು ವಿಚಾರಗಳಿಗೆ ತಲ್ಲಣ ಉಂಟು ಮಾಡುವ ವಯಸ್ಸು ಇದು. ಇಲ್ಲಿ ಮಕ್ಕಳು ಮನಸ್ಸನ್ನು ಹತೋಟಿಯಲ್ಲಿಟ್ಟು ಕೊಂಡು, ಸಂಸ್ಕಾರ ಬೆಳೆಸಿಕೊಳ್ಳಬೇಕು ಮತ್ತು ಸಮಯದ ಬಳಕೆ ಮುಖ್ಯ ಎಂದರು.

ಪ್ರಾಂಶುಪಾಲ ಭೈರೇಗೌಡ ಮಾತನಾಡಿ, 2023–24ನೇ ಸಾಲಿನಲ್ಲಿ ದ್ವಿತೀಯ ಪಿಯು ವಿಭಾಗದ ವಿಜ್ಞಾನ, ವಾಣಿಜ್ಯ ಮತ್ತು ಕಲಾ ವಿಭಾಗದಿಂದ ಪರೀಕ್ಷೆಗೆ ಹಾಜರಾದ 320 ವಿದ್ಯಾರ್ಥಿಗಳಲ್ಲಿ 305 ಮಂದಿ ತೇರ್ಗಡೆಯಾಗಿದ್ದು, ಕಾಲೇಜಿಗೆ ಶೇ.96 ರಷ್ಟು ಫಲಿತಾಂಶ ಬಂದಿದೆ.

ವಿಜ್ಞಾನ ವಿಭಾಗದಲ್ಲಿ 99 ವಿದ್ಯಾರ್ಥಿಗಳ ಪೈಕಿ 98 ಮಕ್ಕಳು ತೇರ್ಗಡೆಯಾಗಿದ್ದು, ಶೇ.99ರಷ್ಟು ಫಲಿತಾಂಶ ಮತ್ತು 39 ಮಕ್ಕಳು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ 126 ವಿದ್ಯಾರ್ಥಿಗಳ ಪೈಕಿ 123 ಮಕ್ಕಳು ತೇರ್ಗಡೆಯಾಗಿದ್ದು, ಶೇ.98 ರಷ್ಟು ಫಲಿತಾಂಶ ಮತ್ತು 30 ಮಕ್ಕಳು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಕಲಾ ವಿಭಾಗದಲ್ಲಿ 95 ವಿದ್ಯಾರ್ಥಿಗಳ ಪೈಕಿ 85 ಮಕ್ಕಳು ಪರೀಕ್ಷೆಯಲ್ಲಿ ತೇರ್ಗಡೆಯಾಗಿದ್ದು, ಶೇ.90 ರಷ್ಟು ಫಲಿತಾಂಶ ಮತ್ತು 21 ಮಕ್ಕಳು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ ಎಂದರು.

ಈ ವೇಳೆ ಪ್ರೊ.ಚಂದ್ರೇಗೌಡ, ಶ್ರೀಆದಿಚುಂಚನಗಿರಿ ಪದವಿ ಕಾಲೇಜಿನ ಪ್ರಾಂಶುಪಾಲ ಡಾ.ಜೆ.ಎನ್.ವೆಂಕಟೇಶ್, ಸರ್ಕಾರಿ ಪ್ರೌಢಶಾಲೆಗಳ ಮುಖ್ಯ ಶಿಕ್ಷಕ ಎಸ್.ಕೆ.ವಿಶ್ವನಾಥ್ ಪ್ರಸಾದ್ (ಯರಹಳ್ಳಿ), ಹೆಚ್.ಪಿ.ಹೇಮಲತಾ(ಮಗ್ಗೆ), ಕೆ.ಗೀತಾ (ಗಾಂಧಿನಗರ), ಜಯರಾಮ್ ಭಟ್ (ಕೆ ಬೆಳತ್ತೂರು), ಎಚ್.ಎನ್.ಎಸ್.ಬೇಗ್ (ಗುರುಪುರ) ಹಾಜರಿದ್ದರು.

> ಕೋಟೆಯಲ್ಲಿ ಈ ಸಂಸ್ಥೆ ಹುಟ್ಟು ಹಾಕಲು ಲಿಂಗೈಕ್ಯ ಶ್ರೀಬಾಲ ಗಂಗಾಧರನಾಥ ಸ್ವಾಮೀಜಿ ಕಾರಣ. ಹೆಚ್.ಡಿ.ಕೋಟೆ ತಾಲೂಕನ್ನು ಆನೆಗಳ ಕಾಡು. ತಾಲೂಕಿನಲ್ಲಿ ಆನೆಗಳು ಇವೆ. ಆದರೆ ಜನರು ಇಲ್ಲ ಎನ್ನುವ ಕಾಲ ಇತ್ತು. ತಾಲೂಕಿನಲ್ಲಿ ಅಗಾಧ ಸಂಪತ್ತು ಇದೆ. ಆದರೆ ಅದನ್ನು ರೂಢಿಸುವ ಜನರು ಇರಲಿಲ್ಲ. ಪಟ್ಟಣದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಮಾತ್ರ ಇತ್ತು. ಮಕ್ಕಳಿಗೆ ಪ್ರವೇಶ ಸಿಗುತ್ತಿರಲಿಲ್ಲ. ಆ ಸಮಯದಲ್ಲಿ ದೊಡ್ಡ ಸ್ವಾಮೀಜಿ ತಾಲೂಕಿನಲ್ಲಿ ಸಂಚಾರ ಮಾಡಿ, ಸಂಸ್ಥೆ ಪ್ರಾರಂಭಿಸಿದರು.
>
> – ಪ್ರೊ.ಕೆ.ಪಿ.ಬಸವೇಗೌಡ, ಸಂಸ್ಥೆ ಗೌರವ ಆಡಳಿತಾಧಿಕಾರಿ.

ನೌಕರರ ಕರಡು ಮತದಾರರ ಪಟ್ಟಿ ಪ್ರಕಟ

ನಂಜನಗೂಡು, ಜು.3– ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘಕ್ಕೆ ಡಿಸೆಂಬರ್‌ನಲ್ಲಿ ಚುನಾವಣೆ ನಡೆಯುವ ಹಿನ್ನೆಲೆಯಲ್ಲಿ ಎಲ್ಲಾ ಇಲಾಖೆಗಳ ನೌಕರರ ಕರಡು ಮತದಾರರ ಪಟ್ಟಿಯನ್ನು ಸಂಘದ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಈ ಕರಡು ಮತದಾರರ ಪಟ್ಟಿ ಬಗ್ಗೆ ಆಕ್ಷೇಪಣೆಗಳಿದ್ದಲ್ಲಿ ಜು.10 ಸಂಜೆ 6 ಗಂಟೆಯೊಳಗೆ ಲಿಖಿತವಾಗಿ ಸಂಘದ ಕಚೇರಿಗೆ ತಲುಪಿಸುವಂತೆ ಸಂಘದ ಅಧ್ಯಕ್ಷ ರಂಗಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರಗೂರಲ್ಲಿ ನಿವೃತ್ತ ಎಎಸ್‌ಐಗೆ ಸನ್ಮಾನ



ಸರಗೂರು ಪೊಲೀಸ್ ಠಾಣೆಯಲ್ಲಿ ಎಎಸ್‌ಐ ಆಗಿ ಕಾರ್ಯ ನಿರ್ವಹಿಸಿ ನಿವೃತ್ತರಾದ ಸಿ.ಎಂ.ರಂಗನಾಥ್ ಅವರನ್ನು ಪೊಲೀಸ್ ಸಿಬ್ಬಂದಿ ಸನ್ಮಾನಿಸಿ ಬೀಳ್ಕೊಟ್ಟರು. ಈ ವೇಳೆ ಸಿಪಿಐ ಲಕ್ಷ್ಮೀಕಾಂತ್, ಎಸ್‌ಐ ಗೋಪಾಲ್, ನಾರಾಯಣ, ಹೆಚ್.ಸಿ.ನಾಗನಾಯಕ, ದಿಲೀಪ್, ಇಮ್ರಾನ್, ಆನಂದ್, ಶಿವರಾಜು, ಶಿವಕುಮಾರ್, ರಾಜು, ಗಣಪತಿ, ಸೋಮನಾಯಕ, ಉಷಾ, ದೇವರಾಜು, ದರ್ಶನ್ ಇನ್ನಿತರಿದ್ದರು.

ಮಹಿಳೆಯರ ಗರ್ಭಕಂಠ ಕ್ಯಾನ್ಸರ್ ಬಗ್ಗೆ ಕೇಂದ್ರದ ಗಮನ ಸೆಳೆದ ಡಾ. ಸುಧಾಮೂರ್ತಿ

- ತಂದೆಯ ಮಾತನ್ನು ಉಲ್ಲೇಖಿಸಿ ರಾಜ್ಯಸಭೆಯಲ್ಲಿ ಅದ್ಭುತ ಭಾಷಣ
- ಪ್ರವಾಸೋದ್ಯಮ ಅಭಿವೃದ್ಧಿಗೆ ಇರುವಂತಹ ವಿಫುಲ ಅವಕಾಶಗಳ ಪ್ರಸ್ತಾಪ

ನವದೆಹಲಿ, ಜು.3– ಇನ್ಫೋಸಿಸ್ ಸುಧಾಮೂರ್ತಿಯವರು ರಾಜ್ಯ ಸಭೆಯಲ್ಲಿ ಮಂಗಳವಾರ ತಮ್ಮ ಚೊಚ್ಚಲ ಭಾಷಣ ಮಾಡಿದರು.

ರಾಷ್ಟ್ರಪತಿ ಭಾಷಣದ ಮೇಲಿನ ವಂದನಾ ನಿರ್ಣಯದಲ್ಲಿ ಮಾತನಾಡಿದ ಸುಧಾಮೂರ್ತಿಯವರು, ಮೊದಲಿಗೆ ತಾಯಂದಿರ ಬಗ್ಗೆ ತಮ್ಮ ತಂದೆಯ ಮಾತುಗಳನ್ನು ಉಲ್ಲೇಖಿಸಿದ ನಂತರ ಮಹಿಳೆಯರ ಆರೋಗ್ಯ ಮತ್ತು ದೇಶದ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ಬಗ್ಗೆ ಸರ್ಕಾರದ ಗಮನ ಸೆಳೆದರು.

ಅವರು ಮಾತು ಆರಂಭಿಸುತ್ತಲೇ 'ತಾಯಿ ಸತ್ತಾಗ ಆಸ್ಪತ್ರೆಯಲ್ಲಿ ಅದನ್ನು ಒಂದು ಸಾವು ಎಂದು ಮಾತ್ರ ಪರಿಗಣಿಸಲಾಗುತ್ತದೆ. ಆದರೆ ಆಕೆಯ ಕುಟುಂಬದವರು ತಾಯಿಯನ್ನು ಶಾಶ್ವತವಾಗಿ ಕಳೆದುಕೊಳ್ಳುತ್ತಾರೆ. ಒಬ್ಬ ಗಂಡನಿಗೆ ಮತ್ತೊಬ್ಬ ಹೆಂಡತಿ ಬರಬಹುದು. ಆದರೆ ಮಕ್ಕಳಿಗೆ ಮತ್ತೊಬ್ಬ ತಾಯಿ ಬರಲು ಸಾಧ್ಯವಿಲ್ಲ' ಎಂಬ ತಮ್ಮ ತಂದೆಯ ಮಾತನ್ನು ಉಲ್ಲೇಖಿಸಿದ ಅವರು, ತಾಯಂದಿರ ಆರೋಗ್ಯದ ಬಗ್ಗೆ ಸರ್ಕಾರ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಮನವಿ ಮಾಡಿದರು.

ಸರ್ವೈಕಲ್ ಕ್ಯಾನ್ಸರ್ (ಗರ್ಭಕಂಠ ಕ್ಯಾನ್ಸರ್) ವಿರುದ್ಧದ ಹೋರಾಟಕ್ಕೆ ಸರ್ಕಾರಿ ಪ್ರಾಯೋಜಿತ ಲಸಿಕೆ ಕಾರ್ಯಕ್ರಮ ವ್ಯಾಪಕಗೊಳ್ಳಬೇಕು. 9ರಿಂದ 14 ವರ್ಷದ ಹೆಣ್ಣು ಮಕ್ಕಳಿಗೆ ನೀಡುವ ಲಸಿಕೆ ಇದು. ಇದನ್ನು ಗರ್ಭಕಂಠ ಲಸಿಕೆ ಎಂದು ಕರೆಯಲಾಗುತ್ತದೆ. ಈ ಲಸಿಕೆಯನ್ನು ತೆಗೆದುಕೊಂಡರೆ ಮುಂದಿನ ದಿನಗಳಲ್ಲಿ ಕ್ಯಾನ್ಸರ್ ಬರುವುದನ್ನು ತಪ್ಪಿಸಬಹುದು. ಹೆಣ್ಣು ಮಕ್ಕಳಿಗೆ ಈ ಲಸಿಕೆ ಒದಗಿಸುವುದು ಸರ್ಕಾರಕ್ಕೆ ಕಷ್ಟವೇನೂ ಆಗಲಾರದು. ಮಹಿಳೆಯರ ಆರೋಗ್ಯ ದೃಷ್ಟಿಯಿಂದ ಈ ಲಸಿಕೆಯನ್ನು ಉತ್ತೇಜಿಸಬೇಕು ಎಂದರು.

ಸರ್ವೈಕಲ್ ಲಸಿಕೆಯನ್ನು ಪಶ್ಚಿಮ ದೇಶಗಳಲ್ಲಿ ಅಭಿವೃದ್ಧಿಪಡಿಸಿದ್ದು, ಕಳೆದ 20 ವರ್ಷಗಳಿಂದ ಅದು ಬಳಕೆಯಲ್ಲಿದೆ, ಉತ್ತಮವಾಗಿ ಕೆಲಸ ಮಾಡುತ್ತಿದೆ, ದುಬಾರಿಯೂ ಅಲ್ಲ. ಜನರಿಗೆ 1400 ರೂ.ಗಳಿಗೆ ಅದು ದೊರೆಯುತ್ತದೆ. ಸರ್ಕಾರ ಮಧ್ಯ ಪ್ರವೇಶ ಮಾಡಿ ಚೌಕಾಸಿ ನಡೆಸಿದರೆ ಅದರ ಬೆಲೆಯನ್ನು 700 ರಿಂದ 800 ರೂ.ಗಳಿಗೆ ಇಳಿಸಬಹುದು. ನಮ್ಮದು ದೊಡ್ಡ ಜನ ಸಂಖ್ಯೆಯ ದೇಶವಾಗಿದ್ದು, ಈ ಲಸಿಕೆಯು ಭವಿಷ್ಯದಲ್ಲಿ ನಮ್ಮ ಹೆಣ್ಣು ಮಕ್ಕಳಿಗೆ ಪ್ರಯೋಜನಕಾರಿಯಾಗುತ್ತದೆ ಎಂದರು.



ಡಾ. ಸುಧಾಮೂರ್ತಿ

ನಮ್ಮ ಸರ್ಕಾರವು ಕೋವಿಡ್ ಸಂದರ್ಭದಲ್ಲಿ ದೊಡ್ಡ ಮಟ್ಟದಲ್ಲಿ ವ್ಯಾಕ್ಸಿನ್ ಅಭಿಯಾನವನ್ನು ನಿರ್ವಹಿಸಿರುವುದರಿಂದ 9 ರಿಂದ 14 ವರ್ಷದ ಹೆಣ್ಣು ಮಕ್ಕಳಿಗೆ ಗರ್ಭಕಂಠ ಲಸಿಕೆ ನೀಡುವುದು ಅಷ್ಟೇನೂ ಕಷ್ಟವಾಗುವುದಿಲ್ಲ. ಹೀಗಾಗಿ ಸರ್ಕಾರ ಈ ಬಗ್ಗೆ ಅತ್ಯವಶ್ಯಕವಾಗಿ ಕಾಳಜಿ ವಹಿಸಬೇಕು ಎಂದು ಅವರು ಮನವಿ ಮಾಡಿದರು.

ಪ್ರವಾಸೋದ್ಯಮ ಅಭಿವೃದ್ಧಿ: ದೇಶೀಯ ಪ್ರವಾಸೋದ್ಯಮದ ಬಗ್ಗೆ ಪ್ರಸ್ತಾಪಿಸಿದ ಅವರು, ಭಾರತದಲ್ಲಿ 42 ವಿಶ್ವ ಪಾರಂಪರಿಕ ತಾಣಗಳಿವೆ. ವಿಶ್ವ ಪಾರಂಪರಿಕ ತಾಣಗಳು ಎಂದು ಪರಿಗಣಿಸಬೇಕಾದ ಇನ್ನೂ 57 ಪ್ರವಾಸೋದ್ಯಮ ಸ್ಥಳಗಳಿವೆ. ಇದರಲ್ಲಿ ಕರ್ನಾಟಕದ ಶ್ರವಣಬೆಳಗೊಳದಲ್ಲಿ ಬಾಹುಬಲಿಯ ಅದ್ಭುತ ಪ್ರತಿಮೆ ಇದೆ. ಮಧ್ಯಪ್ರದೇಶದ ಮಾಂಡುವಿನಲ್ಲಿ ಸುಂದರವಾದ ಸ್ಮಾರಕಗಳ ಸಮೂಹವೇ ಇದೆ. ನೀವು ಪೂರ್ವಕ್ಕೆ ಹೋದರೆ ತ್ರಿಪುರ ರಾಜ್ಯದಲ್ಲಿ ಲಿಂಗರಾಜ ದೇವಸ್ಥಾನ ಉನಕೋಟಿ ಬಂಡೆ ಎಂದು ಕರೆಯಲ್ಪಡುವ ಅದ್ಭುತ ಶಿಲ್ಪಕಲೆ ಇದೆ. ಮಹಾರಾಷ್ಟ್ರದ ಶಿವಾಜಿಕೋಟೆ, ಗುಜರಾತ್‌ನ ಲೋಥಲ್, ಮಿಟಾವಾಲಿಯಾ ಚೌಸಾತ್ ಯೋಗಿನಿ ದೇವಸ್ಥಾನ, ಗೋಳಗುಂಬಜ್ ಮುಂತಾದವುಗಳಿವೆ. ವಿಶ್ವ ಪಾರಂಪರಿಕ ತಾಣಕ್ಕೆ ಸೇರಬೇಕಾದ 57 ಸ್ಥಳಗಳ ಪೈಕಿ 2500 ವರ್ಷಗಳಷ್ಟು ಪುರಾತನವಾದ ಸಾರನಾಥನ ಸ್ಮಾರಕಗಳು ಇವೆ. ಮಧ್ಯಪ್ರದೇಶದ ಮಿಟಾವಾಲಿಯಾದಲ್ಲಿನ 2000 ವರ್ಷಗಳ ಇತಿಹಾಸವಿರುವ ಚೌಸಾತ್ ಯೋಗಿನಿ ದೇವಸ್ಥಾನದ ಪ್ರತಿರೂಪವನ್ನು ನಮ್ಮ ಹಳೇ ಸಂಸತ್ ಕಟ್ಟಡದಲ್ಲಿ ಬಳಸಿಕೊಳ್ಳಲಾಗಿದೆ. ಇವುಗಳನ್ನೆಲ್ಲಾ ವಿಶ್ವ ಪಾರಂಪರಿಕ ತಾಣಗಳಿಗೆ ಸೇರ್ಪಡೆಗೊಳಿಸುವ ಬಗ್ಗೆ ಚಿಂತನೆ ನಡೆಸಬೇಕಾಗಿದೆ ಎಂದು ಸುಧಾಮೂರ್ತಿ ಸರ್ಕಾರಕ್ಕೆ ಸಲಹೆ ನೀಡಿದರು.

ಪ್ರಧಾನಿ ಪ್ರಶಂಸೆ: ರಾಜ್ಯಸಭೆಯ ನೂತನ ಸಂಸದೆ ಸುಧಾಮೂರ್ತಿ ಅವರ ಚೊಚ್ಚಲ ಭಾಷಣಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಇಂದು ಸದನದಲ್ಲಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಮಹಿಳೆಯರ ಆರೋಗ್ಯದ ಬಗ್ಗೆ ವಿವರವಾಗಿ ಮಾತನಾಡಿದ್ದಕ್ಕಾಗಿ ನಾನು ಸುಧಾಮೂರ್ತಿ ಅವರಿಗೆ ಧನ್ಯವಾದ ಹೇಳಲು ಬಯಸುತ್ತೇನೆ. ತಾಯಂದಿರ ಕುರಿತು ಸುಧಾ ಮೂರ್ತಿ ಅವರ ಭಾವನಾತ್ಮಕ ಹೇಳಿಕೆಯನ್ನು ಉಲ್ಲೇಖಿಸಿದ ಅವರು, ಕಳೆದ 10 ವರ್ಷಗಳಲ್ಲಿ ತಮ್ಮ ಸರ್ಕಾರವು ಮಹಿಳೆಯರ ಆರೋಗ್ಯ ಮತ್ತು ನೈರ್ಮಲ್ಯವನ್ನು ಆದ್ಯತೆಯ ವಲಯವಾಗಿ ಕೇಂದ್ರೀಕರಿಸಿದೆ ಎಂದರು.

ನಮ್ಮ ದೇಶದ ಮಹಿಳೆಯರು ನಾವು ನಿರ್ಮಿಸಿದ ಶೌಚಾಲಯಗಳಿಂದ ಪ್ರಯೋಜನ ಪಡೆದಿದ್ದಾರೆ. ಮಹಿಳೆಯರಿಗೆ ಸ್ಯಾನಿಟರಿ ಪ್ಯಾಡ್‌ಗಳನ್ನು ಒದಗಿಸಲಾಗಿದೆ ಮತ್ತು ಮಹಿಳೆಯರಿಗೆ ಗರ್ಭಾವಸ್ಥೆಯಲ್ಲಿ ಲಸಿಕೆ ಕಾರ್ಯಕ್ರಮವನ್ನು ಪ್ರಾರಂಭಿಸಲಾಗಿದೆ ಎಂದು ಮೋದಿ ತಿಳಿಸಿದ್ದಾರೆ.

ನಮ್ಮ ಸರ್ಕಾರ 10 ವರ್ಷ ಪೂರೈಸಿದೆ, ಇನ್ನೂ 20 ವರ್ಷ ಅಧಿಕಾರದಲ್ಲಿರುತ್ತದೆ

ನವದೆಹಲಿ, ಜು.3– ಲೋಕಸಭೆಯಲ್ಲಿ ಪ್ರತಿಪಕ್ಷಗಳ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಒಂದು ದಿನದ ನಂತರ ಪ್ರಧಾನಿ ನರೇಂದ್ರ ಮೋದಿ ಬುಧವಾರ ರಾಜ್ಯಸಭೆಯಲ್ಲೂ ವಿಪಕ್ಷಗಳ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ನವೆಂಬರ್ 24 ರಂದು ನಾವು ಸಂವಿಧಾನ ದಿನ ಆಚರಿಸಲು ನಿರ್ಧರಿಸಿದಾಗ ಈಗ ಸಂವಿಧಾನದ ಪುಸ್ತಕ ಹಿಡಿದುಕೊಂಡು ಓಡಾಡುತ್ತಿರುವವರು ಅದನ್ನು ವಿರೋಧಿಸಿದರು ಎಂದು ತಿರುಗೇಟು ನೀಡಿದರು.



ಇಂದು ರಾಜ್ಯಸಭೆಯಲ್ಲಿ ರಾಷ್ಟ್ರಪತಿ ಭಾಷಣದ ವಂದನಾ ನಿರ್ಣಯದ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಮೋದಿ, ಸಂವಿಧಾನದ ಕಾರಣದಿಂದ ನನಗೆ ಇಲ್ಲಿಗೆ ಬರಲು ಅವಕಾಶ ಸಿಕ್ಕಿತು. ಸಂವಿಧಾನದ ಆಶಯ ನಮಗೆ ಅಮೂಲ್ಯ. ಸಂವಿಧಾನವು ನಮಗೆ ಮಾರ್ಗದರ್ಶಿಯಾಗಿ ಕಾರ್ಯನಿರ್ವಹಿಸುತ್ತದೆ ಎಂದರು. ನಮ್ಮ ಸರ್ಕಾರ 10 ವರ್ಷಗಳನ್ನು ಪೂರೈಸಿದೆ, ಇನ್ನೂ 20 ವರ್ಷ ಪೂರೈಸಬೇಕಿದೆ. ಕಳೆದ 10 ವರ್ಷಗಳಲ್ಲಿ ಸಮರ್ಪಣಾ ಮನೋಭಾವ ಮತ್ತು ನಿರಂತರ ಸೇವೆಯೊಂದಿಗೆ ಮಾಡಿದ ಕೆಲಸವನ್ನು ಸಾರ್ವಜನಿಕರು ಪೂರ್ಣ ಹೃದಯದಿಂದ ಬೆಂಬಲಿಸಿದ್ದಾರೆ. ನಾಡಿನ ಜನತೆ ಆಶೀರ್ವಾದ ಮಾಡಿದ್ದಾರೆ. ದೇಶದ ಜನತೆ ಅಪಪ್ರಚಾರವನ್ನು ಸೋಲಿಸಿದ್ದಾರೆ, ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಿದ್ದಾರೆ. ವಿಶ್ವಾಸ ರಾಜಕಾರಣಕ್ಕೆ ಗೆಲುವಿನ ಮುದ್ರೆ ಹಾಕಲಾಗಿದೆ ಎಂದರು.

ಆದರೆ ಪ್ರತಿಪಕ್ಷಗಳು ದೇಶದ ಜನರ ನಿರ್ಧಾರಕ್ಕೆ ಕಪ್ಪು ಚುಕ್ಕೆ ತರುವ ಪ್ರಯತ್ನ ಮಾಡುತ್ತಿವೆ ಎಂದು ಪ್ರಧಾನಿ ಮೋದಿ ಆರೋಪಿಸಿದರು. 60 ವರ್ಷಗಳ ನಂತರ, 10 ವರ್ಷಗಳ ಕಾಲ ಅಧಿಕಾರದಲ್ಲಿದ್ದ ಸರ್ಕಾರ ಮೂರನೇ ಅವಧಿಗೆ ಅಧಿಕಾರಕ್ಕೆ ಮರಳಿದೆ. ಇದು ಸಾಮಾನ್ಯ ವಿಷಯವಲ್ಲ ಎಂದು ನಾನು ಅರ್ಥಮಾಡಿಕೊಂಡಿದ್ದೇನೆ. ಸಾರ್ವಜನಿಕರು ನೀಡಿದ ಈ ನಿರ್ಧಾರಕ್ಕೆ ಕೆಲವರು ಉದ್ದೇಶಪೂರ್ವಕವಾಗಿ ಕಪ್ಪು ಚುಕ್ಕೆ ತರಲು ಪ್ರಯತ್ನಿಸಿದರು ಎಂದರು. ಈ ವೇಳೆ ವಿರೋಧ ಪಕ್ಷಗಳು ಪ್ರಧಾನಿ ಭಾಷಣಕ್ಕೆ ಅಡ್ಡಿಪಡಿಸಲು ಪ್ರಯತ್ನಿಸಿದವು. ರಾಜ್ಯಸಭೆಯನ್ನು ಮುಂದೂಡಿ, ಸುಳ್ಳು ಹೇಳುವುದನ್ನು ನಿಲ್ಲಿಸಿ ಎಂದು ಒತ್ತಾಯಿಸಿ ರಾಜ್ಯಸಭೆಯಿಂದ ಹೊರ ನಡೆದವು.

ಮೈಮುಲ್ ನೂತನ ವ್ಯವಸ್ಥಾಪಕ ನಿರ್ದೇಶಕರಾಗಿ ಕೆ.ಎನ್.ಸುರೇಶ್ ನಾಯ್ಕ್ ಅಧಿಕಾರ ಸ್ವೀಕಾರ



ಮೈಮುಲ್ ನೂತನ ವ್ಯವಸ್ಥಾಪಕ ನಿರ್ದೇಶಕರಾಗಿ ಕೆ.ಎನ್.ಸುರೇಶ್ ನಾಯ್ಕ್ (ಬಲತುದಿಯಲ್ಲಿರುವವರು) ಅಧಿಕಾರ ಸ್ವೀಕರಿಸಿದರು.

ಮೈಸೂರು,ಜು.3(ಎಂಟಿವೈ)– ಮೈಸೂರು ಜಿಲ್ಲಾ ಹಾಲು ಒಕ್ಕೂಟದ ನೂತನ ವ್ಯವಸ್ಥಾಪಕ ನಿರ್ದೇಶಕರಾಗಿ ಕೆ.ಎನ್.ಸುರೇಶ್ ನಾಯ್ಕ್ ಅಧಿಕಾರ ಸ್ವೀಕರಿಸಿದರು.

ಮೈಸೂರಿನ ಆಲನಹಳ್ಳಿಯಲ್ಲಿರುವ ಮೆಗಾ ಡೈರಿ ಕಚೇರಿಯಲ್ಲಿ ಆಡಳಿತ ಮತ್ತು ಖರೀದಿ ವಿಭಾಗದ ವ್ಯವಸ್ಥಾಪಕ ಕೆ.ಎಸ್.ಜಗದೀಶ್ ಅವರಿಂದ ಅಧಿಕಾರ ಸ್ವೀಕರಿಸಿದರು. ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾಗಿದ್ದ ಸುರೇಶ್ ನಾಯ್ಕ್ ಮೈಸೂರು ಜಿಲ್ಲಾ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾಗಿ ನಿಯೋಜಿಸಲಾಗಿದೆ. ಈ ಸಂದರ್ಭದಲ್ಲಿ ಮಾರುಕಟ್ಟೆ ವ್ಯವಸ್ಥಾಪಕರು ಎಚ್.ಕೆ.ಜಯಶಂಕರ್, ಡೇರಿ ವ್ಯವಸ್ಥಾಪಕರು ಬಿ.ಎಲ್. ಶ್ವೇತ, ತಾಂತ್ರಿಕ ವಿಭಾಗದ ವ್ಯವಸ್ಥಾಪಕರು ಎಸ್.ಗಿರಿಜಾ, ಅಧಿಕಾರಿ ಹಾಗೂ ಸಿಬ್ಬಂದಿ ಇನ್ನಿತರರು ಉಪಸ್ಥಿತರಿದ್ದರು.


ಕಾವೇರಿ ಆಸ್ಪತ್ರೆಯಲ್ಲಿ ವೈದ್ಯರ ದಿನಾಚರಣೆ...



ಮೈಸೂರಿನ ಬನ್ನೂರು ರಸ್ತೆಯಲ್ಲಿರುವ ಕಾವೇರಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ವೈದ್ಯರ ದಿನವನ್ನು ಆಚರಿಸಲಾಯಿತು. ಈ ವೇಳೆ ಸಂಸ್ಥೆಯ ಛೇರ್ಮನ್ ಡಾ. ಜಿ.ಆರ್. ಚಂದ್ರಶೇಖರ್, ಡಾ. ಸರಳಾ ಚಂದ್ರಶೇಖರ್, ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಎಲ್.ಕೆ.ಅಡ್ವಾಣಿ ಮತ್ತೆ ಆಸ್ಪತ್ರೆಗೆ ದಾಖಲು

ನವದೆಹಲಿ: ಬಿಜೆಪಿಯ ಹಿರಿಯ ನಾಯಕ, ಮಾಜಿ ಉಪಪ್ರಧಾನಿ ಲಾಲ್ ಕೃಷ್ಣ ಅಡ್ವಾಣಿ(96) ಅವರ ಆರೋಗ್ಯದಲ್ಲಿ ಬುಧವಾರ ಮತ್ತೆ ಏರುಪೇರು ಕಾಣಿಸಿಕೊಂಡಿದೆ. ಅವರನ್ನು ತಕ್ಷಣವೇ ದೆಹಲಿಯ ಅಪೋಲೋ ಆಸ್ಪತ್ರೆಗೆ ದಾಖಲಿಸಲಾಗಿದೆ. ಇದೇ ವೇಳೆ ಲಾಲ್ ಕೃಷ್ಣ ಅಡ್ವಾಣಿ ಅವರ ಕಚೇರಿ ನೀಡಿರುವ ಮಾಹಿತಿಯಲ್ಲಿ ನಿತ್ಯ ತಪಾಸಣೆಗಾಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ಹೇಳಲಾಗಿದೆ. ಈ ಹಿಂದೆ ಜೂನ್ 27 ರಂದು ಕೂಡ ಎಲ್.ಕೆ. ಅಡ್ವಾಣಿ ಆರೋಗ್ಯ ಹದಗೆಟ್ಟ ಕಾರಣ ಆಸ್ಪತ್ರೆಗೆ ದಾಖಲಾಗಿದ್ದರು.



ಕತ್ತಲಾಗುತ್ತಿದ್ದಂತೆ ಕಂಡಕಂಡಲ್ಲಿ ಕಸ ಎಸೆಯುವ ಹೀನ ಪ್ರವೃತ್ತಿಗೆ ಕಡಿವಾಣ ಹಾಕಲು ಮುಂದಾದ ಪಾಲಿಕೆ

ನೈಟ್ ರೇಡ್ ಕಾರ್ಯಾಚರಣೆ ಮೂಲಕ ದಂಡಾಸ್ತ್ರ ಪ್ರಯೋಗ

- ಓರ್ವ ಪೌರಕಾರ್ಮಿಕ, ಮೇಲ್ವಿಚಾರಕರಿಂದ ವಾರ್ಡ್‌ವಾರು ರೌಂಡ್ಸ್
- ಸಿಕ್ಕಿ ಬಿದ್ದವರಿಂದ ಭಾರಿ ಪ್ರಮಾಣದ ದಂಡ ವಸೂಲಿ ಕಾರ್ಯಾಚರಣೆ

ಮೈಸೂರು, ಜು.3(ಪಿಎಂ)– ರಾತ್ರಿ ವೇಳೆ ಹಾದಿಬೀದಿ, ರಸ್ತೆಬದಿ ಮತ್ತು ಖಾಲಿ ನಿವೇಶನಗಳಲ್ಲಿ ಕಸ ಎಸೆದು ಹೋಗುವವರ ವಿರುದ್ಧ ಕ್ರಮಕ್ಕೆ ಮೈಸೂರು ಮಹಾನಗರಪಾಲಿಕೆ ದಂಡಾಸ್ತ್ರ ಪ್ರಯೋಗಿಸಲು ಮುಂದಾಗಿದೆ. ಅದಕ್ಕಾಗಿ 'ನೈಟ್ ರೇಡ್ ಕಾರ್ಯಾಚರಣೆ (ರಾತ್ರಿ ಗಸ್ತು)' ಆರಂಭಿಸಿದೆ. ಶೀಘ್ರದಲ್ಲಿ ಇಂತಹವರ ಮೇಲೆ ನಿಗಾ ಇರಿಸಲು ಸಿಸಿ ಕ್ಯಾಮರಾ ಕಣ್ಗಾವಲು ವ್ಯವಸ್ಥೆ ಅಳವಡಿಸಿಕೊಳ್ಳಲೂ ಪಾಲಿಕೆ ನಿರ್ಧಾರ ಕೈಗೊಂಡಿದೆ.

ಕಸ ಸಂಗ್ರಹಕ್ಕೆ ಪಾಲಿಕೆ ಎಲ್ಲಾ ವ್ಯವಸ್ಥೆ ಮಾಡಿದ್ದರೂ ರಾತ್ರಿ ವೇಳೆ ಎಲ್ಲೆಂದರಲ್ಲಿ ಕಸ ಎಸೆದು ಹೋಗುವವರ ಸಂಖ್ಯೆ ದೊಡ್ಡದಿದೆ. ಹಲವು ನಾಗರಿಕರು, ವ್ಯಾಪಾರಿಗಳು ಕತ್ತಲಾಗುತ್ತಿದ್ದಂತೆ ತಮ್ಮಲ್ಲಿ ಸಂಗ್ರಹಗೊಳ್ಳುವ ತ್ಯಾಜ್ಯಗಳನ್ನು ಮೂಟೆ ಕಟ್ಟಿ ಸಿಕ್ಕ ಸಿಕ್ಕ ಕಡೆ ಎಸೆದು ಹೋಗುವ ಪ್ರವೃತ್ತಿ ರೂಢಿಸಿಕೊಂಡಿದ್ದಾರೆ. ಇದರಿಂದ ಸ್ವಚ್ಛತೆ ಕಾಪಾಡುವುದು ಪಾಲಿಕೆಗೆ ಸವಾಲಾಗಿ ಪರಿಣಮಿಸಿದೆ. ಹಾಗಾಗಿ ಇಂತಹ ಪ್ರವೃತ್ತಿಗೆ ಕಡಿವಾಣ ಹಾಕಿ ನಗರದ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡಲು ಪಾಲಿಕೆ ನೈಟ್ ರೇಡ್ ಕಾರ್ಯಾಚರಣೆ ಕೈಗೆತ್ತಿಕೊಂಡಿದೆ.

ಜೂ.29ರಿಂದ ಈ ಕಾರ್ಯಾಚರಣೆ ಪ್ರಾರಂಭಿಸಿರುವ ನಗರಪಾಲಿಕೆ, ಈಗಾಗಲೇ ಹಲವರಿಗೆ ದಂಡದ ಬಿಸಿ ಮುಟ್ಟಿಸಿದೆ. ಪಾಲಿಕೆಯು 4 ರಸ್ತೆ ಸ್ವೀಪಿಂಗ್ ಮೆಷಿನ್ ವಾಹನಗಳ ಮೂಲಕ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಿದೆ. ಅಲ್ಲದೆ, ಎಲ್ಲಾ ವಾರ್ಡ್‌ಗಳಿಂದ 330ಕ್ಕೂ ಹೆಚ್ಚು ಆಟೋ ರಿಕ್ಷಾಗಳಲ್ಲಿ ಮನೆ ಮನೆ ಕಸ ಸಂಗ್ರಹ ಮಾಡಲಾಗುತ್ತಿದೆ. ಜೊತೆಗೆ ವಾಣಿಜ್ಯ ಪ್ರದೇಶದ ತ್ಯಾಜ್ಯ ಸಂಗ್ರಹಕ್ಕೂ 16 ವಾಹನಗಳನ್ನು ಪಾಲಿಕೆ ಹೊಂದಿದೆ.



ನೈಟ್ ರೇಡ್ ಕಾರ್ಯಾಚರಣೆಯಲ್ಲಿ ದಂಡ ವಿಧಿಸುತ್ತಿರುವ ಪಾಲಿಕೆ ಹೆಲ್ತ್ ಇನ್ಸ್‌ಪೆಕ್ಟರ್

ಇಷ್ಟೆಲ್ಲಾ ವ್ಯವಸ್ಥೆಗಳ ಮೂಲಕ ಸ್ವಚ್ಛತೆಗೆ ಪಾಲಿಕೆ ಶ್ರಮಿಸುತ್ತಿದೆ. ಆದರೆ ಕೆಲ ಹೋಟೆಲ್‌ನವರು, ಫಾಸ್ಟ್‌ಫುಡ್ ವ್ಯಾಪಾರಿಗಳು ಸೇರಿದಂತೆ ಹಲವು ನಾಗರಿಕರು ರಾತ್ರಿ ಆಗುತ್ತಿದ್ದಂತೆ ಪ್ಲಾಸ್ಟಿಕ್ ಕವರ್ ಹಾಗೂ ಚೀಲದಲ್ಲಿ ತ್ಯಾಜ್ಯ ತುಂಬಿ ಬೇಕೆಂದಲ್ಲಿ ಎಸೆದು ಹೋಗುವ ಪ್ರವೃತ್ತಿ ನಿತ್ಯ ನಡೆಯುತ್ತಿದ್ದು, ಇದಕ್ಕೆ ಕಡಿವಾಣ ಹಾಕಲು ಇದೀಗ ನೈಟ್ ರೇಡ್ ಕಾರ್ಯಾಚರಣೆಯನ್ನು ಪಾಲಿಕೆ ಪ್ರಾರಂಭಿಸಿದೆ.

ರಿಂಗ್ ರಸ್ತೆ, ಖಾಲಿ ನಿವೇಶನ ಮೊದಲಾದ ಸಾರ್ವಜನಿಕ ಸ್ಥಳದಲ್ಲಿ ರಾತ್ರಿ ವೇಳೆ ಪ್ಲಾಸ್ಟಿಕ್ ಸೇರಿದಂತೆ ನಾನಾ ರೀತಿಯ ತ್ಯಾಜ್ಯ ಸುರಿದು ಹೋಗುವ ಪ್ರವೃತ್ತಿಯಿಂದ ವೈಜ್ಞಾನಿಕ ತ್ಯಾಜ್ಯ ವಿಲೇವಾರಿಗೆ ದೊಡ್ಡ ಹೊಡೆತ ಬಿದ್ದಿದೆ. ಇದರಿಂದ ಹಲವು ಬಗೆಯ ತ್ಯಾಜ್ಯ ಕೊಳೆತು ನಾರುವಂತಾಗುತ್ತಿದ್ದು, ಹೀಗಾಗಿ ಸ್ವಚ್ಛ ನಗರಿ ಹಿರಿಮೆ ಕಾಯ್ದುಕೊಳ್ಳುವುದು ಸವಾಲಾಗಿ ಪರಿಣಮಿಸಿದೆ. ಬೆಳಗ್ಗೆಯೂ ಎಲ್ಲೆಂದರಲ್ಲಿ ಕಸ ಹಾಕುವ ಪ್ರವೃತ್ತಿ ಇದೆ. ಆದರೆ ಇದು ರಾತ್ರಿ ವೇಳೆ ಹೆಚ್ಚು. ಬೆಳಗ್ಗೆ ಸಹ ಎಲ್ಲೆಡೆ ನಿಗಾ ವಹಿಸುತ್ತಿರುವ ಪಾಲಿಕೆ, ಸಿಕ್ಕಿ ಬಿದ್ದವರಿಗೆ ದಂಡ ವಿಧಿಸುತ್ತಿದೆ. ಇಂತಹ ಪ್ರವೃತ್ತಿ ರಾತ್ರಿಯೇ ಹೆಚ್ಚು ನಡೆಯುತ್ತಿರುವ ಕಾರಣ ಕಡಿವಾಣ ಹಾಕಲು ರಾತ್ರಿ ವೇಳೆ ದಾಳಿಗೆ ಪಾಲಿಕೆ ಮುಂದಾಗಿದೆ.

ಸದರಿ ಕಾರ್ಯಾಚರಣೆ ಸಂಬಂಧ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಮೈಸೂರು ಮಹಾನಗರ ಪಾಲಿಕೆ ಮುಖ್ಯ ಆರೋಗ್ಯಾಧಿಕಾರಿ ಡಾ.ಎನ್.ಪಿ. ವೆಂಕಟೇಶ್, ಫಾಸ್ಟ್‌ಫುಡ್ ಸೇರಿದಂತೆ ರಸ್ತೆಬದಿ ವ್ಯಾಪಾರಿಗಳು ಹಾಗೂ ಹೋಟೆಲ್‌ನವರು, ಯಾರೇ ಆದರೂ ತಮ್ಮಲ್ಲಿನ ಕಸ ಶೇಖರಣೆ ಮಾಡಿಟ್ಟುಕೊಂಡು ಬೆಳಗಿನ ವೇಳೆ ಪಾಲಿಕೆಯ ಕಸ ಸಂಗ್ರಹ ವಾಹನಗಳಿಗೆ ನೀಡಬೇಕು. ಆದರೆ ಸಾಕಷ್ಟು ವ್ಯಾಪಾರಸ್ಥರು ಹಾಗೂ ನಾಗರಿಕರು ಹೀಗೆ ಮಾಡದೇ ತಮಗೆ ಹತ್ತಿರವಿರುವ ಕೆಲ ಸ್ಥಳಗಳಲ್ಲಿ ತ್ಯಾಜ್ಯ ಎಸೆಯುತ್ತಿದ್ದಾರೆ. ಇದಕ್ಕೆ ತಡೆಯೊಡ್ಡುವ ನಿಟ್ಟಿನಲ್ಲಿ ಈ ಕಾರ್ಯಾಚರಣೆ ಶುರು ಮಾಡಿದ್ದೇವೆ ಎಂದು ತಿಳಿಸಿದರು.



ಕಸ ಸುರಿದ ಸ್ಥಳವೊಂದನ್ನು ಸ್ವಚ್ಛಗೊಳಿಸಿರುವುದು.

ಒಬ್ಬರು ಪೌರಕಾರ್ಮಿಕ ಮತ್ತು ಒಬ್ಬ ಮೇಲ್ವಿಚಾರಕ ಇಡೀ ರಾತ್ರಿ ಕಾರ್ಯಾಚರಣೆ ನಡೆಸಲಿದ್ದಾರೆ. ವಾರ್ಡಿಗೊಂದರಂತೆ ಇಂತಹ ತಂಡ ನಿಯೋಜಿಸಲಾಗಿದೆ. ಕಾರ್ಯಾಚರಣೆ ಸಿಬ್ಬಂದಿ ವಾಹನದಲ್ಲಿ ರೌಂಡ್ಸ್ ಮಾಡಲಿದ್ದು, ಕಸ ಎಸೆಯುವವರು ಸಿಕ್ಕಿ ಬಿದ್ದರೆ ತಮ್ಮ ಸಿಬ್ಬಂದಿ ಮಾಹಿತಿ ಮೇರೆಗೆ ಹೆಲ್ತ್ ಇನ್ಸ್‌ಪೆಕ್ಟರ್‌ಗಳು ಸ್ಥಳಕ್ಕೆ ಬಂದು ದಂಡ ವಿಧಿಸಲಿದ್ದಾರೆ. ಹೆಲ್ತ್ ಇನ್ಸ್‌ಪೆಕ್ಟರ್‌ಗಳಿಗೆ ಬೆಳಗ್ಗೆ ಕೆಲಸ ಇರುವ ಹಿನ್ನೆಲೆಯಲ್ಲಿ ಅವರು ಕಾರ್ಯಾಚರಣೆಯ ರೌಂಡ್ಸ್‌ನಲ್ಲಿ ಇರುವುದಿಲ್ಲ ಎಂದರು.

ಈಗಾಗಲೇ ಸಾಕಷ್ಟು ಇಂತಹ ಪ್ರಕರಣಗಳ ವಿರುದ್ಧ ಕ್ರಮ ವಹಿಸಲಾಗಿದೆ. 200ರಿಂದ ಸಾವಿರ ರೂ.ವರೆಗೆ ದಂಡ ಹಾಕುತ್ತಿದ್ದೇವೆ. ಆಟೋ ಸೇರಿದಂತೆ ಮೊದಲಾದ ವಾಹನಗಳಲ್ಲಿ ಹೆಚ್ಚು ಪ್ರಮಾಣದಲ್ಲಿ ತ್ಯಾಜ್ಯ ತಂದು ಸುರಿಯುವವರಿಗೆ 5 ಸಾವಿರ ರೂ.ವರೆಗೆ ದಂಡ ವಿಧಿಸುತ್ತಿದ್ದೇವೆ. ಆ ಬಳಿಕ ಎಸೆಯಲು ತಂದ ತ್ಯಾಜ್ಯವನ್ನು ವಿಲೇವಾರಿ ಮಾಡಲಾಗುತ್ತಿದೆ. ಪ್ರಸ್ತುತ ಸಿವೇಜ್ ಫಾರಂನಲ್ಲಿ ಕಸ ವಿಲೇವಾರಿ ಮಾಡುತ್ತಿಲ್ಲ. ಕೆಸರೆ ಹಾಗೂ ರಾಯನಕೆರೆ ಘಟಕಗಳಿಗೆ ಕಳುಹಿಸಲಾಗುತ್ತಿದೆ ಎಂದು ತಿಳಿಸಿದರು.

ಎಲ್ಲೆಂದರಲ್ಲಿ ಕಸ ಎಸೆಯುವವರ ಮೇಲೆ ಕ್ಯಾಮರಾ ಕಣ್ಗಾವಲು

ಮೈಸೂರು,ಜು.3(ಪಿಎಂ)– ಎಲ್ಲೆಂದರಲ್ಲಿ ಕಸ ಎಸೆಯುವವರ ಮೇಲೆ ನಿಗಾ ವಹಿಸಲು ಸೋಲಾರ್ ಸಿಸ್ಟಂ ಸಿಸಿ ಕ್ಯಾಮರಾ ಅಳವಡಿಕೆಗೆ ಮೈಸೂರು ಮಹಾನಗರ ಪಾಲಿಕೆ ತೀರ್ಮಾನಿಸಿದೆ ಎಂದು ಪಾಲಿಕೆ ಮುಖ್ಯ ಆರೋಗ್ಯಾಧಿಕಾರಿ ಡಾ.ಎನ್.ಪಿ.ವೆಂಕಟೇಶ್ ತಿಳಿಸಿದರು.



'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಅವರು, ರಾತ್ರಿ ಕಾರ್ಯಾಚರಣೆ ಜೊತೆಗೆ ಶೀಘ್ರದಲ್ಲಿ ಕ್ಯಾಮರಾ ವ್ಯವಸ್ಥೆ ಕೂಡ ಸೇರ್ಪಡೆಯಾಗಲಿದೆ. ಯಾವ್ಯಾವ ಸ್ಥಳಗಳಲ್ಲಿ ಈ ರೀತಿಯ ಸಿಸಿ ಕ್ಯಾಮರಾ ಅಳವಡಿಸಬೇಕೆಂಬ ಬಗ್ಗೆ ಚರ್ಚೆ ನಡೆಸಲಾಗುತ್ತಿದೆ. ಯಾವ್ಯಾವ ವಾರ್ಡ್‌ಗಳಿಗೆ ಎಷ್ಟು ಕ್ಯಾಮರಾ ಅಳವಡಿಸಬೇಕೆಂಬ ಬಗ್ಗೆಯೂ ಪರಿಶೀಲನೆ ಮಾಡಲಾಗುತ್ತಿದೆ. ಪ್ರತಿ ವಾರ್ಡಿಗೆ 2ರಿಂದ 3 ಕ್ಯಾಮರಾಗಳನ್ನು ಅಳವಡಿಸಬೇಕಾಗಬಹುದು. ಈ ವ್ಯವಸ್ಥೆ ಅಳವಡಿಸಿಕೊಳ್ಳಲು ಪಾಲಿಕೆ ಆಯುಕ್ತರು ನಿರ್ಧರಿಸಿದ್ದು, ಒಂದು ತಿಂಗಳಲ್ಲಿ ಈ ವ್ಯವಸ್ಥೆ ಅನುಷ್ಠಾನಕ್ಕೆ ಬರಲಿದೆ ಎಂದರು. ಸೋಲಾರ್ ಆಧಾರಿತ ಸಿಸಿ ಕ್ಯಾಮರಾಗಳನ್ನು ಅಳವಡಿಸುತ್ತಿರುವ ಹಿನ್ನೆಲೆಯಲ್ಲಿ ಈ ಕ್ಯಾಮರಾಗಳನ್ನು ಕದಿಯಲು ಸಾಧ್ಯವಾಗುವುದಿಲ್ಲ. ಒಂದು ವೇಳೆ ಕದಿಯಲು ಪ್ರಯತ್ನಿಸಿದರೆ ಖದೀಮರ ಫೋಟೋ ಸಹಿತ ಅವರ ಲೋಕೇಷನ್ ಅನ್ನು ಟ್ರ್ಯಾಕ್ ಮಾಡುವ ವ್ಯವಸ್ಥೆ ಇದರಲ್ಲಿ ಇರಲಿದೆ ಎಂದು ವಿವರಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಬಿಲ್ಲಾ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮಹಾರಾಜ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಲ್ಕಿ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಜಡ್ಜ್‌ಮೆಂಟ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಲ್ಕಿ (ಕ)	4 ಪ್ರದರ್ಶನಗಳು
ರಾಜಕಮಲ್	
ಗರುಡನ್ (ತ)	4 ಪ್ರದರ್ಶನಗಳು
ಸಂಗಂ	
ಕೋಟಿ (ಕ)	4 ಪ್ರದರ್ಶನಗಳು
ಲಿಡೋ	
ಪೊಕ್ರಿ (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ಮುಂಜ್ಯಾ (ಹಿಂ)	4 ಪ್ರದರ್ಶನಗಳು
ಪ್ರಭಾ	
ಶತಭಿಷ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಕಲ್ಕಿ 2898 ಎಡಿ(3ಡಿ) (ತೆ): ಬೆ.11.45ಕ್ಕೆ, ಮ.3.15ಕ್ಕೆ, ಕಲ್ಕಿ 2898 ಎಡಿ(3ಡಿ) (ಹಿಂ): ಸಂ.6.45ಕ್ಕೆ, ರಾ.10.15ಕ್ಕೆ.
ಸ್ಕ್ರೀನ್ 2	ಲವ್ ಲಿ (ಕ): ಬೆ.10.30ಕ್ಕೆ, ಮುಂಜ್ಯಾ (ಹಿಂ): ಮ.1.35ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಸಂ.4ಕ್ಕೆ, ರಾ.9.45ಕ್ಕೆ, ಪ್ಯಾರಡೈಸ್ (ಮ): ರಾ.7.30ಕ್ಕೆ.
ಸ್ಕ್ರೀನ್ 3	ಎ ಕ್ವೈಟ್ ಪ್ಲೇಸ್ ಡೇ ಒನ್ (ಇಂ): ಬೆ.10.50ಕ್ಕೆ, ರಾ.10.10ಕ್ಕೆ, ಕಲ್ಕಿ 2898 ಎಡಿ (ಕ): ಮ.1ಕ್ಕೆ, ಮಹಾರಾಜ (ತ): ಸಂ.4.25ಕ್ಕೆ, ಕೋಟಿ (ಕ): ರಾ.7.10ಕ್ಕೆ.
ಸ್ಕ್ರೀನ್ 4	ಕಲ್ಕಿ 2898 ಎಡಿ(3ಡಿ) (ತೆ): ಬೆ.9.45ಕ್ಕೆ, ಮ.1.15ಕ್ಕೆ, ಸಂ.6.40ಕ್ಕೆ, ರಾ.10.10ಕ್ಕೆ, ಇನ್‌ಸೈಡ್ ಔಟ್ (3ಡಿ)(ಇಂ): ಸಂ.4.40ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಇನ್‌ಸೈಡ್ ಔಟ್ (3ಡಿ)(ಹಿಂ): ಬೆ.11ಕ್ಕೆ, ಇನ್‌ಸೈಡ್ ಔಟ್ (3ಡಿ)(ಇಂ): ಮ.1.20ಕ್ಕೆ, ಸಂ.4.20ಕ್ಕೆ, ಸಂ.6.40ಕ್ಕೆ, ಮುಂಜ್ಯಾ (ಹಿಂ): ರಾ.9ಕ್ಕೆ.
ಸ್ಕ್ರೀನ್ 2	ಮುಂಜ್ಯಾ (ಹಿಂ): ಬೆ.10ಕ್ಕೆ, ರಾ.7.35ಕ್ಕೆ, ರಾಕ್‌ಸ್ಟಾರ್ (ಹಿಂ): ಮ.12.45ಕ್ಕೆ, ಕೋಟಿ (ಕ): ಸಂ.4.05ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ಚಂದು ಚಾಂಪಿಯನ್ (ಹಿಂ): ಬೆ.9.50ಕ್ಕೆ, ಮ.1ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 4	ಕೋಟಿ (ಕ): ಬೆ.10.05ಕ್ಕೆ, ಮಹಾರಾಜ (ತ): ಮ.1.35ಕ್ಕೆ, ರಾ.7.05ಕ್ಕೆ, ಶಿವಮ್ಮ ಹರೆಹಂಚಿನಾಳ (ಕ): ಸಂ.4.40ಕ್ಕೆ, ಜಿಆರ್‌ಆರ್‌ಆರ್ (ಮ): ರಾ.10.10ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಲವ್ ಲಿ (ಕ): ಬೆ.10.45ಕ್ಕೆ, ಮ.3.35ಕ್ಕೆ, ಕರ್ಮದೊಳಗೆ (ಕ): ಮ.1.40ಕ್ಕೆ, ಕೋಟಿ (ಕ): ಸಂ.6.25ಕ್ಕೆ, ಮಹಾರಾಜ (ತ): ರಾ.9.30ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ(3ಡಿ) (ತೆ): ಬೆ.10.30ಕ್ಕೆ, ಮ.2.30ಕ್ಕೆ, ಸಂ.6ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ಕಲ್ಕಿ 2898 ಎಡಿ (ಕ): ಮ.1ಕ್ಕೆ, ಸಂ.4.25ಕ್ಕೆ, ರಾ.7.50ಕ್ಕೆ.
ಸ್ಕ್ರೀನ್ 4	ಲವ್ ಲಿ (ಕ): ಮ.1ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಸಂ.4ಕ್ಕೆ, ರಾ.7.25ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಜಾರ್ಖಂಡ್ ಸಿಎಂ ಸ್ಥಾನಕ್ಕೆ ಚಂಪೈ ಸೊರೆನ್ ರಾಜೀನಾಮೆ

ಹೊಸ ಸರ್ಕಾರ ರಚನೆಗೆ ಹಕ್ಕು ಮಂಡಿಸಿದ ಹೇಮಂತ್ ಸೊರೆನ್



ಚಂಪೈ ಸೊರೆನ್



ಹೇಮಂತ್ ಸೊರೆನ್

ರಾಂಚಿ: ಜಾರ್ಖಂಡ್ ಮುಖ್ಯಮಂತ್ರಿ ಚಂಪೈ ಸೊರೆನ್ ಅವರು ಇಂದು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಚಂಪೈ ಸೊರೆನ್ ರಾಜೀನಾಮೆ ಬೆನ್ನಲ್ಲೇ ಹೇಮಂತ್ ಸೊರೆನ್ ನೂತನ ಸರ್ಕಾರ ರಚನೆಗೆ ರಾಜ್ಯಪಾಲರ ಬಳಿ ಹಕ್ಕು ಮಂಡಿಸಿದ್ದಾರೆ. ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ (ಇಡಿ) ಜಾರ್ಖಂಡ್ ಮುಕ್ತಿ ಮೋರ್ಚಾ (ಜೆಎಂಎಂ) ಕಾರ್ಯಾಧ್ಯಕ್ಷ ಹಾಗೂ ಸಿಎಂ ಆಗಿದ್ದ ಹೇಮಂತ್ ಸೊರೆನ್ ಅವರನ್ನು ಬಂಧಿಸಲಾಗಿತ್ತು.

ಹೇಮಂತ್ ಸೊರೆನ್ ರಾಜೀನಾಮೆ ಬಳಿಕ ಚಂಪೈ ಸೊರೆನ್ ಅವರನ್ನು ಜಾರ್ಖಂಡ್ ಸಿಎಂ ಮಾಡಲಾಯಿತು. ಇದೀಗ ಹೇಮಂತ್ ಸೊರೆನ್‌ಗೆ ಜಾಮೀನು ಸಿಕ್ಕಿದೆ. ಜೈಲಿನಿಂದ ಹೊರಬಂದಿರುವ ಅವರು ಮೂರನೇ ಬಾರಿಗೆ ಜಾರ್ಖಂಡ್ ಮುಖ್ಯಮಂತ್ರಿಯಾಗಬಹುದು. ಜಾರ್ಖಂಡ್ ಮುಕ್ತಿ ಮೋರ್ಚಾ (ಜೆಎಂಎಂ) ಕಾರ್ಯಾಧ್ಯಕ್ಷ ಹೇಮಂತ್ ಸೊರೆನ್ ಅವರು ತಮ್ಮ ಪಕ್ಷದ ನೇತೃತ್ವದ ಮೈತ್ರಿಕೂಟದ ಶಾಸಕರ ಒಮ್ಮತದ ನಂತರ ಮೂರನೇ ಬಾರಿಗೆ ರಾಜ್ಯದ ಮುಖ್ಯಮಂತ್ರಿಯಾಗಿ ಮರಳುವ ಸಾಧ್ಯತೆಯಿದೆ.

ಕೆಆರ್‌ಎಸ್ ನೀರಿನ ಮಟ್ಟ



ಗರಿಷ್ಠ ಮಟ್ಟ	124.80 ಅಡಿ
ಮಂಗಳವಾರ	98.10 ಅಡಿ
ಒಳಹರಿವು	14135 ಕ್ಯೂಸೆಕ್
ಹೊರಹರಿವು	532 ಕ್ಯೂಸೆಕ್

ಕಬಿನಿ ನೀರಿನ ಮಟ್ಟ



ಗರಿಷ್ಠ ಮಟ್ಟ	2284 ಅಡಿ
ಮಂಗಳವಾರ	2279.54 ಅಡಿ
ಒಳಹರಿವು	9807 ಕ್ಯೂಸೆಕ್
ಹೊರಹರಿವು	2917 ಕ್ಯೂಸೆಕ್

ಹಾರಂಗಿ ನೀರಿನ ಮಟ್ಟ



ಗರಿಷ್ಠ ಮಟ್ಟ	2859 ಅಡಿ
ಮಂಗಳವಾರ	2842.27 ಅಡಿ
ಒಳಹರಿವು	1649 ಕ್ಯೂಸೆಕ್
ಹೊರಹರಿವು	200 ಕ್ಯೂಸೆಕ್

ಹಸಿರು ನಮ್ಮ ಉಸಿರು

ಮೈಸೂರು ವಿಜಯನಗರ ಮೊದಲ ಹಂತದಲ್ಲಿ
ರಾಜಕಾಲುವೆಗಳ ಅದ್ವಾನ: ಜನರಲ್ಲಿ ಡೆಂಗ್ಯೂ ಭೀತಿ



ರಾಜಕಾಲುವೆಯಲ್ಲಿ ಕೊಳಚೆ ನೀರು ಸಂಗ್ರಹವಾಗಿರುವುದು.

ಮೈಸೂರು, ಜು.3(ಎಸ್‌ಪಿಎನ್)– ಮಳೆಗಾಲ ಆರಂಭವಾಗಿದ್ದರೂ ಮೈಸೂರು ವಿಜಯನಗರ ಒಂದನೇ ಹಂತದಲ್ಲಿನ ರಾಜಕಾಲುವೆಗಳ ದುರಸ್ತಿ ಕಾರ್ಯ ಗೊಕೊಳ್ಳದ ಅಧಿಕಾರಿಗಳ ವಿರುದ್ಧ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ವಿಜಯನಗರ ಒಂದನೇ ಹಂತದ ರೈತ ಸಂತೆ ಮಾರುಕಟ್ಟೆ ಪಕ್ಕದಲ್ಲಿ ಹಾದು ಹೋಗುವ ರಾಜಕಾಲುವೆಯ ತಡೆಗೋಡೆ ಕಳೆದ ತಿಂಗಳು ಕುಸಿದಿದೆ. ಈ ಮಾರ್ಗದ ಮಳೆನೀರು ಅಪಾರ್ಟ್‌ಮೆಂಟ್ ಕಟ್ಟುತ್ತಿರುವ ಜಾಗಕ್ಕೆ ನುಗ್ಗುವುದನ್ನು ತಡೆಗಟ್ಟಲು ಆ ಜಾಗದ ಮಾಲೀಕರೇ ರಾಜಕಾಲುವೆಗೆ (ನೂರು ಮೀಟರ್‌ನಷ್ಟು) ತಡೆಗೋಡೆ ಕಟ್ಟಿಸಿದ್ದಾರೆ. ಆದರೆ, ಈ ರಾಜಕಾಲುವೆಗೆ ತಡೆಗೋಡೆ ನಿರ್ಮಿಸಿ 30 ವರ್ಷ ಕಳೆದಿದೆ. ಅಲ್ಲಲ್ಲಿ ರಾಜಕಾಲುವೆ ದುರಸ್ತಿ ಕೈಗೊಳ್ಳದ ಹಿನ್ನೆಲೆಯಲ್ಲಿ ತಡೆಗೋಡೆ ಶಿಥಿಲಗೊಂಡು ಕುಸಿದು ಹೋಗುತ್ತಿದೆ. ಇದನ್ನು ಸರಿಪಡಿಸುವ ಗೋಜಿಗೆ ಜಿಲ್ಲಾಡಳಿತ ಮುಂದಾಗುತ್ತಿಲ್ಲ. ಇದರಿಂದ ಅಲ್ಲಲ್ಲಿ ನೀರು ನಿಂತು ರೋಗ–ರುಜಿನ ಹರಡಲು ಕಾರಣವಾಗುತ್ತಿದೆ ಎಂದು ಸಾಮಾಜಿಕ ಹೋರಾಟಗಾರ ಕಿರಣ್ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

ವಿಜಯನಗರ ಒಂದನೇ ಹಂತದ ರಾಜಕಾಲುವೆ ಸಪ್ತಪದಿ ಕಲ್ಯಾಣಮಂಟದಿಂದ ಆರಂಭವಾಗಿ, ರುಡ್‌ಸೆಡ್(ರೈತಸಂತೆ) ಪಕ್ಕದಲ್ಲಿ ಹಾದು ಮರಿಯಪ್ಪ ಕೆರೆಗೆ ಸಂಪರ್ಕ ಕಲ್ಪಿಸುತ್ತದೆ. ನಂತರ ವಿವಿಧ ಬಡಾವಣೆಗಳ ರಾಜಕಾಲುವೆ ಮೂಲಕ ಲಿಂಗಾಂಬುದಿ ಕೆರೆಗೆ ಮಳೆ ನೀರು ಹರಿಯುತ್ತದೆ. ಸುಮಾರು ಐದಾರು ಕಿ.ಮೀ ಸಾಗುವ ರಾಜಕಾಲುವೆ ಅಲ್ಲಲ್ಲಿ ಒತ್ತುವರಿಯಿಂದಾಗಿ ಕೆಲವೆಡೆ ನೀರು ಸರಾಗವಾಗಿ ಹರಿಯಲು ಸಾಧ್ಯವಾಗದೇ, ಮಳೆ ನೀರು ಅಕ್ಕ–ಪಕ್ಕದ ಮನೆಗಳಿಗೆ ನುಗ್ಗಿ ಅವಘಡ ಸಂಭವಿಸಿದ ಉದಾಹರಣೆಯೂ ಉಂಟು. ಈ ಸಮಸ್ಯೆಯನ್ನು ಬೇಸಿಗೆ ಕಾಲದಲ್ಲಿ ಸರಿಪಡಿಸುವಂತೆ ಹಲವು ಬಾರಿ ಮುಡಾ ಆಯುಕ್ತರು, ಜಿಲ್ಲಾಧಿಕಾರಿಗಳಿಗೆ ಮನವಿ ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ರಾಜ್ಯಾದ್ಯಂತ ಡೆಂಗ್ಯೂ ಪ್ರಕರಣಗಳು ಹೆಚ್ಚಾಗುತ್ತಿದ್ದು, ಮಳೆಗಾಲ ಸಂದರ್ಭದಲ್ಲಿ ಅಲ್ಲಲ್ಲಿ ನಿಂತ(ರಾಜಕಾಲುವೆ) ನೀರಿನಿಂದ ದುರ್ವಾಸನೆ ಬೀರುತ್ತಿದ್ದು, ಸೊಳ್ಳೆ ಉತ್ಪತ್ತಿ ಜೊತೆಗೆ ರೋಗ–ರುಜಿನ ಹರಡುತ್ತಿದೆ. ಅಲ್ಲದೆ, ರಾಜಕಾಲುವೆಯಲ್ಲಿ ಮಳೆನೀರಿನ ಜೊತೆಗೆ ಯುಜಿಡಿ ನೀರು ಮಿಶ್ರಣಗೊಂಡು ಡೆಂಗ್ಯೂ ಪ್ರಕರಣಗಳು



ಹೆಚ್ಚಾಗುತ್ತಿದೆ ಎಂದು ರಾಜಕಾಲುವೆ ಅಕ್ಕ–ಪಕ್ಕದ ನಿವಾಸಿಗಳು ಅಳಲು ತೋಡಿಕೊಂಡಿದ್ದಾರೆ.

ರುಡ್‌ಸೆಡ್ ಬಳಿ ತ್ರಿವೇಣಿ ಸಂಗ್ರಮ: ಮೈಸೂರು–ಹುಣಸೂರು ರಸ್ತೆಯ ರುಡ್‌ಶೆಡ್ ಬಳಿ ಹಾದುಹೋಗುವ ರಾಜಕಾಲುವೆ ಸಂಪೂರ್ಣ ಒತ್ತುವರಿಗೊಂಡು ರಾಜಕಾಲುವೆ ಕಿರಿದಾಗಿದೆ. ಈ ಜಾಗದಲ್ಲಿ ಮಳೆ ಬಿದ್ದಾಗ ನೀರು ಸರಾಗವಾಗಿ ಹರಿಯುವುದಿಲ್ಲ. ಇದೇ ಜಾಗಕ್ಕೆ ಸ್ನೇಕ್‌ಶ್ಯಾಂ ರಸ್ತೆ ಪಕ್ಕದ ರಾಜಕಾಲುವೆ ನೀರು, ಕೇರಳ ಸಮುದಾಯ ಭವನದ ಕಡೆಯಿಂದ ಬರುವ ರಾಜಕಾಲುವೆ ನೀರು ಸೇರಿಕೊಂಡು ತ್ರಿವೇಣಿ ಸಂಗಮವಾಗುತ್ತದೆ. ಈ ಸಮಸ್ಯೆಯನ್ನು ಬಗೆಹರಿಸುವಂತೆ ಹಲವು ಮನವಿ ಮಾಡಲಾಗಿದೆ ಎಂದು ಮನವಿ ಮಾಡಿದರು.

“ವಿಜಯನಗರ ಒಂದನೇ ಹಂತದಲ್ಲಿ 45 ಉದ್ಯಾನವನಗಳಿವೆ, 14 ದೊಡ್ಡ ದೊಡ್ಡ ರಸ್ತೆಗಳಿವೆ. ಸಿಎ ನಿವೇಶನಗಳು ಹೆಚ್ಚಿವೆ. ಹಾಗಾಗಿ ನಮ್ಮ ಅವಧಿಯಲ್ಲಿ ರಸ್ತೆ, ಪಾರ್ಕ್ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದ್ದೆವು. ಆದರೆ, ರಾಜಕಾಲುವೆ ಸರಿಪಡಿಸುವ ಹೊತ್ತಿಗೆ ನಮ್ಮ ಅಧಿಕಾರಾವಧಿ ಮುಗಿದಿತ್ತು. ರೈತ ಮಾರುಕಟ್ಟೆಯಿಂದ ರುಡ್‌ಸೆಡ್ ಜಾಗದಲ್ಲಿ ರಾಜಕಾಲುವೆ ಕಿರಿದಾಗಿದೆ. ಕೇರಳ ಸಮುದಾಯ ಭವನದ ಕಡೆಯಿಂದ, ಸ್ನೇಕ್‌ಶ್ಯಾಂ ರಸ್ತೆ ಕಡೆಯಿಂದ ಬರುವ ಎರಡು ರಾಜಕಾಲುವೆ ಸಂಪರ್ಕಿಸುತ್ತವೆ. ಈ ಮೂರು ಕಡೆಯ ರಾಜಕಾಲುವೆ ನೀರು ಒಟ್ಟಿಗೆ ಸೇರುವುದರಿಂದ (ರುಡ್‌ಸೆಡ್ ಬಳಿ)ಕಿರಿದಾದ ಜಾಗದಲ್ಲಿ ಸರಾಗವಾಗಿ ನೀರು ಮುಂದಕ್ಕೆ ಹೋಗುವುದಿಲ್ಲ. ಇದರಿಂದ ನೀರು ನಿಂತು ಅಕ್ಕಪಕ್ಕದ ಮನೆಗಳಿಗೆ ನುಗ್ಗುತ್ತದೆ. ಈ ಸಮಸ್ಯೆ ಬಡಾವಣೆ ಅಭಿವೃದ್ಧಿಪಡಿಸಿದಾಗಲೇ ಇತ್ತು. ಈಗ ಸರಿಪಡಿಸಲು ಸ್ವಲ್ಪ ಸಮಯ ಬೇಕು.

– ಸುಬ್ಬಯ್ಯ, ಮೈಸೂರು ನಗರ ಪಾಲಿಕೆ ಮಾಜಿ ಸದಸ್ಯ

ನಾನೇನಾದರೂ ಅಕ್ರಮ ವ್ಯವಹಾರ ಮಾಡಿದ್ದರೆ ರಾಜಕೀಯ ನಿವೃತ್ತಿ

ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಸವಾಲು

ಮೈಸೂರು, ಜು. 3– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಾನು ಕಾನೂನುಬಾಹಿರ ವ್ಯವಹಾರ ಮಾಡಿದ್ದು ಸಾಬೀತು ಮಾಡಿದರೆ ರಾಜಕೀಯ ಜೀವನದಿಂದಲೇ ನಿವೃತ್ತಿಯಾಗುತ್ತೇನೆ ಎಂದು ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಸವಾಲು ಹಾಕಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನೊಬ್ಬ ಜನಪ್ರತಿನಿಧಿ. ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ಜನಪ್ರತಿನಿಧಿಗಳು ನನ್ನನ್ನು ಆಯ್ಕೆ ಮಾಡಿದ್ದಾರೆ. ಅಡಗೂರು ವಿಶ್ವನಾಥರಂತೆ ನಾಮನಿರ್ದೇಶಿತ ಸದಸ್ಯನಲ್ಲ. ನಾನು ಗ್ರಾಮ ಪಂಚಾಯ್ತಿ, ತಾಲೂಕು ಪಂಚಾಯ್ತಿ ಸದಸ್ಯನಾಗಿ, ಮೈಸೂರು ಎಪಿಎಂಸಿ ಅಧ್ಯಕ್ಷನಾಗಿ ಕಳೆದ 35 ವರ್ಷಗಳಿಂದ ಸಾರ್ವಜನಿಕ ಸೇವೆ ಮಾಡಿಕೊಂಡು ಬರುತ್ತಿದ್ದೇನೆ. ಸಹಜವಾಗಿಯೇ ಜನರು ಅವರ ಸಮಸ್ಯೆಗಳ ಪರಿಹಾರಕ್ಕೆ ನನ್ನ ಬಳಿ ಬರುತ್ತಾರೆ. ಅವರ ಕೆಲಸ ಮಾಡಿಕೊಡಬೇಕಾಗುತ್ತದೆ. ಎಂಡಿಎ ಸೇರಿದಂತೆ ಎಲ್ಲಾ ಕಚೇರಿಗಳಿಗೂ ನಾನು ಹೋಗುತ್ತೇನೆ. ವಿಧಾನಪರಿಷತ್ ಸದಸ್ಯರಾದ ವಿಶ್ವನಾಥರು ನನ್ನನ್ನು ಮುಡಾ ಅಟೆಂಡರ್ ಎಂದಿದ್ದಾರೆ. ಆದರೆ ಪ್ರಾಧಿಕಾರ ಅಧಿನಿಯಮದ ಪ್ರಕಾರ ಪ್ರಾಧಿಕಾರದ ಪ್ರತಿಯೊಬ್ಬ ಸದಸ್ಯನು ಹಾಗೂ ಅಧಿಕಾರಿ, ಸಿಬ್ಬಂದಿ ಸಾರ್ವಜನಿಕರ ಸೇವಕರೇ ಆಗಿದ್ದಾರೆ. ಅಡಗೂರು ವಿಶ್ವನಾಥರ ಮಾತನ್ನು ಯಾರೂ ಗಂಭೀರವಾಗಿ ಪರಿಗಣಿಸುವ ಅಗತ್ಯವಿಲ್ಲ. ಏಕೆಂದರೆ ಅಮೇರಿಕಾ ಅಧ್ಯಕ್ಷರಿಂದ ಪ್ರಾರಂಭವಾಗಿ ಪ್ರಧಾನಿ ನರೇಂದ್ರ ಮೋದಿ, ಹೆಚ್.ಡಿ. ದೇವೇಗೌಡರು, ಸಿದ್ದರಾಮಯ್ಯನವರು, ಯಡಿಯೂರಪ್ಪ ಎಲ್ಲರ ಬಗ್ಗೆಯೂ ಟೀಕೆ ಮಾಡುತ್ತಾರೆ. ಅದು ಇವರಿಗಿರುವ ಪ್ರಚಾರದ ಗೀಳು. ಮುಡಾಗೆ ನೀವು ಬರುತ್ತೀರಿ. ನಿಮ್ಮ ಮಗನೂ ಬರುತ್ತಾರೆ. ಕಳೆದ 15 ದಿನದಲ್ಲಿ ಶಾಸಕರ ಭವನದಲ್ಲಿ ನನ್ನನ್ನು ಕರೆದು ಏನು ಮಾತನಾಡಿದ್ದೀರಿ ಎಂಬುದನ್ನು ಬಹಿರಂಗಪಡಿಸಿ ಎಂದು ಆಗ್ರಹಿಸಿದರು.



ಮಂಜೇಗೌಡ

ಕೌಟಿಲ್ಯ ರಘು, ಮುಡಾ ಹಗರಣವನ್ನು ಸಿಬಿಐಗೆ ವಹಿಸಬೇಕು ಎಂದಿದ್ದಾರೆ. ಆದರೆ, ಅವರೇ ಬೋಗಾದಿಯಲ್ಲಿ 27–04–2017ರಂದು ತಮ್ಮ ಶ್ರೀ ವೆಂಕಟೇಶ್ವರ ಚಾರಿಟಬಲ್ ಟ್ರಸ್ಟ್‌ಗೆ ಹೆಣ್ಣು ಮಕ್ಕಳ ವಸತಿ ಶಾಲೆ ಉದ್ದೇಶಕ್ಕೆ 1202 ಚ.ಮೀ. ಅಳತೆಯ ಸಿಎ ನಿವೇಶನ ಪಡೆದಿದ್ದರು. ಆದರೆ ರಾಜಕೀಯ ಪ್ರಭಾವ ಬೀರಿ ಪ್ರಾಧಿಕಾರದ ನಿಯಮಗಳನ್ನು ಉಲ್ಲಂಘನೆ ಮಾಡಿ ಕನಕದಾಸನಗರದಲ್ಲಿ ಪಶು ಆಸ್ಪತ್ರೆಗೆ ಮೀಸಲಿಟ್ಟ ಒಂದು ಎಕರೆ ಜಾಗ (43560 ಚ.ಅ.)ವನ್ನು ಬದಲಿ ನಿವೇಶನವಾಗಿ ಪಡೆದು ಹೆಚ್ಚುವರಿ ಹಣವನ್ನೂ ಕಟ್ಟದೆ ಪ್ರಾಧಿಕಾರಕ್ಕೆ ನಷ್ಟ ಉಂಟು ಮಾಡಿದ್ದಾರೆ. ಇವರ ನಿವೇಶನವನ್ನು ಪ್ರಾಧಿಕಾರ ಮುಟ್ಟುಗೋಲು ಹಾಕಿಕೊಳ್ಳಬೇಕು. ನಾನೊಬ್ಬ ಮಾಜಿ ಸೈನಿಕ. ಗಾಳಿಯಲ್ಲಿ ಗುಂಡು ಹೊಡೆಯುವವನಲ್ಲ. ಕಳೆದ 15 ವರ್ಷಗಳಿಂದ ಭೂಮಿ ಕಳೆದುಕೊಂಡ ರೈತರಿಗೆ ಅನ್ಯಾಯವಾಗಿದೆ. 50:50 ಅನುಪಾತದಲ್ಲಿ ರೈತರಿಗೆ ನಿವೇಶನ ನೀಡಿಲ್ಲ. ಇದನ್ನು ದಾಖಲೆ ಸಮೇತ ಸದನದಲ್ಲಿ ಚರ್ಚೆ ಮಾಡಿ ಸರ್ಕಾರದ ಗಮನ ಸೆಳೆದು ರೈತರಿಗೆ ನ್ಯಾಯ ದೊರಕಿಸಿಕೊಡಲು ಪ್ರಯತ್ನ ಮಾಡುತ್ತೇನೆ. ನನ್ನ ಮೇಲೆ ಆರೋಪ ಮಾಡುವವರು ಸಮಯ ನಿಗದಿ ಮಾಡಿ ಬಹಿರಂಗ ಚರ್ಚೆಗೆ ಬರಲಿ ಎಂದು ಮಂಜೇಗೌಡ ಸವಾಲು ಹಾಕಿದ್ದಾರೆ.